# ಅಪೊಸ್ತಲರ ಕಾರ್ಯಗಳು

### ಲೂಕನು ಬರೆದ ಎರಡನೆ ಪುಸ್ತಕ

1 ಪ್ರಿಯ ಥೆಯೊಫಿಲನೇ, ಯೇಸು ಮಾಡಿದ ಕಾರ್ಯಗಳ
ಬಗ್ಗೆ ಮತ್ತು ನೀಡಿದ ಬೋಧನೆಗಳ ಬಗ್ಗೆ ಪ್ರತಿಯೊಂದನ್ನು
ನಾನು ನನ್ನ ಮೊದಲನೆಯ ಪುಸ್ತಕದಲ್ಲಿ ಬರೆದೆನು. 2ನಾನು
ಯೇಸುವಿನ ಇಡೀ ಜೀವಮಾನದ ಬಗ್ಗೆ ಅಂದರೆ ಆತನು ಪರ
ಲೋಕಕ್ಕೆ ಏರಿಹೋಗುವವರೆಗೆ ನಡೆದ ಸಂಗತಿಗಳನ್ನು ಬರೆ
ದೆನು. ಯೇಸು ಪರಲೋಕಕ್ಕೆ ಎತ್ತಲ್ಪಡುವದಕ್ಕಿಂತ ಮೊದಲು,
ತಾನು ಆರಿಸಿಕೊಂಡಿದ್ದ ಅಪೊಸ್ತಲರೊಂದಿಗೆ* ಮಾತಾಡಿ
ದನು; ಅವರು ಮಾಡಬೇಕಾದದ್ದನ್ನು ಪವಿತ್ರಾತ್ಮನ ಸಹಾಯ
ದಿಂದ ಅವರಿಗೆ ತಿಳಿಸಿದನು. 3ಇದು ಆತನ ಮರಣಾನಂತರ
ನಡೆದ ಸಂಗತಿ. ತಾನು ಜೀವಂತವಾಗಿರುವದನ್ನು ಆತನು
ಅಪೊಸ್ತಲರಿಗೆ ತೋರಿಸಿಕೊಂಡನು ಮತ್ತು ಶಕ್ತಿಯುತವಾದ
ಅನೇಕ ಕಾರ್ಯಗಳನ್ನು ಮಾಡುವುದರ ಮೂಲಕ ಅದನ್ನು
ನಿರೂಪಿಸಿದನು. ಯೇಸು ಜೀವಂತವಾಗಿ ಎದ್ದುಬಂದ ನಂತರದ
ನಲವತ್ತು ದಿನಗಳ ಅವಧಿಯಲ್ಲಿ ಅಪೊಸ್ತಲರು ಆತನನ್ನು
ಅನೇಕ ಸಲ ನೋಡಿದರು. ಯೇಸು ದೇವರ ರಾಜ್ಯದ ಕುರಿತು
ಅಪೊಸ್ತಲರೊಂದಿಗೆ ಮಾತಾಡಿದನು. 4ಒಮ್ಮೆ, ಯೇಸು ಅವ
ರೊಂದಿಗೆ ಊಟಮಾಡುತ್ತಿದ್ದಾಗ, ಜೆರುಸಲೇಮನ್ನು ಬಿಟ್ಟು
ಹೋಗಬಾರದೆಂದು ಅವರಿಗೆ ಹೇಳಿದನು. ‘‘ತಂದೆಯು ನಿಮ
ಗೊಂದು ವಾಗ್ದಾನವನ್ನು ಮಾಡಿದ್ದಾನೆ. ನಾನು ಮೊದಲೇ ಅದರ
ಬಗ್ಗೆ ನಿಮಗೆ ತಿಳಿಸಿದ್ದೇನೆ. ಈ ವಾಗ್ದಾನವನ್ನು ಸ್ವೀಕರಿಸಿಕೊಳ್ಳಲು
ಜೆರುಸಲೇಮಿನಲ್ಲಿ ಕಾದುಕೊಂಡಿರಿ. 5ಯೋಹಾನನು ಜನರಿಗೆ
ನೀರಿನಲ್ಲಿ ದೀಕ್ಷಾಸ್ನಾನ ಮಾಡಿಸಿದನು, ಆದರೆ ಇನ್ನು ಕೆಲವೇ
ದಿನಗಳಲ್ಲಿ ನಿಮಗೆ ಪವಿತ್ರಾತ್ಮನಲ್ಲಿ ದೀಕ್ಷಾಸ್ನಾನವಾಗುವುದು’’
ಎಂದು ಹೇಳಿದನು.

### ಪರಲೋಕಾರೋಹಣ

6ಅಪೊಸ್ತಲರು ಒಟ್ಟಾಗಿ ಸೇರಿದ್ದಾಗ, ಯೇಸುವಿಗೆ,
‘‘ಪ್ರಭುವೇ, ನೀನು ಯೆಹೂದ್ಯರಿಗೆ ಮತ್ತೆ ಅವರ ರಾಜ್ಯವನ್ನು
ಕೊಡುವಂಥದ್ದು ಈ ಕಾಲದಲ್ಲೋ?’’ ಎಂದು ಕೇಳಿದರು.
7ಯೇಸು ಅವರಿಗೆ, ‘‘ದಿನಗಳನ್ನು ಮತ್ತು ಕಾಲಗಳನ್ನು
ನಿರ್ಧರಿಸುವ ಅಧಿಕಾರವಿರುವುದು ತಂದೆಯೊಬ್ಬನಿಗಷ್ಟೇ.
ನೀವು ಅವುಗಳನ್ನು ತಿಳಿದುಕೊಳ್ಳಲಾಗುವುದಿಲ್ಲ. 8ಆದರೆ
ಪವಿತ್ರಾತ್ಮನು* ನಿಮ್ಮ ಬಳಿಗೆ ಬಂದಾಗ ನೀವು ಬಲಹೊಂದಿ
ಜೆರುಸಲೇಮಿನಲ್ಲಿಯೂ ಇಡೀ ಜುದೇಯದಲ್ಲಿಯೂ
ಸಮಾರ್ಯದಲ್ಲಿಯೂ ಮತ್ತು ಭೂಲೋಕದ ಕಟ್ಟಕಡೆಯ
ವರೆಗೂ ನನಗೆ ಸಾಕ್ಷಿಗಳಾಗಿರುವಿರಿ’’ ಎಂದನು.
9ಯೇಸು ಈ ಸಂಗತಿಗಳನ್ನು ಅಪೊಸ್ತಲರಿಗೆ ಹೇಳಿದ ಮೇಲೆ
ಅಪೊಸ್ತಲರು ನೋಡುತ್ತಿರುವಾಗಲೇ ಆಕಾಶಕ್ಕೆ ಎತ್ತಲ್ಪಟ್ಟನು.
ಮೋಡವು ಆತನನ್ನು ಕವಿದುಕೊಂಡದ್ದರಿಂದ ಅವರು ಆತನನ್ನು
ಕಾಣಲಾಗಲಿಲ್ಲ. 10ಯೇಸು ಹೋಗುತ್ತಿರಲು ಅಪೊಸ್ತಲರು
ಆಕಾಶವನ್ನೇ ನೋಡುತ್ತಾ ನಿಂತಿದ್ದರು. ಆಗ, ಬಿಳುಪಾದ ಬಟ್ಟೆ
ಗಳನ್ನು ಧರಿಸಿಕೊಂಡಿದ್ದ ಇಬ್ಬರು ಪುರುಷರು (ದೇವದೂತರು)
ಇದ್ದಕ್ಕಿದ್ದಂತೆ ಅವರ ಪಕ್ಕದಲ್ಲಿ ನಿಂತುಕೊಂಡು, 11‘‘ಗಲಿಲಾಯ
ದವರೇ, ಆಕಾಶವನ್ನೇ ನೋಡುತ್ತಾ ಏಕೆ ನಿಂತುಕೊಂಡಿದ್ದೀರಿ?
ಯೇಸು ನಿಮ್ಮ ಕಣ್ಣೆದುರಿನಲ್ಲಿ ಪರಲೋಕಕ್ಕೆ ಹೇಗೆ ಏರಿ
ಹೋದನೋ ಅದೇ ರೀತಿಯಲ್ಲಿ ಹಿಂತಿರುಗಿ ಬರುತ್ತಾನೆ’’
ಎಂದು ಹೇಳಿದರು.

### ಹೊಸ ಅಪೊಸ್ತಲನೊಬ್ಬನ ಆಯ್ಕೆ

12ಬಳಿಕ ಅಪೊಸ್ತಲರು ಆಲಿವ್ ಮರಗಳ ಗುಡ್ಡದಿಂದ
ಜೆರುಸಲೇಮಿಗೆ ಹಿಂತಿರುಗಿಹೋದರು. (ಈ ಗುಡ್ಡಕ್ಕೂ ಜೆರುಸ
ಲೇಮಿಗೂ ಸುಮಾರು ಅರ್ಧ ಮೈಲಿ ಅಂತರವಿದೆ.) 13ಅಪೊಸ್ತ
ಲರು ಪಟ್ಟಣವನ್ನು ಪ್ರವೇಶಿಸಿ ತಾವು ವಾಸವಾಗಿದ್ದ ಕೋಣೆಗೆ
ಹೋದರು. ಅದು ಮೇಲ್ಮಾಳಿಗೆಯಲ್ಲಿತ್ತು. ಆ ಅಪೊಸ್ತಲರು
ಯಾರಾರೆಂದರೆ: ಪೇತ್ರ, ಯೋಹಾನ, ಯಾಕೋಬ,
ಅಂದ್ರೆಯ, ಫಿಲಿಪ್ಪ, ತೋಮ, ಬಾರ್ತೊಲೊಮಾಯ,
ಮತ್ತಾಯ, ಯಾಕೋಬ (ಅಲ್ಫಾಯನ ಮಗ), ದೇಶಾಭಿಮಾನಿ
ಯಾದ ಸಿಮೋನ ಮತ್ತು ಯೂದ (ಯಾಕೋಬನ ಮಗ).
14ಅಪೊಸ್ತಲರೆಲ್ಲರೂ ಒಟ್ಟಾಗಿ ಸೇರಿದ್ದರು. ಅವರು
ಒಂದೇ ಉದ್ದೇಶದಿಂದ ಎಡಬಿಡದೆ ಪ್ರಾರ್ಥಿಸುತ್ತಿದ್ದರು. ಕೆಲವು
ಸ್ತ್ರೀಯರೂ ಯೇಸುವಿನ ತಾಯಿ ಮರಿಯಳೂ ಆತನ ಸಹೋದ
ರರೂ ಅಪೊಸ್ತಲರ ಸಂಗಡವಿದ್ದರು.
15ಕೆಲವು ದಿನಗಳಾದ ಮೇಲೆ ವಿಶ್ವಾಸಿಗಳು ಸಭೆ ಸೇರಿದ್ದರು.
(ಅಲ್ಲಿ ಸುಮಾರು ನೂರಿಪ್ಪತ್ತು ಮಂದಿ ಇದ್ದರು.) ಪೇತ್ರನು
ಎದ್ದುನಿಂತುಕೊಂಡು ಇಂತೆಂದನು: 16-17‘‘ಸಹೋದರರೇ,
ಪವಿತ್ರಾತ್ಮನು ದಾವೀದನ ಮೂಲಕವಾಗಿ ಪವಿತ್ರ ಗ್ರಂಥದಲ್ಲಿ*
ಮುಂತಿಳಿಸಿದ್ದ ಸಂಗತಿ ನೆರವೇರಬೇಕಿತ್ತು. ನಮ್ಮ ಸ್ವಂತ ಗುಂಪಿ
ನವರಲ್ಲಿ ಒಬ್ಬನಾದ ಯೂದನ ಬಗ್ಗೆ ದಾವೀದನು ಹೇಳಿದ್ದಾನೆ.
ಯೂದನು ನಮ್ಮೊಂದಿಗೆ ಸೇವೆ ಮಾಡಿದನು. ಯೇಸುವನ್ನು
ಬಂಧಿಸುವವರಿಗೆ ಯೂದನು ಮಾರ್ಗದರ್ಶಕನಾಗುತ್ತಾನೆಂದು
ಪವಿತ್ರಾತ್ಮನು ತಿಳಿಸಿದ್ದನು.’’

---

**ಅಪೊಸ್ತಲರು** ವಿಶೇಷ ಸಹಾಯಕರಾಗಿ ಯೇಸುವಿನಿಂದ ಆರಿಸಲ್ಪಟ್ಟವರು.

**ಪವಿತ್ರಾತ್ಮನು** ಅಂದರೆ ದೇವರಾತ್ಮ, ಕ್ರಿಸ್ತನ ಆತ್ಮ ಮತ್ತು ಸಂತೈಸುವವನು. ದೇವರೊಡನೆ ಮತ್ತು ಕ್ರಿಸ್ತನೊಡನೆ ಸೇರಿ ಆತನು (ದೇವರ) ಕಾರ್ಯವನ್ನು ಲೋಕದ ಜನರ ಮಧ್ಯದಲ್ಲಿ ಮಾಡುವವನು.

**ಪವಿತ್ರ ಗ್ರಂಥ** ಪವಿತ್ರ ಬರಹಗಳು - ಹಳೆ ಒಡಂಬಡಿಕೆ.

[18](ಈ ಕಾರ್ಯ ಮಾಡುವುದಕ್ಕಾಗಿ ಯೂದನಿಗೆ ಹಣ
ಕೊಡಲಾಗಿತ್ತು. ಆ ಹಣದಿಂದ ಒಂದು ಹೊಲವನ್ನು ಅವನಿಗಾಗಿ
ಕೊಂಡುಕೊಳ್ಳಲಾಯಿತು. ಆದರೆ ಯೂದನು ತಲೆಕೆಳಗಾಗಿ
ಬಿದ್ದಾಗ ಅವನ ಹೊಟ್ಟೆ ಒಡೆದುಹೋಯಿತು. ಅವನ ಕರುಳೆಲ್ಲಾ
ಹೊರಗೆ ಬಂದವು. [19]ಇದರ ಬಗ್ಗೆ ಜೆರುಸಲೇಮಿನ ಜನ
ರೆಲ್ಲರಿಗೂ ತಿಳಿಯಿತು. ಆದಕಾರಣವೇ ಅವರು ಆ ಹೊಲಕ್ಕೆ
ಅಕೆಲ್ದಮಾ ಎಂದು ಹೆಸರಿಟ್ಟರು. ಅವರ ಭಾಷೆಯಲ್ಲಿ ಅಕೆಲ್ದಮಾ
ಅಂದರೆ 'ರಕ್ತದ ಹೊಲ' ಎಂದರ್ಥ.)

[20] 'ಅವನ ಮನೆ ಹಾಳಾಗಲಿ! ಅಲ್ಲಿ ಯಾರೂ ವಾಸಿಸ
ದಂತಾಗಲಿ! *ಕೀರ್ತನೆ 69:25*

ಎಂದು ಕೀರ್ತನೆಗಳ ಪುಸ್ತಕದಲ್ಲಿ ಯೂದನ ಬಗ್ಗೆ ಬರೆದಿದೆ.

ಅಲ್ಲದೆ 'ಬೇರೊಬ್ಬನು ಅವನ ಕೆಲಸವನ್ನು ಪಡೆದು
ಕೊಳ್ಳಲಿ' *ಕೀರ್ತನೆ 109:8*

ಎಂದು ಸಹ ಬರೆದಿದೆ.

[21-22]ಆದ್ದರಿಂದ ಬೇರೊಬ್ಬನು ನಮ್ಮೊಂದಿಗೆ ಸೇರಿ,
ಯೇಸುವಿನ ಪುನರುತ್ಥಾನಕ್ಕೆ ಸಾಕ್ಷಿಯಾಗಿರಬೇಕು. ಪ್ರಭುವಾದ
ಯೇಸು ನಮ್ಮಲ್ಲಿ ಹೋಗುತ್ತಾ ಬರುತ್ತಾ ಇದ್ದ ಕಾಲವೆಲ್ಲಾ
ಅವನು ನಮ್ಮ ಗುಂಪಿನಲ್ಲಿದ್ದವರಲ್ಲಿ ಒಬ್ಬನಾಗಿರಬೇಕು.
ಯೋಹಾನನು ದೀಕ್ಷಾಸ್ನಾನ ಕೊಡಲು ಆರಂಭ ಮಾಡಿದ ದಿನದ
ಮೊದಲುಗೊಂಡು ಯೇಸುವು ನಮ್ಮ ಬಳಿಯಿಂದ ಪರ
ಲೋಕಕ್ಕೆ ಎತ್ತಲ್ಪಟ್ಟ ದಿನದವರೆಗೂ ಅವನು ನಮ್ಮೊಂದಿಗಿದ್ದವ
ನಾಗಿರಬೇಕು.''

[23]ಅಪೊಸ್ತಲರು ಇಬ್ಬರನ್ನು ಸಭೆಯ ಮುಂದೆ ನಿಲ್ಲಿಸಿದರು.
ಒಬ್ಬನು ಬಾರ್ಸಬನೆಂಬ ಯೋಸೇಫ. ಇವನನ್ನು ಯೂಸ್ತ
ನೆಂದೂ ಕರೆಯುತ್ತಿದ್ದರು. ಮತ್ತೊಬ್ಬನು ಮತ್ತೀಯ.
[24-25]ಅಪೊಸ್ತಲರು ಹೀಗೆ ಪ್ರಾರ್ಥಿಸಿದರು: ''ಪ್ರಭುವೇ, ನೀನು
ಎಲ್ಲಾ ಜನರ ಮನಸ್ಸುಗಳನ್ನು ತಿಳಿದಿರುವೆ. ಈ ಕೆಲಸವನ್ನು
ಮಾಡುವುದಕ್ಕಾಗಿ ಈ ಇಬ್ಬರಲ್ಲಿ ನೀನು ಯಾರನ್ನು ಆರಿಸಿ
ಕೂಂಡಿರುವೆ ಎಂಬುದನ್ನು ನಮಗೆ ತೋರಿಸು. ಯೂದನು ಈ
ಕೆಲಸಕ್ಕೆ ವಿಮುಖನಾಗಿ ತಾನು ಸೇರಬೇಕಿದ್ದಲ್ಲಿಗೆ ಹೊರಟು
ಹೋದನು. ಪ್ರಭುವೇ, ಅವನ ಸ್ಥಳದಲ್ಲಿ ಅಪೊಸ್ತಲನಾಗಿ
ಯಾರು ನೇಮಕಗೊಳ್ಳ ಬೇಕೆಂಬುದನ್ನು ನಮಗೆ ತೋರಿಸು!''
[26] ಬಳಿಕ ಅಪೊಸ್ತಲರು ಅವರಿಬ್ಬರಲ್ಲಿ ಒಬ್ಬನನ್ನು ಆರಿಸಿ
ಕೂಳ್ಳಲು ಚೀಟಿಹಾಕಿದರು. ಚೀಟಿ ಮತ್ತೀಯನಿಗೆ ಬಂದದ್ದ
ರಿಂದ ಹನ್ನೊಂದು ಮಂದಿ ಯೊಂದಿಗೆ ಅವನೂ ಅಪೊಸ್ತಲ
ನಾದನು.

## ಪವಿತ್ರಾತ್ಮನ ಆಗಮನ

**2** ಪಂಚಶತ್ತಮ ಹಬ್ಬದ* ದಿನ ಬಂದಾಗ ಅವರೆಲ್ಲರು
ಒಂದು ಸ್ಥಳದಲ್ಲಿ ಒಟ್ಟಾಗಿ ಸೇರಿದ್ದರು. ಆಗ, ಆಕಾಶದಿಂದ
ಒಂದು ಶಬ್ದ ಇದ್ದಕ್ಕಿದ್ದಂತೆ ಬಂದಿತು. ಬಿರುಗಾಳಿ ಬೀಸು
ತ್ತಿದೆಯೋ ಎಂಬಂತಿತ್ತು ಆ ಶಬ್ದ. ಅವರು ಕುಳಿತುಕೊಂಡಿದ್ದ
ಮನೆಯಲ್ಲೆಲ್ಲಾ ಆ ಶಬ್ದ ತುಂಬಿಕೊಂಡಿತು. [3]ಬೆಂಕಿಯ ಜ್ವಾಲೆ
ಗಳಂತಿದ್ದ ಏನನ್ನೋ ಅವರು ಕಂಡರು. ಜ್ವಾಲೆಗಳು ವಿಂಗಡವಾಗಿ
ಅಲ್ಲಿದ್ದ ಪ್ರತಿಯೊಬ್ಬ ವ್ಯಕ್ತಿಯ ಮೇಲೆ ನೆಲೆಸಿದವು. [4]ಅವ
ರೆಲ್ಲರೂ ಪವಿತ್ರಾತ್ಮಭರಿತರಾದರು ಮತ್ತು ವಿವಿಧ ಭಾಷೆಗಳಲ್ಲಿ
ಮಾತಾಡತೊಡಗಿದರು. ಪವಿತ್ರಾತ್ಮನೇ ಅವರಿಗೆ ಆ ಶಕ್ತಿಯನ್ನು
ಕೊಟ್ಟನು.

[5]ಬಹು ಧಾರ್ಮಿಕರಾದ ಅನೇಕ ಯೆಹೂದ್ಯರು ಆ ಸಮಯ
ದಲ್ಲಿ ಜೆರುಸಲೇಮಿನಲ್ಲಿದ್ದರು. ಇವರಲ್ಲಿ ಪ್ರಪಂಚದ ಪ್ರತಿ
ಯೊಂದು ದೇಶದಿಂದ ಬಂದ ಜನರಿದ್ದರು. [6]ಈ ಶಬ್ದವನ್ನು ಕೇಳಿ
ಈ ಜನರ ಒಂದು ದೊಡ್ಡ ಸಮೂಹವೇ ಅಲ್ಲಿಗೆ ಬಂದಿತು.
ಅಪೊಸ್ತಲರು ಮಾತಾಡುತ್ತಿರುವುದು ಪ್ರತಿಯೊಬ್ಬರಿಗೂ ಅವರ
ವರ ಸ್ವಂತ ಭಾಷೆಗಳಲ್ಲಿ ಕೇಳಿಸುತ್ತಿರುವುದನ್ನು ಕಂಡು ಅವರಿಗೆ
ಆಶ್ಚರ್ಯವಾಯಿತು. [7]ಇದನ್ನು ನೋಡಿದ ಯೆಹೂದ್ಯರೆಲ್ಲರೂ
ವಿಸ್ಮಯಗೊಂಡರು. ಹೀಗೆ ಮಾಡಲು ಅಪೊಸ್ತಲರಿಗೆ ಹೇಗೆ
ಸಾಧ್ಯವಾಯಿತೆಂದು ಅವರಿಗೆ ಅರ್ಥವಾಗಲಿಲ್ಲ. ಅವರು,
''ಮಾತಾಡುತ್ತಿರುವ ಈ ಜನರು (ಅಪೊಸ್ತಲರು) ಗಲಿಲಾಯ
ದವರು!* [8]ಆದರೆ ಇವರು ನಮ್ಮ ಸ್ವಂತ ಭಾಷೆಗಳಲ್ಲಿ ಮಾತಾಡು
ತ್ತಿರುವಂತೆ ಕೇಳಿಸುತ್ತಿದೆ. ಇದು ಹೇಗೆ ಸಾಧ್ಯ? ನಾವು ಬೇರೆ
ಬೇರೆ ಸ್ಥಳಗಳವರು. [9]ನಮ್ಮಲ್ಲಿ ಪಾರ್ಥಿಯರು, ಮೀಡಿಯರು,
ಎಲಾಮಿನವರು, ಮೆಸೊಪೊಟೇಮಿನವರು, ಜುದೇಯ
ದವರು, ಕಪ್ಪದೋಸಿಯವರು, ಪೊಂತದವರು, ಏಷ್ಯಾದ
ವರು,* [10]ಫ್ರಿಜಿಯದವರು, ಪಾಂಫಿಲಿಯದವರು, ಈಜಿಪ್ಟಿ
ನವರು ಮತ್ತು ಸಿರೇನಿನ ಬಳಿಯಲ್ಲಿರುವ ಲಿಬಿಯ ಪ್ರಾಂತ್ಯ
ದವರು, ರೋಮ್‌ನವರು, [11]ಕ್ರೇಟ್‌ನವರು ಮತ್ತು ಅರೇಬಿ
ಯವರು ಇದ್ದಾರೆ. ನಮ್ಮಲ್ಲಿರುವ ಕೆಲವು ಜನರು ಹುಟ್ಟು
ಯೆಹೂದ್ಯರು. ಉಳಿದವರು ಮತಾಂತರ ಹೊಂದಿದವರು.
ನಾವು ಬೇರೆಬೇರೆ ದೇಶಗಳವರು. ಆದರೆ ಈ ಜನರು ಮಾತಾಡು
ತ್ತಿರುವುದು ನಮ್ಮ ಸ್ವಂತ ಭಾಷೆಗಳಲ್ಲಿ ನಮಗೆ ಕೇಳಿಸುತ್ತಿದೆ!
ಅವರು ದೇವರ ಬಗ್ಗೆ ಹೇಳುತ್ತಿರುವ ಮಹಾಸಂಗತಿಗಳು ನಮ
ಗೆಲ್ಲರಿಗೂ ಅರ್ಥವಾಗುತ್ತಿವೆ '' ಎಂದು ಹೇಳಿದರು. [12]ಜನ
ರೆಲ್ಲರೂ ವಿಸ್ಮಯಗೊಂಡರು ಮತ್ತು ಗಲಿಬಿಲಿಯಾದರು.
ಅವರು, ''ಏನು ನಡೆಯುತ್ತಿದೆ'' ಎಂದು ಒಬ್ಬರನ್ನೊಬ್ಬರು ಕೇಳ
ತೊಡಗಿದರು. [13]ಕೆಲವರು ಅಪೊಸ್ತಲರನ್ನು ನೋಡಿ ನಗುತ್ತಾ
''ಇವರು ಅತಿಯಾಗಿ ದ್ರಾಕ್ಷಾರಸ ಕುಡಿದು ಮತ್ತರಾಗಿದ್ದಾರೆ''
ಎಂದು ಹಾಸ್ಯಮಾಡಿದರು.

## ಪೇತ್ರನ ಪ್ರಸಂಗ

[14]ಬಳಿಕ ಪೇತ್ರನು ಉಳಿದ ಹನ್ನೊಂದು ಮಂದಿ
ಅಪೊಸ್ತಲರೊಂದಿಗೆ ಎದ್ದುನಿಂತುಕೊಂಡನು. ಎಲ್ಲಾ ಜನರಿಗೆ
ಕೇಳುವಂತೆ ಅವನು ಗಟ್ಟಿಯಾಗಿ ಇಂತೆಂದನು: ''ಯೆಹೂದ್ಯರೇ,
ಜೆರುಸಲೇಮಿನಲ್ಲಿ ವಾಸವಾಗಿರುವ ಜನರೇ, ನನಗೆ ಕಿವಿ
ಗೊಡಿರಿ. ನೀವು ತಿಳಿದುಕೊಳ್ಳಬೇಕಾದ ಸಂಗತಿಯನ್ನು ನಾನು
ನಿಮಗೆ ಹೇಳುತ್ತೇನೆ. [15]ನೀವು ಯೋಚಿಸಿಕೊಂಡಿರುವಂತೆ ಈ

---

**ಪಂಚಶತ್ತಮ ಹಬ್ಬ** ಯೆಹೂದ್ಯರ ಹಬ್ಬವಿದು. ಇದು ಗೋಧಿಯ ಸುಗ್ಗಿ ಹಬ್ಬ.

**ಗಲಿಲಾಯದವರು** ಇವರು ತಮ್ಮ ಸ್ವಂತ ಭಾಷೆಯಲ್ಲಿ ಮಾತ್ರ ಮಾತಾಡಬಲ್ಲರೆಂಬುದು ಜನರ ಭಾವನೆಯಾಗಿತ್ತು.

**ಏಷ್ಯಾ** ಏಷ್ಯಾ ಮೈನರಿನ ಪಶ್ಚಿಮ ಭಾಗ.

ಜನರು ಕುಡಿದು ಮತ್ತರಾದವರಲ್ಲ. ಈಗ ಮುಂಜಾನೆ ಒಂಭತ್ತು
ಗಂಟೆಯಷ್ಟೇ! 16ಆದರೆ ಈ ಹೊತ್ತು ಇಲ್ಲಿ ನಡೆಯುತ್ತಿರುವ
ಸಂಗತಿಗಳ ಬಗ್ಗೆ ಪ್ರವಾದಿಯಾದ ಯೋವೇಲನು ಹೀಗೆ
ಬರೆದಿದ್ದಾನೆ:

17 ‘ದೇವರು ಇಂತೆನ್ನುತ್ತಾನೆ: ಕೊನೆಯ ದಿನಗಳಲ್ಲಿ,
ನಾನು ನನ್ನ ಆತ್ಮವನ್ನು ಎಲ್ಲಾ ಜನರಿಗೋಸ್ಕರ
ಸುರಿಸುವೆನು. ನಿಮ್ಮ ಗಂಡುಮಕ್ಕಳು, ಹೆಣ್ಣು
ಮಕ್ಕಳು ಪ್ರವಾದಿಸುವರು. ನಿಮ್ಮ ಯುವಜನರು
ದರ್ಶನಗಳನ್ನು ಕಾಣುವರು. ನಿಮ್ಮ ವಯೋ
ವೃದ್ಧರು ವಿಶೇಷ ಕನಸುಗಳನ್ನು ಕಾಣುವರು.
18 ಆ ಸಮಯದಲ್ಲಿ ನಾನು ನನ್ನ ಆತ್ಮವನ್ನು ನನ್ನ
ದಾಸದಾಸಿಯರ ಮೇಲೆ ಸುರಿಸುವೆನು. ಆಗ
ಅವರು ಪ್ರವಾದಿಸುವರು.
19 ನಾನು ಆಕಾಶದಲ್ಲಿ ಅದ್ಭುತ ಕಾರ್ಯಗಳನ್ನು
ತೋರಿಸುವೆನು. ಭೂಮಿಯ ಮೇಲೆ ಸೂಚಕ
ಕಾರ್ಯಗಳನ್ನು ಮಾಡುವೆನು. ರಕ್ತ, ಬೆಂಕಿ
ಮತ್ತು ಕಪ್ಪೊಗೆಗಳು ಅಲ್ಲಿರುವವು.
20 ಸೂರ್ಯನು ಕತ್ತಲಾಗುವನು, ಚಂದ್ರನು ರಕ್ತ
ದಂತೆ ಕೆಂಪಾಗುವನು, ಆಗ ಪ್ರಭುವಿನ ಗಂಭೀರ
ವಾದ ಮಹಾದಿನವು ಬರುವುದು;
21 ಪ್ರಭುವಿನ ಹೆಸರನ್ನು ಹೇಳಿಕೊಳ್ಳುವವರಿಗೆಲ್ಲ
ರಕ್ಷಣೆ ಆಗುವುದು.’

*ಯೋವೇಲ 2:28-32*

22“ಯೆಹೂದ್ಯರೇ, ಈ ಮಾತುಗಳನ್ನು ಕೇಳಿರಿ: ನಜರೇತಿನ
ಯೇಸು ಬಹು ವಿಶೇಷವಾದ ವ್ಯಕ್ತಿ. ದೇವರು ತಾನು ಯೇಸುವಿನ
ಮೂಲಕ ಮಾಡಿದ ಶಕ್ತಿಯುತವಾದ ಮತ್ತು ಅದ್ಭುತವಾದ
ಕಾರ್ಯಗಳ ಮೂಲಕ ಇದನ್ನು ಸ್ಪಷ್ಟವಾಗಿ ನಿರೂಪಿಸಿದ್ದಾನೆ. ಈ
ಸಂಗತಿಗಳನ್ನು ನೀವೆಲ್ಲರೂ ನೋಡಿದಿರಿ. ಆದ್ದರಿಂದ ಇದು
ಸತ್ಯವೆಂದು ನಿಮಗೆ ಗೊತ್ತಿದೆ. 23ಯೇಸುವನ್ನು ನಿಮಗೆ ಒಪ್ಪಿಸ
ಲಾಯಿತು. ನೀವು ಕೆಟ್ಟಜನರ ಸಹಾಯದಿಂದ ಆತನನ್ನು ಶಿಲುಬೆ
ಗೇರಿಸಿದಿರಿ. ಆದರೆ ಇವುಗಳೆಲ್ಲಾ ಸಂಭವಿಸುತ್ತವೆಯೆಂದು
ದೇವರಿಗೆ ಗೊತ್ತಿತ್ತು. ಇದು ದೇವರ ಯೋಜನೆ. ದೇವರು ಬಹು
ಕಾಲದ ಹಿಂದೆಯೇ ಈ ಯೋಜನೆಯನ್ನು ಮಾಡಿದನು.
24ಯೇಸು ಮರಣವೇದನೆಯನ್ನು ಅನುಭವಿಸಿದನು. ಆದರೆ
ದೇವರು ಆತನನ್ನು ಬಿಡಿಸಿದನು. ದೇವರು ಯೇಸುವನ್ನು ಸತ್ತವ
ರೊಳಗಿಂದ ಜೀವಂತವಾಗಿ ಎಬ್ಬಿಸಿದನು. ಮರಣವು ಯೇಸು
ವನ್ನು ಹಿಡಿದುಕೊಳ್ಳಲಾಗಲಿಲ್ಲ. 25ಯೇಸುವಿನ ಬಗ್ಗೆ
ದಾವೀದನು ಹೀಗೆ ಹೇಳಿದ್ದಾನೆ:

‘ಪ್ರಭುವು ಯಾವಾಗಲೂ ನನ್ನ ಮುಂದೆ ಇರುವು
ದನ್ನು ನಾನು ನೋಡುತ್ತಿದ್ದೆನು; ನನ್ನನ್ನು
ಸುರಕ್ಷಿತವಾಗಿಡಲು ಆತನು ನನ್ನ ಬಲಗಡೆ
ಯಲ್ಲಿದ್ದಾನೆ.
26 ಆದ್ದರಿಂದ ನನ್ನ ಹೃದಯವು ಹರ್ಷಿಸುತ್ತದೆ.
ನನ್ನ ಬಾಯಿ ಆನಂದದಿಂದ ಮಾತಾಡುತ್ತದೆ.
ಹೌದು, ನನ್ನ ದೇಹವು ಸಹ ನಿರೀಕ್ಷೆಯಿಂದ
ಜೀವಿಸುವುದು;
27 ಯಾಕೆಂದರೆ ನೀನು ನನ್ನ ಜೀವಾತ್ಮವನ್ನು
ಪಾತಾಳದಲ್ಲಿ ತೊರೆದುಬಿಡುವುದಿಲ್ಲ. ನಿನ್ನ
ಪರಿಶುದ್ಧನ ದೇಹವು ಸಮಾಧಿಯಲ್ಲಿ ಕೊಳೆ
ಯಲು ನೀನು ಅವಕಾಶ ಕೊಡುವುದಿಲ್ಲ.
28 ಹೇಗೆ ಜೀವಿಸಬೇಕೆಂಬುದನ್ನು ನೀನು ನನಗೆ
ಉಪದೇಶಿಸಿದೆ. ನಿನ್ನ ಪ್ರಸನ್ನತೆಯು ನನ್ನಲ್ಲಿ
ಮಹದಾನಂದವನ್ನು ಉಂಟುಮಾಡುವುದು.’

*ಕೀರ್ತನೆ 16:8-11*

29“ನನ್ನ ಸಹೋದರರೇ, ನಮ್ಮ ಪಿತೃವಾದ ದಾವೀದನ ಬಗ್ಗೆ
ನಾನು ನಿಮಗೆ ನಿಜವಾಗಿಯೂ ಹೇಳಬಲ್ಲೆನು. ಅವನು ಸತ್ತು
ಹೋದನು ಮತ್ತು ಅವನಿಗೆ ಸಮಾಧಿಯಾಯಿತು. ಅವನ
ಸಮಾಧಿಯು ನಮ್ಮ ಮಧ್ಯದಲ್ಲಿ ಇಂದಿನವರೆಗೂ ಇದೆ.
30ದಾವೀದನು ಒಬ್ಬ ಪ್ರವಾದಿಯಾಗಿದ್ದನು* ಮತ್ತು ‘ನಿನ್ನ
ಕುಟುಂಬದ ಒಬ್ಬನನ್ನು ನಿನ್ನಂತೆಯೇ ರಾಜನನ್ನಾಗಿ ಮಾಡು
ವೆನು’ ಎಂದು ದೇವರು ಅವನಿಗೆ ಆಣೆಯಿಟ್ಟು ವಾಗ್ದಾನ
ಮಾಡಿದ್ದು ಅವನಿಗೆ ಗೊತ್ತಿತ್ತು. 31ಅದು ನೆರವೇರುವುದಕ್ಕಿಂತ
ಮೊದಲೇ ದಾವೀದನಿಗೆ ತಿಳಿದಿತ್ತು. ಆದಕಾರಣ ದಾವೀದನು
ಪುನರುತ್ಥಾನ ಹೊಂದುವ ಕ್ರಿಸ್ತನ ಬಗ್ಗೆ,

‘ಅವನು ಪಾತಾಳದಲ್ಲಿ ಬಿಡಲ್ಪಡಲಿಲ್ಲ. ಅವನ
ದೇಹವು ಸಮಾಧಿಯಲ್ಲಿ ಕೊಳೆಯಲಿಲ್ಲ’ ಎಂದಿ
ದ್ದಾನೆ.

32ಆದ್ದರಿಂದ ದೇವರು ಸತ್ತವರೊಳಗಿಂದ ಜೀವಂತವಾಗಿ
ಎಬ್ಬಿಸಿದ್ದು ಯೇಸುವನ್ನೇ ಹೊರತು ದಾವೀದನನ್ನಲ್ಲ! ಇದಕ್ಕೆ
ನಾವೆಲ್ಲರೂ ಸಾಕ್ಷಿಗಳಾಗಿದ್ದೇವೆ. ನಾವು ಆತನನ್ನು ಕಂಡೆವು!
33ಯೇಸು ಪರಲೋಕಕ್ಕೆ ಎತ್ತಲ್ಪಟ್ಟನು. ಈಗ ಯೇಸು ದೇವ
ರೊಂದಿಗಿದ್ದಾನೆ, ದೇವರ ಬಲಗಡೆಯಲ್ಲಿದ್ದಾನೆ. ಈಗ
ತಂದೆಯು (ದೇವರು) ಪವಿತ್ರಾತ್ಮನನ್ನು ಯೇಸುವಿಗೆ ಕೊಟ್ಟಿ
ದ್ದಾನೆ. ಪವಿತ್ರಾತ್ಮನನ್ನು ಕೊಡುವುದಾಗಿ ದೇವರು ವಾಗ್ದಾನ
ಮಾಡಿದ್ದನು. ಆದ್ದರಿಂದ ಯೇಸು ಈಗ ಆ ಆತ್ಮನನ್ನು ಸುರಿಸಿ
ದ್ದಾನೆ. ನೀವು ನೋಡುತ್ತಿರುವುದು ಮತ್ತು ಕೇಳುತ್ತಿರುವುದು
ಇದನ್ನೇ. 34-35ಪರಲೋಕಕ್ಕೆ ಎತ್ತಲ್ಪಟ್ಟವನು ದಾವೀದನಲ್ಲ,
ಯೇಸುವೇ. ದಾವೀದನೇ ಅದರ ಬಗ್ಗೆ ಹೇಳುತ್ತಾ,

‘ಪ್ರಭುವು (ದೇವರು) ನನ್ನ ಪ್ರಭುವಿಗೆ, ನಾನು ನಿನ್ನ
ಶತ್ರುಗಳನ್ನು ನಿನ್ನ ಪಾದಗಳಿಗೆ ಪೀಠವಾಗಿ
ಮಾಡುವತನಕ ನನ್ನ ಬಲಗಡೆಯಲ್ಲಿ ಕುಳಿತುಕೋ
ಎಂದು ತಿಳಿಸಿದನು’ ಎಂದಿದ್ದಾನೆ.

ಕೀರ್ತನೆ *110:1*

36“ಆದ್ದರಿಂದ ಯೆಹೂದ್ಯರೆಲ್ಲರೂ ಇದನ್ನು ನಿಜ
ವಾಗಿಯೂ ತಿಳಿದುಕೊಳ್ಳಬೇಕು: ದೇವರು ಯೇಸುವನ್ನು ಪ್ರಭು
ವನ್ನಾಗಿಯೂ ಕ್ರಿಸ್ತನನ್ನಾಗಿಯೂ ಮಾಡಿದ್ದಾನೆ. ನೀವು ಶಿಲುಬೆ
ಗೇರಿಸಿದ ವ್ಯಕ್ತಿಯೇ ಆತನು!”

---

**ಪ್ರವಾದಿಯಾಗಿದ್ದನು** ಕೀರ್ತನೆ 132:11

[37]ಇದನ್ನು ಕೇಳಿದಾಗ, ಅವರ ಹೃದಯದಲ್ಲಿ ಅಲಗು ನೆಟ್ಟಂತಾಯಿತು. ಅವರು ಪೇತ್ರನನ್ನು ಮತ್ತು ಉಳಿದ ಅಪೊಸ್ತಲರನ್ನು, ‘‘ಈಗ ನಾವೇನು ಮಾಡಬೇಕು?’’ ಎಂದು ಕೇಳಿದರು.

[38]ಪೇತ್ರನು ಅವರಿಗೆ, ‘‘ನಿಮ್ಮಲ್ಲಿ ಪ್ರತಿಯೊಬ್ಬರೂ ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಂಡು ಯೇಸು ಕ್ರಿಸ್ತನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ. ಆಗ ದೇವರು ನಿಮ್ಮ ಪಾಪಗಳನ್ನು ಕ್ಷಮಿಸುವನು. ಅಲ್ಲದೆ ದೇವರು ವಾಗ್ದಾನ ಮಾಡಿರುವ ಪವಿತ್ರಾತ್ಮನನ್ನು ಹೊಂದಿಕೊಳ್ಳುವಿರಿ.
[39]ಈ ವಾಗ್ದಾನವನ್ನು ನಿಮಗೂ ನಿಮ್ಮ ಮಕ್ಕಳಿಗೂ ಬಹುದೂರದಲ್ಲಿರುವ ಜನರಿಗೂ ಕೊಡಲಾಗಿದೆ. ನಮ್ಮ ದೇವರಾದ ಪ್ರಭು ತನ್ನ ಬಳಿಗೆ ಕರೆಯುವ ಪ್ರತಿಯೊಬ್ಬರಿಗೂ ಈ ವಾಗ್ದಾನವನ್ನು ಕೊಟ್ಟಿದ್ದಾನೆ’’ ಎಂದು ಹೇಳಿದನು.

[40]ಪೇತ್ರನು ಇನ್ನೂ ಅನೇಕ ಮಾತುಗಳಿಂದ ಅವರನ್ನು ಎಚ್ಚರಿಸಿ ‘‘ಈ ದುಷ್ಟ ಸಂತತಿಯಿಂದ ತಪ್ಪಿಸಿಕೊಳ್ಳಿ ’’ ಎಂದು
ಬೇಡಿಕೊಂಡನು. [41]ಪೇತ್ರನು ಹೇಳಿದ್ದನ್ನು ಸ್ವೀಕರಿಸಿಕೊಂಡ ಜನರು ದೀಕ್ಷಾಸ್ನಾನ ಮಾಡಿಸಿಕೊಂಡರು. ಆ ದಿನ ಸುಮಾರು ಮೂರುಸಾವಿರ ಜನರು ವಿಶ್ವಾಸಿಗಳ ಗುಂಪಿಗೆ ಸೇರಿದರು.
[42]ಇವರೆಲ್ಲರೂ ಅಪೊಸ್ತಲರ ಬೋಧನೆಯನ್ನು ಕೇಳುವುದರಲ್ಲಿಯೂ ಸಹೋದರರ ಅನ್ಯೋನ್ಯತೆಯಲ್ಲಿಯೂ ರೊಟ್ಟಿ ಮುರಿಯುವುದರಲ್ಲಿಯೂ ಪ್ರಾರ್ಥನೆಗಳಲ್ಲಿಯೂ ನಿರತ ರಾಗಿದ್ದರು.

### ಅನ್ಯೋನ್ಯ ಜೀವನ

[43]ಅಪೊಸ್ತಲರು ಅನೇಕ ಶಕ್ತಿಯುತವಾದ ಮತ್ತು ಅದ್ಭುತ ವಾದ ಕಾರ್ಯಗಳನ್ನು ಮಾಡುತ್ತಿದ್ದರು; ಮತ್ತು ಪ್ರತಿಯೊಬ್ಬ ರಿಗೂ ದೇವರಲ್ಲಿ ಭಯಭಕ್ತಿ ಉಂಟಾಯಿತು.[44]ಎಲ್ಲಾ
ವಿಶ್ವಾಸಿಗಳು ಒಟ್ಟಾಗಿ ವಾಸಿಸುತ್ತಿದ್ದರು. ಅವರು ಪ್ರತಿ ಯೊಂದನ್ನೂ ಹಂಚಿಕೊಳ್ಳುತ್ತಿದ್ದರು. [45]ತಮ್ಮ ಜಮೀನನ್ನು
ಮತ್ತು ತಾವು ಹೊಂದಿದ್ದ ವಸ್ತುಗಳನ್ನು ಮಾರಿ, ಬಂದ ಹಣವನ್ನೆಲ್ಲಾ ಕೊರತೆಯಲ್ಲಿದ್ದವರಿಗೆ ಹಂಚಿಕೊಡುತ್ತಿದ್ದರು; [46]ಪ್ರತಿ
ದಿನ ದೇವಾಲಯದಲ್ಲಿ ಸೇರಿಬರುತ್ತಿದ್ದರು. ಅವರೆಲ್ಲರ ಉದ್ದೇಶ ಒಂದೇ ಆಗಿತ್ತು. ಅವರು ತಮ್ಮ ಮನೆಗಳಲ್ಲಿ ರೊಟ್ಟಿ ಮುರಿದು ಒಟ್ಟಾಗಿ ಊಟಮಾಡುತ್ತಿದ್ದರು. ಅವರ ಹೃದಯಗಳು ಆನಂದದಿಂದ ತುಂಬಿದ್ದವು. [47]ಅವರು ದೇವರನ್ನು ಕೊಂಡಾ
ಡುತ್ತಿದ್ದರು ಮತ್ತು ಜನರೆಲ್ಲರೂ ಅವರನ್ನು ಇಷ್ಟಪಡುತ್ತಿದ್ದರು. ಪ್ರತಿದಿನವೂ ಹೆಚ್ಚುಹೆಚ್ಚು ಜನರು ರಕ್ಷಣೆ ಹೊಂದುತ್ತಿದ್ದರು; ಪ್ರಭುವು ಅವರನ್ನೆಲ್ಲಾ ವಿಶ್ವಾಸಿಗಳ ಸಭೆಗೆ ಸೇರಿಸುತ್ತಿದ್ದನು.

### ಪೇತ್ರನಿಂದ ಗುಣಹೊಂದಿದ ಕುಂಟ

3 ಒಂದು ದಿನ ಪೇತ್ರ ಮತ್ತು ಯೋಹಾನ ದೇವಾಲಯಕ್ಕೆ* ಹೋದರು. ಆಗ ಮಧ್ಯಾಹ್ನ ಮೂರು ಗಂಟೆಯ ಸಮಯ ವಾಗಿತ್ತು. ಈ ವೇಳೆಯಲ್ಲೇ ಪ್ರತಿದಿನ ಪ್ರಾರ್ಥನಾ ಕೂಟ ನಡೆ ಯುತ್ತಿತ್ತು.
[2]ಅವರು ದೇವಾಲಯಕ್ಕೆ ಹೋಗುತ್ತಿದ್ದಾಗ ಅಲ್ಲೊಬ್ಬ ಹುಟ್ಟುಕುಂಟನಿದ್ದನು. ಅವನಿಗೆ ನಡೆಯಲಾಗುತ್ತಿರಲಿಲ್ಲ. ಆದ್ದರಿಂದ ಅವನ ಕೆಲವು ಸ್ನೇಹಿತರು ಅವನನ್ನು ಪ್ರತಿ ದಿನ ದೇವಾಲಯಕ್ಕೆ ಹೊತ್ತುಕೊಂಡು ಬಂದು, ದೇವಾಲಯದ ಹೊರ ಬಾಗಿಲುಗಳ ಒಂದರ ಸಮೀಪದಲ್ಲಿ ಕುಳ್ಳಿರಿಸುತ್ತಿದ್ದರು. ಆ ಬಾಗಿಲಿನ ಹೆಸರು ‘ಸುಂದರ ದ್ವಾರ’. ಅವನು ದೇವಾಲಯಕ್ಕೆ ಹೋಗುವ ಜನರಿಂದ ಭಿಕ್ಷೆ ಬೇಡುತ್ತಿದ್ದನು.
[3]ಅಂದು ದೇವಾಲಯದೊಳಕ್ಕೆ ಹೋಗುತ್ತಿದ್ದ ಪೇತ್ರ ಮತ್ತು ಯೋಹಾನರನ್ನು ಕಂಡು ಭಿಕ್ಷೆ ಕೇಳಿದನು.
[4]ಪೇತ್ರ ಮತ್ತು ಯೋಹಾನ ಆ ಕುಂಟನಿಗೆ, ‘‘ನಮ್ಮನ್ನು ನೋಡು!’’ ಎಂದರು.
[5]ಅವನು ಅವರನ್ನು ನೋಡಿದನು. ಅವರು ಸ್ವಲ್ಪ ಹಣಕೊಡಬಹುದೆಂದು ಅವನು ಭಾವಿಸಿಕೊಂಡನು.
[6]ಆದರೆ ಪೇತ್ರನು, ‘‘ನನ್ನಲ್ಲಿ ಬೆಳ್ಳಿಬಂಗಾರ ಗಳಿಲ್ಲ, ಆದರೆ ನನ್ನಲ್ಲಿರುವುದನ್ನು ನಿನಗೆ ಕೊಡಬಲ್ಲೆನು. ನಜರೇತಿನ ಯೇಸು ಕ್ರಿಸ್ತನ ಹೆಸರಿನಲ್ಲಿ ಎದ್ದು ನಡೆ!’’ ಎಂದು ಹೇಳಿ,
[7]ಆ ಮನುಷ್ಯನ ಕೈಹಿಡಿದು ಎತ್ತಿದನು. ಆ ಕೂಡಲೇ ಅವನ ಕಾಲುಗಳು ಮತ್ತು ಪಾದಗಳು ಬಲಗೊಂಡವು.
[8]ಅವನು ಜಿಗಿದು, ತನ್ನ ಪಾದಗಳ ಮೇಲೆ ನಿಂತುಕೊಂಡು ನಡೆಯತೊಡಗಿದನು. ಅವನೂ ಅವರೊಂದಿಗೆ ದೇವಾಲಯಕ್ಕೆ ಹೋದನು. ಅವನು ನಡೆಯುತ್ತಾ ಜಿಗಿಯುತ್ತಾ ದೇವರನ್ನು ಕೊಂಡಾಡುತ್ತಿದ್ದನು.
[9-10]ಜನರೆಲ್ಲರೂ ಅವನನ್ನು ಗುರುತಿಸಿದರು. ಸುಂದರ ದ್ವಾರದ ಬಳಿಯಲ್ಲಿ ಯಾವಾಗಲೂ ಕುಳಿತುಕೊಂಡು ಭಿಕ್ಷೆ ಬೇಡುತ್ತಿದ್ದ ಕುಂಟನೇ ಇವನೆಂದು ಜನರಿಗೆ ತಿಳಿದಿತ್ತು. ಈಗ ಅದೇ ವ್ಯಕ್ತಿಯು ನಡೆಯುತ್ತಾ ದೇವರನ್ನು ಕೊಂಡಾಡುತ್ತಿರುವುದನ್ನು ಕಂಡು ಅವರು ಆಶ್ಚರ್ಯಗೊಂಡು ಬೆರಗಾದರು.

### ಜನರಿಗೆ ಪೇತ್ರನ ವಿವರಣೆ

[11]ಆ ಮನುಷ್ಯನು ಪೇತ್ರ ಮತ್ತು ಯೋಹಾನರನ್ನು ಹಿಡಿದುಕೊಂಡೇ ನಿಂತಿದ್ದನು. ಅವನಿಗೆ ಗುಣವಾದದ್ದರಿಂದ ಜನರೆಲ್ಲರೂ ಆಶ್ಚರ್ಯಗೊಂಡಿದ್ದರು. ಸೊಲೊಮೋನನ ಮಂಟಪದ ಬಳಿ ನಿಂತಿದ್ದ ಪೇತ್ರ ಮತ್ತು ಯೋಹಾನರ ಬಳಿ ಅವರು ಓಡಿಬಂದರು.
[12]ಆಗ ಪೇತ್ರನು ಅವರಿಗೆ, ‘‘ನನ್ನ ಯೆಹೂದ್ಯ ಸಹೋದರರೇ, ಇದನ್ನು ಕಂಡು ನೀವು ಯಾಕೆ ಆಶ್ಚರ್ಯಗೊಂಡಿರುವಿರಿ? ಈ ಮನುಷ್ಯನನ್ನು ನಡೆಯುವಂತೆ ಮಾಡಿದ್ದು ನಮ್ಮ ಶಕ್ತಿಯೆಂದು ನೀವು ನಮ್ಮನ್ನು ನೋಡುತ್ತಿರುವಿರಾ? ನಾವು ಒಳ್ಳೆಯವರಾಗಿರುವುದರಿಂದ ಈ ಕಾರ್ಯವಾಯಿತೆಂದು ಭಾವಿಸಿಕೊಂಡಿದ್ದೀರಾ?
[13]ಈ ಕಾರ್ಯವನ್ನು ಮಾಡಿದ್ದು ನಾವಲ್ಲ! ದೇವರು! ಆತನೇ ಅಬ್ರಹಾಮನ ದೇವರು, ಇಸಾಕನ ದೇವರು ಮತ್ತು ಯಾಕೋಬನ* ದೇವರು. ಆತನೇ ನಮ್ಮ ಪಿತೃಗಳೆಲ್ಲರ ದೇವರು. ಆತನು ತನ್ನ ವಿಶೇಷ ಸೇವಕನಾದ ಯೇಸುವನ್ನು ಮಹಿಮೆಪಡಿಸಿದ್ದಾನೆ. ಆದರೆ ನೀವು ಯೇಸುವನ್ನು ಕೊಲ್ಲಲು ಒಪ್ಪಿಸಿಕೊಟ್ಟಿರಿ. ಯೇಸುವನ್ನು ಬಿಡುಗಡೆ ಮಾಡಲು ಪಿಲಾತನು ನಿರ್ಧರಿಸಿದನು. ಆದರೆ ನೀವು ಪಿಲಾತನಿಗೆ, ನಮಗೆ ಯೇಸು ಬೇಕಿಲ್ಲವೆಂದು ಹೇಳಿದಿರಿ.
[14]ಯೇಸು ಪರಿಶುದ್ಧನಾಗಿದ್ದನು ಮತ್ತು ಒಳ್ಳೆಯವನಾಗಿದ್ದನು. ಆದರೆ ನೀವು ಆತನನ್ನು ತಿರಸ್ಕರಿಸಿದಿರಿ. ಆತನ ಬದಲಾಗಿ ಕೊಲೆಗಾರನನ್ನು* ಬಿಡುಗಡೆ ಮಾಡಬೇಕೆಂದು ಪಿಲಾತನನ್ನು ಬೇಡಿ

---

**ದೇವಾಲಯ** ಯೆಹೂದ್ಯರ ಆರಾಧನಾ ಮಂದಿರ. ಇದು ಜೆರುಸಲೇಮಿನಲ್ಲಿದೆ.

**ಅಬ್ರಹಾಮ, ಇಸಾಕ, ಯಾಕೋಬ** ಹಳೆ ಒಡಂಬಡಿಕೆಯ ಕಾಲದ ಅತ್ಯಂತ ಪ್ರಮುಖ ಯೆಹೂದ್ಯನಾಯಕರು.

**ಕೊಲೆಗಾರ** ಬರಬ್ಬ (ಲೂಕ 23:18).

ಕೊಂಡಿರಿ. 15ಹೀಗೆ ನೀವು ಜೀವದಾಯಕನನ್ನೇ ಕೊಂದು
ಹಾಕಿದಿರಿ! ಆದರೆ ದೇವರು ಆತನನ್ನು ಸತ್ತವರೊಳಗಿಂದ
ಜೀವಂತವಾಗಿ ಎಬ್ಬಿಸಿದನು. ಇದಕ್ಕೆ ನಾವೇ ಸಾಕ್ಷಿಗಳು. ಇದನ್ನು
ನಾವು ನಮ್ಮ ಕಣ್ಣಾರೆ ಕಂಡಿದ್ದೇವೆ. 16ನಿಮ್ಮ ಕಣ್ಣೆದುರಿಗಿರುವ
ಇವನ ಗುರುತು ನಿಮ್ಮೆಲ್ಲರಿಗೂ ಇದೆ. ಇವನು ಗುಣವಾದದ್ದಕ್ಕೆ
ಇವನು ಯೇಸುವಿನ ಹೆಸರಿನಲ್ಲಿ ಇಟ್ಟ ನಂಬಿಕೆಯೇ ಕಾರಣ.
ಆ ಹೆಸರೇ ಇವನನ್ನು ಬಲಪಡಿಸಿತು. ಆತನ ಮೂಲಕ ಉಂಟಾ
ಗಿರುವ ನಂಬಿಕೆಯೇ ಇವನನ್ನು ನಿಮ್ಮೆಲ್ಲರ ಮುಂದೆ ಗುಣ
ಪಡಿಸಿತು.

17‘‘ಸಹೋದರರೇ, ನೀವು ತಿಳಿಯದೆ ಯೇಸುವಿಗೆ ಹೀಗೆ
ಮಾಡಿದಿರೆಂದು ನನಗೆ ಗೊತ್ತಿದೆ. ನಿಮ್ಮ ನಾಯಕರು ಸಹ
ಅರ್ಥಮಾಡಿಕೊಳ್ಳಲಿಲ್ಲ. 18 ಹೀಗಾಗುತ್ತದೆ ಎಂದು ದೇವರು
ಮೊದಲೇ ತಿಳಿಸಿದ್ದನು. ಕ್ರಿಸ್ತನು ಶ್ರಮೆ ಅನುಭವಿಸಿ
ಸಾಯುವನೆಂದು ದೇವರು ತನ್ನ ಪ್ರವಾದಿಗಳ ಮೂಲಕ
ಮೊದಲೇ ತಿಳಿಸಿದ್ದನ್ನು ಹೀಗೆ ನೆರವೇರಿಸಿದ್ದಾನೆ. 19ಆದ್ದರಿಂದ
ನೀವು ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ
ತಿರುಗಿಕೊಳ್ಳಿ, ಆಗ ಆತನು ನಿಮ್ಮ ಪಾಪಗಳನ್ನು ಕ್ಷಮಿಸುವನು.
20ಪ್ರಭುವು ನಿಮಗೆ ಆತ್ಮಿಕ ವಿಶ್ರಾಂತಿಯನ್ನು ಕೊಡುವನು.
ಆತನು ಕ್ರಿಸ್ತನನ್ನಾಗಿ ಆರಿಸಿಕೊಂಡ ಯೇಸುವನ್ನು ನಿಮಗೆ
ಕೊಡುವನು.

21ಆದರೆ ಎಲ್ಲವನ್ನು ಸರಿಪಡಿಸುವ ಕಾಲ ಬರುವತನಕ
ಯೇಸು ಪರಲೋಕದಲ್ಲೇ ಇರಬೇಕು. ದೇವರು ಬಹುಕಾಲದ
ಹಿಂದೆ ತನ್ನ ಪವಿತ್ರ ಪ್ರವಾದಿಗಳ ಸಂದೇಶದ ಮೂಲಕ
ಮಾತಾಡಿದಾಗ, ಈ ಕಾಲದ ಬಗ್ಗೆ ಹೇಳಿದನು. 22ಮೋಶೆಯು
ಇಂತೆಂದಿದ್ದಾನೆ: ‘ನಿಮ್ಮ ದೇವರಾದ ಪ್ರಭುವು ನಿಮಗೊಬ್ಬ
ಪ್ರವಾದಿಯನ್ನು ಕೊಡುವನು. ನಿಮ್ಮ ಸ್ವಂತ ಜನರ
ಮಧ್ಯದಿಂದಲೇ ಆ ಪ್ರವಾದಿ ಬರುವನು. ಆತನು ನನ್ನಂತೆ
ಇರುವನು. ಆ ಪ್ರವಾದಿ ಹೇಳುವ ಪ್ರತಿಯೊಂದಕ್ಕೂ ನೀವು
ವಿಧೇಯರಾಗಬೇಕು.

23ಆತನಿಗೆ ವಿಧೇಯನಾಗದವನು ದೇವಜನರಿಂದ
ಬೇರ್ಪಟ್ಟು ಮರಣ ಹೊಂದುವನು.’* 24ಸಮುವೇಲನು
ಮತ್ತು ಅವನ ನಂತರದ ಪ್ರವಾದಿಗಳು ಇಂದಿನ ಈ ಕಾಲದ ಬಗ್ಗೆ
ಮಾತಾಡಿದರು.

25ಆ ಪ್ರವಾದಿಗಳು ಹೇಳಿದ ಸಂಗತಿಗಳನ್ನು ನೀವು
ಸ್ವೀಕರಿಸಿಕೊಂಡಿರುವಿರಿ. ದೇವರು ನಿಮ್ಮ ಪಿತೃಗಳೊಂದಿಗೆ
ಮಾಡಿಕೊಂಡ ಒಪ್ಪಂದವನ್ನು ನೀವು ಸ್ವೀಕರಿಸಿಕೊಂಡಿರುವಿರಿ.
ದೇವರು ನಿಮ್ಮ ಪಿತೃವಾದ ಅಬ್ರಹಾಮನಿಗೆ, ‘ನಿನ್ನ
ಕುಟುಂಬದಿಂದ ಭೂಮಿಯ ಮೇಲಿರುವ ಜನರೆಲ್ಲರು
ಆಶೀರ್ವಾದ ಹೊಂದುವರು’* ಎಂದು ಹೇಳಿದನು.
26ದೇವರು ತನ್ನ ವಿಶೇಷ ಸೇವಕನನ್ನು (ಯೇಸುವನ್ನು) ಮೊಟ್ಟ
ಮೊದಲು ನಿಮ್ಮ ಬಳಿಗೆ ಕಳುಹಿಸಿದನು. ನಿಮ್ಮನ್ನು ಆಶೀರ್ವದಿಸು
ವುದಕ್ಕಾಗಿ ದೇವರು ಯೇಸುವನ್ನು ಕಳುಹಿಸಿದನು. ಆತನು
ನಿಮ್ಮನ್ನು ನಿಮ್ಮ ಕೆಟ್ಟಕಾರ್ಯಗಳಿಂದ ದೂರಮಾಡಿ
ಆಶೀರ್ವದಿಸುತ್ತಾನೆ.’’

### ಯೆಹೂದ್ಯರ ನ್ಯಾಯಸಭೆಯ ಮುಂದೆ ಪೇತ್ರ ಮತ್ತು ಯೋಹಾನ

4 ಪೇತ್ರ ಮತ್ತು ಯೋಹಾನ ಜನರೊಂದಿಗೆ ಮಾತಾಡು
ತ್ತಿದ್ದಾಗ, ಕೆಲವು ಜನರು ಅವರ ಬಳಿಗೆ ಬಂದರು. ಅಲ್ಲಿ
ಕೆಲವು ಯೆಹೂದ್ಯಯಾಜಕರಿದ್ದರು, ಕೆಲವು ಸದ್ದುಕಾಯ
ರಿದ್ದರು,* ಮತ್ತು ದೇವಾಲಯ ಕಾಯುವ ಸಿಪಾಯಿಗಳ ಅಧಿ
ಪತಿಯೂ ಇದ್ದನು. 2ಈ ಇಬ್ಬರು ಅಪೊಸ್ತಲರು ಜನರಿಗೆ ಉಪ
ದೇಶ ಮಾಡುತ್ತಿರುವುದನ್ನು ಕಂಡು ಅವರು ಸಿಟ್ಟುಗೊಂಡರು.
ಯೇಸುವಿನ ಶಕ್ತಿಯ ಮೂಲಕವಾಗಿ ಜನರು ಪುನರುತ್ಥಾನ
ಹೊಂದುತ್ತಾರೆ ಎಂದು ಪೇತ್ರ ಮತ್ತು ಯೋಹಾನ ಬೋಧಿಸು
ತ್ತಿದ್ದರು. 3ಯೆಹೂದ್ಯ ನಾಯಕರು ಪೇತ್ರ ಮತ್ತು ಯೋಹಾನ
ರನ್ನು ಬಂಧಿಸಿ ಸೆರೆಮನೆಗೆ ಹಾಕಿದರು. ಆಗಲೇ ಕತ್ತಲಾಗಿತ್ತು.
ಆದ್ದರಿಂದ ಅವರು ಪೇತ್ರ ಮತ್ತು ಯೋಹಾನರನ್ನು ಮರುದಿನದ
ವರೆಗೆ ಸೆರೆಯಲ್ಲಿಟ್ಟರು. 4ಆದರೆ ಪೇತ್ರ ಮತ್ತು ಯೋಹಾನರ
ಬೋಧನೆಯನ್ನು ಕೇಳಿ ಅನೇಕರು ನಂಬಿಕೊಂಡರು. ಆಗ ಆ
ಸಮುದಾಯದಲ್ಲಿ ವಿಶ್ವಾಸಿಗಳ ಸಂಖ್ಯೆ ಐದು ಸಾವಿರಕ್ಕೆ ಏರಿತ್ತು.

5ಮರುದಿನ ಯೆಹೂದ್ಯನಾಯಕರು, ಯೆಹೂದ್ಯರ
ಹಿರಿಯ ನಾಯಕರು ಮತ್ತು ಧರ್ಮೋಪದೇಶಕರು ಜೆರುಸ
ಲೇಮಿನಲ್ಲಿ ಸಭೆಸೇರಿದರು. 6ಅಲ್ಲಿ ಅನ್ನನು (ಪ್ರಧಾನ
ಯಾಜಕ), ಕಾಯಫ, ಯೋಹಾನ ಮತ್ತು ಅಲೆಕ್ಸಾಂಡರ್
ಇದ್ದರು. ಪ್ರಧಾನಯಾಜಕನ ಕುಟುಂಬಕ್ಕೆ ಸೇರಿದ ಪ್ರತಿ
ಯೊಬ್ಬರು ಅಲ್ಲಿದ್ದರು. 7ಅವರು ಪೇತ್ರ, ಯೋಹಾನರನ್ನು
ಅಲ್ಲಿದ್ದ ಎಲ್ಲಾ ಜನರ ಮುಂದೆ ನಿಲ್ಲಿಸಿದರು. ಯೆಹೂದ್ಯ
ನಾಯಕರು ಅವರನ್ನು ‘ನೀವು ಈ ಕುಂಟನನ್ನು ಹೇಗೆ ಗುಣ
ಪಡಿಸಿದಿರಿ? ನೀವು ಯಾವ ಶಕ್ತಿಯನ್ನು ಉಪಯೋಗಿಸಿದಿರಿ?
ಇದನ್ನು ಯಾರ ಅಧಿಕಾರದಿಂದ ಮಾಡಿದಿರಿ?’ ಎಂದು ಅನೇಕ
ಸಲ ಕೇಳಿದರು.

8ಆಗ ಪೇತ್ರನು ಪವಿತ್ರಾತ್ಮಭರಿತನಾದನು. ಅವನು ಅವರಿಗೆ,
‘‘ಜನನಾಯಕರೇ, ಮತ್ತು ಹಿರಿಯನಾಯಕರೇ, 9ಈ ಕುಂಟನಿ
ಗಾದ ಒಳ್ಳೆಯದರ ಬಗ್ಗೆ ನೀವು ನಮ್ಮನ್ನು ಕೇಳುತ್ತಿದ್ದೀರಿ.
10ನಜರೇತಿನ ಯೇಸು ಕ್ರಿಸ್ತನ ಹೆಸರಿನಿಂದ ಈ ಮನುಷ್ಯನಿಗೆ
ಗುಣವಾಯಿತೆಂಬುದನ್ನು ನೀವು ಮತ್ತು ಯೆಹೂದ್ಯರೆಲ್ಲರು
ತಿಳಿದುಕೊಳ್ಳಬೇಕೆಂದು ನಾನು ಬಯಸುತ್ತೇನೆ! ನೀವು ಯೇಸು
ವನ್ನು ಶಿಲುಬೆಗೇರಿಸಿದಿರಿ. ದೇವರು ಆತನನ್ನು ಸತ್ತವರೊಳಗಿಂದ
ಜೀವಂತವಾಗಿ ಎಬ್ಬಿಸಿದನು. ಈ ಮನುಷ್ಯನು ಕುಂಟನಾಗಿದ್ದನು,
ಆದರೆ ಈಗ ಇವನು ಗುಣಹೊಂದಿದ್ದಾನೆ ಮತ್ತು ಯೇಸುವಿನ
ಹೆಸರಿನಿಂದ ನಿಮ್ಮ ಮುಂದೆ ನಿಂತುಕೊಳ್ಳಲು ಶಕ್ತನಾಗಿದ್ದಾನೆ!

11 ‘ಕಟ್ಟುವವರಾದ ನೀವು ಬೇಡವೆಂದ ಕಲ್ಲೇ
(ಯೇಸು) ಮುಖ್ಯವಾದ ಮೂಲೆಗಲ್ಲಾಯಿತು’.
*ಕೀರ್ತನೆ 118:22*

12ರಕ್ಷಣೆಯು ಯೇಸುವಿನಿಂದಲ್ಲದೆ ಬೇರೆ ಯಾರಲ್ಲಿಯೂ
ಸಿಕ್ಕುವುದಿಲ್ಲ. ಆತನ ಹೆಸರಿನಿಂದಲೇ ಹೊರತು ಆಕಾಶದ ಕೆಳಗೆ

---

**ನಿಮ್ಮ ... ಹೊಂದುವನು** ಧರ್ಮೋಪದೇಶ18:15,19

**ನಿನ್ನ ... ಹೊಂದುವರು** ಆದಿಕಾಂಡ 22:18; 26:24

**ಸದ್ದುಕಾಯರು** ಯೆಹೂದ್ಯರ ಒಂದು ಮುಖ್ಯ ಧಾರ್ಮಿಕ ಪಂಗಡದವರು. ಅವರು ಹಳೆ ಒಡಂಬಡಿಕೆಯ ಮೊದಲನೆಯ ಐದು ಪುಸ್ತಕಗಳನ್ನು ಮಾತ್ರ ಸ್ವೀಕರಿಸಿಕೊಂಡಿದ್ದರು. ಜನರು ಮರಣಾನಂತರ ಎದ್ದು ಬರುವದಿಲ್ಲವೆಂದು ಅವರು ನಂಬಿದ್ದರು.

ಮನುಷ್ಯರೊಳಗೆ ಕೊಟ್ಟಿರುವ ಬೇರೆ ಯಾವ ಹೆಸರಿನಿಂದಲೂ
ನಮಗೆ ರಕ್ಷಣೆಯಾಗುವುದಿಲ್ಲ'' ಎಂದು ಹೇಳಿದನು.

13ಪೇತ್ರ ಮತ್ತು ಯೋಹಾನರಿಗೆ ವಿಶೇಷವಾದ ಯಾವ
ತರಬೇತಿಯಾಗಲಿ ವಿದ್ಯೆಯಾಗಲಿ ಇಲ್ಲವೆಂಬುದು ಯೆಹೂದ್ಯ
ನಾಯಕರಿಗೆ ಗೊತ್ತಿತ್ತು. ಅಲ್ಲದೆ ಅವರು ಹೆದರದೆ ಮಾತಾಡು
ವುದನ್ನು ಸಹ ನಾಯಕರು ಗಮನಿಸಿದರು. ಆದ್ದರಿಂದ ಆ
ನಾಯಕರಿಗೆ ಬಹಳ ಆಶ್ಚರ್ಯವಾಯಿತು. ಪೇತ್ರ ಮತ್ತು
ಯೋಹಾನರು ಯೇಸುವಿನೊಂದಿಗೆ ಇದ್ದರೆಂಬುದನ್ನು ಅವರು
ಆ ಬಳಿಕ ಗ್ರಹಿಸಿಕೊಂಡರು. 14ಈ ಇಬ್ಬರು ಅಪೊಸ್ತಲರ ಪಕ್ಕ
ದಲ್ಲೇ ನಿಂತುಕೊಂಡಿದ್ದ ಕುಂಟನನ್ನು ಅವರು ನೋಡಿದರು.
ಅವನಿಗೆ ಗುಣವಾಗಿರುವುದನ್ನು ಅವರು ಕಂಡರು. ಆದ್ದರಿಂದ
ಅಪೊಸ್ತಲರ ಮಾತಿಗೆ ವಿರುದ್ಧವಾಗಿ ಅವರೇನೂ ಹೇಳ
ಲಾಗಲಿಲ್ಲ. 15ಯೆಹೂದ್ಯನಾಯಕರು ಅಪೊಸ್ತಲರನ್ನು ಸಭೆ
ಯಿಂದ ಹೊರಗೆ ಕಳುಹಿಸಿ, 16''ಇವರಿಗೆ ನಾವೇನು
ಮಾಡೋಣ? ಇವರು ದೊಡ್ಡ ಅದ್ಭುತಕಾರ್ಯ ಮಾಡಿ
ರುವುದು ಜೆರುಸಲೇಮಿನಲ್ಲಿರುವ ಪ್ರತಿಯೊಬ್ಬರಿಗೂ ಗೊತ್ತಿದೆ.
ಈ ಅದ್ಭುತಕಾರ್ಯವು ಸ್ಪಷ್ಟವಾಗಿರುವುದರಿಂದ ಅದನ್ನು ಅಸತ್ಯ
ವೆಂದು ಹೇಳಲಾಗದು. 17ಆದರೆ ಈ ಮನುಷ್ಯನ (ಯೇಸುವಿನ)
ಬಗ್ಗೆ ಜನರಿಗೆ ಹೇಳದಂತೆ ನಾವು ಅವರನ್ನು ಬೆದರಿಸಬೇಕು. ಆಗ
ಈ ಸಮಾಚಾರ ಜನರ ಮಧ್ಯದಲ್ಲಿ ಹರಡುವುದಿಲ್ಲ'' ಎಂದು
ಅವರು ಮಾತಾಡಿಕೊಂಡರು.

18ಆದ್ದರಿಂದ ಯೆಹೂದ್ಯನಾಯಕರು ಪೇತ್ರ ಮತ್ತು
ಯೋಹಾನರನ್ನು ಮತ್ತೆ ಒಳಗೆ ಕರೆಸಿ, ಯೇಸುವಿನ ಹೆಸರಿನಲ್ಲಿ
ಏನೂ ಹೇಳದಂತೆ, ಏನೂ ಬೋಧಿಸದಂತೆ ಎಚ್ಚರಿಕೆ ಕೊಟ್ಟರು.
19ಆದರೆ ಪೇತ್ರ ಮತ್ತು ಯೋಹಾನ ಅವರಿಗೆ, ''ನಾವು ನಿಮಗೆ
ವಿಧೇಯರಾಗಬೇಕೇ ಅಥವಾ ದೇವರಿಗೆ ವಿಧೇಯರಾಗ
ಬೇಕೇ? ಇದರಲ್ಲಿ ಯಾವುದು ದೇವರಿಗೆ ಇಷ್ಟವಾದದ್ದು?
ನೀವೇ ಹೇಳಿ. 20ನಾವಂತೂ ಸುಮ್ಮನಿರಲಾರೆವು. ನಾವು ಕಂಡ
ಮತ್ತು ಕೇಳಿದ ಸಂಗತಿಗಳ ಬಗ್ಗೆ ಜನರಿಗೆ ಹೇಳಲೇಬೇಕು''
ಎಂದು ಉತ್ತರಕೊಟ್ಟರು. 21-22ಯೆಹೂದ್ಯನಾಯಕರಿಗೆ
ಅಪೊಸ್ತಲರನ್ನು ದಂಡಿಸಲು ಯಾವ ಮಾರ್ಗವೂ ತೋಚಲಿಲ್ಲ,
ಯಾಕೆಂದರೆ ಸಂಭವಿಸಿದ ಕಾರ್ಯಕ್ಕಾಗಿ ಜನರೆಲ್ಲರೂ ದೇವ
ರನ್ನು ಕೊಂಡಾಡುತ್ತಿದ್ದರು. (ಈ ಸೂಚಕಕಾರ್ಯದಿಂದ ಗುಣ
ಹೊಂದಿದ ವ್ಯಕ್ತಿಗೆ ನಲವತ್ತು ವರ್ಷಕ್ಕಿಂತಲೂ ಹೆಚ್ಚು ವಯಸ್ಸಾ
ಗಿತ್ತು!) ಆದ್ದರಿಂದ ಯೆಹೂದ್ಯನಾಯಕರು ಅಪೊಸ್ತಲರನ್ನು
ಮತ್ತೆ ಎಚ್ಚರಿಸಿ ಕಳುಹಿಸಿಬಿಟ್ಟರು.

### ಪೇತ್ರ ಮತ್ತು ಯೋಹಾನರು ವಿಶ್ವಾಸಿಗಳ ಬಳಿಗೆ ಹಿಂತಿರುಗಿದರು

23ಪೇತ್ರ ಮತ್ತು ಯೋಹಾನರು ಯೆಹೂದ್ಯನಾಯಕರ ಸಭೆ
ಯಿಂದ ಹೊರಟು ತಮ್ಮ ಸಮುದಾಯಕ್ಕೆ ಹೋದರು. ಮಹಾ
ಯಾಜಕರು ಮತ್ತು ಯೆಹೂದ್ಯರ ಹಿರಿಯ ನಾಯಕರು ತಮಗೆ
ಹೇಳಿದ ಪ್ರತಿಯೊಂದನ್ನು ಅವರು ತಮ್ಮ ಸಮುದಾಯದವರಿಗೆ
ತಿಳಿಸಿದರು. 24ಇದನ್ನು ಕೇಳಿದಾಗ ವಿಶ್ವಾಸಿಗಳು ಏಕಮನಸ್ಸಿ
ನಿಂದ ದೇವರಲ್ಲಿ ಪ್ರಾರ್ಥಿಸಿದರು: ಅವರೆಲ್ಲರಲ್ಲಿ ಒಂದೇ
ಮನಸ್ಸಿತ್ತು. ''ಒಡೆಯನೇ, ಆಕಾಶವನ್ನೂ ಭೂಮಿಯನ್ನೂ
ಸಮುದ್ರವನ್ನೂ ಮತ್ತು ಲೋಕದಲ್ಲಿರುವ ಪ್ರತಿಯೊಂದನ್ನೂ
ನಿರ್ಮಿಸಿದಾತನು ನೀನೇ. 25ನಮ್ಮ ಪಿತೃವಾದ ದಾವೀದನು ನಿನ್ನ
ಸೇವಕನಾಗಿದ್ದನು. ಅವನು ಪವಿತ್ರಾತ್ಮನ ಸಹಾಯದಿಂದ ಈ
ಮಾತುಗಳನ್ನು ಬರೆದನು:

> 'ಜನಾಂಗಗಳು ಕೂಗಾಡುವುದೇಕೆ? ಈ
> ಲೋಕದ ಜನರು ದೇವರಿಗೆ ವಿರೋಧವಾಗಿ
> ಕಾರ್ಯಗಳನ್ನು ಯೋಚಿಸುತ್ತಿರುವುದೇಕೆ?
> ಇದರಿಂದ ಪ್ರಯೋಜನವೇನೂ ಇಲ್ಲ!
> 26 ಭೂಲೋಕದ ರಾಜರು ಹೋರಾಡಲು ಸಿದ್ಧ
> ರಾಗಿದ್ದಾರೆ; ಪ್ರಭುವಿಗೂ ಆತನ ಕ್ರಿಸ್ತನಿಗೂ
> ವಿರೋಧವಾಗಿ ಅಧಿಪತಿಗಳೆಲ್ಲರೂ ಒಟ್ಟಾಗಿ
> ಸೇರಿದ್ದಾರೆ.' *ಕೀರ್ತನೆ 2:1-2*

27ಹೆರೋದರಾಜನು, ಪೊಂತಿಯಸ್ ಪಿಲಾತನು,
ಜನಾಂಗಗಳು ಮತ್ತು ಯೆಹೂದ್ಯರು ಈ ಪಟ್ಟಣದಲ್ಲಿ ಒಟ್ಟಾಗಿ
ಸೇರಿಕೊಂಡು ಯೇಸುವನ್ನು ವಿರೋಧಿಸಿದಾಗ ಈ ಸಂಗತಿಗಳು
ನಿಜವಾಗಿಯೂ ನೆರವೇರಿದವು. ಯೇಸು ನಿನ್ನ ಪವಿತ್ರ ಸೇವಕ
ನಾಗಿದ್ದಾನೆ. ನೀನು ಆತನನ್ನು ಅಭಿಷೇಕಿಸಿದೆ. 28ಯೇಸುವಿನ
ವಿರುದ್ಧ ಒಟ್ಟಾಗಿ ಬಂದ ಈ ಜನರು ನಿನ್ನ ಯೋಜನೆ ನೆರವೇರು
ವಂತೆ ಮಾಡಿದರು. ನಿನ್ನ ಶಕ್ತಿಯಿಂದಲೂ ನಿನ್ನ ಚಿತ್ತದಿಂದಲೂ
ಇದು ನೆರವೇರಿತು. 29ಪ್ರಭುವೇ, ಈಗ ಅವರು ಹೇಳುತ್ತಿರುವು
ದನ್ನು ಕೇಳು. ಅವರು ನಮ್ಮನ್ನು ಹೆದರಿಸಲು ಪ್ರಯತ್ನಿಸು
ತ್ತಿದ್ದಾರೆ! ಪ್ರಭುವೇ ನಾವು ನಿನ್ನ ಸೇವಕರು. ನಿನ್ನ ವಾಕ್ಯವನ್ನು
ಭಯವಿಲ್ಲದೆ ಹೇಳಲು ನೀನೇ ಸಹಾಯಮಾಡು. 30ನಿನ್ನ ಕೈ
ಚಾಚಿ ಯೇಸುವಿನ ಹೆಸರಿನ ಮೂಲಕ ರೋಗಿಗಳನ್ನು ಗುಣ
ಪಡಿಸು; ಸೂಚಕಕಾರ್ಯಗಳನ್ನೂ ಅದ್ಭುತಕಾರ್ಯಗಳನ್ನೂ
ಮಾಡು.''

31ಹೀಗೆ ವಿಶ್ವಾಸಿಗಳು ಪ್ರಾರ್ಥಿಸುತ್ತಿದ್ದಾಗ, ಅವರು
ಸಭೆಸೇರಿದ್ದ ಸ್ಥಳವು ನಡುಗಿತು. ಅವರೆಲ್ಲರೂ ಪವಿತ್ರಾತ್ಮ
ಭರಿತರಾದರು ಮತ್ತು ದೇವರ ವಾಕ್ಯವನ್ನು ಭಯವಿಲ್ಲದೆ
ಪ್ರಕಟಿಸಿದರು.

### ವಿಶ್ವಾಸಿಗಳ ಅನ್ಯೋನ್ಯ ಜೀವನ

32 ವಿಶ್ವಾಸಿಗಳ ಹೃದಯವೂ ಪ್ರಾಣವೂ ಒಂದೇ ಆಗಿತ್ತು.
ಸಮುದಾಯದಲ್ಲಿದ್ದ ಯಾವನಾಗಲಿ ತನ್ನಲ್ಲಿರುವವುಗಳನ್ನು ತನ್ನ
ದೆಂದು ಹೇಳುತ್ತಿರಲಿಲ್ಲ. ಬದಲಾಗಿ, ಅವರು ಪ್ರತಿಯೊಂದನ್ನು
ಹಂಚಿಕೊಳ್ಳುತ್ತಿದ್ದರು. 33ಪ್ರಭುವಾದ ಯೇಸು ನಿಜವಾಗಿಯೂ
ಸತ್ತವರೊಳಗಿಂದ ಜೀವಂತವಾಗಿ ಎದ್ದುಬಂದನೆಂದು ಅಪೊಸ್ತ
ಲರು ಬಹುಬಲವಾಗಿ ಜನರಿಗೆ ಹೇಳುತ್ತಿದ್ದರು. ದೇವರು ವಿಶ್ವಾಸಿ
ಗಳೆಲ್ಲರನ್ನು ಬಹಳವಾಗಿ ಆಶೀರ್ವದಿಸಿದನು. 34ಅವರೆಲ್ಲರ
ಅವಶ್ಯಕತೆಗಳನ್ನು ಪೂರೈಸಲಾಗುತ್ತಿತ್ತು. ಜಮೀನುಗಳನ್ನು
ಮತ್ತು ಮನೆಗಳನ್ನು ಹೊಂದಿದ್ದ ಪ್ರತಿಯೊಬ್ಬರು ಅವುಗಳನ್ನು
ಮಾರಿ, 35ಬಂದ ಹಣವನ್ನು ಅಪೊಸ್ತಲರ ಪಾದಗಳ ಬಳಿ
ಇಡುತ್ತಿದ್ದರು. ಬಳಿಕ ಅದನ್ನು ಪ್ರತಿಯೊಬ್ಬರಿಗೂ ಅವರವರ
ಅಗತ್ಯತೆಗಳಿಗನುಸಾರವಾಗಿ ಹಂಚಲಾಗುತ್ತಿತ್ತು.

36ಆ ವಿಶ್ವಾಸಿಗಳಲ್ಲಿ ಯೋಸೇಫ ಎಂಬವನೂ ಇದ್ದನು.
ಅಪೊಸ್ತಲರು ಅವನನ್ನು ಬಾರ್ನಬ ಎಂದು ಕರೆಯುತ್ತಿದ್ದರು.

(ಬಾರ್ನಬ ಅಂದರೆ 'ಧೈರ್ಯದಾಯಕ') ಸೈಪ್ರಸ್‌ನಲ್ಲಿ ಹುಟ್ಟಿದ
ಇವನು ಲೇವಿಯನಾಗಿದ್ದನು.* 37ಯೋಸೇಫನಿಗೆ ಒಂದು
ಹೊಲವಿತ್ತು. ಅವನು ಅದನ್ನು ಮಾರಿ ಬಂದ ಹಣವನ್ನು
ಅಪೊಸ್ತಲರ ಪಾದಗಳ ಬಳಿ ಇಟ್ಟನು.

### ಅನನೀಯ ಮತ್ತು ಸಪ್ಫೈರ

5 ಅನನೀಯ ಎಂಬ ಒಬ್ಬನಿದ್ದನು. ಅವನ ಹೆಂಡತಿಯ
ಹೆಸರು ಸಪ್ಫೈರ. ಅನನೀಯ ತನ್ನಲ್ಲಿದ್ದ ಸ್ವಲ್ಪ ಜಮೀನನ್ನು
ಮಾರಿದನು. 2ಆದರೆ, ಬಂದ ಹಣದಲ್ಲಿ ಒಂದು ಭಾಗವನ್ನು
ಮಾತ್ರ ಅವನು ಅಪೊಸ್ತಲರ ಪಾದಗಳ ಬಳಿ ಇಟ್ಟನು. ಅವನು
ಸ್ವಲ್ಪ ಹಣವನ್ನು ತನಗೋಸ್ಕರ ರಹಸ್ಯವಾಗಿಟ್ಟುಕೊಂಡನು.
ಅವನ ಹೆಂಡತಿಗೆ ಇದು ತಿಳಿದಿತ್ತು. ಆಕೆಯೂ ಅದಕ್ಕೆ ಒಪ್ಪಿ
ಕೊಂಡಿದ್ದಳು. 3ಪೇತ್ರನು, ''ಅನನೀಯನೇ, ನಿನ್ನ ಹೃದಯ
ವನ್ನು ಆಳಲು ನೀನು ಸೈತಾನನಿಗೆ ಒಪ್ಪಿಸಿಕೊಟ್ಟದ್ದೇಕೆ? ನೀನು
ಸುಳ್ಳು ಹೇಳಿ, ಪವಿತ್ರಾತ್ಮನನ್ನು ಮೋಸಪಡಿಸಲು ಪ್ರಯತ್ನಿಸಿದೆ.
ನೀನು ನಿನ್ನ ಜಮೀನನ್ನು ಮಾರಿದೆ, ಆದರೆ ಬಂದ ಹಣದಲ್ಲಿ
ಒಂದು ಭಾಗವನ್ನು ನೀನು ನಿನಗೋಸ್ಕರ ಇಟ್ಟುಕೊಂಡದ್ದೇಕೆ?
4ನೀನು ಜಮೀನನ್ನು ಮಾರುವುದಕ್ಕಿಂತ ಮೊದಲು ಅದು
ನಿನ್ನದೇ ಆಗಿತ್ತು. ನೀನು ಮಾರಿದ ಮೇಲೆಯೂ ಬಂದ ಹಣ
ನಿನ್ನದೇ ಆಗಿತ್ತು. ಈ ಕೆಟ್ಟಕಾರ್ಯವನ್ನು ಮಾಡಲು ನೀನು
ಯಾಕೆ ಯೋಚಿಸಿಕೊಂಡೆ? ನೀನು ಸುಳ್ಳು ಹೇಳಿದ್ದು ದೇವರಿಗೆ,
ಮನುಷ್ಯರಿಗಲ್ಲ!'' ಎಂದು ಹೇಳಿದನು. 5-6ಅನನೀಯ ಇದನ್ನು
ಕೇಳಿದ ಕೂಡಲೇ ಕೆಳಗೆ ಬಿದ್ದು ಸತ್ತುಹೋದನು. ಕೆಲವು ಯೌವ
ನಸ್ಥರು ಬಂದು ಅವನ ದೇಹವನ್ನು ಬಟ್ಟೆಯಲ್ಲಿ ಸುತ್ತಿದರು.
ಅವರು ಅದನ್ನು ಹೊತ್ತುಕೊಂಡು ಹೋಗಿ ಸಮಾಧಿ ಮಾಡಿ
ದರು. ಇದರ ಬಗ್ಗೆ ಕೇಳಿದ ಪ್ರತಿಯೊಬ್ಬರೂ ಭಯಭ್ರಾಂತ
ರಾದರು. 7ಸುಮಾರು ಮೂರು ಗಂಟೆಗಳಾದ ನಂತರ ಅವನ
ಹೆಂಡತಿಯಾದ ಸಪ್ಫೈರ ಒಳಗೆ ಬಂದಳು. ನಡೆದ ಸಂಗತಿಯ ಬಗ್ಗೆ
ಸಪ್ಫೈರಳಿಗೆ ಗೊತ್ತಿರಲಿಲ್ಲ. 8ಪೇತ್ರನು ಆಕೆಗೆ,''ನಿಮ್ಮ ಜಮೀನಿ
ನಿಂದ ನಿಮಗೆ ಎಷ್ಟು ಹಣ ಬಂತೆಂದು ನನಗೆ ಹೇಳು. ಇಷ್ಟೇ
ಹಣವೋ?'' ಎಂದು ಕೇಳಿದನು.

ಸಪ್ಫೈರಳು, ''ಹೌದು ಅಷ್ಟೇ!'' ಎಂದು ಹೇಳಿದಳು.

9ಪೇತ್ರನು ಆಕೆಗೆ, ''ನೀನು ಮತ್ತು ನಿನ್ನ ಗಂಡನು, ಪ್ರಭು
ವಿನ ಆತ್ಮನನ್ನು ಪರೀಕ್ಷಿಸಲು ಒಪ್ಪಿಕೊಂಡಿದ್ದೇಕೆ? ಆಗೋ, ನಿನ್ನ
ಗಂಡನನ್ನು ಹೂಳಿಟ್ಟ ಜನರು ಬಾಗಿಲ ಬಳಿಗೆ ಬಂದಿದ್ದಾರೆ!
ಅವರು ನಿನ್ನನ್ನೂ ಅದೇ ರೀತಿ ಹೊತ್ತುಕೊಂಡು ಹೋಗುವರು''
ಎಂದು ಹೇಳಿದನು. 10ತಕ್ಷಣವೇ ಸಪ್ಫೈರಳು ಅವನ ಪಾದಗಳ
ಮುಂದೆ ಬಿದ್ದು ಸತ್ತುಹೋದಳು. ಆ ಯೌವನಸ್ಥರು ಒಳಗೆ
ಬಂದು ನೋಡಿದಾಗ ಆಕೆ ಸತ್ತುಹೋಗಿದ್ದಳು. ಅವರು ಆಕೆ
ಯನ್ನು ಹೊತ್ತುಕೊಂಡು ಹೋಗಿ, ಆಕೆಯ ಗಂಡನ ಪಕ್ಕದಲ್ಲಿ
ಹೂಳಿಟ್ಟರು. 11ಈ ಸಂಗತಿಗಳ ಬಗ್ಗೆ ಕೇಳಿದ ವಿಶ್ವಾಸಿಗಳೆಲ್ಲರೂ
ಮತ್ತು ಜನರೆಲ್ಲರೂ ಭಯಗ್ರಸ್ತರಾದರು.

### ದೇವರ ಸೂಚಕಕಾರ್ಯಗಳು

12 ಅಪೊಸ್ತಲರು ಅನೇಕ ಸೂಚಕಕಾರ್ಯಗಳನ್ನೂ ಅದ್ಭುತ
ಕಾರ್ಯಗಳನ್ನೂ ಮಾಡಿದರು. ಜನರೆಲ್ಲರೂ ಆ ಕಾರ್ಯ
ಗಳನ್ನು ನೋಡಿದರು. ಅಪೊಸ್ತಲರು ಒಟ್ಟಾಗಿ ಸೊಲೊ
ಮೋನನ ಮಂಟಪದಲ್ಲಿರುತ್ತಿದ್ದರು. ಅವರೆಲ್ಲರ ಉದ್ದೇಶ
ಒಂದೇ ಆಗಿತ್ತು. 13ಅವರೊಂದಿಗೆ ನಿಂತುಕೊಳ್ಳಲು ತಮಗೂ
ಯೋಗ್ಯತೆ ಇದೆಯೆಂದು ಬೇರೆ ಯಾರಿಗೂ ಅನ್ನಿಸಲಿಲ್ಲ. ಜನ
ರೆಲ್ಲರೂ ಅಪೊಸ್ತಲರ ಬಗ್ಗೆ ಒಳ್ಳೆಯ ಸಂಗತಿಗಳನ್ನು ಹೇಳು
ತ್ತಿದ್ದರು. 14ಮತ್ತು ಹೆಚ್ಚುಹೆಚ್ಚು ಜನರು ಪ್ರಭುವನ್ನು ನಂಬಿ
ಕೊಂಡರು. ಅನೇಕ ಸ್ತ್ರೀಯರೂ ಪುರುಷರೂ ವಿಶ್ವಾಸಿಗಳ
ಸಮುದಾಯಕ್ಕೆ ಸೇರುತ್ತಿದ್ದರು. 15ಹೀಗಿರಲು, ಪೇತ್ರನು ದಾರಿ
ಯಲ್ಲಿ ಹೋಗುತ್ತಾನೆಂಬ ಸುದ್ದಿಯನ್ನು ಕೇಳಿದ ಜನರು
ಕಾಯಿಲೆಯವರನ್ನು ಬೀದಿಗಳಿಗೆ ಹೊತ್ತುಕೊಂಡು ಬಂದು
ಹಾಸಿಗೆ ಮತ್ತು ಡೋಲಿಗಳ ಮೇಲೆ ಮಲಗಿಸುತ್ತಿದ್ದರು. ಪೇತ್ರನ
ನೆರಳು ಬಿದ್ದರೆ ಸಾಕು, ಕಾಯಿಲೆಯವರು ಗುಣಮುಖರಾಗುತ್ತಾ
ರೆಂದು ಜನರು ಯೋಚಿಸಿಕೊಂಡಿದ್ದರು. 16ಜೆರುಸಲೇಮಿನ
ಸುತ್ತಮುತ್ತಲಿನ ಊರುಗಳಿಂದೆಲ್ಲಾ ಜನರು ಬರುತ್ತಿದ್ದರು.
ಅವರು ಕಾಯಿಲೆಯವರನ್ನೂ ದೆವ್ವಪೀಡಿತರಾಗಿದ್ದವರನ್ನೂ
ಹೊತ್ತುಕೊಂಡು ಬರುತ್ತಿದ್ದರು. ಈ ಜನರೆಲ್ಲರಿಗೂ
ಗುಣವಾಯಿತು.

### ಅಪೊಸ್ತಲರನ್ನು ತಡೆಯಲು ಯೆಹೂದ್ಯರ ಪ್ರಯತ್ನ

17ಪ್ರಧಾನಯಾಜಕನು ಮತ್ತು ಅವನ ಸ್ನೇಹಿತರೆಲ್ಲರೂ
(ಸದ್ದುಕಾಯರು) ಬಹು ಅಸೂಯೆಗೊಂಡರು. 18ಅವರು
ಅಪೊಸ್ತಲರನ್ನು ಬಂಧಿಸಿ ರಾಜ್ಯಮಟ್ಟದ ಸೆರೆಮನೆಗೆ ಹಾಕಿದರು.
19ಆದರೆ ರಾತ್ರಿಯಲ್ಲಿ ಪ್ರಭುವಿನ ದೂತನೊಬ್ಬನು ಸೆರೆಮನೆಯ
ಬಾಗಿಲುಗಳನ್ನು ತೆರೆದನು. ದೇವದೂತನು ಅಪೊಸ್ತಲರನ್ನು
ಕರೆದುಕೊಂಡು ಹೊರಗೆ ಬಂದು ಅವರಿಗೆ, 20''ಹೋಗಿ ದೇವಾ
ಲಯದಲ್ಲಿ ನಿಂತುಕೊಳ್ಳಿರಿ. ಯೇಸುವಿನಲ್ಲಿರುವ ಈ ಹೊಸ
ಜೀವಿತದ ಬಗ್ಗೆ ಪ್ರತಿಯೊಂದನ್ನೂ ಜನರಿಗೆ ಹೇಳಿರಿ'' ಎಂದನು.
21ಆದ್ದರಿಂದ ಅವರು ಮರುದಿನ ಮುಂಜಾನೆ ದೇವಾಲಯಕ್ಕೆ
ಹೋಗಿ ಉಪದೇಶ ಮಾಡತೊಡಗಿದರು.

ಪ್ರಧಾನಯಾಜಕನು ಮತ್ತು ಅವನ ಸ್ನೇಹಿತರು ದೇವಾಲ
ಯಕ್ಕೆ ಬಂದರು. ಅವರು ಯೆಹೂದ್ಯನಾಯಕರ ಮತ್ತು
ಇಸ್ರೇಲರಲ್ಲಿ ಪ್ರಮುಖರಾಗಿದ್ದವರ ಸಭೆಯನ್ನು ಸೇರಿಸಿದರು.
ಬಳಿಕ ಅಪೊಸ್ತಲರನ್ನು ತಮ್ಮ ಬಳಿಗೆ ಕರೆದುಕೊಂಡು ಬರಲು
ಕೆಲವರನ್ನು ಸೆರೆಮನೆಗೆ ಕಳುಹಿಸಿದರು. 22ದೇವಾಲಯದ
ಸಿಪಾಯಿಗಳು ಸೆರೆಮನೆಗೆ ಹೋದಾಗ ಅಲ್ಲಿ ಅಪೊಸ್ತಲರನ್ನು
ಕಾಣಲಿಲ್ಲ. ಆದ್ದರಿಂದ ಅವರು ಹಿಂತಿರುಗಿ ಬಂದು ಯೆಹೂದ್ಯ
ನಾಯಕರಿಗೆ, 23''ಸೆರೆಮನೆ ಮುಚ್ಚಿತ್ತು ಮತ್ತು ಬೀಗವನ್ನು
ಹಾಕಲಾಗಿತ್ತು. ಕಾವಲುಗಾರರು ಬಾಗಿಲ ಬಳಿ ನಿಂತು
ಕೊಂಡಿದ್ದರು. ಆದರೆ ನಾವು ಬಾಗಿಲುಗಳನ್ನು ತೆರೆದಾಗ ಸೆರೆ
ಮನೆಯು ಬರಿದಾಗಿತ್ತು!'' ಎಂದು ತಿಳಿಸಿದರು. 24ದೇವಾಲ
ಯದ ಕಾವಲುಗಾರರ ನಾಯಕನು ಮತ್ತು ಮಹಾಯಾಜಕರು
ಇದನ್ನು ಕೇಳಿ ಗಲಿಬಿಲಿಗೊಂಡರು. ಇದರಿಂದ ಏನಾಗುವುದೋ
ಎಂದು ಅವರು ಭಯಪಟ್ಟರು. 25ಬಳಿಕ ಬೇರೊಬ್ಬನು ಬಂದು
ಅವರಿಗೆ, ''ಕೇಳಿ! ನೀವು ಸೆರೆಮನೆಯಲ್ಲಿ ಹಾಕಿದ್ದ ಜನರು
ದೇವಾಲಯದಲ್ಲಿ ನಿಂತಿದ್ದಾರೆ. ಅವರು ಜನರಿಗೆ ಉಪದೇಶ
ಮಾಡುತ್ತಿದ್ದಾರೆ!'' ಎಂದು ಹೇಳಿದನು. 26ಆಗ ದಳಪತಿ ಮತ್ತು
ಅವನ ಜನರು ಹೋಗಿ ಅಪೊಸ್ತಲರನ್ನು ಮರಳಿ ಕರೆತಂದರು.

---

**ಲೇವಿಯ** ಲೇವಿ ಕುಲದವನು. ಈ ಕುಲದವರು ದೇವಾಲಯದಲ್ಲಿ
ಯಾಜಕರಿಗೆ ಸಹಾಯಕರಾಗಿದ್ದರು.

ಆದರೆ ಸೈನಿಕರು ಬಲಾತ್ಕಾರ ಮಾಡಲಿಲ್ಲ. ಯಾಕೆಂದರೆ ಅವರು
ಜನರಿಗೆ ಭಯಪಟ್ಟರು. ಜನರು ಕೋಪಗೊಂಡು ಕಲ್ಲೆಸೆದು
ತಮ್ಮನ್ನು ಕೊಲ್ಲಬಹುದೆಂದು ಅವರು ಹೆದರಿದರು.

27ಸೈನಿಕರು ಅಪೊಸ್ತಲರನ್ನು ಸಭೆಗೆ ಕರೆದುಕೊಂಡು
ಬಂದು ಯೆಹೂದ್ಯನಾಯಕರ ಮುಂದೆ ನಿಲ್ಲಿಸಿದರು. ಪ್ರಧಾನ
ಯಾಜಕನು ಅಪೊಸ್ತಲರಿಗೆ, 28“ಈ ಮನುಷ್ಯನ (ಯೇಸುವಿನ)
ಬಗ್ಗೆ ನೀವು ಬೋಧಿಸಕೂಡದೆಂದು ನಾವು ನಿಮಗೆ ಆಜ್ಞಾಪಿ
ಸಿದೆವು. ಆದರೆ ನೀವು ಮಾಡಿರುವುದೇನು? ನೀವು ಜೆರುಸ
ಲೇಮನ್ನು ನಿಮ್ಮ ಉಪದೇಶದಿಂದ ತುಂಬಿಸಿಬಿಟ್ಟಿದ್ದೀರಿ. ಈ
ಮನುಷ್ಯನ (ಯೇಸುವಿನ) ಸಾವಿಗೆ ನಮ್ಮನ್ನೇ ಜವಾಬ್ದಾರ
ರನ್ನಾಗಿ ಮಾಡಲು ನೀವು ಪ್ರಯತ್ನಿಸುತ್ತಿದ್ದೀರಿ” ಎಂದರು.

29ಪೇತ್ರ ಮತ್ತು ಉಳಿದ ಅಪೊಸ್ತಲರು, “ನಾವು ವಿಧೇಯ
ರಾಗಬೇಕಾದದ್ದು ದೇವರಿಗೇ ಹೊರತು ನಿಮಗಲ್ಲ! 30ನೀವು
ಯೇಸುವನ್ನು ಕೊಂದಿರಿ. ನೀವು ಆತನನ್ನು ಶಿಲುಬೆಯ ಮೇಲೆ
ನೇತು ಹಾಕಿದಿರಿ. ಆದರೆ ದೇವರು ಅಂದರೆ ನಮ್ಮ ಪಿತೃಗಳ
ದೇವರೇ ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ
ಎಬ್ಬಿಸಿದನು! 31ದೇವರಿಂದ ಆತನ ಬಲಗಡೆಗೆ ಏರಿಸಲ್ಪಟ್ಟಾತನೇ
ಯೇಸು. ಎಲ್ಲಾ ಯೆಹೂದ್ಯರು ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪ
ಪಟ್ಟು ದೇವರ ಕಡೆಗೆ ತಿರುಗಿಕೊಳ್ಳುವುದರ ಮೂಲಕ ಪಾಪಕ್ಷಮೆ
ಹೊಂದಿಕೊಳ್ಳಲೆಂದು ದೇವರು ಯೇಸುವನ್ನು ನಮ್ಮ ನಾಯಕ
ನನ್ನಾಗಿಯೂ ರಕ್ಷಕನನ್ನಾಗಿಯೂ ಮಾಡಿದ್ದಾನೆ. 32ಈ ಘಟನೆ
ಗಳಿಗೆ ನಾವೇ ಸಾಕ್ಷಿಗಳು. ನಾವು ಮಾತ್ರವಲ್ಲದೆ ವಿಧೇಯ
ರಾಗುವ ಎಲ್ಲಾ ಜನರಿಗೆ ದೇವರು ದಯಪಾಲಿಸಿರುವ
ಪವಿತ್ರಾತ್ಮನೂ ಸಾಕ್ಷಿಯಾಗಿದ್ದಾನೆ” ಎಂದನು.

33ಯೆಹೂದ್ಯನಾಯಕರು ಈ ಮಾತುಗಳನ್ನು ಕೇಳಿ ಬಹು
ಕೋಪಗೊಂಡು, ಅಪೊಸ್ತಲರನ್ನು ಕೊಲ್ಲಬೇಕೆಂದಿದ್ದರು.
34ಆಗ ಫರಿಸಾಯರಲ್ಲಿ ಒಬ್ಬನು ಸಭೆಯಲ್ಲಿ ಎದ್ದು ನಿಂತು
ಕೊಂಡನು. ಅವನ ಹೆಸರು ಗಮಲಿಯೇಲ. ಅವನು ಧರ್ಮೋಪ
ದೇಶಕನಾಗಿದ್ದನು ಮತ್ತು ಜನರೆಲ್ಲಾ ಅವನನ್ನು ಗೌರವಿಸು
ತ್ತಿದ್ದರು. ಕೆಲವು ನಿಮಿಷಗಳವರೆಗೆ ಅಪೊಸ್ತಲರನ್ನು ಸಭೆಯಿಂದ
ಹೊರಗೆ ಕಳುಹಿಸಬೇಕೆಂದು ಅವನು ಜನರಿಗೆ ಹೇಳಿದನು.
35ಬಳಿಕ ಅವನು ಅವರಿಗೆ, “ಇಸ್ರೇಲ್ ಜನರೇ, ನೀವು ಇವರಿಗೆ
ಮಾಡಬೇಕೆಂದಿರುವುದರ ಬಗ್ಗೆ ಎಚ್ಚರಿಕೆಯಾಗಿರಿ! 36ಒಮ್ಮೆ,
ತೈದ ಎಂಬವನು ಬಂದದ್ದು ನಿಮ್ಮ ನೆನಪಿನಲ್ಲಿದೆಯೋ? ಅವನು
ತನ್ನನ್ನು ಮಹಾಪುರುಷನೆಂದು ಹೇಳಿಕೊಂಡನು. ಸುಮಾರು
ನಾನೂರು ಮಂದಿ ಅವನ ಜೊತೆ ಸೇರಿದರು. ಆದರೆ ಅವನು
ಕೊಲ್ಲಲ್ಪಟ್ಟನು. ಅವನನ್ನು ಹಿಂಬಾಲಿಸುತ್ತಿದ್ದವರೆಲ್ಲ ಚದರಿ
ಓಡಿಹೋದರು. ಅವರಿಂದ ಏನೂ ಮಾಡಲಾಗಲಿಲ್ಲ. 37ಬಳಿಕ,
ಯೂದ ಎಂಬವನು ಗಲಿಲಾಯದಿಂದ ಬಂದನು. ಅದು
ಜನಗಣತಿಯ ಕಾಲವಾಗಿತ್ತು. ಅವನು ಸಹ ಅನುಯಾಯಿಗಳ
ಒಂದು ಗುಂಪನ್ನೇ ಕಟ್ಟಿದ. ಅವನು ಸಹ ಕೊಲ್ಲಲ್ಪಟ್ಟನು. ಅವನ
ಅನುಯಾಯಿಗಳೆಲ್ಲಾ ಚದರಿ ಓಡಿಹೋದರು. 38ಆದ್ದರಿಂದ
ಈಗ ನಾನು ನಿಮಗೆ ಹೇಳುವುದೇನೆಂದರೆ, ಈ ಜನರಿಂದ
ದೂರವಾಗಿರಿ. ಅವರನ್ನು ಅವರಷ್ಟಕ್ಕೇ ಬಿಟ್ಟುಬಿಡಿರಿ. ಅವರ
ಯೋಜನೆಯು ಮನುಷ್ಯರಿಂದ ಬಂದದ್ದಾಗಿದ್ದರೆ, ಅದು
ಉರುಳಿಹೋಗುವುದು. 39ಆದರೆ ಅದು ದೇವರಿಂದ ಬಂದ
ದ್ದಾಗಿದ್ದರೆ, ನೀವು ಅವರನ್ನು ತಡೆಯಲು ಸಾಧ್ಯವಾಗುವುದಿಲ್ಲ.
ನೀವು ದೇವರಿಗೇ ವಿರುದ್ಧವಾಗಿ ಹೋರಾಡಿದಂತಾದೀತು!”
ಎಂದು ಹೇಳಿದನು.

ಗಮಲಿಯೇಲನ ಸಲಹೆಗೆ ಯೆಹೂದ್ಯ ನಾಯಕರು ಒಪ್ಪಿ
ಕೊಂಡರು. 40ಅವರು ಅಪೊಸ್ತಲರನ್ನು ಮತ್ತೆ ಒಳಗೆ ಕರೆಸಿ,
ಹೊಡೆಸಿ, ಯೇಸುವಿನ ಬಗ್ಗೆ ಜನರಿಗೆ ಹೇಳಕೂಡದೆಂದು
ಎಚ್ಚರಿಸಿ ಕಳುಹಿಸಿಬಿಟ್ಟರು. 41ಅಪೊಸ್ತಲರು ಸಭೆಯಿಂದ
ಹೊರಟುಹೋದರು. ಯೇಸುವಿನ ಹೆಸರಿಗಾಗಿ ಅಪಮಾನ
ವನ್ನು ಅನುಭವಿಸುವ ಅರ್ಹತೆಯನ್ನು ಪಡೆದುಕೊಂಡೆವೆಂದು
ಅವರು ಸಂತೋಷಪಟ್ಟರು. 42ಅವರು ಜನರಿಗೆ ಉಪದೇಶಿಸು
ವುದನ್ನು ನಿಲ್ಲಿಸಲಿಲ್ಲ. ಯೇಸುವೇ ಕ್ರಿಸ್ತನೆಂಬ ಶುಭವಾರ್ತೆ
ಯನ್ನು ಜನರಿಗೆ ಹೇಳುವುದನ್ನು ಮುಂದುವರಿಸಿದರು. ಅವರು
ಪ್ರತಿದಿನ ದೇವಾಲಯದಲ್ಲಿಯೂ ಜನರ ಮನೆಗಳಲ್ಲಿಯೂ
ಉಪದೇಶಿಸುತ್ತಿದ್ದರು.

### ವಿಶೇಷ ಕಾರ್ಯಕ್ಕೆ ಏಳು ಮಂದಿಯ ಆಯ್ಕೆ

6 ಯೇಸುವಿನ ಶಿಷ್ಯರ ಸಂಖ್ಯೆಯು ಹೆಚ್ಚುಹೆಚ್ಚಾಗುತ್ತಿತ್ತು.
ಆದರೆ ಈ ಸಮಯದಲ್ಲಿ ಗ್ರೀಕ್ ಮಾತಾಡುವ ಶಿಷ್ಯರು
ಯೆಹೂದ್ಯ ಶಿಷ್ಯರಿಗೆ ದೂರು ಹೇಳಿದರು. ಪ್ರತಿದಿನ ಶಿಷ್ಯರಿಗೆ
ಕೊಡುವಂಥವುಗಳಲ್ಲಿ ತಮ್ಮ ವಿಧವೆಯರಿಗೆ ಅವರ ಪಾಲು
ದೊರೆಯುತ್ತಿಲ್ಲವೆಂದು ಅವರು ಆಪಾದಿಸಿದರು. 2ಆಗ
ಹನ್ನೆರಡು ಮಂದಿ ಅಪೊಸ್ತಲರು ಇಡೀ ಶಿಷ್ಯಸಮುದಾಯದ
ಸಭೆಯನ್ನು ಕರೆದು ಅವರಿಗೆ, “ದೇವರ ವಾಕ್ಯವನ್ನು ಬೋಧಿಸು
ವುದು ನಮ್ಮ ಕೆಲಸ. ಆದರೆ ಅದು ನಿಂತುಹೋಗುವುದು
ಸರಿಯಲ್ಲ! ನಾವು ಜನರಿಗೆ ಊಟವನ್ನು ಒದಗಿಸಲು ಸಹಾಯ
ಮಾಡುವುದಕ್ಕಿಂತಲೂ ದೇವರ ವಾಕ್ಯೋಪದೇಶವನ್ನು
ಮುಂದುವರಿಸುವುದು ಒಳ್ಳೆಯದು. 3ಆದ್ದರಿಂದ, ಸಹೋದ
ರರೇ, ನಿಮ್ಮ ಜನರಲ್ಲಿ ಏಳು ಮಂದಿಯನ್ನು ಆರಿಸಿಕೊಳ್ಳಿರಿ.
ಅವರು ಜನರಿಂದ ಒಳ್ಳೆಯವರು ಎನಿಸಿಕೊಂಡವರಾಗಿರಬೇಕು;
ಜ್ಞಾನಪೂರ್ಣರಾಗಿರಬೇಕು ಮತ್ತು ಪವಿತ್ರಾತ್ಮಭರಿತರಾಗಿರ
ಬೇಕು. ನಾವು ಅವರಿಗೆ ಈ ಕೆಲಸವನ್ನು ಒಪ್ಪಿಸಿಕೊಡುತ್ತೇವೆ.
4ಆಗ ನಾವು ನಮ್ಮ ಸಮಯವನ್ನೆಲ್ಲಾ ಪ್ರಾರ್ಥನೆಗೂ ದೇವರ
ವಾಕ್ಯೋಪದೇಶಕ್ಕೂ ಕೊಡಲು ಸಾಧ್ಯವಾಗುತ್ತದೆ” ಎಂದು
ಹೇಳಿದರು.

5ಇಡೀ ಸಮುದಾಯವು ಈ ಆಲೋಚನೆಯನ್ನು
ಇಷ್ಟಪಟ್ಟಿತು. ಆದ್ದರಿಂದ ಅವರು ಈ ಏಳು ಮಂದಿಯನ್ನು
ಆರಿಸಿಕೊಂಡರು: ಸ್ತೆಫನ (ಮಹಾನಂಬಿಕೆಯುಳ್ಳ ಮತ್ತು
ಪವಿತ್ರಾತ್ಮಭರಿತನಾಗಿದ್ದ ಮನುಷ್ಯ), ಫಿಲಿಪ್ಪ* ಪ್ರೊಖೋರ,
ನಿಕನೋರ, ತಿಮೋನ, ಪರ್ಮೇನ ಮತ್ತು ನಿಕೊಲಾಯ
(ಮತಾಂತರ ಹೊಂದಿ ಯೆಹೂದ್ಯನಾಗಿದ್ದ ಇವನು ಅಂತಿ
ಯೋಕ್ಯಕ್ಕೆ ಸೇರಿದವನು.) 6 ಬಳಿಕ ಅವರು ಈ ಏಳು ಮಂದಿ
ಯನ್ನು ಅಪೊಸ್ತಲರ ಮುಂದೆ ನಿಲ್ಲಿಸಿದರು. ಅಪೊಸ್ತಲರು
ಪ್ರಾರ್ಥಿಸಿ, ಅವರ ತಲೆಗಳ ಮೇಲೆ ತಮ್ಮ ಕೈಗಳನ್ನಿಟ್ಟರು.

7ದೇವರ ವಾಕ್ಯವು ಹೆಚ್ಚುಹೆಚ್ಚು ಜನರಿಗೆ ತಲುಪತೊಡಗಿತು.
ಜೆರುಸಲೇಮಿನ ಶಿಷ್ಯ ಸಮುದಾಯವು ಹೆಚ್ಚುಹೆಚ್ಚು ದೊಡ್ಡ
ದಾಗತೊಡಗಿತು. ಅನೇಕ ಯೆಹೂದ್ಯಯಾಜಕರು ನಂಬಿ
ಕೊಂಡರು ಮತ್ತು ವಿಧೇಯರಾದರು.

---

**ಫಿಲಿಪ್ಪ** ಯೇಸುವಿನ ಅಪೊಸ್ತಲನಲ್ಲ.

## ಯೆಹೂದ್ಯರು ಸ್ತೆಫನನಿಗೆ ವಿರುದ್ಧವಾದರು

8ಸ್ತೆಫನನು (ಏಳು ಮಂದಿಯಲ್ಲಿ ಒಬ್ಬನು)ದೇವರ ಕೃಪೆ
ಯಿಂದಲೂ ಬಲದಿಂದಲೂ ತುಂಬಿದವನಾಗಿ ಅದ್ಭುತಕಾರ್ಯ
ಗಳನ್ನು ಮತ್ತು ಸೂಚಕಕಾರ್ಯಗಳನ್ನು ಮಾಡುತ್ತಾ ಇದ್ದನು.
9ಆದರೆ ಕೆಲವು ಯೆಹೂದ್ಯರು ಬಂದು ಅವನೊಂದಿಗೆ ವಾದಿಸಿ
ದರು. ಈ ಯೆಹೂದ್ಯರು ಸಭಾಮಂದಿರಕ್ಕೆ ಸೇರಿದವರು. ಅದಕ್ಕೆ
‘ಬಿಡುಗಡೆ ಹೊಂದಿದವರ* ಸಭಾಮಂದಿರ’ ಎಂದು ಕರೆಯು
ತ್ತಿದ್ದರು. (ಸಿರೇನ್ ಮತ್ತು ಅಲೆಕ್ಸಾಂಡ್ರಿಯದಿಂದ ಬಂದ
ಯೆಹೂದ್ಯರಿಗೋಸ್ಕರವಾಗಿಯೂ ಈ ಸಭಾಮಂದಿರವಿತ್ತು.)
ಸಿಲಿಸಿಯ ಮತ್ತು ಏಷ್ಯಾದಿಂದ ಬಂದ ಯೆಹೂದ್ಯರೂ ಅವ
ರೊಂದಿಗಿದ್ದರು. ಅವರೆಲ್ಲರೂ ಬಂದು ಅವನೊಂದಿಗೆ ವಾದ
ಮಾಡಿದರು. 10ಆದರೆ ವಿವೇಕದಿಂದ ಮಾತಾಡಲು
ಪವಿತ್ರಾತ್ಮನು ಅವನಿಗೆ ಸಹಾಯಮಾಡಿದನು. ಸ್ತೆಫನನ ಮಾತು
ಗಳು ಬಹು ಶಕ್ತಿಯುತವಾಗಿದ್ದ ಕಾರಣ ಅವನೊಂದಿಗೆ
ವಾದಿಸಲು ಅವರಿಗೆ ಸಾಧ್ಯವಾಗದೆ, 11“ಸ್ತೆಫನನು ಮೋಶೆಗೂ
ದೇವರಿಗೂ ವಿರುದ್ಧವಾಗಿ ಕೆಟ್ಟ ಸಂಗತಿಗಳನ್ನು ಹೇಳುತ್ತಾನೆ;
ಅವನ್ನು ನಾವೇ ಕೇಳಿದ್ದೇವೆ!” ಎಂದು ತಿಳಿಸುವಂತೆ ಕೆಲವರಿಗೆ
ಹಣಕೊಟ್ಟರು. 12ಹೀಗೆ ಈ ಯೆಹೂದ್ಯರು ಜನರನ್ನೂ
ಯೆಹೂದ್ಯರ ಹಿರಿಯ ನಾಯಕರನ್ನೂ ಧರ್ಮೋಪದೇಶಕ
ರನ್ನೂ ಗಲಿಬಿಲಿಗೊಳಿಸಿದರು. ಅವರು ಬಹು ಸಿಟ್ಟಿನಿಂದ ಬಂದು
ಸ್ತೆಫನನನ್ನು ಬಂಧಿಸಿ ಯೆಹೂದ್ಯನಾಯಕರ ಸಭೆಗೆ
ಕೊಂಡೊಯ್ದರು. 13ಈ ಯೆಹೂದ್ಯರು ಕೆಲವು ಮಂದಿ ಸುಳ್ಳು
ಸಾಕ್ಷಿಗಳನ್ನು ಕರೆದುಕೊಂಡು ಬಂದು, “ಈ ಮನುಷ್ಯನು ಈ
ಪವಿತ್ರ ಸ್ಥಳದ (ದೇವಾಲಯದ) ವಿರುದ್ಧವಾಗಿಯೂ
ಮೋಶೆಯ ಧರ್ಮಶಾಸ್ತ್ರದ ವಿರುದ್ಧವಾಗಿಯೂ ಕೆಟ್ಟಸಂಗತಿ
ಗಳನ್ನು ಯಾವಾಗಲೂ ಹೇಳುತ್ತಾನೆ. 14ನಜರೇತಿನ ಯೇಸು ಈ
ದೇವಾಲಯವನ್ನು ಕೆಡವಿ ಮೋಶೆಯ ವಿಧಿಗಳನ್ನು ಬದಲಾ
ಯಿಸುತ್ತಾನೆಂದು ಇವನು ಹೇಳುವುದನ್ನು ನಾವು ಕೇಳಿದ್ದೇವೆ”
ಎಂದು ಹೇಳಿಸಿದರು. 15ಸಭೆಯಲ್ಲಿ ಕುಳಿತಿದ್ದವರೆಲ್ಲರೂ
ಸ್ತೆಫನನ ಮುಖವನ್ನು ದಿಟ್ಟಿಸಿ ನೋಡಲು ಅವನ ಮುಖವು ದೇವ
ದೂತನ ಮುಖದಂತೆ ಕಂಗೊಳಿಸಿತು.

## ಸ್ತೆಫನನ ಪ್ರಸಂಗ

7 ಪ್ರಧಾನಯಾಜಕನು ಸ್ತೆಫನನಿಗೆ, “ಈ ಸಂಗತಿಗಳು
ನಿಜವೋ?” ಎಂದು ಕೇಳಿದನು. 2ಪ್ರತ್ಯುತ್ತರವಾಗಿ
ಅವನು ಹೀಗೆಂದನು: “ನನ್ನ ಯೆಹೂದ್ಯತಂದೆಗಳೇ, ಸಹೋ
ದರರೇ, ನನಗೆ ಕಿವಿಗೊಡಿರಿ. ನಮ್ಮ ಪಿತೃವಾದ ಅಬ್ರಹಾಮನಿಗೆ
ನಮ್ಮ ಪ್ರಭಾವಸ್ವರೂಪನಾದ ದೇವರು ಕಾಣಿಸಿಕೊಂಡನು.
ಅಬ್ರಹಾಮನು ಹಾರಾನಿನಲ್ಲಿ ವಾಸಮಾಡುವ ಮೊದಲು
ಮೆಸಪೊಟೊಮಿಯದಲ್ಲಿದ್ದನು. 3ದೇವರು ಅಬ್ರಹಾಮನಿಗೆ,
‘ನಿನ್ನ ದೇಶವನ್ನೂ ನಿನ್ನ ಜನರನ್ನೂ ಬಿಟ್ಟು ನಾನು ನಿನಗೆ
ತೋರಿಸುವ ದೇಶಕ್ಕೆ ಹೋಗು’* ಎಂದು ಹೇಳಿದನು. 4ಆದ್ದ
ರಿಂದ ಅಬ್ರಹಾಮನು ಖಾಲ್ದೆಯ* ದೇಶವನ್ನು ಬಿಟ್ಟು ಹಾರಾನಿ
ನಲ್ಲಿ ವಾಸಿಸಲು ಹೋದನು. ಅಬ್ರಹಾಮನ ತಂದೆ ಸತ್ತ ಮೇಲೆ
ದೇವರು ಅವನನ್ನು ಈಗ ನೀವು ವಾಸಿಸುತ್ತಿರುವ ಈ ಸ್ಥಳಕ್ಕೆ
ಕಳುಹಿಸಿದನು. 5ಆದರೆ ದೇವರು ಅಬ್ರಹಾಮನಿಗೆ ಇಲ್ಲಿ ಯಾವ
ಭೂಮಿಯನ್ನೂ ಕೊಡಲಿಲ್ಲ. ದೇವರು ಅವನಿಗೆ ಒಂದು ಅಡಿ
ಸ್ಥಳವನ್ನೂ ಕೊಡಲಿಲ್ಲ. ಆದರೆ ಮುಂದಿನ ಕಾಲದಲ್ಲಿ ಈ
ನಾಡನ್ನು ಅವನಿಗೂ ಅವನ ಮಕ್ಕಳಿಗೂ ಕೊಡುವುದಾಗಿ
ದೇವರು ಅಬ್ರಹಾಮನಿಗೆ ವಾಗ್ದಾನ ಮಾಡಿದನು.
(ಅಬ್ರಹಾಮನಿಗೆ ಮಕ್ಕಳೇ ಇಲ್ಲದಿದ್ದಾಗ ಇದಾಯಿತು.)
6ದೇವರು ಅವನಿಗೆ, ‘ನಿನ್ನ ಸಂತಾನದವರು ಬೇರೊಂದು
ದೇಶದಲ್ಲಿ ವಾಸಿಸುವರು. ಅವರು ಪರದೇಶಿಗಳಾಗಿರುವರು.
ಅಲ್ಲಿಯ ಜನರು ಅವರನ್ನು ಗುಲಾಮರನ್ನಾಗಿ ಮಾಡಿಕೊಂಡು
ನಾನೂರು ವರ್ಷಗಳವರೆಗೆ ಅವರಿಗೆ ಕೇಡುಗಳನ್ನು
ಮಾಡುವರು. 7ಆದರೆ ಅವರನ್ನು ಗುಲಾಮರನ್ನಾಗಿ
ಮಾಡಿಕೊಂಡ ಜನಾಂಗವನ್ನು ನಾನು ದಂಡಿಸುವೆನು’* ಎಂದು
ಹೇಳಿದನು. ಇದಲ್ಲದೆ ದೇವರು ಅವನಿಗೆ, ‘ಆ ಬಳಿಕ ನಿನ್ನ ಜನರು
ಆ ದೇಶದಿಂದ ಹೊರಗೆ ಬಂದು ನನ್ನನ್ನು ಈ ಸ್ಥಳದಲ್ಲಿ
ಆರಾಧಿಸುವರು’* ಎಂದು ಹೇಳಿದನು. 8ದೇವರು ಅಬ್ರಹಾಮ
ನೊಂದಿಗೆ ಒಂದು ಒಪ್ಪಂದವನ್ನು ಮಾಡಿಕೊಂಡನು. ಆ
ಒಪ್ಪಂದದ ಗುರುತೇ ಸುನ್ನತಿ. ಹೀಗಿರಲು ಅಬ್ರಹಾಮನು ಒಬ್ಬ
ಮಗನನ್ನು ಪಡೆದಾಗ, ಆ ಮಗನಿಗೆ ಎಂಟನೆಯ ದಿನದಲ್ಲಿ ಸುನ್ನತಿ
ಮಾಡಿದನು. ಅವನ ಮಗನ ಹೆಸರು ಇಸಾಕ. ಇಸಾಕನು ಸಹ
ತನ್ನ ಮಗನಾದ ಯಾಕೋಬನಿಗೆ ಸುನ್ನತಿ ಮಾಡಿದನು, ಮತ್ತು
ಯಾಕೋಬನು ತನ್ನ ಗಂಡುಮಕ್ಕಳಿಗೆಲ್ಲಾ ಸುನ್ನತಿ ಮಾಡಿದನು.
ಈ ಗಂಡುಮಕ್ಕಳೇ ಮುಂದೆ ಹನ್ನೆರಡು ಮಂದಿ ಪಿತೃಗಳಾದರು.

9“ಈ ಪಿತೃಗಳು ಯೋಸೇಫನ (ಅವರ ತಮ್ಮ) ಮೇಲೆ
ಹೊಟ್ಟೆಕಿಚ್ಚುಪಟ್ಟರು. ಅವರು ಯೋಸೇಫನನ್ನು ಈಜಿಪ್ಟಿನ
ಜನರಿಗೆ ಗುಲಾಮನನ್ನಾಗಿ ಮಾರಿದರು. ಆದರೆ ದೇವರು
ಯೋಸೇಫನೊಂದಿಗೆ ಇದ್ದನು. 10ಯೋಸೇಫನಿಗೆ ಅಲ್ಲಿ ಅನೇಕ
ತೊಂದರೆಗಳು ಬಂದವು. ಆದರೆ ದೇವರು ಆ ಎಲ್ಲಾ ತೊಂದರೆ
ಗಳಿಂದ ಅವನನ್ನು ರಕ್ಷಿಸಿದನು. ಆಗ ಫರೋಹನು ಈಜಿಪ್ಟಿನ
ರಾಜನಾಗಿದ್ದನು. ದೇವರು ಯೋಸೇಫನಿಗೆ ಕೊಟ್ಟ ಜ್ಞಾನದ ದೆಸೆ
ಯಿಂದ ಫರೋಹನು ಯೋಸೇಫನನ್ನು ಇಷ್ಟಪಟ್ಟನು ಮತ್ತು
ಗೌರವಿಸಿದನು. ಫರೋಹನು ಯೋಸೇಫನನ್ನು ಈಜಿಪ್ಟಿನ
ರಾಜ್ಯಪಾಲನನ್ನಾಗಿಯೂ ತನ್ನ ಮನೆಯಲ್ಲಿದ್ದ ಎಲ್ಲಾ ಜನರ
ಮೇಲೆ ಅಧಿಪತಿಯನ್ನಾಗಿಯೂ ಮಾಡಿದನು.11ಆದರೆ ಈಜಿಪ್ಟಿ
ನಲ್ಲಿ ಮತ್ತು ಕಾನಾನಿನಲ್ಲಿ ಬರಗಾಲ ಉಂಟಾಯಿತು. ಆಹಾರ
ವಿಲ್ಲದೆ ನಮ್ಮ ಪಿತೃಗಳಿಗೆ ಬಹಳ ಕಷ್ಟವಾಯಿತು. 12ಆದರೆ
ಈಜಿಪ್ಟಿನಲ್ಲಿ ಆಹಾರವನ್ನು ಸಂಗ್ರಹಿಸಲಾಗಿದೆ ಎಂಬ ಸುದ್ದಿ
ಯನ್ನು ಯಾಕೋಬನು ಕೇಳಿ, ನಮ್ಮ ಪಿತೃಗಳನ್ನು ಅಲ್ಲಿಗೆ
ಕಳುಹಿಸಿದನು. (ಇದು ಈಜಿಪ್ಟಿಗೆ ಅವರ ಮೊದಲ ಪ್ರಯಾಣ.)
13ಬಳಿಕ ಅವರು ಅಲ್ಲಿಗೆ ಎರಡನೆಯ ಸಲ ಹೋದರು. ಈ ಸಲ,
ತಾನು ಯಾರೆಂಬುದನ್ನು ಯೋಸೇಫನು ತನ್ನ ಸಹೋದರರಿಗೆ
ತಿಳಿಸಿದನು ಮತ್ತು ಯೋಸೇಫನ ಕುಟುಂಬದ ಬಗ್ಗೆ ಫರೋಹ
ನಿಗೆ ತಿಳಿಯಿತು. 14ಬಳಿಕ, ಯೋಸೇಫನು ತನ್ನ ತಂದೆಯಾದ
ಯಾಕೋಬನನ್ನು ಮತ್ತು ಸಂಬಂಧಿಕರನ್ನು (ಅವರೆಲ್ಲರು

---

**ಬಿಡುಗಡೆ ಹೊಂದಿದವರ** ಒಮ್ಮೆ ಗುಲಾಮರಾಗಿದ್ದು ಬಿಡುಗಡೆ ಹೊಂದಿದ ಯೆಹೂದ್ಯರು.

**ನಿನ್ನ .. ಹೋಗು** ಆದಿಕಾಂಡ 12:1

**ಖಾಲ್ದೆಯ** ಅಥವಾ ಬಾಬಿಲೋನಿಯ.

**ನಿನ್ನ .. ದಂಡಿಸುವೆನು** ಆದಿಕಾಂಡ 15:13-14

**ಆ ಬಳಿಕ … ಆರಾಧಿಸುವರು** ಆದಿಕಾಂಡ15:14; ವಿಮೋಚನ. 3:12.

ಒಟ್ಟಿಗೆ ಎಪ್ಪತ್ತೈದು ಮಂದಿ) ಈಜಿಪ್ಟಿಗೆ ಆಹ್ವಾನಿಸಲು ಕೆಲವು
ಜನರನ್ನು ಕಳುಹಿಸಿದನು. 15ಆದ್ದರಿಂದ ಯಾಕೋಬನು
ಈಜಿಪ್ಟಿಗೆ ಹೋದನು. ಯಾಕೋಬನು ಮತ್ತು ನಮ್ಮ ಪಿತೃಗಳು
ತಾವು ಸಾಯುವವರೆಗೆ ಅಲ್ಲೇ ಇದ್ದರು. 16ಬಳಿಕ ಅವರ
ದೇಹಗಳನ್ನು ಶೇಕೆಮಿಗೆ ಸಾಗಿಸಲಾಯಿತು. ಅಲ್ಲಿಯ ಸಮಾಧಿ
ಯೊಂದರಲ್ಲಿ ಅವರನ್ನು ಹೂಳಲಾಯಿತು. (ಅಬ್ರಹಾಮನು
ಹಾಮೋರನ ಗಂಡುಮಕ್ಕಳಿಂದ ಕೊಂಡುಕೊಂಡದ್ದು ಈ
ಸಮಾಧಿಯನ್ನೇ. ಅವನು ಅವರಿಗೆ ಬೆಳ್ಳಿಯನ್ನು ಕ್ರಯವಾಗಿ
ಕೊಟ್ಟಿದ್ದನು.)

17‘‘ಈಜಿಪ್ಟಿನಲ್ಲಿ ನಮ್ಮ ಜನರಾದ ಯೆಹೂದ್ಯರ ಸಂಖ್ಯೆಯು
ಹೆಚ್ಚತೊಡಗಿತು. (ದೇವರು ಅಬ್ರಹಾಮನಿಗೆ ವಾಗ್ದಾನ
ಮಾಡಿದ ಕಾಲ ಬಹು ಶೀಘ್ರದಲ್ಲೇ ಬರಲಿತ್ತು). 18ಬಳಿಕ,
ಬೇರೊಬ್ಬ ರಾಜನು ಈಜಿಪ್ಟನ್ನು ಆಳಲಾರಂಭಿಸಿದನು. ಅವನಿಗೆ
ಯೋಸೇಫನ ಬಗ್ಗೆ ಏನೂ ತಿಳಿದಿರಲಿಲ್ಲ. 19ಈ ರಾಜನು ನಮ್ಮ
ಜನರಿಗೆ ಮೋಸ ಮಾಡಿದನು. ಅವನು ನಮ್ಮ ಪಿತೃಗಳಿಗೆ ಕೇಡನ್ನು
ಮಾಡಿದನು. ಅವರ ಕೂಸುಗಳನ್ನು ಸಾಯಿಸಬೇಕೆಂದು ಹೊರಗೆ
ಹಾಕಿಸಿದನು. 20ಮೋಶೆಯು ಜನಿಸಿದ್ದು ಈ ಕಾಲದಲ್ಲೇ. ಅವನು
ಬಹು ಸುಂದರನಾಗಿದ್ದನು. ಮೋಶೆಯನ್ನು ಅವನ ತಂದೆಯ
ಮನೆಯಲ್ಲಿ ಮೂರು ತಿಂಗಳವರೆಗೆ ನೋಡಿಕೊಳ್ಳಲಾಯಿತು.
21ಅವರು ಮೋಶೆಯನ್ನು ಹೊರಗೆ ಹಾಕಿದಾಗ ಫರೋಹನ
ಮಗಳು ಅವನನ್ನು ತೆಗೆದುಕೊಂಡಳು. ಆಕೆಯು ಅವನನ್ನು ತನ್ನ
ಸ್ವಂತ ಮಗನಂತೆ ಬೆಳೆಸಿದಳು. 22ಈಜಿಪ್ಟಿನವರು ತಮಗೆ ಗೊತ್ತಿದ್ದ
ಸಕಲ ವಿದ್ಯೆಗಳನ್ನು ಮೋಶೆಗೆ ಕಲಿಸಿದರು. ಅವನು ವಿಷಯ
ಗಳನ್ನು ಹೇಳುವುದರಲ್ಲಿಯೂ ಕಾರ್ಯಗಳನ್ನು ಮಾಡುವುದ
ರಲ್ಲಿಯೂ ಬಹು ಸಮರ್ಥನಾಗಿದ್ದನು.

23‘‘ಮೋಶೆಗೆ ನಲವತ್ತು ವರ್ಷ ವಯಸ್ಸಾಗಿದ್ದಾಗ, ತನ್ನ
ಸಹೋದರರಾದ ಯೆಹೂದ್ಯ ಜನರನ್ನು ಸಂದರ್ಶಿಸುವುದು
ಒಳ್ಳೆಯದೆಂದು ಯೋಚಿಸಿಕೊಂಡನು. 24ಈಜಿಪ್ಟಿನವನೊಬ್ಬನು
ಯೆಹೂದ್ಯನೊಬ್ಬನಿಗೆ ಅನ್ಯಾಯ ಮಾಡಿ ಹಿಂಸಿಸುತ್ತಿರುವುದನ್ನು
ಕಂಡ ಮೋಶೆಯು ಆ ಈಜಿಪ್ಟಿನವನಿಗೆ ಬಲವಾಗಿ ಹೊಡೆದು
ಕೊಂದುಹಾಕಿದನು. 25ತಮ್ಮನ್ನು ರಕ್ಷಿಸಲು ದೇವರು ಮೋಶೆ
ಯನ್ನು ಉಪಯೋಗಿಸುತ್ತಿದ್ದಾನೆ ಎಂಬುದಾಗಿ ತನ್ನ ಯೆಹೂದ್ಯ
ಸಹೋದರರು ಅರ್ಥಮಾಡಿಕೊಳ್ಳುತ್ತಾರೆ ಎಂದು ಮೋಶೆ
ಭಾವಿಸಿಕೊಂಡನು. ಆದರೆ ಅವರು ಅರ್ಥಮಾಡಿಕೊಳ್ಳಲಿಲ್ಲ.
26ಮರುದಿನ, ಇಬ್ಬರು ಯೆಹೂದ್ಯರು ಹೊಡೆದಾಡುವುದನ್ನು
ಮೋಶೆಯು ಕಂಡನು. ಅವರನ್ನು ಸಮಾಧಾನಪಡಿಸಲು ಅವನು
ಪ್ರಯತ್ನಿಸಿ ‘ಗೆಳೆಯರೇ, ನೀವು ಸಹೋದರರಾಗಿದ್ದೀರಿ! ನೀವು
ಒಬ್ಬರಿಗೊಬ್ಬರು ಅನ್ಯಾಯ ಮಾಡುವುದೇಕೆ?’ ಎಂದು
ಅವರನ್ನು ಕೇಳಿದನು, 27ಮತ್ತೊಬ್ಬನಿಗೆ ಅನ್ಯಾಯ ಮಾಡು
ತ್ತಿದ್ದವನು ಮೋಶೆಯನ್ನು ಹಿಂದಕ್ಕೆ ತಳ್ಳಿ ‘ನಿನ್ನನ್ನು ನಮ್ಮ ಅಧಿಪತಿ
ಎಂದಾಗಲಿ ನ್ಯಾಯಾಧೀಶ ಎಂದಾಗಲಿ ಯಾರಾದರೂ ಹೇಳಿ
ದರೇ? ಇಲ್ಲ! 28ನಿನ್ನೆ ಆ ಈಜಿಪ್ಟಿನವನನ್ನು ಕೊಂದಂತೆ ನನ್ನನ್ನೂ
ಕೊಲ್ಲುವೆಯಾ?’* ಎಂದು ಹೇಳಿದನು. 29ಇದನ್ನು ಕೇಳಿದ್ದೇ
ಮೋಶೆಯು ಈಜಿಪ್ಟನ್ನು ಬಿಟ್ಟು ಮಿದ್ಯಾನ್ಯರ ನಾಡಿಗೆ ಹೋಗಿ
ವಿದೇಶಿಯವನಂತೆ ವಾಸಿಸತೊಡಗಿದನು. ಅಲ್ಲಿ ಅವನಿಗೆ ಇಬ್ಬರು
ಗಂಡುಮಕ್ಕಳು ಹುಟ್ಟಿದರು.

30‘‘ನಲವತ್ತು ವರ್ಷಗಳಾದ ಮೇಲೆ ಮೋಶೆಯು
ಸಿನಾಯ್ ಬೆಟ್ಟದ ಸಮೀಪದಲ್ಲಿರುವ ಮರಳುಗಾಡಿನಲ್ಲಿದ್ದಾಗ
ಉರಿಯುತ್ತಿದ್ದ ಪೊದೆಯ ಜ್ವಾಲೆಯಲ್ಲಿ ದೇವದೂತನೊಬ್ಬನು
ಕಾಣಿಸಿಕೊಂಡನು. 31ಮೋಶೆಯು ಆಶ್ಚರ್ಯದಿಂದ
ನೋಡಲು ಸಮೀಪಕ್ಕೆ ಹೋದನು. ಆಗ ಮೋಶೆಗೆ ವಾಣಿ
ಯೊಂದು ಕೇಳಿಸಿತು. ಅದು ಪ್ರಭುವಿನ ವಾಣಿಯಾಗಿತ್ತು.
32ಪ್ರಭುವು ಅವನಿಗೆ, ‘ನಾನೇ ನಿನ್ನ ಪಿತೃಗಳ ದೇವರು. ನಾನೇ
ಅಬ್ರಹಾಮನ ದೇವರು, ಇಸಾಕನ ದೇವರು ಮತ್ತು
ಯಾಕೋಬನ ದೇವರು’* ಎಂದು ಹೇಳಿದನು. ಮೋಶೆಯು
ಭಯದಿಂದ ನಡುಗ ತೊಡಗಿದನು; ಪೊದೆಯನ್ನು ನೋಡಲು
ಹೆದರಿದನು. 33ಪ್ರಭುವು ಅವನಿಗೆ, ‘ನಿನ್ನ ಪಾದರಕ್ಷೆಗಳನ್ನು
ತೆಗೆದುಹಾಕು, ಈಗ ನೀನು ನಿಂತುಕೊಂಡಿರುವ ಸ್ಥಳ ಪರಿಶುದ್ಧ
ವಾದದ್ದು.

34ಜನರು ಈಜಿಪ್ಟಿನಲ್ಲಿ ಬಹಳ ಸಂಕಟಪಡುತ್ತಿರುವುದನ್ನು
ನಾನು ನೋಡಿದ್ದೇನೆ; ನನ್ನ ಜನರ ಗೋಳಾಟವನ್ನು ನಾನು
ಕೇಳಿದ್ದೇನೆ. ನಾನು ಅವರನ್ನು ರಕ್ಷಿಸುವುದಕ್ಕಾಗಿ ಇಳಿದು ಬಂದಿ
ದ್ದೇನೆ. ಮೋಶೆಯೇ, ಈಗ ನಾನು ನಿನ್ನನ್ನು ಈಜಿಪ್ಟಿಗೆ ಕಳುಹಿಸು
ತ್ತಿದ್ದೇನೆ’* ಎಂದು ಹೇಳಿದನು.

35‘‘ಆ ಯೆಹೂದ್ಯರಿಂದ ತಿರಸ್ಕೃತನಾದವನೇ ಈ ಮೋಶೆ.
ಅವರು ಅವನಿಗೆ ‘ನಿನ್ನನ್ನು ನಮ್ಮ ಅಧಿಪತಿ ಎಂದಾಗಲಿ ನ್ಯಾಯಾ
ಧೀಶ ಎಂದಾಗಲಿ ನಿನಗೆ ಯಾರಾದರೂ ಹೇಳಿದರೇ?’ ಎಂದು
ಪ್ರಶ್ನಿಸಿದ್ದರು. ಆದರೆ ದೇವರು ಅಧಿಪತಿಯನ್ನಾಗಿಯೂ
ವಿಮೋಚಕನನ್ನಾಗಿಯೂ ಕಳುಹಿಸಿದ್ದು ಆ ಮೋಶೆಯನ್ನೇ.
ದೇವರು ತನ್ನ ದೂತನ ಮೂಲಕವಾಗಿ ಮೋಶೆಯನ್ನು ಕಳುಹಿ
ಸಿದನು. ಉರಿಯುವ ಪೊದೆಯಲ್ಲಿ ಮೋಶೆಯು ಕಂಡದ್ದು ಈ
ದೇವದೂತನನ್ನೇ. 36ಆದ್ದರಿಂದ ಮೋಶೆಯು ಜನರನ್ನು
ಈಜಿಪ್ಟಿನಿಂದ ಕರೆದುಕೊಂಡು ಬಂದನು. ಅವನು ಸೂಚಕ
ಕಾರ್ಯಗಳನ್ನು ಅದ್ಭುತಕಾರ್ಯಗಳನ್ನು ಈಜಿಪ್ಟಿನಲ್ಲಿಯೂ
ಕೆಂಪು ಸಮುದ್ರದಲ್ಲಿಯೂ ಮತ್ತು ನಲವತ್ತು ವರ್ಷಗಳ ಕಾಲ
ಅರಣ್ಯದಲ್ಲಿಯೂ ಮಾಡಿದನು. 37ಈ ಮೋಶೆಯೇ ಯೆಹೂದ್ಯ
ಜನರಿಗೆ, ‘ದೇವರು ನಿಮಗೊಬ್ಬ ಪ್ರವಾದಿಯನ್ನು ಕೊಡುವನು.
ಆ ಪ್ರವಾದಿಯು ನಿಮ್ಮ ಸ್ವಜನರ ಮಧ್ಯದಿಂದಲೇ ಬರುವನು.
ಅವನು ನನ್ನಂತೆಯೇ ಇರುವನು’* ಎಂದು ಹೇಳಿದನು.
38ಅರಣ್ಯದಲ್ಲಿ ಯೆಹೂದ್ಯರ ಸಮೂಹದೊಂದಿಗೆ ಇದ್ದವನು ಈ
ಮೋಶೆಯೇ. ಸಿನಾಯ್ ಬೆಟ್ಟದ ಬಳಿ ತನ್ನೊಂದಿಗೆ ಮಾತಾಡಿದ
ದೇವದೂತನೊಂದಿಗೆ ಅವನಿದ್ದನು. ಅಲ್ಲದೆ ಅವನು ನಮ್ಮ ಪಿತೃ
ಗಳೊಂದಿಗೆ ಇದ್ದನು. ಜೀವಕರವಾದ ಆಜ್ಞೆಗಳನ್ನು ಮೋಶೆಯು
ದೇವರಿಂದ ಸ್ವೀಕರಿಸಿಕೊಂಡು ಅವುಗಳನ್ನು ನಮಗೆ ಕೊಟ್ಟನು.

39‘‘ಆದರೆ ಮೋಶೆಗೆ ವಿಧೇಯರಾಗಲು ನಮ್ಮ ಪಿತೃಗಳಿಗೆ
ಇಷ್ಟವಿರಲಿಲ್ಲ. ಅವರು ಅವನನ್ನು ತಿರಸ್ಕರಿಸಿ, ಈಜಿಪ್ಟಿಗೆ ಹಿಂತಿ
ರುಗಬೇಕೆಂದಿದ್ದರು. 40ನಮ್ಮ ಪಿತೃಗಳು ಆರೋನನಿಗೆ,
‘ಮೋಶೆಯು ನಮ್ಮನ್ನು ಈಜಿಪ್ಟ್ ದೇಶದಿಂದ ಕರೆದುಕೊಂಡು
ಬಂದನು. ಆದರೆ ಅವನಿಗೆ ಏನಾಯಿತೋ ನಮಗೆ ಗೊತ್ತಿಲ್ಲ.

---

**ನೀನು ... ಕೊಲ್ಲುವೆಯಾ** ವಿಮೋಚನ. 2:14

**ನಾನೇ ... ದೇವರು** ವಿಮೋಚನ 3:6.

**ನಿನ್ನ ... ಕಳುಹಿಸುತ್ತಿದ್ದೇನೆ** ವಿಮೋಚನಕಾಂಡ 3:5-10

**ದೇವರು ... ಇರುವನು** ದ್ವರ್ಮೋಪದೇಶ. 18:15.

ಆದ್ದರಿಂದ ನಮ್ಮ ಮುಂದೆ ಹೋಗಲು ಮತ್ತು ನಮ್ಮನ್ನು
ನಡೆಸಲು ಕೆಲವು ದೇವರುಗಳನ್ನು ಮಾಡು’ * ಎಂದರು. 41ಆದ್ದ
ರಿಂದ ಆ ಜನರು ಕರುವಿನಾಕೃತಿಯಲ್ಲಿ ಒಂದು ವಿಗ್ರಹವನ್ನು
ಮಾಡಿ, ಅದಕ್ಕೆ ಯಜ್ಞಗಳನ್ನು ಅರ್ಪಿಸಿದರು. ಆ ಜನರು ತಮ್ಮ
ಕೈಯಾರೆ ಮಾಡಿಕೊಂಡ ವಿಗ್ರಹದ ವಿಷಯದಲ್ಲಿ ಬಹು
ಸಂತೋಷಪಟ್ಟರು! 42ಆದರೆ ದೇವರು ಅವರಿಗೆ ವಿರೋಧ
ವಾದನು. ಆಕಾಶದ ಸುಳ್ಳುದೇವರುಗಳ ಗಣವನ್ನು ಪೂಜಿಸದಂತೆ
ಅವರನ್ನು ತಡೆಯಲು ತಾನು ಮಾಡುತ್ತಿದ್ದ ಪ್ರಯತ್ನವನ್ನು
ದೇವರು ನಿಲ್ಲಿಸಿದನು. ಇದರ ಬಗ್ಗೆ ಪ್ರವಾದಿಗಳ ಪುಸ್ತಕದಲ್ಲಿ
ಹೀಗೆ ಬರೆದಿದೆ: ದೇವರು ಇಂತೆನ್ನುತ್ತಾನೆ:

‘ಯೆಹೂದ್ಯಜನರಾದ ನೀವು ನಲವತ್ತು ವರ್ಷಗಳ
ಕಾಲ ಮರಳುಗಾಡಿನಲ್ಲಿದ್ದಾಗ ನನಗೆ ಯಜ್ಞ
ಗಳನ್ನು ಅರ್ಪಿಸಲಿಲ್ಲ; ಕಾಣಿಕೆಗಳನ್ನು ತರಲಿಲ್ಲ.
43 ನೀವು ನಿಮ್ಮೊಂದಿಗೆ ಮೊಲಾಕ್‌ನ (ಸುಳ್ಳು
ದೇವರ) ಗುಡಾರವನ್ನು ಮತ್ತು ನಿಮ್ಮ ದೇವ
ರಾದ ರೊಂಫಾ ನಕ್ಷತ್ರರೂಪವನ್ನು ಹೊತ್ತು
ಕೊಂಡು ಹೋದಿರಿ. ಆರಾಧಿಸುವುದಕ್ಕಾಗಿ
ನೀವು ಮಾಡಿಕೊಂಡ ವಿಗ್ರಹಗಳೇ ಇವು. ಆದ್ದ
ರಿಂದ ನಾನು ನಿಮ್ಮನ್ನು ಬಾಬಿಲೋನಿನ ಆಚೆಗೆ
ಕಳುಹಿಸಿಬಿಡುವೆನು.’

*ಆಮೋಸ 5:25-27*

44“ದೇವರು ನಮ್ಮ ಪಿತೃಗಳೊಂದಿಗೆ ಯಾವ ಗುಡಾರದಲ್ಲಿ
ಮಾತಾಡಿದ್ದನೋ ಆ ಗುಡಾರವು* ಈ ಯೆಹೂದ್ಯರೊಂದಿಗೆ
ಮರಳುಗಾಡಿನಲ್ಲಿತ್ತು. ಈ ಗುಡಾರವನ್ನು ನಿರ್ಮಿಸುವ ಬಗೆ
ಯನ್ನು ದೇವರು ಮೋಶೆಗೆ ತಿಳಿಸಿಕೊಟ್ಟನು. ದೇವರು ತನಗೆ
ತೋರಿಸಿದ ಆಕಾರದಂತೆಯೇ ಮೋಶೆಯು ಅದನ್ನು ನಿರ್ಮಿಸಿ
ದನು. 45ತರುವಾಯ ಇತರ ಜನಾಂಗಗಳ ನಾಡುಗಳನ್ನು
ವಶಪಡಿಸಿಕೊಳ್ಳುವುದಕ್ಕಾಗಿ ಯೆಹೋಶುವನು ನಮ್ಮ ಪಿತೃ
ಗಳನ್ನು ಮುನ್ನಡೆಸಿದನು. ನಮ್ಮ ಜನರು ಆ ದೇಶದೊಳಗೆ
ಹೋದಾಗ, ದೇವರು ಇತರ ಜನರನ್ನು ಅಲ್ಲಿಂದ ಹೊರಡಿಸಿ
ಬಿಟ್ಟನು. ನಮ್ಮ ಜನರು ಆ ಹೊಸ ದೇಶದೊಳಗೆ ಹೋದಾಗ
ಈ ಗುಡಾರವನ್ನು ತಮ್ಮೊಂದಿಗೆ ತೆಗೆದುಕೊಂಡು ಹೋದರು.
ನಮ್ಮ ಜನರು ಈ ಗುಡಾರವನ್ನು ತಮ್ಮ ಪಿತೃಗಳಿಂದ ಸ್ವೀಕರಿಸಿ
ಕೊಂಡು ದಾವೀದನ ಕಾಲದವರೆಗೂ ಅದನ್ನು ಇಟ್ಟುಕೊಂಡಿ
ದ್ದರು. 46ದೇವರು ದಾವೀದನನ್ನು ಬಹಳವಾಗಿ ಮೆಚ್ಚಿ
ಕೊಂಡನು. ‘ಯಾಕೋಬನ ದೇವರಾದ ನಿನಗಾಗಿ ಒಂದು
ಆಲಯವನ್ನು ಕಟ್ಟಲು ನನಗೆ ಅವಕಾಶ ಕೊಡು’ ಎಂದು
ದಾವೀದನು ದೇವರನ್ನು ಕೇಳಿಕೊಂಡನು. 47ಆದರೆ
ದೇವಾಲಯವನ್ನು ಕಟ್ಟಿದ್ದು (ದಾವೀದನ ಮಗನಾದ)
ಸೊಲೊಮೋನನೇ.

48“ಆದರೆ ಮನುಷ್ಯರು ತಮ್ಮ ಕೈಯಾರೆ ನಿರ್ಮಿಸಿದ
ಮನೆಗಳಲ್ಲಿ ಮಹೋನ್ನತನು(ದೇವರು) ವಾಸಿಸುವುದಿಲ್ಲ.
ಪ್ರವಾದಿಯು ಹೀಗೆ ಬರೆದಿದ್ದಾನೆ:

‘ಪ್ರಭುವು ಇಂತೆನ್ನುತ್ತಾನೆ, ಪರಲೋಕವು ನನ್ನ
ಸಿಂಹಾಸನ.
49 ಭೂಮಿಯು ನನ್ನ ಪಾದಪೀಠ. ನೀವು ನನ
ಗೋಸ್ಕರ ಯಾವ ಬಗೆಯ ಮನೆಯನ್ನು
ಕಟ್ಟಬಲ್ಲಿರಿ? ನಾನು ವಿಶ್ರಮಿಸಿಕೊಳ್ಳತಕ್ಕ
ಸ್ಥಳವೇ ಇಲ್ಲ!
50 ನೆನಪಿರಲಿ, ಈ ವಸ್ತುಗಳನ್ನೆಲ್ಲ ಮಾಡಿದವನು
ನಾನೇ!’’

*ಯೆಶಾಯ 66:1-2*

51ಸ್ತೆಫನನು ಮಾತನ್ನು ಮುಂದುವರಿಸಿದನು: “ಮೊಂಡ
ರಾದ ಯೆಹೂದ್ಯನಾಯಕರೇ! ನೀವು ನಿಮ್ಮ ಹೃದಯಗಳನ್ನು
ದೇವರಿಗೆ ಕೊಟ್ಟಿಲ್ಲ. ನೀವು ಆತನಿಗೆ ಕಿವಿಗೊಡುವುದಿಲ್ಲ.
ಪವಿತ್ರಾತ್ಮನು ನಿಮಗೆ ತಿಳಿಸಲು ಪ್ರಯತ್ನಿಸುತ್ತಿರುವ ವಿಷಯಕ್ಕೆ
ನೀವು ಯಾವಾಗಲೂ ವಿರೋಧಿಗಳಾಗಿದ್ದೀರಿ. ನಿಮ್ಮ ಪಿತೃಗಳು
ಹೀಗೆಯೇ ಮಾಡಿದರು ಮತ್ತು ನೀವೂ ಅವರಂತೆಯೇ ಇದ್ದೀರಿ!
52ಜೀವಿಸಿದ್ದ ಪ್ರವಾದಿಗಳಲ್ಲಿ ಪ್ರತಿಯೊಬ್ಬರನ್ನೂ ನಿಮ್ಮ ಪಿತೃಗಳು
ಹಿಂಸಿಸಿದರು. ನೀತಿವಂತನೊಬ್ಬನು (ಕ್ರಿಸ್ತನು) ಬರುತ್ತಾನೆಂದು
ಬಹುಕಾಲದ ಹಿಂದೆಯೇ ಆ ಪ್ರವಾದಿಗಳು ತಿಳಿಸಿದ್ದರು. ಆದರೆ
ನಿಮ್ಮ ಪಿತೃಗಳು ಆ ಪ್ರವಾದಿಗಳನ್ನು ಕೊಂದುಹಾಕಿದರು. ಈಗ
ನೀವು ನೀತಿವಂತನಿಗೆ ವಿರುದ್ಧವಾಗಿ ತಿರುಗಿ ಆತನನ್ನು
ಕೊಂದುಹಾಕಿದಿರಿ. 53ದೇವರು ತನ್ನ ದೂತರ ಮೂಲಕ ಕೊಟ್ಟ
ಮೋಶೆಯ ಧರ್ಮಶಾಸ್ತ್ರವನ್ನು ಪಡೆದುಕೊಂಡ ನೀವೇ ಅದಕ್ಕೆ
ವಿಧೇಯರಾಗುವುದಿಲ್ಲ!’’

## ಸ್ತೆಫನನು ಕೊಲ್ಲಲ್ಪಟ್ಟನು

54ಸ್ತೆಫನನ ಈ ಮಾತುಗಳನ್ನು ಕೇಳಿದ ಆ ಯೆಹೂದ್ಯ
ನಾಯಕರು ಬಹಳ ಕೋಪಗೊಂಡರು. ಅವರು ರೋಷದಿಂದ
ಸ್ತೆಫನನ ಮೇಲೆ ಹಲ್ಲು ಕಡಿದರು. 55ಆದರೆ ಸ್ತೆಫನನು ಪವಿ
ತ್ರಾತ್ಮಭರಿತನಾಗಿದ್ದನು. ಅವನು ಆಕಾಶದತ್ತ ಕಣ್ಣೆತ್ತಿ ನೋಡಿ,
ದೇವರ ಮಹಿಮೆಯನ್ನೂ ಯೇಸುವು ದೇವರ ಬಲಗಡೆಯಲ್ಲಿ
ನಿಂತಿರುವುದನ್ನೂ ಕಂಡು, 56“ಇಗೋ, ಪರಲೋಕವು
ತೆರೆದಿರುವುದನ್ನೂ ಮನುಷ್ಯಕುಮಾರನು (ಯೇಸು)ದೇವರ
ಬಲಗಡೆಯಲ್ಲಿ ನಿಂತಿರುವುದನ್ನೂ ನಾನು ನೋಡುತ್ತಿದ್ದೇನೆ!’’
ಎಂದು ಹೇಳಿದನು.

57ಆಗ ಯೆಹೂದ್ಯನಾಯಕರೆಲ್ಲ ಗಟ್ಟಿಯಾಗಿ ಕೂಗಿ, ತಮ್ಮ
ಕಿವಿಗಳನ್ನು ಕೈಗಳಿಂದ ಮುಚ್ಚಿಕೊಂಡರು. ಅವರೆಲ್ಲರು ಸ್ತೆಫನನ
ಬಳಿಗೆ ಒಟ್ಟಾಗಿ ಓಡಿಬಂದು, 58ಅವನನ್ನು ಪಟ್ಟಣದಿಂದ
ಹೊರಗೆ ಎಳೆದೊಯ್ದು, ಅವನು ಸಾಯುವವರೆಗೂ ಅವನ
ಮೇಲೆ ಕಲ್ಲುಗಳನ್ನು ಎಸೆದರು. ಸ್ತೆಫನನ ವಿರುದ್ಧವಾಗಿ ಸುಳ್ಳು
ಹೇಳಿದ ಜನರು ತಮ್ಮ ಮೇಲಂಗಿಗಳನ್ನು ಬಿಚ್ಚಿ ಸೌಲನೆಂಬ
ಯುವಕನಿಗೆ ಕೊಟ್ಟು, 59ಸ್ತೆಫನನಿಗೆ ಕಲ್ಲುಗಳನ್ನು ಎಸೆದರು.
ಆದರೆ ಸ್ತೆಫನನು ಪ್ರಾರ್ಥಿಸುತ್ತಾ, “ಪ್ರಭುವಾದ ಯೇಸುವೇ,

---

**ಮೋಶೆಯು … ಮಾಡು** ವಿಮೋಚನ.32:1.

**ಗುಡಾರ** ಯಜ್ಞವೇದಿಕೆಯನ್ನು ಹೊಂದಿರುವ ದೇವಾಲಯದಂತೆ ಈ ಗುಡಾರವನ್ನು ಆರಾಧನಾ ಸ್ಥಳವನ್ನಾಗಿ ಉಪಯೋಗಿಸಲಾಗುತ್ತಿತ್ತು. ಇದನ್ನು ಸ್ಥಳದಿಂದ ಸ್ಥಳಕ್ಕೆ ತೆಗೆದುಕೊಂಡು ಹೋಗಬಹುದಾಗಿತ್ತು.

ನನ್ನ ಆತ್ಮವನ್ನು ಸ್ವೀಕರಿಸಿಕೋ!'' ಎಂದನು. 60ಅವನು ಮೊಣ
ಕಾಲೂರಿ, ''ಪ್ರಭುವೇ, ಈ ಪಾಪವನ್ನು ಇವರ ಮೇಲೆ ಹೊರಿಸ
ಬೇಡ!'' ಎಂದು ಧ್ವನಿಯೆತ್ತಿ ಹೇಳುತ್ತಾ ಪ್ರಾಣಬಿಟ್ಟನು.

### ವಿಶ್ವಾಸಿಗಳಿಗೆ ಹಿಂಸೆ

8 ಸ್ತೆಫನನ ಕೊಲೆಗೆ ಸೌಲನ ಸಮ್ಮತಿಯಿತ್ತು. 2-3ಕೆಲವು
ಭಕ್ತರು ಸ್ತೆಫನನನ್ನು ಸಮಾಧಿ ಮಾಡಿದರು. ಅವರು ಅವನಿ
ಗೋಸ್ಕರ ಬಹಳವಾಗಿ ಗೋಳಾಡಿದರು. ಜೆರುಸಲೇಮಿನಲ್ಲಿದ್ದ
ವಿಶ್ವಾಸಿಗಳ ಸಮುದಾಯವನ್ನು ಹಿಂಸಿಸಲು ಯೆಹೂದ್ಯರು
ಅಂದೇ ಆರಂಭಿಸಿ ಅವರನ್ನು ಬಹಳವಾಗಿ ಸಂಕಟಪಡಿಸಿದರು.
ಆ ಸಭೆಯನ್ನು ನಾಶಮಾಡಲು ಸೌಲನು ಮನೆಗಳಿಗೆ ನುಗ್ಗಿ
ಗಂಡಸರನ್ನೂ ಹೆಂಗಸರನ್ನೂ ಎಳೆದೊಯ್ದು ಸೆರೆಮನೆಗೆ ಹಾಕಿ
ದನು. ವಿಶ್ವಾಸಿಗಳೆಲ್ಲಾ ಜೆರುಸಲೇಮನ್ನು ಬಿಟ್ಟುಹೋದರು.
ಅಪೊಸ್ತಲರು ಮಾತ್ರ ಅಲ್ಲೇ ಇದ್ದರು. ವಿಶ್ವಾಸಿಗಳು ಜುದೇಯ
ಮತ್ತು ಸಮಾರ್ಯದ ಬೇರೆಬೇರೆ ಸ್ಥಳಗಳಿಗೆ ಹೊರಟು
ಹೋದರು. 4ವಿಶ್ವಾಸಿಗಳು ಎಲ್ಲೆಲ್ಲಿಯೂ ಚದರಿಹೋದರು.
ವಿಶ್ವಾಸಿಗಳು ತಾವು ಹೋದ ಪ್ರತಿಯೊಂದು ಸ್ಥಳದಲ್ಲಿಯೂ
ಜನರಿಗೆ ಸುವಾರ್ತೆಯನ್ನು ತಿಳಿಸಿದರು.

### ಸಮಾರ್ಯದಲ್ಲಿ ಫಿಲಿಪ್ಪನ ಉಪದೇಶ

5ಫಿಲಿಪ್ಪನು ಸಮಾರ್ಯ ಪಟ್ಟಣಕ್ಕೆ ಹೋಗಿ ಕ್ರಿಸ್ತನ ಬಗ್ಗೆ
ಉಪದೇಶಿಸಿದನು. 6ಫಿಲಿಪ್ಪನು ಹೇಳುವುದನ್ನು ಅಲ್ಲಿನ ಜನರು
ಕೇಳಿದರು. ಅವನು ಮಾಡುತ್ತಿದ್ದ ಅದ್ಭುತಕಾರ್ಯಗಳನ್ನು
ನೋಡಿದರು. ಅವನು ಹೇಳಿದ ಸಂಗತಿಗಳನ್ನು ಗಮನವಿಟ್ಟು
ಕೇಳಿದರು. 7ಈ ಜನರಲ್ಲಿ ಅನೇಕರು ದೆವ್ವಗಳಿಂದ ಪೀಡಿತ
ರಾಗಿದ್ದರು. ಫಿಲಿಪ್ಪನು ಆ ದೆವ್ವಗಳನ್ನು ಅವರೊಳಗಿಂದ ಹೊರಡಿ
ಸಿದಾಗ ಅವು ಅಬ್ಬರಿಸುತ್ತಾ ಹೊರಬಂದವು. ಅಲ್ಲಿದ್ದ ಅನೇಕ
ಬಲಹೀನರನ್ನು, ಕುಂಟರನ್ನು ಸಹ ಫಿಲಿಪ್ಪನು ಗುಣಪಡಿಸಿದನು.
8ಇದರಿಂದಾಗಿ ಆ ಪಟ್ಟಣದಲ್ಲಿದ್ದ ಜನರು ಬಹು ಸಂತೋಷ
ಗೊಂಡರು.

9ಆದರೆ ಆ ಪಟ್ಟಣದಲ್ಲಿ ಸಿಮೋನ ಎಂಬ ಒಬ್ಬನಿದ್ದನು.
ಫಿಲಿಪ್ಪನು ಅಲ್ಲಿಗೆ ಬರುವುದಕ್ಕಿಂತ ಮೊದಲಿನಿಂದಲೂ
ಸಿಮೋನನು ಮಂತ್ರತಂತ್ರಗಳನ್ನು ಮಾಡುತ್ತಿದ್ದನು. ಅವನು ತನ್ನ
ತಂತ್ರಗಳಿಂದ ಸಮಾರ್ಯದ ಜನರೆಲ್ಲರನ್ನು ವಿಸ್ಮಯಗೊಳಿಸಿ
ದ್ದನು. ಸಿಮೋನನು ತನ್ನನ್ನು ಮಹಾವ್ಯಕ್ತಿಯೆಂದು ಹೇಳಿ
ಕೊಂಡು ಜಂಭಪಡುತ್ತಿದ್ದನು. 10ಎಲ್ಲಾ ಜನರು ಅಂದರೆ ಕನಿಷ್ಠ
ರಾದವರು ಮತ್ತು ಅತಿಮುಖ್ಯರಾದವರು ಸಿಮೋನನು ಹೇಳಿದ
ಸಂಗತಿಗಳನ್ನು ನಂಬಿದ್ದರು. ''ಈ ಮನುಷ್ಯನಲ್ಲಿ 'ಮಹಾಶಕ್ತಿ'
ಎಂಬ ದೇವರ ಶಕ್ತಿಯಿದೆ!'' ಎಂದು ಜನರು ಅವನ ಬಗ್ಗೆ ಹೇಳು
ತ್ತಿದ್ದರು. 11ಸಿಮೋನನು ತನ್ನ ಮಂತ್ರತಂತ್ರಗಳಿಂದ ಜನರನ್ನು
ಬಹುಕಾಲದಿಂದಲೂ ವಿಸ್ಮಯಗೊಳಿಸಿದ್ದರಿಂದ ಜನರು ಅವನ
ಹಿಂಬಾಲಕರಾಗಿದ್ದರು. 12ಆದರೆ ಫಿಲಿಪ್ಪನು ದೇವರ ರಾಜ್ಯದ
ಬಗ್ಗೆ ಮತ್ತು ಯೇಸು ಕ್ರಿಸ್ತನ ಶಕ್ತಿಯ ಬಗ್ಗೆ ಜನರಿಗೆ ಸುವಾರ್ತೆ
ಯನ್ನು ಹೇಳಿದನು. ಗಂಡಸರು ಮತ್ತು ಹೆಂಗಸರು ಫಿಲಿಪ್ಪನು
ಹೇಳಿದ್ದನ್ನು ನಂಬಿ ದೀಕ್ಷಾಸ್ನಾನ ಮಾಡಿಸಿಕೊಂಡರು.
13ಸಿಮೋನನು ಸಹ ನಂಬಿ ದೀಕ್ಷಾಸ್ನಾನ ಮಾಡಿಸಿಕೊಂಡನು.
ಸಿಮೋನನು ಫಿಲಿಪ್ಪನ ಸಮೀಪದಲ್ಲೇ ಇದ್ದನು. ಫಿಲಿಪ್ಪನು
ಮಾಡಿದ ಅದ್ಭುತಕಾರ್ಯಗಳನ್ನು ಮತ್ತು ಸೂಚಕಕಾರ್ಯ
ಗಳನ್ನು ಸಿಮೋನನು ನೋಡಿ ವಿಸ್ಮಿತನಾದನು.

14ಅಪೊಸ್ತಲರು ಇನ್ನೂ ಜೆರುಸಲೇಮಿನಲ್ಲಿದ್ದರು.
ಸಮಾರ್ಯದ ಜನರು ದೇವರ ವಾಕ್ಯವನ್ನು ಸ್ವೀಕರಿಸಿಕೊಂಡ
ರೆಂಬುದು ಅವರಿಗೆ ತಿಳಿಯಿತು. ಆದ್ದರಿಂದ ಅಪೊಸ್ತಲರು
ಪೇತ್ರ ಮತ್ತು ಯೋಹಾನರನ್ನು ಸಮಾರ್ಯದ ಜನರ ಬಳಿಗೆ
ಕಳುಹಿಸಿದರು. 15ಪೇತ್ರ ಮತ್ತು ಯೋಹಾನರು ಅಲ್ಲಿಗೆ ಬಂದು
ಸಮಾರ್ಯದ ವಿಶ್ವಾಸಿಗಳಿಗೂ ಪವಿತ್ರಾತ್ಮನು ದೊರೆಯ
ಬೇಕೆಂದು ಅವರಿಗಾಗಿ ಪ್ರಾರ್ಥಿಸಿದರು. 16ಈ ಜನರು ಪ್ರಭು
ವಾದ ಯೇಸುವಿನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಂಡಿ
ದ್ದರು. ಆದರೆ ಪವಿತ್ರಾತ್ಮನು ಅವರಲ್ಲಿ ಯಾರ ಮೇಲೆಯೂ
ಇನ್ನೂ ಇಳಿದು ಬಂದಿರಲಿಲ್ಲ. ಈ ಕಾರಣದಿಂದಲೇ ಪೇತ್ರ
ಮತ್ತು ಯೋಹಾನರು ಪ್ರಾರ್ಥಿಸಿದರು. 17ಈ ಇಬ್ಬರು ಅಪೊಸ್ತ
ಲರು ಅವರ ಮೇಲೆ ತಮ್ಮ ಕೈಗಳನ್ನಿಟ್ಟಾಗ ಅವರು ಪವಿತ್ರಾತ್ಮ
ನನ್ನು ಹೊಂದಿಕೊಂಡರು.

18ಅಪೊಸ್ತಲರು ಜನರ ಮೇಲೆ ತಮ್ಮ ಕೈಗಳನ್ನಿಟ್ಟಾಗ ಜನ
ರಿಗೆ ಪವಿತ್ರಾತ್ಮನು ದೊರೆತಿದ್ದನ್ನು ಸಿಮೋನನು ಕಂಡನು.
ಆದ್ದರಿಂದ ಸಿಮೋನನು ಅಪೊಸ್ತಲರಿಗೆ ಹಣವನ್ನು ನೀಡುತ್ತಾ,
19 ''ನಾನು ಯಾರ ಮೇಲೆ ಕೈಯಿಟ್ಟರೂ ಅವರಿಗೆ ಪವಿತ್ರಾತ್ಮನು
ದೊರೆಯುವಂಥ ಶಕ್ತಿಯನ್ನು ನನಗೆ ಕೊಡಿರಿ'' ಎಂದು
ಹೇಳಿದನು.

20ಪೇತ್ರನು ಸಿಮೋನನಿಗೆ, ''ನೀನೂ ನಾಶವಾಗು! ನಿನ್ನ
ಹಣವೂ ನಾಶವಾಗಲಿ! ದೇವರ ವರವನ್ನು ಹಣದಿಂದ ಕೊಂಡು
ಕೊಳ್ಳಬಹುದೆಂದು ನೀನು ಭಾವಿಸಿದೆ. 21ಈ ಕಾರ್ಯದಲ್ಲಿ
ನೀನು ನಮ್ಮೊಂದಿಗೆ ಭಾಗಿಯಾಗಲು ಸಾಧ್ಯವಿಲ್ಲ. ನಿನ್ನ
ಹೃದಯವು ದೇವರ ಮುಂದೆ ಸರಿಯಾಗಿಲ್ಲ. 22ನಿನ್ನ ಹೃದಯ
ವನ್ನು ಮಾರ್ಪಡಿಸಿಕೊ! ನೀನು ಮಾಡಿದ ಕೆಟ್ಟಕಾರ್ಯದಿಂದ
ತಿರುಗಿಕೊ. ಪ್ರಭುವಿನಲ್ಲಿ ಪ್ರಾರ್ಥಿಸು. ನೀನು ಹೀಗೆ ಆಲೋಚಿ
ಸಿದ್ದನ್ನು ಆತನು ಕ್ಷಮಿಸಬಹುದು. 23ನೀನು ಅತೀವ ಅಸೂಯೆ
ಯಿಂದ ತುಂಬಿದವನೂ ಪಾಪದ ಆಳ್ವಿಕೆಗೆ ಒಳಗಾದವನೂ
ಆಗಿರುವೆ'' ಎಂದು ಹೇಳಿದನು.

24 ಸಿಮೋನನು, ''ನೀವಿಬ್ಬರೂ ನನಗೋಸ್ಕರ ಪ್ರಭುವಿ
ನಲ್ಲಿ ಪ್ರಾರ್ಥಿಸಿ. ನೀವು ಹೇಳಿದ ಸಂಗತಿಗಳು ನನಗಾಗದಂತೆ
ಪ್ರಾರ್ಥಿಸಿ!'' ಎಂದು ಕೇಳಿಕೊಂಡನು.

25ಬಳಿಕ ಆ ಇಬ್ಬರು ಅಪೊಸ್ತಲರು ತಾವು ಕಂಡ
ಯೇಸುವಿನ ಕಾರ್ಯಗಳನ್ನು ಜನರಿಗೆ ತಿಳಿಸಿದರು. ಅಪೊಸ್ತ
ಲರು ಜನರಿಗೆ ಪ್ರಭುವಿನ ಸಂದೇಶವನ್ನು ತಿಳಿಸಿದರು. ಆಮೇಲೆ
ಅವರು ಜೆರುಸಲೇಮಿಗೆ ಹಿಂತಿರುಗಿದರು. ದಾರಿಯಲ್ಲಿ ಅವರು
ಸಮಾರ್ಯದ ಅನೇಕ ಊರುಗಳಿಗೆ ಹೋಗಿ ಜನರಿಗೆ ಸುವಾರ್ತೆ
ಯನ್ನು ತಿಳಿಸಿದರು.

### ಫಿಲಿಪ್ಪನು ಇಥಿಯೋಪಿಯದವನಿಗೆ ನೀಡಿದ ಉಪದೇಶ

26ಪ್ರಭುವಿನ ದೂತನೊಬ್ಬನು ಫಿಲಿಪ್ಪನಿಗೆ, ''ನೀನು ಸಿದ್ಧ
ನಾಗಿ ದಕ್ಷಿಣದ ಕಡೆಗೆ ಅಂದರೆ ಜೆರುಸಲೇಮಿನಿಂದ ಗಾಜಾಕ್ಕೆ
ಹೋಗುವ ಮರಳುಗಾಡಿನ ಮಾರ್ಗಕ್ಕೆ ಹೋಗು'' ಎಂದು
ಹೇಳಿದನು. 27ಆದ್ದರಿಂದ ಫಿಲಿಪ್ಪನು ಸಿದ್ಧನಾಗಿ ಹೊರಟನು.
ಇಥಿಯೋಪಿಯಾದ ಒಬ್ಬನನ್ನು ಅವನು ದಾರಿಯಲ್ಲಿ ಕಂಡನು.

ಈ ಮನುಷ್ಯನು ನಪುಂಸಕನಾಗಿದ್ದನು. ಇಥಿಯೋಪಿಯದವರ
ರಾಣಿಯಾದ ಕಂದಾಕೆಯ ಆಸ್ಥಾನದಲ್ಲಿ ಇವನು ಮುಖ್ಯಾಧಿ
ಕಾರಿಯಾಗಿದ್ದನು. ಹಣವನ್ನೆಲ್ಲ ನೋಡಿಕೊಳ್ಳುವ ಜವಾಬ್ದಾರಿ
ಇವನದೇ ಆಗಿತ್ತು. ಈ ಮನುಷ್ಯನು ಆರಾಧನೆಗಾಗಿ
ಜೆರುಸಲೇಮಿಗೆ ಹೋಗಿದ್ದನು. [28]ಈಗ ಅವನು ತನ್ನ ಮನೆಗೆ
ಮರಳಿ ಹೋಗುತ್ತಿದ್ದನು. ಅವನು ತನ್ನ ರಥದಲ್ಲಿ ಕುಳಿತು
ಕೊಂಡು ಯೆಶಾಯನ ಗ್ರಂಥವನ್ನು ಓದುತ್ತಿದ್ದನು. [29]ಪವಿತ್ರಾ
ತ್ಮನು ಫಿಲಿಪ್ಪನಿಗೆ, ‘‘ರಥದ ಬಳಿಗೆ ಹೋಗಿ ಅದರ ಸಮೀಪದಲ್ಲಿ
ನಿಂತುಕೋ’’ ಎಂದು ಹೇಳಿದನು. [30]ಅಂತೆಯೇ ಫಿಲಿಪ್ಪನು
ರಥದ ಬಳಿಗೆ ಹೋದನು. ಆ ಮನುಷ್ಯನು ಓದುತ್ತಿರುವುದು
ಅವನಿಗೆ ಕೇಳಿಸಿತು. ಅವನು ಯೆಶಾಯನ ಪ್ರವಾದನಾ ಗ್ರಂಥ
ವನ್ನು ಓದುತ್ತಿದ್ದನು. ಫಿಲಿಪ್ಪನು ಅವನಿಗೆ, ‘‘ನೀನು ಓದುತ್ತಿರು
ವುದು ನಿನಗೆ ಅರ್ಥವಾಗುತ್ತಿದೆಯೋ’’ ಎಂದು ಕೇಳಿದನು.

[31]ಆ ಅಧಿಕಾರಿಯು ‘‘ನಾನು ಹೇಗೆ ಅರ್ಥಮಾಡಿಕೊಳ್ಳಲಿ?
ಬೇರೆ ಯಾರಾದರೂ ನನಗೆ ಅದನ್ನು ವಿವರಿಸಬೇಕು!’’ ಎಂದು
ಉತ್ತರಕೊಟ್ಟನು. ಬಳಿಕ, ರಥವನ್ನು ಹತ್ತಿ ತನ್ನೊಂದಿಗೆ ಕುಳಿತು
ಕೊಳ್ಳುವಂತೆ ಅವನು ಫಿಲಿಪ್ಪನನ್ನು ಆಹ್ವಾನಿಸಿದನು. [32]ಅವನು
ಓದುತ್ತಿದ್ದ ಪವಿತ್ರ ಗ್ರಂಥದ ಭಾಗವು ಇಂತಿದೆ:

‘ವಧ್ಯಸ್ಥಾನಕ್ಕೆ ಒಯ್ದ ಕುರಿಯಂತೆ ಆತನಿದ್ದನು.
ಉಣ್ಣೆ ಕತ್ತರಿಸುವವನ ಮುಂದೆ ಮೌನವಾಗಿ
ರುವ ಕುರಿಯಂತೆ ಆತನಿದ್ದನು. ಆತನು ಬಾಯಿ
ತೆರೆಯಲಿಲ್ಲ.
33 ಆತನಿಗೆ ಅವಮಾನ ಮಾಡಿದರು. ಆತನಿಗೆ
ನ್ಯಾಯವು ದೊರೆಯಲಿಲ್ಲ. ಆತನ ಜೀವವನ್ನು
ಭೂಮಿಯ ಮೇಲಿನಿಂದ ತೆಗೆದುಬಿಟ್ಟರಲ್ಲಾ!
ಆತನ ಸಂತತಿಯವರ ಬಗ್ಗೆ ಯಾರು ಮಾತಾಡ
ಬಲ್ಲರು?’’

*ಯೆಶಾಯ 53:7-8*

[34]ಅವನು ಫಿಲಿಪ್ಪನಿಗೆ, ‘‘ದಯವಿಟ್ಟು ನನಗೆ ಹೇಳು, ಯಾವ
ಪ್ರವಾದಿಯ ಬಗ್ಗೆ ಇಲ್ಲಿ ಹೇಳುತ್ತಿದ್ದಾನೆ? ಅವನು ತನ್ನ ಬಗ್ಗೆ
ಹೇಳುತ್ತಿದ್ದಾನೋ ಅಥವಾ ಬೇರೊಬ್ಬನ ಬಗ್ಗೆ ಹೇಳು
ತ್ತಿದ್ದಾನೋ?’’ಎಂದು ಕೇಳಿದನು. [35]ಫಿಲಿಪ್ಪನು ಪವಿತ್ರ
ಗ್ರಂಥದ ಈ ಭಾಗದಿಂದಲೇ ಆರಂಭಿಸಿ ಯೇಸುವಿನ ವಿಷಯ
ವಾದ ಸುವಾರ್ತೆಯನ್ನು ಅವನಿಗೆ ತಿಳಿಸಿದನು.

[36]ಅವರು ಪ್ರಯಾಣ ಮಾಡುತ್ತಾ ನೀರಿದ್ದ ಒಂದು ಸ್ಥಳಕ್ಕೆ
ಬಂದಾಗ ಅಧಿಕಾರಿಯು ‘‘ಇಗೋ! ಇಲ್ಲಿ ನೀರಿದೆ! ನಾನು
ದೀಕ್ಷಾಸ್ನಾನ ತೆಗೆದುಕೊಳ್ಳಲು ಏನಾದರೂ ಅಡ್ಡಿಯಿದೆಯೇ?’’
ಎಂದು ಫಿಲಿಪ್ಪನನ್ನು ಕೇಳಿದನು. [37]* [38]ಬಳಿಕ ಅವನು
ರಥವನ್ನು ನಿಲ್ಲಿಸಬೇಕೆಂದು ಆಜ್ಞಾಪಿಸಿದನು. ಅವರಿಬ್ಬರೂ
ನೀರಿನೊಳಗೆ ಇಳಿದು ಹೋದರು. ಫಿಲಿಪ್ಪನು ಅವನಿಗೆ ದೀಕ್ಷಾ
ಸ್ನಾನ ಮಾಡಿಸಿದನು. [39]ಅವರು ನೀರಿನಿಂದ ಮೇಲಕ್ಕೆ ಬಂದಾಗ
ಪ್ರಭುವಿನ ಆತ್ಮನಿಂದ ಫಿಲಿಪ್ಪನು ಎತ್ತಲ್ಪಟ್ಟನು. ಅವನು ಫಿಲಿಪ್ಪ
ನನ್ನು ಮತ್ತೆಂದೂ ನೋಡಲಿಲ್ಲ. ಅವನು ಬಹಳ ಸಂತೋಷ
ದಿಂದ ತನ್ನ ಪ್ರಯಾಣವನ್ನು ಮುಂದುವರಿಸಿದನು. [40]ಆದರೆ
ಫಿಲಿಪ್ಪನು ಆಜೋತ್ ಎಂಬ ಪಟ್ಟಣದಲ್ಲಿ ಕಾಣಿಸಿಕೊಂಡು
ಸೆಜರೇಯ ಎಂಬ ಪಟ್ಟಣಕ್ಕೆ ಹೋದನು. ಅಲ್ಲಿಗೆ ಹೋಗುವಾಗ
ದಾರಿಯಲ್ಲಿ ಸಿಕ್ಕಿದ ಎಲ್ಲಾ ಊರುಗಳಲ್ಲಿಯೂ ಸುವಾರ್ತೆ
ಯನ್ನು ಸಾರಿದನು.

## ಸೌಲನು ಮಾರ್ಪಾಟಾದನು

9 ಪ್ರಭುವಿನ ಶಿಷ್ಯರನ್ನು ಹೆದರಿಸಲು ಮತ್ತು ಕೊಲ್ಲಲು
ಸೌಲನು ಜೆರುಸಲೇಮಿನಲ್ಲಿ ಇನ್ನೂ ಪ್ರಯತ್ನಿಸುತ್ತಿದ್ದನು.
ಆದ್ದರಿಂದ ಅವನು ಪ್ರಧಾನಯಾಜಕನ ಬಳಿಗೆ ಹೋಗಿ,
[2]ದಮಸ್ಕದಲ್ಲಿ ಕ್ರಿಸ್ತನ ಮಾರ್ಗವನ್ನು ಅನುಸರಿಸುವವರನ್ನು
ಕಂಡುಹಿಡಿದು, ಸ್ತ್ರೀಯರು ಪುರುಷರು ಎನ್ನದೆ ಅವರನ್ನು
ಬಂಧಿಸಿ ಜೆರುಸಲೇಮಿಗೆ ಎಳೆದುಕೊಂಡು ಬರಲು ತನಗೆ
ಅಧಿಕಾರ ಕೊಟ್ಟಿರುವುದಾಗಿ ದಮಸ್ಕ ಪಟ್ಟಣದ ಸಭಾಮಂದಿರ
ಗಳಿಗೆ ಪತ್ರ ಬರೆಯಬೇಕೆಂದು ಕೇಳಿಕೊಂಡನು.

[3]ಅಂತೆಯೇ ಸೌಲನು ದಮಸ್ಕಕ್ಕೆ ಹೊರಟನು. ಅವನು
ಪಟ್ಟಣದ ಸಮೀಪಕ್ಕೆ ಬಂದಾಗ, ಬಹು ಪ್ರಕಾಶಮಾನವಾದ
ಬೆಳಕೊಂದು ಆಕಾಶದಿಂದ ಇದ್ದಕ್ಕಿದ್ದಂತೆ ಅವನ ಸುತ್ತಲೂ
ಹೊಳೆಯಿತು. [4]ಸೌಲನು ನೆಲಕ್ಕೆ ಬಿದ್ದನು. ‘‘ಸೌಲನೇ,
ಸೌಲನೇ, ನೀನು ನನ್ನನ್ನೇಕೆ ಹಿಂಸಿಸುತ್ತಿರುವೆ?’’ ಎಂಬ ವಾಣಿ
ಯೊಂದು ಅವನಿಗೆ ಕೇಳಿಸಿತು.

[5]ಸೌಲನು, ‘‘ಪ್ರಭುವೇ, ನೀನು ಯಾರು?’’ ಎಂದನು.

ಆ ವಾಣಿಯು, ‘‘ನೀನು ಹಿಂಸಿಸುತ್ತಿರುವ ಯೇಸುವೇ
ನಾನು! [6]ಈಗ ಎದ್ದು ಪಟ್ಟಣದೊಳಗೆ ಹೋಗು. ನೀನು ಏನು
ಮಾಡಬೇಕೆಂಬುದನ್ನು ಅಲ್ಲಿಯ ಒಬ್ಬನು ನಿನಗೆ ತಿಳಿಸುವನು’’
ಎಂದಿತು.

[7]ಸೌಲನೊಂದಿಗೆ ಪ್ರಯಾಣ ಮಾಡುತ್ತಿದ್ದವರು ಅಲ್ಲೇ
ನಿಂತಿದ್ದರು. ಅವರು ಏನೂ ಮಾತಾಡಲಿಲ್ಲ. ಆ ಜನರು
ವಾಣಿಯನ್ನು ಕೇಳಿದರು, ಆದರೆ ಅವರು ಯಾರನ್ನೂ ನೋಡ
ಲಿಲ್ಲ.

[8]ಸೌಲನು ನೆಲದ ಮೇಲಿಂದ ಎದ್ದು ಕಣ್ಣುಗಳನ್ನು ತೆರೆದನು.
ಆದರೆ ಅವನಿಗೆ ಏನೂ ಕಾಣಲಿಲ್ಲ. ಆದ್ದರಿಂದ
ಸೌಲನೊಂದಿಗಿದ್ದ ಜನರು ಅವನನ್ನು ಕೈಹಿಡಿದು ದಮಸ್ಕಕ್ಕೆ
ಕರೆದೊಯ್ದರು. [9]ಮೂರು ದಿನಗಳವರೆಗೆ ಸೌಲನಿಗೆ ಏನೂ
ಕಾಣಲಿಲ್ಲ. ಅವನು ಊಟವನ್ನೂ ಮಾಡಲಿಲ್ಲ, ನೀರನ್ನೂ
ಕುಡಿಯಲಿಲ್ಲ.

[10]ದಮಸ್ಕದಲ್ಲಿ ಯೇಸುವಿನ ಶಿಷ್ಯನೊಬ್ಬನಿದ್ದನು. ಅವನ
ಹೆಸರು ಅನನೀಯ. ಪ್ರಭುವು ಅನನೀಯನನ್ನು ದರ್ಶನದಲ್ಲಿ
‘‘ಅನನೀಯನೇ’’ ಎಂದು ಕರೆದನು.

ಅನನೀಯನು, ‘‘ಪ್ರಭುವೇ, ಇಗೋ ಇದ್ದೇನೆ’’ ಎಂದು
ಉತ್ತರಕೊಟ್ಟನು.

[11]ಪ್ರಭುವು ಅನನೀಯನಿಗೆ, ‘‘ಎದ್ದು ‘ನೇರಬೀದಿ’ ಎಂಬ
ಬೀದಿಗೆ ಹೋಗು. ಅಲ್ಲಿರುವ ಯೂದನ* ಮನೆಯನ್ನು ಕಂಡು

---

**ವಚನ 37** ಅಪೊಸ್ತಲರ ಕಾರ್ಯಗಳ ಕೆಲವು ಪ್ರತಿಗಳಲ್ಲಿ 37ನೇ ವಚನವನ್ನು ಸೇರಿಸಲಾಗಿದೆ. ‘‘ಫಿಲಿಪ್ಪನು, ‘ನೀನು ಪೂರ್ಣಹೃದಯದಿಂದ ನಂಬುವುದಾದರೆ ಅಡ್ಡಿಯಿಲ್ಲ’ ಎಂದು ಉತ್ತರಿಸಿದನು. ಅದಕ್ಕೆ ಅಧಿಕಾರಿಯು, ‘ಯೇಸು ಕ್ರಿಸ್ತನೇ ದೇವರ ಮಗನೆಂದು ನಾನು ನಂಬುತ್ತೇನೆ’’’ ಎಂದನು.

**ಯೂದ** ಇವನು ಅಪೊಸ್ತಲ ಯೂದನಲ್ಲ.

ಕೊಂಡು ತಾರ್ಸಸ್ ಪಟ್ಟಣದ ಸೌಲನ ಬಗ್ಗೆ ವಿಚಾರಿಸು. ಈಗ
ಅವನು ಅಲ್ಲಿ ಪ್ರಾರ್ಥಿಸುತ್ತಿದ್ದಾನೆ. 12 ಸೌಲನು ಒಂದು ದರ್ಶನ
ವನ್ನು ಕಂಡಿದ್ದಾನೆ. ಅನನೀಯನೆಂಬ ಒಬ್ಬನು ಅವನ ಬಳಿಗೆ
ಬಂದು ತನ್ನ ಕೈಗಳನ್ನು ಅವನ ಮೇಲಿಡುವನು. ಆಗ ಅವನಿಗೆ
ಮತ್ತೆ ದೃಷ್ಟಿ ಬರುವುದು. ಇದೇ ಆ ದರ್ಶನ'' ಎಂದು
ಹೇಳಿದನು.

13 ಆದರೆ ಅನನೀಯನು, ''ಪ್ರಭುವೇ, ಜೆರುಸಲೇಮಿ
ನಲ್ಲಿರುವ ನಿನ್ನ ಪವಿತ್ರ ಜನರಿಗೆ ಈ ಮನುಷ್ಯನು ಮಾಡಿದ ಅನೇಕ
ಕೆಟ್ಟ ಕೃತ್ಯಗಳ ಬಗ್ಗೆ ಜನರು ನನಗೆ ಹೇಳಿದ್ದಾರೆ. 14 ಈಗ ಅವನು
ದಮಸ್ಕಕ್ಕೂ ಬಂದಿದ್ದಾನೆ. ನಿನ್ನಲ್ಲಿ ನಂಬಿಕೆ ಇಡುವ*
ಜನರೆಲ್ಲರನ್ನು ಬಂಧಿಸುವ ಅಧಿಕಾರವನ್ನು ಮಹಾಯಾಜಕರು
ಅವನಿಗೆ ಕೊಟ್ಟಿದ್ದಾರೆ'' ಎಂದು ಹೇಳಿದನು.

15 ಆದರೆ ಪ್ರಭುವು ಅನನೀಯನಿಗೆ, ''ಹೋಗು! ಮುಖ್ಯ
ವಾದ ಕೆಲಸಕ್ಕಾಗಿ ನಾನು ಸೌಲನನ್ನು ಆರಿಸಿಕೊಂಡಿದ್ದೇನೆ.
ಅವನು ನನ್ನ ಬಗ್ಗೆ ರಾಜರುಗಳಿಗೂ ಯೆಹೂದ್ಯರಿಗೂ ಮತ್ತು
ಇತರ ಜನಾಂಗಗಳಿಗೂ ತಿಳಿಸಬೇಕಾಗಿದೆ. 16 ಅವನು ನನ್ನ
ಹೆಸರಿನ ನಿಮಿತ್ತ ಅನುಭವಿಸಬೇಕಾಗಿರುವ ಹಿಂಸೆಯನ್ನು ನಾನೇ
ಅವನಿಗೆ ತೋರಿಸಿಕೊಡುವೆನು'' ಎಂದು ಹೇಳಿದನು.

17 ಆದ್ದರಿಂದ ಅನನೀಯನು ಅಲ್ಲಿಂದ ಹೊರಟು ಯೂದನ
ಮನೆಗೆ ಹೋದನು. ಅವನು ಸೌಲನ ಮೇಲೆ ತನ್ನ ಕೈಗಳನ್ನಿಟ್ಟು,
''ಸೌಲನೇ, ನನ್ನ ಸಹೋದರನೇ, ಪ್ರಭುವಾದ ಯೇಸು ನನ್ನನ್ನು
ಕಳುಹಿಸಿದ್ದಾನೆ. ನೀನು ಇಲ್ಲಿಗೆ ಬರುವಾಗ ದಾರಿಯಲ್ಲಿ ಕಂಡದ್ದು
ಆತನನ್ನೇ. ನೀನು ಮತ್ತೆ ದೃಷ್ಟಿಪಡೆಯಬೇಕೆಂತಲೂ ಪವಿತ್ರಾತ್ಮ
ಭರಿತನಾಗಬೇಕೆಂತಲೂ ಯೇಸು ನನ್ನನ್ನು ಕಳುಹಿಸಿದನು''
ಎಂದು ಹೇಳಿದನು. 18 ಇದ್ದಕ್ಕಿದ್ದಂತೆ, ಮೀನಿನ ಪರೆಯಂತಿದ್ದ
ಏನೋ ಒಂದು ಸೌಲನ ಕಣ್ಣುಗಳಿಂದ ಕಳಚಿಬಿದ್ದಿತು. ಸೌಲನಿಗೆ
ಮತ್ತೆ ಕಣ್ಣು ಕಾಣತೊಡಗಿತು! ಸೌಲನು ಮೇಲೆದ್ದು, ದೀಕ್ಷಾ
ಸ್ನಾನ ಮಾಡಿಸಿಕೊಂಡನು. 19 ಬಳಿಕ ಅವನು ಊಟಮಾಡಿ
ಚೇತರಿಸಿಕೊಂಡನು.

## ಸೌಲನು ದಮಸ್ಕದಲ್ಲಿ ಬೋಧಿಸುವನು

ಸೌಲನು ದಮಸ್ಕದಲ್ಲಿ ಯೇಸುವಿನ ಶಿಷ್ಯರೊಂದಿಗೆ ಕೆಲವು
ದಿನಗಳವರೆಗೆ ಇದ್ದನು. 20 ಅವನು ತಡಮಾಡದೆ ಸಭಾಮಂದಿರ
ಗಳಿಗೆ ಹೋಗಿ 'ಯೇಸುವೇ ದೇವಕುಮಾರನೆಂದು ಬೋಧಿಸ
ತೊಡಗಿದನು.

21 ಸೌಲನ ಮಾತನ್ನು ಕೇಳಿದ ಜನರೆಲ್ಲರೂ ವಿಸ್ಮಯ
ಗೊಂಡು, ''ಜೆರುಸಲೇಮಿನಲ್ಲಿದ್ದವನು ಈ ಮನುಷ್ಯನೇ. ಈ
ಹೆಸರಿನಲ್ಲಿ (ಯೇಸುವಿನ) ನಂಬಿಕೆ ಇಡುವ ಜನರನ್ನು ನಾಶ
ಮಾಡಲು ಇವನು ಪ್ರಯತ್ನಿಸುತ್ತಿದ್ದನು! ಯೇಸುವಿನ ಶಿಷ್ಯರನ್ನು
ಬಂಧಿಸಿ ಜೆರುಸಲೇಮಿನಲ್ಲಿರುವ ಮಹಾಯಾಜಕರ ಬಳಿಗೆ
ಕೊಂಡೊಯ್ಯಲು ಇವನು ಇಲ್ಲಿಗೂ ಬಂದಿದ್ದಾನೆ'' ಎಂದು
ಹೇಳಿದರು.

22 ಆದರೆ ಸೌಲನು ಹೆಚ್ಚುಹೆಚ್ಚು ಪ್ರಬಲವಾಗಿ ಯೇಸುವೇ
ಕ್ರಿಸ್ತನೆಂದು ನಿರೂಪಿಸಿದನು. ಅವನ ಆಧಾರಗಳು ಬಹು
ಬಲವಾಗಿದ್ದ ಕಾರಣ ದಮಸ್ಕದ ಯೆಹೂದ್ಯರು ಅವನೊಂದಿಗೆ
ವಾದಮಾಡಲಿಲ್ಲ.

## ಸೌಲನು ಯೆಹೂದ್ಯರಿಂದ ತಪ್ಪಿಸಿಕೊಳ್ಳುವನು

23 ಅನೇಕ ದಿನಗಳಾದ ಮೇಲೆ, ಯೆಹೂದ್ಯರು ಸೌಲನನ್ನು
ಕೊಲ್ಲಲು ಸಂಚುಮಾಡಿದರು. 24 ಯೆಹೂದ್ಯರು ಸೌಲನಿಗಾಗಿ
ಎದುರುನೋಡುತ್ತಾ ನಗರದ ದ್ವಾರಗಳನ್ನು ಹಗಲು ರಾತ್ರಿ
ಕಾಯುತ್ತಿದ್ದರು. ಆದರೆ ಅವರ ಯೋಜನೆ ಸೌಲನಿಗೆ ತಿಳಿ
ಯಿತು.

25 ಒಂದು ರಾತ್ರಿ, ಸೌಲನ ಕೆಲವು ಶಿಷ್ಯರು ಅವನನ್ನು
ಪಟ್ಟಣದಿಂದ ಹೊರಗೆ ಕಳುಹಿಸುವುದಕ್ಕಾಗಿ ಅವನನ್ನು ಒಂದು
ಬುಟ್ಟಿಯಲ್ಲಿ ಕುಳ್ಳಿರಿಸಿ, ನಗರದ ಕೋಟೆಯ ಸುದಿನ ಮೂಲಕ
ಅವನನ್ನು ಕೆಳಗಿಳಿಸಿದರು.

## ಜೆರುಸಲೇಮಿನಲ್ಲಿ ಸೌಲನು

26 ಬಳಿಕ ಸೌಲನು ಜೆರುಸಲೇಮಿಗೆ ಹೋದನು. ಅವನು
ವಿಶ್ವಾಸಿಗಳ ಸಮುದಾಯವನ್ನು ಸೇರಿಕೊಳ್ಳಲು ಪ್ರಯತ್ನಿಸಿದನು.
ಆದರೆ ಅವರೆಲ್ಲರೂ ಅವನಿಗೆ ಭಯಪಟ್ಟರು. ಸೌಲನು ನಿಜ
ವಾಗಿ ಯೇಸುವಿನ ಶಿಷ್ಯನೆಂದು ಅವರು ನಂಬಲಿಲ್ಲ. 27 ಆದರೆ
ಬಾರ್ನಬನು ಸೌಲನನ್ನು ಸ್ವೀಕರಿಸಿಕೊಂಡು ಅಪೊಸ್ತಲರ ಬಳಿಗೆ
ಕರೆದುಕೊಂಡು ಬಂದನು. ಸೌಲನು ದಮಸ್ಕದ ದಾರಿಯಲ್ಲಿ
ಪ್ರಭುವನ್ನು ನೋಡಿರುವುದನ್ನೂ ಪ್ರಭುವು ಸೌಲನೊಂದಿಗೆ
ಮಾತಾಡಿದ್ದನ್ನೂ ಬಾರ್ನಬನು ಅವರಿಗೆ ವಿವರಿಸಿದನು. ಅಲ್ಲದೆ
ಸೌಲನು ದಮಸ್ಕದಲ್ಲಿ ಜನರಿಗೆ ಪ್ರಭುವಿನ ವಿಷಯದಲ್ಲಿ
ನಿರ್ಭಯವಾಗಿ ಬೋಧಿಸಿದ್ದನ್ನೂ ಅವರಿಗೆ ತಿಳಿಸಿದನು.

28 ಅಂದಿನಿಂದ ಸೌಲನು ವಿಶ್ವಾಸಿಗಳೊಂದಿಗೆ ಇದ್ದನು.
ಅವನು ಪ್ರಭುವಿನ ವಿಷಯವನ್ನು ಜೆರುಸಲೇಮಿನಲ್ಲಿ ನಿರ್ಭಯ
ವಾಗಿ ಬೋಧಿಸಿದನು. 29 ಗ್ರೀಕ್ ಮಾತಾಡುತ್ತಿದ್ದ ಯೆಹೂದ್ಯ
ರೊಂದಿಗೆ ಸೌಲನು ಪದೇಪದೇ ವಾದಮಾಡಿದನು. ಆದರೆ
ಅವರು ಅವನನ್ನು ಕೊಲ್ಲಲು ಪ್ರಯತ್ನಿಸಿದರು. 30 ಇದರ ಬಗ್ಗೆ
ಸಹೋದರರಿಗೆ ತಿಳಿದಾಗ ಅವರು ಸೌಲನನ್ನು ಸೆಜರೇಯ
ಪಟ್ಟಣಕ್ಕೆ ಕೊಂಡೊಯ್ದು ಅಲ್ಲಿಂದ ತಾರ್ಸಸ್ ಪಟ್ಟಣಕ್ಕೆ
ಕಳುಹಿಸಿದರು.

31 ಇಂತಿರಲು, ಜುದೇಯ, ಗಲಿಲಾಯ ಮತ್ತು ಸಮಾರ್ಯ
ಪ್ರದೇಶಗಳಲ್ಲಿ ಇದ್ದ ಸಭೆಗಳಲ್ಲಿ ಶಾಂತಿ ನೆಲೆಸಿತು. ಪವಿತ್ರಾತ್ಮನ
ಸಹಾಯದಿಂದ ಸಭೆಗಳು ಬಲವಾಗತೊಡಗಿದವು. ವಿಶ್ವಾಸಿಗಳು
ತಾವು ಪ್ರಭುವನ್ನು ಗೌರವಿಸುವುದಾಗಿ ತಮ್ಮ ಜೀವಿತಗಳ
ಮೂಲಕ ತೋರಿಸಿಕೊಟ್ಟರು. ಇದರಿಂದ ವಿಶ್ವಾಸಿಗಳ ಸಭೆಯು
ಹೆಚ್ಚುಹೆಚ್ಚು ಬೆಳೆಯತೊಡಗಿತು. 32 ಜೆರುಸಲೇಮಿನ ಸುತ್ತ
ಮುತ್ತಲ್ಲಿದ್ದ ಊರುಗಳಲ್ಲೆಲ್ಲಾ ಪೇತ್ರನು ಪ್ರಯಾಣ ಮಾಡು
ತ್ತಿರುವಾಗ ಲುದ್ದ ಎಂಬ ಊರಲ್ಲಿ ವಾಸವಾಗಿರುವ ವಿಶ್ವಾಸಿ
ಗಳನ್ನು ಭೇಟಿಯಾಗಲು ಅಲ್ಲಿಗೆ ಹೋದನು. 33 ಅವನು ಲುದ್ದ
ದಲ್ಲಿ ಐನೇಯಾ ಎಂಬವನನ್ನು ಕಂಡನು. ಪಾರ್ಶ್ವವಾಯು
ರೋಗಿಯಾಗಿದ್ದ ಅವನು ಎಂಟು ವರ್ಷಗಳಿಂದ ಹಾಸಿಗೆ
ಮೇಲಿದ್ದನು. 34 ಪೇತ್ರನು ಅವನಿಗೆ ''ಐನೇಯಾ, ಯೇಸು
ಕ್ರಿಸ್ತನು ನಿನ್ನನ್ನು ಗುಣಪಡಿಸುತ್ತಾನೆ. ಎದ್ದು ನಿನ್ನ ಹಾಸಿಗೆಯನ್ನು
ಎತ್ತಿಡು!'' ಎಂದು ಹೇಳಿದನು. ಆ ಕೂಡಲೇ ಐನೇಯನು
ಎದ್ದುನಿಂತನು. 35 ಲುದ್ದದಲ್ಲಿ ಮತ್ತು ಸಾರೋನಿನ ಬಯಲಿನಲ್ಲಿ
ವಾಸವಾಗಿದ್ದ ಜನರೆಲ್ಲರು ಅವನನ್ನು ಕಂಡು ಪ್ರಭು
ಯೇಸುವಿನಲ್ಲಿ ನಂಬಿಕೆ ಇಟ್ಟರು.

---

**ನಿನ್ನಲ್ಲಿ ನಂಬಿಕೆ ಇಡುವ** ಅಕ್ಷರಶಃ ''ನಿನ್ನ ಹೆಸರನ್ನು ಹೇಳುವವರು.''

### ಜೊಪ್ಪದಲ್ಲಿ ಪೇತ್ರನು

36ಜೊಪ್ಪ ಪಟ್ಟಣದಲ್ಲಿ ತಬಿಥಾ ಎಂಬ ಯೇಸುವಿನ
ಶಿಷ್ಯಳಿದ್ದಳು. (ಗ್ರೀಕ್ ಭಾಷೆಯಲ್ಲಿ ಆಕೆಯ ಹೆಸರು ‘ದೊರ್ಕಾ’
ಅಂದರೆ ಜಿಂಕೆ.) ಆಕೆಯು ಜನರಿಗೆ ಯಾವಾಗಲೂ ಒಳ್ಳೆಯ
ಕಾರ್ಯಗಳನ್ನು ಮಾಡುತ್ತಿದ್ದಳು. ಆಕೆಯು ಕೊರತೆಯಲ್ಲಿದ್ದ
ಜನರಿಗೆ ಯಾವಾಗಲೂ ಹಣಕೊಡುತ್ತಿದ್ದಳು. 37ಪೇತ್ರನು ಲುದ್ದ
ದಲ್ಲಿದ್ದಾಗ ಆಕೆಯು ಕಾಯಿಲೆಯಿಂದ ಸತ್ತುಹೋದಳು. ಜನರು
ಆಕೆಯ ದೇಹವನ್ನು ತೊಳೆದು ಮೇಲ್ಮಾಳಿಗೆಯ ಒಂದು ಕೋಣೆ
ಯಲ್ಲಿಟ್ಟರು. 38ಪೇತ್ರನು ಲುದ್ದದಲ್ಲಿದ್ದಾನೆಂಬ ಸುದ್ದಿಯು
ಜೊಪ್ಪದಲ್ಲಿದ್ದ ವಿಶ್ವಾಸಿಗಳಿಗೆ ತಿಳಿಯಿತು. (ಲುದ್ದವು ಜೊಪ್ಪದ
ಸಮೀಪದಲ್ಲಿದೆ.) ಆದ್ದರಿಂದ ಅವರು ಇಬ್ಬರನ್ನು ಪೇತ್ರನ ಬಳಿಗೆ
ಕಳುಹಿಸಿದರು. ಅವರು, ‘‘ತ್ವರೆ ಮಾಡು, ದಯವಿಟ್ಟು ಬೇಗನೆ
ಬಾ!’’ ಎಂದು ಅವನನ್ನು ಬೇಡಿಕೊಂಡರು. 39ಪೇತ್ರನು ಸಿದ್ಧ
ನಾಗಿ ಅವರೊಂದಿಗೆ ಹೋದನು. ಅವನು ಅಲ್ಲಿಗೆ ತಲುಪಿದಾಗ,
ಅವರು ಅವನನ್ನು ಮೇಲ್ಮಾಳಿಗೆಯ ಕೋಣೆಗೆ ಕರೆದುಕೊಂಡು
ಹೋದರು. ವಿಧವೆಯರೆಲ್ಲ ಅಳುತ್ತಾ ಪೇತ್ರನನ್ನು ಸುತ್ತು
ವರಿದರು. ದೊರ್ಕಳು ಇನ್ನೂ ಜೀವಂತವಾಗಿದ್ದಾಗ ತಮಗಾಗಿ
ತಯಾರಿಸಿ ಕೊಟ್ಟ ಮೇಲಂಗಿಗಳನ್ನು ಮತ್ತು ಬಟ್ಟೆಗಳನ್ನು ಅವರು
ಪೇತ್ರನಿಗೆ ತೋರಿಸಿದರು. 40ಪೇತ್ರನು ಜನರೆಲ್ಲರನ್ನು ಕೋಣೆ
ಯಿಂದ ಹೊರಗೆ ಕಳುಹಿಸಿ ಮೊಣಕಾಲೂರಿ ಪ್ರಾರ್ಥಿಸಿದನು.
ಬಳಿಕ ಅವನು ತಬಿಥಳ ದೇಹದ ಕಡೆಗೆ ತಿರುಗಿ, ‘‘ತಬಿಥಾ,
ಎದ್ದುನಿಲ್ಲು!’’ ಎಂದನು. ಆಕೆ ತನ್ನ ಕಣ್ಣುಗಳನ್ನು ತೆರೆದಳು.
ಆಕೆಯು ಪೇತ್ರನನ್ನು ಕಂಡು ಎದ್ದು ಕುಳಿತುಕೊಂಡಳು.
41ಅವನು ಕೈನೀಡಿ ಎದ್ದುನಿಲ್ಲಲು ಆಕೆಗೆ ಸಹಾಯ ಮಾಡಿದನು.
ಬಳಿಕ ಅವನು ವಿಶ್ವಾಸಿಗಳನ್ನು ಮತ್ತು ವಿಧವೆಯರನ್ನು ಕೋಣೆ
ಯೊಳಗೆ ಕರೆದು ಅವರಿಗೆ ತಬಿಥಳನ್ನು ತೋರಿಸಿದನು. ಆಕೆ
ಜೀವಂತವಾಗಿದ್ದಳು. 42ಜೊಪ್ಪದ ಎಲ್ಲಾ ಕಡೆಗಳಲ್ಲಿಯೂ ಇದ್ದ
ಜನರಿಗೆ ಈ ವಿಷಯ ತಿಳಿಯಿತು. ಈ ಜನರಲ್ಲಿ ಅನೇಕರು
ಪ್ರಭುವನ್ನು ನಂಬಿದರು. 43ಪೇತ್ರನು ಅನೇಕ ದಿನಗಳವರೆಗೆ
ಜೊಪ್ಪದಲ್ಲಿದ್ದನು. ಚರ್ಮಕಾರನಾದ ಸಿಮೋನನ ಮನೆಯಲ್ಲಿ
ಅವನು ಇಳಿದುಕೊಂಡಿದ್ದನು.

### ಪೇತ್ರ ಮತ್ತು ಕೊರ್ನೇಲಿಯ

10 ಸೆಜರೇಯ ಪಟ್ಟಣದಲ್ಲಿ ಕೊರ್ನೇಲಿಯ ಎಂಬವ
ನಿದ್ದನು. ರೋಮಿನ ಸೈನ್ಯಕ್ಕೆ ಸೇರಿದ ‘ಇಟಲಿಯ
ದಳ’ದಲ್ಲಿ ಅವನು ಅಧಿಕಾರಿಯಾಗಿದ್ದನು. 2ಕೊರ್ನೇಲಿಯನು
ದೈವಭಕ್ತನಾಗಿದ್ದನು. ಅವನು ಮತ್ತು ಅವನ ಕುಟುಂಬದಲ್ಲಿ
ವಾಸವಾಗಿದ್ದ ಇತರ ಎಲ್ಲಾ ಜನರು ನಿಜದೇವರನ್ನು ಆರಾಧಿಸು
ತ್ತಿದ್ದರು. ಅವನು ಬಡವರಿಗೆ ಧಾರಾಳವಾಗಿ ಹಣವನ್ನು ಕೊಡುತ್ತಿ
ದ್ದನು. ಯಾವಾಗಲೂ ದೇವರಲ್ಲಿ ಪ್ರಾರ್ಥಿಸುತ್ತಿದ್ದನು. 3ಒಂದು
ಮಧ್ಯಾಹ್ನ ಸುಮಾರು ಮೂರು ಗಂಟೆಯಲ್ಲಿ ಕೊರ್ನೇಲಿಯನಿಗೆ
ಒಂದು ದರ್ಶನವಾಯಿತು. ಅವನು ಅದನ್ನು ಸ್ಪಷ್ಟವಾಗಿ
ಕಂಡನು. ಆ ದರ್ಶನದಲ್ಲಿ ದೇವದೂತನೊಬ್ಬನು ಅವನ ಬಳಿಗೆ
ಬಂದು, ‘‘ಕೊರ್ನೇಲಿಯನೇ‘‘ ಎಂದು ಕರೆದನು.

4ಕೊರ್ನೇಲಿಯನು ದೇವದೂತನನ್ನು ಕಂಡು ಭಯದಿಂದ,
‘‘ಸ್ವಾಮಿ, ನಿಮಗೇನು ಬೇಕು?’’ ಎಂದು ಕೇಳಿದನು.

ಆ ದೇವದೂತನು ಅವನಿಗೆ ‘‘ದೇವರು ನಿನ್ನ ಪ್ರಾರ್ಥನೆ
ಗಳನ್ನು ಕೇಳಿದ್ದಾನೆ. ನೀನು ಬಡವರಿಗೆ ಕೊಟ್ಟವುಗಳನ್ನು ಆತನು
ನೋಡಿದ್ದಾನೆ. ದೇವರು ನಿನ್ನನ್ನು ಮೆಚ್ಚಿಕೊಂಡಿದ್ದಾನೆ. 5ಈಗ,
ಸೀಮೋನ ಎಂಬ ವ್ಯಕ್ತಿಯನ್ನು ಕರೆದುಕೊಂಡು ಬರುವುದಕ್ಕಾಗಿ
ನೀನು ಜನರನ್ನು ಜೊಪ್ಪ ಪಟ್ಟಣಕ್ಕೆ ಕಳುಹಿಸು. ಸೀಮೋನನನ್ನು
‘ಪೇತ್ರ’ ಎಂತಲೂ ಕರೆಯುತ್ತಾರೆ. 6ಸೀಮೋನನು ಚರ್ಮ
ಕಾರನ ಮನೆಯಲ್ಲಿ ಇಳಿದುಕೊಂಡಿದ್ದಾನೆ. ಅವನ ಮನೆಯು
ಸಮುದ್ರ ತೀರದಲ್ಲಿದೆ’’ ಎಂದು ಹೇಳಿದನು. 7ಕೊರ್ನೇಲಿಯ
ನೊಂದಿಗೆ ಮಾತಾಡಿದ ದೇವದೂತನು ಹೊರಟು ಹೋದನು.
ಬಳಿಕ ಕೊರ್ನೇಲಿಯನು ತನ್ನ ಸೇವಕರಲ್ಲಿ ಇಬ್ಬರನ್ನೂ ಒಬ್ಬ
ಸೈನಿಕನನ್ನೂ ಕರೆದನು. ಈ ಸೈನಿಕನು ದೈವಭಕ್ತನಾಗಿದ್ದನು.
ಕೊರ್ನೇಲಿಯನ ಆಪ್ತಸಹಾಯಕರಲ್ಲಿ ಇವನೂ ಒಬ್ಬ
ನಾಗಿದ್ದನು. 8ಕೊರ್ನೇಲಿಯನು ಈ ಮೂವರಿಗೆ ಪ್ರತಿ
ಯೊಂದನ್ನೂ ವಿವರಿಸಿದನು. ಬಳಿಕ ಅವರನ್ನು ಜೊಪ್ಪಕ್ಕೆ
ಕಳುಹಿಸಿದನು.

9ಮರುದಿನ ಈ ಜನರು ಜೊಪ್ಪಕ್ಕೆ ಸಮೀಪಿಸಿದಾಗ
ಮಧ್ಯಾಹ್ನದ ಸಮಯವಾಗಿತ್ತು. ಆ ಸಮಯದಲ್ಲಿ ಪೇತ್ರನು
ಪ್ರಾರ್ಥಿಸುವುದಕ್ಕಾಗಿ ಮಾಳಿಗೆಯ ಮೇಲೆ ಹೋದನು. 10ಪೇತ್ರ
ನಿಗೆ ಹಸಿವೆಯಾಗಿ ಊಟಮಾಡಬೇಕೆನಿಸಿತು. ಅಲ್ಲಿ ಅವನಿಗಾಗಿ
ಅಡಿಗೆ ಮಾಡುತ್ತಿದ್ದರು. ಇತ್ತ, ಪೇತ್ರನಿಗೊಂದು ದರ್ಶನ
ವಾಯಿತು. 11ತೆರೆದ ಆಕಾಶದಿಂದ ಯಾವುದೋ ಒಂದು ವಸ್ತು
ಇಳಿದು ಬರುತ್ತಿರುವುದನ್ನು ಅವನು ಕಂಡನು. ಅದು ದೊಡ್ಡ
ತಟ್ಟೆಯಂತಿತ್ತು. ಅದರ ನಾಲ್ಕು ಮೂಲೆಗಳಲ್ಲಿ ಹಗ್ಗಗಳನ್ನು ಕಟ್ಟಿ
ಭೂಮಿಯ ಮೇಲೆ ಇಳಿಯ ಬಿಡಲಾಗಿತ್ತು. 12ಅದರಲ್ಲಿ ಎಲ್ಲಾ
ಬಗೆಯ ಪ್ರಾಣಿಗಳಿದ್ದವು, ಅಂದರೆ ನಡೆದಾಡುವ ಪ್ರಾಣಿಗಳು,
ಕ್ರಿಮಿಕೀಟಗಳು ಮತ್ತು ಹಾರಾಡುವ ಪಕ್ಷಿಗಳು ಇದ್ದವು. 13ಆಗ
ವಾಣಿಯೊಂದು, ‘‘ಪೇತ್ರನೇ, ಎದ್ದೇಳು! ಕೊಯ್ದು ತಿನ್ನು’’
ಎಂದು ಹೇಳಿತು.

14ಆದರೆ ಪೇತ್ರನು, ‘‘ಪ್ರಭುವೇ,ನಾನು ಹಾಗೆ ಮಾಡಲಾರೆ!
ಅಪವಿತ್ರವಾದದ್ದನ್ನು ಮತ್ತು ಅಶುದ್ಧವಾದದ್ದನ್ನು ನಾನೆಂದೂ
ತಿಂದವನಲ್ಲ’’ ಎಂದು ಹೇಳಿದನು.

15 ಆದರೆ ಆ ವಾಣಿಯು ಅವನಿಗೆ, ‘‘ದೇವರು ಇವುಗಳನ್ನು
ಶುದ್ಧೀಕರಿಸಿದ್ದಾನೆ. ಇವುಗಳನ್ನು ‘ಅಪವಿತ್ರ’ವೆಂದು ಹೇಳ
ಬೇಡ’’ ಎಂದು ಮತ್ತೆ ಹೇಳಿತು. 16ಹೀಗೆ ಮೂರು ಸಾರಿ
ಆಯಿತು. ಬಳಿಕ ಅವುಗಳನ್ನೆಲ್ಲ ಆಕಾಶಕ್ಕೆ ಹಿಂತೆಗೆದುಕೊಳ್ಳ
ಲಾಯಿತು.

17ಪೇತ್ರನು ತಾನು ಕಂಡ ಈ ದರ್ಶನದ ಅರ್ಥವೇನಿರ
ಬಹುದೆಂದು ಆಶ್ಚರ್ಯಗೊಂಡನು. ಅಷ್ಟರಲ್ಲಿಯೇ, ಕೊರ್ನೇ
ಲಿಯನು ಕಳುಹಿಸಿದ್ದ ಜನರು ಸೀಮೋನನ ಮನೆಯನ್ನು ಕಂಡು
ಕೊಂಡಿದ್ದರು. ಅವರು ಬಾಗಿಲ ಬಳಿಯಲ್ಲಿ ನಿಂತುಕೊಂಡು,
18‘‘ಸೀಮೋನ್ ಪೇತ್ರನು ಇಲ್ಲಿ ವಾಸವಾಗಿರುವನೇ?’’ ಎಂದು
ಕೇಳಿದರು. 19ಈ ದರ್ಶನದ ಬಗ್ಗೆ ಪೇತ್ರನು ಇನ್ನೂ ಆಲೋಚಿಸು
ತ್ತಿದ್ದನು. ಆದರೆ ಪವಿತ್ರಾತ್ಮನು ಅವನಿಗೆ, ‘‘ಇಗೋ,ನಿನ್ನನ್ನು
ಮೂರು ಜನರು ಹುಡುಕುತ್ತಾ ಬಂದಿದ್ದಾರೆ. 20ನೀನೆದ್ದು
ಕೆಳಗಿಳಿದು ಅವರೊಂದಿಗೆ ಹೋಗು. ಯಾವ ಪ್ರಶ್ನೆಗಳನ್ನೂ
ಕೇಳಬೇಡ. ನಾನೇ ಅವರನ್ನು ನಿನ್ನ ಬಳಿಗೆ ಕಳುಹಿಸಿದ್ದೇನೆ’’
ಎಂದು ಹೇಳಿದನು. 21ಆದ್ದರಿಂದ ಪೇತ್ರನು ಕೆಳಗಿಳಿದು ಆ ಜನರ

ಬಳಿಗೆ ಹೋಗಿ, ‘‘ನೀವು ಹುಡುಕುತ್ತಿರುವ ವ್ಯಕ್ತಿ ನಾನೇ, ನೀವು
ಇಲ್ಲಿಗೇಕೆ ಬಂದಿರಿ?’’ ಎಂದು ಕೇಳಿದನು.
22ಆ ಜನರು, ‘‘ಕೊರ್ನೇಲಿಯನು ಎಂಬ ಒಬ್ಬ ಸೇನಾಧಿ
ಕಾರಿ ಇದ್ದಾನೆ. ಅವನು ಧಾರ್ಮಿಕ ವ್ಯಕ್ತಿ. ಅವನು ದೇವರನ್ನು
ಆರಾಧಿಸುತ್ತಾನೆ. ಯೆಹೂದ್ಯ ಜನರೆಲ್ಲರೂ ಅವನನ್ನು ಗೌರವಿ
ಸುತ್ತಾರೆ. ನಿನ್ನನ್ನು ತನ್ನ ಮನೆಗೆ ಆಹ್ವಾನಿಸಿ ನೀನು ಹೇಳುವ
ಸಂಗತಿಗಳನ್ನು ಕೇಳಬೇಕೆಂದು ದೇವದೂತನೊಬ್ಬನು
ಕೊರ್ನೇಲಿಯನಿಗೆ ತಿಳಿಸಿದ್ದಾನೆ’’ ಎಂದು ಹೇಳಿದರು.
23ಪೇತ್ರನು ಅವರನ್ನು ಒಳಗೆ ಕರೆದು, ಆ ರಾತ್ರಿ ಅಲ್ಲೇ ಇರ
ಬೇಕೆಂದು ಕೇಳಿಕೊಂಡನು.

ಮರುದಿನ ಪೇತ್ರನು ಸಿದ್ಧನಾಗಿ, ಆ ಮೂವರೊಂದಿಗೆ
ಹೊರಟನು. ಜೊಪ್ಪದ ವಿಶ್ವಾಸಿಗಳಲ್ಲಿ ಕೆಲವರು ಅವನೊಂದಿಗೆ
ಹೋದರು. 24ಮರುದಿನ ಅವರು ಸೆಜರೇಯ ಪಟ್ಟಣವನ್ನು
ತಲುಪಿದರು. ಕೊರ್ನೇಲಿಯನು ಅವರಿಗೋಸ್ಕರ ಕಾಯು
ತ್ತಿದ್ದನು. ಅವನು ತನ್ನ ಸಂಬಂಧಿಕರನ್ನು ಮತ್ತು ಆಪ್ತಸ್ನೇಹಿತರನ್ನು
ಆಗಲೇ ತನ್ನ ಮನೆಗೆ ಆಹ್ವಾನಿಸಿದ್ದನು. 25ಪೇತ್ರನು ಮನೆಯನ್ನು
ಪ್ರವೇಶಿಸುತ್ತಿರಲು ಕೊರ್ನೇಲಿಯನು ಅವನನ್ನು ಎದುರು
ಗೊಂಡನು. ಕೊರ್ನೇಲಿಯನು ಪೇತ್ರನ ಪಾದಕ್ಕೆ ಅಡ್ಡಬಿದ್ದು
ಆರಾಧಿಸಿದನು. 26ಆದರೆ ಪೇತ್ರನು ಅವನನ್ನು ಮೇಲಕ್ಕೆಬ್ಬಿಸಿ,
‘‘ಎದ್ದು ನಿಲ್ಲು! ನಾನು ನಿನ್ನಂತೆಯೇ ಕೇವಲ ಒಬ್ಬ ಮನುಷ್ಯ’’
ಎಂದು ಹೇಳಿದನು. 27ಪೇತ್ರನು ಕೊರ್ನೇಲಿಯನೊಂದಿಗೆ
ಮಾತನ್ನು ಮುಂದುವರಿಸಿದನು. ಬಳಿಕ ಪೇತ್ರನು ಒಳಗೆ
ಹೋದಾಗ, ಅಲ್ಲಿ ನೆರೆದು ಬಂದಿದ್ದ ಜನರ ದೊಡ್ಡ ಗುಂಪನ್ನು
ಕಂಡನು. 28ಪೇತ್ರನು ಅವರಿಗೆ, ‘‘ಯೆಹೂದ್ಯನೊಬ್ಬನು ಅನ್ಯ
ಜನರೊಂದಿಗೆ ಸಂಪರ್ಕವಿಟ್ಟುಕೊಳ್ಳುವುದಾಗಲಿ ಅವರನ್ನು
ಭೇಟಿಮಾಡುವುದಾಗಲಿ ನಮ್ಮ ಯೆಹೂದ್ಯಧರ್ಮಶಾಸ್ತ್ರಕ್ಕೆ
ವಿರುದ್ಧವಾದದ್ದು ಎಂಬುದು ನಿಮಗೆ ಗೊತ್ತೇ ಇದೆ. ಆದರೆ
ಯಾವ ವ್ಯಕ್ತಿಯನ್ನೂ ಅಪವಿತ್ರನೆಂದಾಗಲಿ ಅಶುದ್ಧನೆಂದಾಗಲಿ
ಕರೆಯಕೂಡದೆಂದು ದೇವರು ನನಗೆ ತೋರಿಸಿಕೊಟ್ಟಿದ್ದಾನೆ.
29ಆದ್ದರಿಂದ, ನನ್ನನ್ನು ಇಲ್ಲಿಗೆ ಬರಬೇಕೆಂದು ಕರೆದ ಜನ
ರೊಂದಿಗೆ ನಾನು ವಾದಮಾಡಲಿಲ್ಲ. ಆದರೆ ನೀವು ನನ್ನನ್ನು
ಯಾಕೆ ಕರೆಸಿದಿರೆಂದು ದಯವಿಟ್ಟು ಈಗ ಹೇಳಿರಿ’’ ಎಂದನು.
30ಆಗ ಕೊರ್ನೇಲಿಯನು, ‘‘ನಾಲ್ಕು ದಿನಗಳ ಹಿಂದೆ, ನಾನು
ನನ್ನ ಮನೆಯಲ್ಲಿ ಪ್ರಾರ್ಥಿಸುತ್ತಿದ್ದೆನು. ಆಗ ಮಧ್ಯಾಹ್ನ ಸುಮಾರು
ಮೂರು ಗಂಟೆ ಸಮಯವಾಗಿತ್ತು. ಇದ್ದಕ್ಕಿದ್ದಂತೆ ಒಬ್ಬ
ಮನುಷ್ಯನು ನನ್ನ ಮುಂದೆ ನಿಂತನು. ಅವನು ಧರಿಸಿಕೊಂಡಿದ್ದ
ಬಟ್ಟೆಗಳು ಪ್ರಕಾಶಮಾನವಾಗಿ ಹೊಳೆಯುತ್ತಿದ್ದವು. 31ಆ
ಮನುಷ್ಯನು, ‘ಕೊರ್ನೇಲಿಯನೇ! ದೇವರು ನಿನ್ನ ಪ್ರಾರ್ಥನೆ
ಯನ್ನು ಕೇಳಿದ್ದಾನೆ. ನೀನು ಬಡಜನರಿಗೆ ಕೊಡುವಂಥವು
ಗಳನ್ನು ನೋಡಿದ್ದಾನೆ. ದೇವರು ನಿನ್ನನ್ನು ಮೆಚ್ಚಿಕೊಂಡಿದ್ದಾನೆ.
32ಆದ್ದರಿಂದ ಕೆಲವು ಜನರನ್ನು ಜೊಪ್ಪ ಪಟ್ಟಣಕ್ಕೆ ಕಳುಹಿಸಿ
ಸೀಮೋನ್ ಪೇತ್ರನನ್ನು ಬರಬೇಕೆಂದು ಕೇಳಿಕೊ. ಪೇತ್ರನು
ಚರ್ಮಕಾರನಾದ ಸೀಮೋನ ಎಂಬವನ ಮನೆಯಲ್ಲಿ ಇಳಿದು
ಕೊಂಡಿದ್ದಾನೆ. ಅವನ ಮನೆಯು ಸಮುದ್ರ ತೀರದಲ್ಲಿದೆ’
ಎಂದನು. 33ಆದ್ದರಿಂದ, ನಾನು ತಕ್ಷಣ ನಿನಗೆ ಕರೆಕಳುಹಿಸಿದೆ.
ನೀನು ಇಲ್ಲಿಗೆ ಬಂದದ್ದು ಉಪಕಾರವಾಯಿತು. ನಮಗೆ ತಿಳಿಸ
ಬೇಕೆಂದು ಪ್ರಭುವು ನಿನಗೆ ಆಜ್ಞಾಪಿಸಿರುವ ಪ್ರತಿಯೊಂದನ್ನು
ಕೇಳಲು ನಾವೆಲ್ಲರು ದೇವರ ಸನ್ನಿಧಿಯಲ್ಲಿ ಸೇರಿದ್ದೇವೆ’’ ಎಂದು
ಹೇಳಿದನು.

## ಕೊರ್ನೇಲಿಯನ ಮನೆಯಲ್ಲಿ ಪೇತ್ರನ ಪ್ರಸಂಗ

34ಪೇತ್ರನು ಮಾತಾಡಲಾರಂಭಿಸಿ ಇಂತೆಂದನು:
‘‘ದೇವರಿಗೆ ಎಲ್ಲರೂ ಒಂದೇ ಎಂಬುದು ನನಗೆ ಈಗ ಅರ್ಥ
ವಾಯಿತು. 35ತನ್ನನ್ನು ಆರಾಧಿಸುವ ನೀತಿವಂತರು ಯಾರೇ
ಆಗಿದ್ದರೂ ಅವರನ್ನು ದೇವರು ಸ್ವೀಕರಿಸಿಕೊಳ್ಳುವನು. ಅವನು
ಯಾವ ದೇಶದವನು ಎಂಬುದು ಮುಖ್ಯವಲ್ಲ. 36ದೇವರು
ಯೆಹೂದ್ಯ ಜನರೊಂದಿಗೆ ಮಾತಾಡಿದ್ದಾನೆ. ಯೇಸು ಕ್ರಿಸ್ತನ
ಮೂಲಕವಾಗಿ ಶಾಂತಿ ಬಂದಿದೆ ಎಂಬ ಸುವಾರ್ತೆಯನ್ನು
ದೇವರು ಅವರಿಗೆ ಕಳುಹಿಸಿದನು. ಯೇಸುವು ಎಲ್ಲಾ ಜನರಿಗೆ
ಪ್ರಭುವಾಗಿದ್ದಾನೆ! 37ಜುದೇಯದಲ್ಲೆಲ್ಲಾ ಏನಾಯಿತೆಂಬುದು
ನಿಮಗೆ ಗೊತ್ತಿದೆ. ಗಲಿಲಾಯದಲ್ಲಿ ಯೋಹಾನನು* ದೀಕ್ಷಾ
ಸ್ನಾನದ ಬಗ್ಗೆ ಜನರಿಗೆ ಬೋಧಿಸಿದ ಮೇಲೆ ಅದು ಆರಂಭ
ವಾಯಿತು. 38ನಜರೇತಿನ ಯೇಸುವಿನ ಬಗ್ಗೆ ನಿಮಗೆ ಗೊತ್ತಿದೆ.
ದೇವರು ಆತನಿಗೆ ಪವಿತ್ರಾತ್ಮನನ್ನೂ ಶಕ್ತಿಯನ್ನೂ ಕೊಡುವುದರ
ಮೂಲಕ ಆತನನ್ನು ಅಭಿಷೇಕಿಸಿದನು. ಆತನು ಎಲ್ಲಾ
ಕಡೆಗಳಲ್ಲೂ ಜನರಿಗೆ ಒಳ್ಳೆಯದನ್ನು ಮಾಡುತ್ತಾ ಸಂಚರಿಸಿ
ದನು. ದೆವ್ವದಿಂದ ಪೀಡಿತರಾಗಿದ್ದವರನ್ನು ಯೇಸು ಗುಣಪಡಿಸಿ
ದನು. ದೇವರು ಯೇಸುವಿನೊಂದಿಗೆ ಇದ್ದನೆಂಬುದನ್ನು ಇದು
ತೋರಿಸಿಕೊಟ್ಟಿತು. 39ಜುದೇಯದಲ್ಲಿ ಮತ್ತು ಜೆರುಸಲೇಮಿ
ನಲ್ಲಿ ಯೇಸು ಮಾಡಿದ ಎಲ್ಲಾ ಕಾರ್ಯಗಳನ್ನು ನಾವು ನೋಡಿ
ದೆವು. ಆ ಕಾರ್ಯಗಳಿಗೆ ನಾವು ಸಾಕ್ಷಿಗಳಾಗಿದ್ದೇವೆ. ಆದರೆ
ಯೇಸು ಕೊಲ್ಲಲ್ಪಟ್ಟನು. ಅವರು ಆತನನ್ನು ಮರದ ಶಿಲುಬೆಗೆ
ಏರಿಸಿದರು. 40ಆದರೆ, ದೇವರು ಆತನನ್ನು ಮೂರನೆಯ
ದಿನದಲ್ಲಿ ಜೀವಂತವಾಗಿ ಎಬ್ಬಿಸಿದನು! ಯೇಸುವನ್ನು ಸ್ಪಷ್ಟವಾಗಿ
ನೋಡುವ ಅವಕಾಶವನ್ನು ದೇವರು ಜನರಿಗೆ ಒದಗಿಸಿ
ಕೊಟ್ಟನು. 41ಆದರೆ ಯೇಸುವು ಎಲ್ಲಾ ಜನರಿಗೆ ಕಾಣಿಸಿ
ಕೊಳ್ಳಲಿಲ್ಲ. ದೇವರಿಂದ ಮೊದಲೇ ಸಾಕ್ಷಿಗಳಾಗಿ ಆಯ್ಕೆಗೊಂಡಿ
ದ್ದವರು ಮಾತ್ರ ಆತನನ್ನು ಕಂಡರು! ನಾವೇ ಆ ಸಾಕ್ಷಿಗಳು!
ಯೇಸು ಜೀವಂತವಾಗಿ ಎದ್ದು ಬಂದ ಮೇಲೆ ನಾವು ಆತ
ನೊಂದಿಗೆ ಊಟಮಾಡಿದೆವು ಮತ್ತು ಪಾನೀಯವನ್ನು
ಕುಡಿದೆವು. 42ಜನರಿಗೆ ಬೋಧಿಸಬೇಕೆಂದು ಯೇಸು ನಮಗೆ
ಹೇಳಿದನು. ಜೀವಂತವಾಗಿರುವ ಜನರಿಗೂ ಮತ್ತು ಸತ್ತು
ಹೋಗಿರುವ ಜನರಿಗೂ ದೇವರಿಂದ ನ್ಯಾಯಾಧಿಪತಿಯಾಗಿ
ಆಯ್ಕೆಯಾಗಿರುವ ವ್ಯಕ್ತಿ ತಾನೇ ಎಂಬುದನ್ನು ಜನರಿಗೆ
ತಿಳಿಸಬೇಕೆಂದು ಆತನು ನಮಗೆ ಹೇಳಿದನು. 43ಯೇಸುವಿನಲ್ಲಿ
ನಂಬಿಕೆ ಇಡುವ ಪ್ರತಿಯೊಬ್ಬನ ಪಾಪಗಳನ್ನು ದೇವರು ಯೇಸು
ವಿನ ಮೂಲಕ ಕ್ಷಮಿಸುವನು. ಇದು ಸತ್ಯವೆಂದು ಪ್ರವಾದಿಗಳು
ಹೇಳಿದ್ದಾರೆ.’’

## ಯೆಹೂದ್ಯರಲ್ಲದವರ ಮೇಲೆ ಪವಿತ್ರಾತ್ಮನು ಇಳಿದು ಬರುವನು

44ಪೇತ್ರನು ಇನ್ನೂ ಹೀಗೆ ಹೇಳುತ್ತಿರುವಾಗಲೇ, ಅವನ
ಉಪದೇಶವನ್ನು ಕೇಳುತ್ತಿದ್ದವರ ಮೇಲೆ ಪವಿತ್ರಾತ್ಮನು

---

**ಯೋಹಾನನು** ಸ್ನಾನಿಕ ಯೋಹಾನನು.

ಇಳಿದುಬಂದನು. 45 ಪೇತ್ರನೊಂದಿಗೆ ಬಂದಿದ್ದ ಯೆಹೂದ್ಯ
ವಿಶ್ವಾಸಿಗಳು ವಿಸ್ಮಿತರಾದರು. ಯೆಹೂದ್ಯರಲ್ಲದ ಜನರಿಗೂ ಸಹ
ಪವಿತ್ರಾತ್ಮಧಾರೆಯಾದದ್ದನ್ನು ಕಂಡು ಅವರು ಆಶ್ಚರ್ಯ
ಪಟ್ಟರು. 46 ಅವರು ಬೇರೆಬೇರೆ ಭಾಷೆಗಳನ್ನು ಮಾತಾಡುತ್ತಾ
ದೇವರಿಗೆ ಸ್ತೋತ್ರ ಸಲ್ಲಿಸುತ್ತಿರುವುದನ್ನು ಆ ಯೆಹೂದ್ಯ ವಿಶ್ವಾಸಿ
ಗಳು ಕೇಳಿದರು. ಬಳಿಕ ಪೇತ್ರನು, 47 “ನೀರಿನಲ್ಲಿ ದೀಕ್ಷಾಸ್ನಾನ
ತೆಗೆದುಕೊಳ್ಳದಂತೆ ನಾವು ಈ ಜನರಿಗೆ ಅಡ್ಡಿಮಾಡಲು
ಸಾಧ್ಯವಿಲ್ಲ. ನಾವು ಹೊಂದಿಕೊಂಡಂತೆ ಇವರೂ ಪವಿತ್ರಾತ್ಮ
ನನ್ನು ಹೊಂದಿಕೊಂಡರು!” ಎಂದು ಹೇಳಿ, 48 ಯೇಸು ಕ್ರಿಸ್ತನ
ಹೆಸರಿನಲ್ಲಿ ದೀಕ್ಷಾಸ್ನಾನ ತೆಗೆದುಕೊಳ್ಳಲು ಅವರಿಗೆ ಅಪ್ಪಣೆ
ಕೊಟ್ಟನು. ಬಳಿಕ ಅವರು ತಮ್ಮೊಂದಿಗೆ ಕೆಲವು ದಿನಗಳವರೆಗೆ
ಇರಬೇಕೆಂದು ಪೇತ್ರನನ್ನು ಕೇಳಿಕೊಂಡರು.

### ಪೇತ್ರನು ಜೆರುಸಲೇಮಿಗೆ ಹಿಂತಿರುಗುವನು

11 ಯೆಹೂದ್ಯರಲ್ಲದವರು ಸಹ ದೇವರ ವಾಕ್ಯವನ್ನು
ಸ್ವೀಕರಿಸಿಕೊಂಡರೆಂಬುದು ಅಪೊಸ್ತಲರಿಗೂ
ಜುದೇಯದ ಸಹೋದರರಿಗೂ ತಿಳಿಯಿತು. 2 ಆದರೆ ಪೇತ್ರನು
ಜೆರುಸಲೇಮಿಗೆ ಬಂದಾಗ ಕೆಲವು ಯೆಹೂದ್ಯ ವಿಶ್ವಾಸಿಗಳು*
ಅವನೊಂದಿಗೆ ವಾದ ಮಾಡಿದರು. 3 ಅವರು, “ಯೆಹೂದ್ಯ
ರಲ್ಲದವರ ಮತ್ತು ಸುನ್ನತಿ ಮಾಡಿಸಿಕೊಂಡಿಲ್ಲದವರ ಮನೆಗಳಿಗೆ
ನೀನು ಹೋದೆ! ನೀನು ಅವರೊಂದಿಗೆ ಊಟವನ್ನು ಸಹ
ಮಾಡಿದೆ!” ಎಂದು ಹೇಳಿದರು.

4 ಆದ್ದರಿಂದ ಪೇತ್ರನು ನಡೆದ ಸಂಗತಿಯನ್ನೆಲ್ಲಾ ಅವರಿಗೆ
ವಿವರಿಸಿದನು. 5 ಪೇತ್ರನು ಅವರಿಗೆ, “ನಾನು ಜೊಪ್ಪ
ಪಟ್ಟಣದಲ್ಲಿದ್ದೆನು. ನಾನು ಪ್ರಾರ್ಥಿಸುತ್ತಿದ್ದಾಗ ನನಗೊಂದು
ದರ್ಶನವಾಯಿತು. ಆ ದರ್ಶನದಲ್ಲಿ, ಆಕಾಶದಿಂದ ಇಳಿದು
ಬರುತ್ತಿರುವ ಒಂದು ವಸ್ತುವನ್ನು ಕಂಡೆನು. ಅದು ದೊಡ್ಡ
ತಟ್ಟೆಯಂತಿತ್ತು. ಅದರ ನಾಲ್ಕು ಮೂಲೆಗಳಲ್ಲಿ ಹಗ್ಗವನ್ನು ಕಟ್ಟಿ
ಭೂಮಿಗೆ ಇಳಿಯ ಬಿಡಲಾಗಿತ್ತು. ಅದು ಇಳಿದು ಬಂದು ನನ್ನ
ಸಮೀಪದಲ್ಲೇ ನಿಂತುಕೊಂಡಿತು. 6 ನಾನು ಅದರೊಳಗೆ
ನೋಡಿದೆನು. ಅದರಲ್ಲಿ ಪಶುಗಳೂ ಕ್ರೂರಪ್ರಾಣಿಗಳೂ
ಹರಿದಾಡುವ ಕ್ರಿಮಿಕೀಟಗಳೂ ಹಾರಾಡುವ ಪಕ್ಷಿಗಳೂ
ಇದ್ದವು. 7 ಆಗ, ‘ಪೇತ್ರನೇ, ಎದ್ದೇಳು! ಇವುಗಳಲ್ಲಿ ಯಾವುದನ್ನು
ಬೇಕಾದರೂ ಕೊಯ್ದುತಿನ್ನು!’ ಎಂದು ನನಗೆ ಹೇಳುವ
ವಾಣಿಯನ್ನು ಕೇಳಿದೆನು. 8 ಆದರೆ ನಾನು, ‘ಪ್ರಭುವೇ, ನಾನು
ಹಾಗೆ ಮಾಡಲಾರೆ! ಅಪವಿತ್ರವಾದ ಮತ್ತು ಅಶುದ್ಧವಾದ
ಏನನ್ನಾಗಲಿ ನಾನೆಂದೂ ತಿಂದಿಲ್ಲ, ಎಂದು ಹೇಳಿದೆನು. 9 ಆದರೆ,
‘ಇವುಗಳನ್ನು ದೇವರು ಶುದ್ಧೀಕರಿಸಿದ್ದಾನೆ. ಇವುಗಳನ್ನು ಅಶುದ್ಧ
ವೆಂದು ಹೇಳಬೇಡ!’ ಎಂದು ಆ ವಾಣಿಯು ನನಗೆ ಉತ್ತರ
ಕೊಟ್ಟಿತು. 10 ಹೀಗೆ ಮೂರು ಸಲವಾಯಿತು. ಬಳಿಕ ಆ ಇಡೀ
ವಸ್ತುವನ್ನು ಆಕಾಶಕ್ಕೆ ಹಿಂತೆಗೆದುಕೊಳ್ಳಲಾಯಿತು. 11 ಅದೇ
ಸಮಯದಲ್ಲಿ ನಾನಿದ್ದ ಮನೆಗೆ ಮೂರು ಮಂದಿ ಬಂದರು. ಈ
ಮೂವರನ್ನು ಸೆಜರೇಯ ಪಟ್ಟಣದಿಂದ ಕಳುಹಿಸಲಾಗಿತ್ತು.
12 ಸಂದೇಹಪಡದೆ ಅವರೊಂದಿಗೆ ಹೋಗಬೇಕೆಂದು ಪವಿ
ತ್ರಾತ್ಮನು ನನಗೆ ಹೇಳಿದನು. ಇಲ್ಲಿರುವ ಈ ಆರು ಮಂದಿ
ಸಹೋದರರು ನನ್ನೊಂದಿಗೆ ಬಂದರು. ನಾವು ಕೊರ್ನೇಲಿಯನ
ಮನೆಗೆ ಹೋದೆವು. 13 ತನ್ನ ಮನೆಯಲ್ಲಿ ದೇವದೂತನೊಬ್ಬನು
ನಿಂತಿರುವುದನ್ನು ತಾನು ಕಂಡದ್ದರ ಬಗ್ಗೆ ಕೊರ್ನೇಲಿಯನು
ನನಗೆ ಹೇಳಿದನು. ಆ ದೇವದೂತನು ಕೊರ್ನೇಲಿಯನಿಗೆ,
‘ಕೆಲವು ಜನರನ್ನು ಜೊಪ್ಪಕ್ಕೆ ಕಳುಹಿಸು. ಸೀಮೋನ್ ಪೇತ್ರನನ್ನು
ಆಹ್ವಾನಿಸಿ ನಿಮ್ಮ ಬಳಿಗೆ ಬರಮಾಡಿಕೊ. 14 ಅವನು ನಿಮ್ಮೊಂದಿಗೆ
ಮಾತಾಡುವನು. ಅವನು ಹೇಳುವ ಸಂಗತಿಗಳು ನಿನ್ನನ್ನೂ ನಿನ್ನ
ಕುಟುಂಬದವರನ್ನೂ ರಕ್ಷಿಸುತ್ತವೆ’ ಎಂದು ಹೇಳಿದನು. 15 ನಾನು
ನನ್ನ ಉಪದೇಶವನ್ನು ಆರಂಭಿಸಿದ ಮೇಲೆ, ಪ್ರಾರಂಭದಲ್ಲಿ*
ಪವಿತ್ರಾತ್ಮನು ನಮ್ಮ ಮೇಲೆ ಬಂದಂತೆ ಅವರ ಮೇಲೆಯೂ
ಬಂದನು. 16 ಆಗ ನಾನು ಪ್ರಭುವಿನ ಮಾತುಗಳನ್ನು ಜ್ಞಾಪಿಸಿ
ಕೊಂಡೆನು. ‘ಯೋಹಾನನು ಜನರಿಗೆ ನೀರಿನಲ್ಲಿ ದೀಕ್ಷಾಸ್ನಾನ
ಮಾಡಿಸಿದನು, ಆದರೆ ನೀವು ಪವಿತ್ರಾತ್ಮನಲ್ಲಿ ದೀಕ್ಷಾಸ್ನಾನ ಪಡೆ
ಯುವಿರಿ!’ ಎಂದು ಪ್ರಭುವು ಹೇಳಿದ್ದನು. 17 ಪ್ರಭುವಾದ
ಯೇಸು ಕ್ರಿಸ್ತನಲ್ಲಿ ನಂಬಿಕೆಯಿಟ್ಟ ನಮಗೆ ಕೊಟ್ಟ ವರವನ್ನೇ
ದೇವರು ಈ ಜನರಿಗೆ ಕೊಟ್ಟನು. ಹೀಗಿರಲು ನಾನು ದೇವರ
ಕೆಲಸವನ್ನು ನಿಲ್ಲಿಸಲು ಸಾಧ್ಯವಿರಲಿಲ್ಲ” ಎಂದು ಹೇಳಿದನು.

18 ಯೆಹೂದ್ಯವಿಶ್ವಾಸಿಗಳು ಈ ಸಂಗತಿಗಳನ್ನು ಕೇಳಿದಾಗ
ವಾದವನ್ನು ನಿಲ್ಲಿಸಿ, ದೇವರನ್ನು ಸ್ತುತಿಸುತ್ತಾ“ ಹಾಗಾದರೆ
ನಮ್ಮಂತೆಯೇ ತಮ್ಮ ಹೃದಯಗಳನ್ನು ಮಾರ್ಪಡಿಸಿಕೊಂಡು
ಜೀವವನ್ನು ಹೊಂದಿಕೊಳ್ಳಲು ದೇವರು ಯೆಹೂದ್ಯರಲ್ಲ
ದವರಿಗೂ ಅವಕಾಶ ಕೊಟ್ಟಿದ್ದಾನೆ!”ಎಂದು ಹೇಳಿದರು.

### ಅಂತಿಯೋಕ್ಯಕ್ಕೆ ಸುವಾರ್ತೆ

19 ಸ್ತೆಫನನು ಕೊಲ್ಲಲ್ಪಟ್ಟ ನಂತರ ಉಂಟಾದ ಹಿಂಸೆ
ಯಿಂದಾಗಿ ವಿಶ್ವಾಸಿಗಳು ಚದರಿಹೋದರು. ವಿಶ್ವಾಸಿಗಳಲ್ಲಿ
ಕೆಲವರು ಬಹುದೂರದ ಸ್ಥಳಗಳಾದ ಫೆನಿಷ್ಯ, ಸೈಪ್ರಸ್ ಮತ್ತು
ಅಂತಿಯೋಕ್ಯಗಳಿಗೆ ಹೋದರು. ವಿಶ್ವಾಸಿಗಳು ಈ ಸ್ಥಳಗಳಲ್ಲಿ
ಸುವಾರ್ತೆಯನ್ನು ತಿಳಿಸಿದರು. ಆದರೆ ಅವರು ಯೆಹೂದ್ಯರಿಗೆ
ಮಾತ್ರ ತಿಳಿಸಿದರು. 20 ಈ ವಿಶ್ವಾಸಿಗಳಲ್ಲಿ ಕೆಲವರು ಸೈಪ್ರಸ್
ಮತ್ತು ಸಿರೇನ್ ಸ್ಥಳಗಳವರಾಗಿದ್ದರು. ಈ ಜನರು ಅಂತಿ
ಯೋಕ್ಯಕ್ಕೆ ಬಂದಾಗ ಅವರು, ಪ್ರಭುವಾದ ಯೇಸುವಿನ ವಿಷಯ
ವಾದ ಸುವಾರ್ತೆಯನ್ನು ಅಲ್ಲಿಯ ಗ್ರೀಕ್ ಜನರಿಗೆ ತಿಳಿಸಿದರು.
21 ಪ್ರಭುವು ವಿಶ್ವಾಸಿಗಳಿಗೆ ಸಹಾಯ ಮಾಡುತ್ತಿದ್ದನು. ಜನರು
ಬಹು ಸಂಖ್ಯೆಯಲ್ಲಿ ಪ್ರಭುವನ್ನು ನಂಬಿಕೊಂಡು ಅನುಸರಿಸ
ತೊಡಗಿದರು.

22 ಅಂತಿಯೋಕ್ಯದಲ್ಲಿದ್ದ ಈ ಹೊಸ ವಿಶ್ವಾಸಿಗಳ ಬಗ್ಗೆ ಜೆರುಸ
ಲೇಮಿನ ಸಭೆಯವರಿಗೆ ತಿಳಿಯಿತು. ಆದ್ದರಿಂದ ಜೆರುಸಲೇಮಿನ
ವಿಶ್ವಾಸಿಗಳು ಬಾರ್ನಬನನ್ನು ಅಂತಿಯೋಕ್ಯಕ್ಕೆ ಕಳುಹಿಸಿದರು.

23-24 ಬಾರ್ನಬನು ಒಳ್ಳೆಯ ಮನುಷ್ಯನಾಗಿದ್ದನು. ಅವನು
ಪವಿತ್ರಾತ್ಮಭರಿತನಾಗಿದ್ದನು ಮತ್ತು ಪೂರ್ಣನಂಬಿಕೆಯುಳ್ಳವ
ನಾಗಿದ್ದನು. ಬಾರ್ನಬನು ಅಂತಿಯೋಕ್ಯಕ್ಕೆ ಹೋದಾಗ,
ದೇವರು ಆ ಜನರನ್ನು ಅಧಿಕವಾಗಿ ಆಶೀರ್ವದಿಸಿರುವುದನ್ನು
ಕಂಡನು. ಇದರಿಂದ ಬಾರ್ನಬನಿಗೆ ತುಂಬಾ ಸಂತೋಷ

---

**ಯೆಹೂದ್ಯ ವಿಶ್ವಾಸಿಗಳು** ಅಕ್ಷರಶಃ “ಸುನ್ನತಿಯಾದವರು”. ಕ್ರೈಸ್ತರೆಲ್ಲಾ ಸುನ್ನತಿ ಮಾಡಿಸಿಕೊಳ್ಳಬೇಕು ಮತ್ತು ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯರಾಗಬೇಕು ಎಂದು ಹೇಳುತ್ತಿದ್ದ ಯೆಹೂದ್ಯರೆಂಬ ಅರ್ಥವನ್ನು ಇದು ಕೊಡಬಹುದು.

**ಪ್ರಾರಂಭ** ಪಂಚಶತ್ತಮ ದಿನದಂದು ಆರಂಭವಾದ ಸಭೆ.

ವಾಯಿತು. ಅಂತಿಯೋಕ್ಯದಲ್ಲಿದ್ದ ವಿಶ್ವಾಸಿಗಳನ್ನೆಲ್ಲ ಅವನು
ಪ್ರೋತ್ಸಾಹಿಸಿದನು. ಅವನು ಅವರಿಗೆ, ‘‘ನಿಮ್ಮ ನಂಬಿಕೆಯನ್ನು
ಎಂದಿಗೂ ಕಳೆದುಕೊಳ್ಳಬೇಡಿ. ಪ್ರಭುವಿಗೆ ನಿಮ್ಮ ಪೂರ್ಣ
ಹೃದಯಗಳಿಂದ ಯಾವಾಗಲೂ ವಿಧೇಯರಾಗಿರಿ’’ ಎಂದು
ಹೇಳಿದನು. ಅನೇಕ ಜನರು ಪ್ರಭುವಾದ ಯೇಸುವಿನ ಹಿಂಬಾ
ಲಕರಾದರು.

25ಬಳಿಕ ಬಾರ್ನಬನು ಸೌಲನನ್ನು ಹುಡುಕಿಕೊಂಡು
ತಾರ್ಸಸ್ ಪಟ್ಟಣಕ್ಕೆ ಹೋದನು. 26ಬಾರ್ನಬನು ಅಲ್ಲಿ ಸೌಲ
ನನ್ನು ಕಂಡುಕೊಂಡು ಅವನನ್ನು ಅಂತಿಯೋಕ್ಯಕ್ಕೆ ಕರೆದು
ಕೊಂಡು ಬಂದನು. ಸೌಲನು ಮತ್ತು ಬಾರ್ನಬನು ಅಂತಿ
ಯೋಕ್ಯದಲ್ಲಿ ಒಂದು ವರ್ಷ ಪೂರ್ತಿ ಸಭೆಯ ಅನ್ಯೋನ್ಯತೆ
ಯಲ್ಲಿ ಇದ್ದುಕೊಂಡು ಅನೇಕ ಜನರಿಗೆ ಬೋಧಿಸಿದರು.
ಯೇಸುವಿನ ಹಿಂಬಾಲಕರಿಗೆ ‘ಕ್ರೈಸ್ತರು’ ಎಂಬ ಹೆಸರು ಬಂದದ್ದು
ಅಂತಿಯೋಕ್ಯದಲ್ಲೇ.

27ಆ ಕಾಲದಲ್ಲಿ ಕೆಲವು ಪ್ರವಾದಿಗಳು ಜೆರುಸಲೇಮಿನಿಂದ
ಅಂತಿಯೋಕ್ಯಕ್ಕೆ ಹೋದರು. 28ಈ ಪ್ರವಾದಿಗಳಲ್ಲಿ ‘ಅಗಬ’
ಎಂಬ ಒಬ್ಬನಿದ್ದನು. ಅಗಬನು ಅಂತಿಯೋಕ್ಯದಲ್ಲಿ ಪವಿತ್ರಾತ್ಮನ
ಪ್ರೇರಣೆಯಿಂದ, ‘‘ಇಡೀ ಪ್ರಪಂಚಕ್ಕೆ ಭೀಕರ ಕ್ಷಾಮ ಬರಲಿದೆ’’
ಎಂದು ಹೇಳಿದನು. (ಈ ಬರಗಾಲವು ಕ್ಲಾಡಿಯಸ್ ಚಕ್ರ
ವರ್ತಿಯ ಕಾಲದಲ್ಲಿ ಬಂದಿತು.) 29ಜುದೇಯದಲ್ಲಿರುವ
ಸಹೋದರ ಸಹೋದರಿಯರಿಗೆ ಸಹಾಯಮಾಡಲು ವಿಶ್ವಾಸಿ
ಗಳು ನಿರ್ಧರಿಸಿದರು. ವಿಶ್ವಾಸಿಗಳಲ್ಲಿ ಪ್ರತಿಯೊಬ್ಬರೂ
ತಮ್ಮಿಂದಾದಷ್ಟನ್ನು ಅವರಿಗೆ ಕಳುಹಿಸಿಕೊಡಲು ಯೋಜನೆ
ಮಾಡಿದರು. 30ಅವರು ಹಣವನ್ನು ಕೂಡಿಸಿ ಬಾರ್ನಬ ಮತ್ತು
ಸೌಲರಿಗೆ ಕೊಟ್ಟರು. ಬಳಿಕ ಬಾರ್ನಬ ಮತ್ತು ಸೌಲರು ಅದನ್ನು
ತಂದು ಜುದೇಯದಲ್ಲಿದ್ದ ಸಭಾ ಹಿರಿಯರಿಗೆ ಕೊಟ್ಟರು.

## ಹೆರೋದ ಅಗ್ರಿಪ್ಪನಿಂದ ಸಭೆಗೆ ಹಿಂಸೆ

12 ಆ ಕಾಲದಲ್ಲಿ ರಾಜ ಹೆರೋದನು ಸಭೆಯವರಲ್ಲಿ ಕೆಲ
ವರನ್ನು ಹಿಂಸಿಸತೊಡಗಿ, 2ಯಾಕೋಬನನ್ನು ಕತ್ತಿ
ಯಿಂದ ಕೊಲ್ಲಿಸಿದನು. ಯಾಕೋಬನು ಯೋಹಾನನ ಅಣ್ಣ.
3ಯೆಹೂದ್ಯರು ಇದನ್ನು ಮೆಚ್ಚಿಕೊಂಡರೆಂಬುದು ಹೆರೋದ
ನಿಗೆ ತಿಳಿಯಿತು. ಆದ್ದರಿಂದ ಅವನು ಪೇತ್ರನನ್ನು ಬಂಧಿಸಿ(ಇದು
ನಡೆದದ್ದು ಯೆಹೂದ್ಯರ ಪಸ್ಕಹಬ್ಬದ ಕಾಲದಲ್ಲಿ.) ಸೆರೆಮನೆಗೆ
ಹಾಕಿಸಿದನು. 4ಹದಿನಾರು ಮಂದಿ ಸಿಪಾಯಿಗಳು ಪೇತ್ರನನ್ನು
ಕಾಯುತ್ತಿದ್ದರು. ಪಸ್ಕಹಬ್ಬದ ಕಾಲ ಮುಗಿದೊಡನೆ ಪೇತ್ರನನ್ನು
ಜನರ ಮುಂದೆ ನಿಲ್ಲಿಸಬೇಕೆಂದಿದ್ದನು. 5ಹೀಗೆ ಪೇತ್ರನು
ಸೆರೆಮನೆಯಲ್ಲಿದ್ದಾಗ ಸಭೆಯವರು ಅವನಿಗಾಗಿ ಎಡಬಿಡದೆ
ದೇವರಲ್ಲಿ ಪ್ರಾರ್ಥಿಸುತ್ತಿದ್ದರು.

## ಪೇತ್ರನಿಗೆ ಸೆರೆಮನೆಯಿಂದ ಬಿಡುಗಡೆ

6ಪೇತ್ರನು ಇಬ್ಬರು ಸೈನಿಕರ ಮಧ್ಯೆ ನಿದ್ರೆಮಾಡುತ್ತಿದ್ದನು.
ಅವನನ್ನು ಎರಡು ಸರಪಣಿಗಳಿಂದ ಕಟ್ಟಲಾಗಿತ್ತು. ಅನೇಕ
ಸೈನಿಕರು ಸೆರೆಮನೆಯ ಬಾಗಿಲನ್ನು ಕಾಯುತ್ತಿದ್ದರು. ಆಗ
ರಾತ್ರಿಯಾಗಿತ್ತು. ಮರುದಿನ ಪೇತ್ರನನ್ನು ಜನರ ಮುಂದೆ ತರ
ಬೇಕೆಂದು ಹೆರೋದನು ಯೋಚಿಸಿಕೊಂಡಿದ್ದನು. 7ಇದ್ದಕ್ಕಿ
ದ್ದಂತೆ, ಪ್ರಭುವಿನ ದೂತನೊಬ್ಬನು ಅಲ್ಲಿ ನಿಂತುಕೊಂಡನು.
ಬೆಳಕು ಕೋಣೆಯಲ್ಲಿ ಪ್ರಕಾಶಿಸಿತು. ದೇವದೂತನು ಪೇತ್ರನ
ಪಕ್ಕೆಯನ್ನು ಮುಟ್ಟಿ ಅವನನ್ನು ಎಬ್ಬಿಸಿ, ‘‘ಬೇಗನೆ ಎದ್ದೇಳು!’’
ಎಂದನು. ಆ ಕೂಡಲೆ ಸರಪಣಿಗಳು ಪೇತ್ರನ ಕೈಗಳಿಂದ
ಕಳಚಿಬಿದ್ದವು. 8ದೇವದೂತನು ಪೇತ್ರನಿಗೆ, ‘‘ಬಟ್ಟೆ ಧರಿಸಿಕೋ,
ಪಾದರಕ್ಷೆಗಳನ್ನು ಮೆಟ್ಟಿಕೋ’’ ಎಂದು ಹೇಳಿದನು. ಅಂತೆಯೇ
ಪೇತ್ರನು ಮಾಡಿದನು. ಬಳಿಕ ದೇವದೂತನು, ‘‘ನಿನ್ನ ಮೇಲಂಗಿ
ಯನ್ನು ಧರಿಸಿಕೊಂಡು ನನ್ನನ್ನು ಹಿಂಬಾಲಿಸು‘‘ ಎಂದನು.
9ದೇವದೂತನು ಹೊರಗೆ ಹೋದನು. ಪೇತ್ರನು ಅವನನ್ನು
ಹಿಂಬಾಲಿಸಿದನು. ದೇವದೂತನು ನಿಜವಾಗಿಯೂ ಹೀಗೆ
ಮಾಡುತ್ತಿದ್ದಾನೆಂಬುದು ಪೇತ್ರನಿಗೆ ತಿಳಿದಿರಲಿಲ್ಲ. ತಾನು ಕನಸು
ಕಾಣುತ್ತಿರಬಹುದೆಂದು ಅವನು ಯೋಚಿಸಿಕೊಂಡನು. 10
ಪೇತ್ರನು ಮತ್ತು ದೇವದೂತನು ಮೊದಲನೆಯ ಮತ್ತು
ಎರಡನೆಯ ಕಾವಲನ್ನು ದಾಟಿ ಹೋದರು. ಬಳಿಕ ಅವರು
ತಮ್ಮನ್ನು ಪಟ್ಟಣದತ್ತ ನಡೆಸುವ ಕಬ್ಬಿಣದ ಬಾಗಿಲಿಗೆ ಬಂದರು.
ಆ ಬಾಗಿಲು ಅವರಿಗಾಗಿ ತನ್ನಷ್ಟಕ್ಕೆ ತಾನೇ ತೆರೆದುಕೊಂಡಿತು.
ಪೇತ್ರ ಮತ್ತು ಆ ದೇವದೂತನು ಬಾಗಿಲ ಮೂಲಕ ಹೊರಗೆ
ಬಂದು ಒಂದು ಬೀದಿಯನ್ನು ದಾಟಿದರು. ಆಗ ಇದ್ದಕ್ಕಿದ್ದಂತೆ
ಆ ದೇವದೂತನು ಅವನನ್ನು ಬಿಟ್ಟುಹೋದನು.

11ನಡೆದ ಸಂಗತಿಯನ್ನು ಆಗ ಅರಿತುಕೊಂಡ ಪೇತ್ರನು
‘‘ಪ್ರಭುವು ನನ್ನ ಬಳಿಗೆ ತನ್ನ ದೇವದೂತನನ್ನು ನಿಜವಾಗಿಯೂ
ಕಳುಹಿಸಿದನೆಂದು ಈಗ ನನಗೆ ತಿಳಿಯಿತು. ಆತನು ನನ್ನನ್ನು
ಹೆರೋದನ ಕೈಯಿಂದ ಪಾರುಮಾಡಿದನು. ನನಗೆ ಕೇಡು
ಸಂಭವಿಸುತ್ತದೆಯೆಂದು ಯೆಹೂದ್ಯರು ಯೋಚಿಸಿಕೊಂಡಿ
ದ್ದರು. ಆದರೆ ಪ್ರಭುವು ನನ್ನನ್ನು ಆ ಕೇಡಿನಿಂದ ರಕ್ಷಿಸಿದನು’’
ಎಂದುಕೊಂಡನು.

12ಬಳಿಕ ಪೇತ್ರನು ಮರಿಯಳ ಮನೆಗೆ ಹೋದನು.
ಆಕೆಯು ಯೋಹಾನನ ತಾಯಿ. (ಯೋಹಾನನನ್ನು ಮಾರ್ಕ
ನೆಂದು ಕರೆಯುತ್ತಿದ್ದರು.) ಅನೇಕ ಜನರು ಅಲ್ಲಿ ಸೇರಿದ್ದರು.
ಅವರೆಲ್ಲರೂ ಪ್ರಾರ್ಥಿಸುತ್ತಿದ್ದರು. 13ಪೇತ್ರನು ಹೊರ
ಬಾಗಿಲನ್ನು ತಟ್ಟಿದನು. ಯಾರೆಂದು ವಿಚಾರಿಸುವುದಕ್ಕಾಗಿ
ರೋದೆ ಎಂಬ ಸೇವಕಿ ಬಂದಳು. 14ರೋದೆಯು ಪೇತ್ರನ
ಧ್ವನಿಯನ್ನು ಗುರುತಿಸಿದಳು. ಆಕೆಗೆ ತುಂಬಾ ಸಂತೋಷ
ವಾಯಿತು. ಬಾಗಿಲು ತೆರೆಯುವುದನ್ನು ಆಕೆ ಮರೆತು, ನೆರೆದು
ಬಂದಿದ್ದ ಜನರ ಬಳಿಗೆ ಓಡಿಹೋಗಿ‘‘ಪೇತ್ರನು ಬಾಗಿಲ ಬಳಿ
ನಿಂತಿದ್ದಾನೆ!’’ಎಂದು ಹೇಳಿದಳು. 15ಆ ವಿಶ್ವಾಸಿಗಳು ಆಕೆಗೆ,
‘‘ನಿನಗೆ ಹುಚ್ಚು ಹಿಡಿದಿದೆ!’’ ಎಂದರು. ಆದರೆ ಅವಳು ತಾನು
ಹೇಳುತ್ತಿರುವುದು ನಿಜವೆಂದು ಒತ್ತಿಹೇಳಿದಳು. ಆದ್ದರಿಂದ
ಅವರು, ‘‘ಅವನು ಪೇತ್ರನ ದೂತನಿರಬೇಕು’’ ಎಂದು
ಹೇಳಿದರು.

16ಆದರೆ ಪೇತ್ರನು ಬಾಗಿಲನ್ನು ತಟ್ಟುತ್ತಲೇ ಇದ್ದನು. ಆ
ವಿಶ್ವಾಸಿಗಳು ಬಾಗಿಲನ್ನು ತೆರೆದಾಗ ಅವರು ಪೇತ್ರನನ್ನು ಕಂಡು
ವಿಸ್ಮಿತರಾದರು. 17ಪೇತ್ರನು ಅವರಿಗೆ ಸುಮ್ಮನಿರಬೇಕೆಂದು ಸನ್ನೆ
ಮಾಡಿದನು. ಪ್ರಭುವು ತನ್ನನ್ನು ಸೆರೆಮನೆಯಿಂದ ಬಿಡಿಸಿದ
ರೀತಿಯನ್ನು ಅವನು ಅವರಿಗೆ ವಿವರಿಸಿ, ‘‘ಯಾಕೋಬನಿಗೂ
ಮತ್ತು ಸಹೋದರರಿಗೂ ಈ ಸಂಗತಿಯನ್ನು ತಿಳಿಸಿರಿ’’ ಎಂದು
ಹೇಳಿದನು. ಬಳಿಕ ಪೇತ್ರನು ಬೇರೊಂದು ಸ್ಥಳಕ್ಕೆ ಹೋಗಲು
ಅಲ್ಲಿಂದ ಹೊರಟನು.

18ಮರುದಿನ, ಪೇತ್ರನು ಏನಾದನೆಂದು ಸೈನಿಕರ ನಡುವೆ ದೊಡ್ಡ ಗೊಂದಲವೇ ಎದ್ದಿತು. 19ಹೆರೋದನು ಎಲ್ಲೆಲ್ಲಿ ಹುಡುಕಿದರೂ ಪೇತ್ರನನ್ನು ಕಂಡುಹಿಡಿಯಲಾಗಲಿಲ್ಲ. ಆದ್ದರಿಂದ ಹೆರೋದನು ಕಾವಲುಗಾರರನ್ನು ವಿಚಾರಿಸಿ ಅವರಿಗೇ ಮರಣದಂಡನೆ ವಿಧಿಸಿದನು.

### ಹೆರೋದ ಅಗ್ರಿಪ್ಪನ ಮರಣ

20 ತರುವಾಯ ಹೆರೋದನು ಜುದೇಯದಿಂದ ಹೊರಟು ಸೆಜರೇಯ ಪಟ್ಟಣಕ್ಕೆ ಬಂದು ಅಲ್ಲೇ ಸ್ವಲ್ಪಕಾಲ ನೆಲೆಸಿದ್ದನು. ಟೈರ್ ಮತ್ತು ಸಿದೋನ್ ಪಟ್ಟಣಗಳ ಜನರ ಮೇಲೆ ಹೆರೋದನು ಬಹು ಕೋಪಗೊಂಡಿದ್ದನು. ಆ ಜನರೆಲ್ಲರೂ ಹೆರೋದನನ್ನು ಭೇಟಿಯಾಗಲು ಒಟ್ಟಾಗಿ ಹೋದರು. ಅವರು ಬ್ಲಾಸ್ತನನ್ನು ತಮ್ಮ ಕಡೆಗೆ ಒಲಿಸಿಕೊಂಡರು. ಬ್ಲಾಸ್ತನು ರಾಜನ ವೈಯಕ್ತಿಕ ಸೇವಕನಾಗಿದ್ದನು. ಆ ಜನರು ತಮ್ಮೊಂದಿಗೆ ಶಾಂತಿ ಸಂಧಾನ ಮಾಡಿಕೊಳ್ಳಬೇಕೆಂದು ಹೆರೋದನನ್ನು ಕೇಳಿಕೊಂಡರು. ಯಾಕೆಂದರೆ ಅವರ ನಾಡಿಗೆ ಹೆರೋದನ ನಾಡಿನಿಂದ ಆಹಾರವನ್ನು ತರಿಸಿಕೊಳ್ಳಬೇಕಾಗಿತ್ತು.

21ಅವರನ್ನು ಸಂಧಿಸುವುದಕ್ಕಾಗಿ ಹೆರೋದನು ದಿನವೊಂದನ್ನು ಗೊತ್ತುಮಾಡಿದನು. ಅಂದು ಹೆರೋದನು ಸುಂದರವಾದ ರಾಜವಸ್ತ್ರವನ್ನು ಧರಿಸಿಕೊಂಡಿದ್ದನು. ಅವನು ತನ್ನ ಸಿಂಹಾಸನದ ಮೇಲೆ ಕುಳಿತುಕೊಂಡು ಜನರಿಗೆ ಭಾಷಣ ಮಾಡಿದನು. 22ಆ ಜನರು,‘‘ಈ ಧ್ವನಿಯು ಮನುಷ್ಯನದಲ್ಲ, ದೇವರದೇ!’’ ಎಂದು ಕೂಗಿದರು. 23ಹೆರೋದನು ಈ ಹೊಗಳಿಕೆಯನ್ನು ತಾನೇ ಸ್ವೀಕರಿಸಿಕೊಂಡನು, ದೇವರನ್ನು ಮಹಿಮೆಪಡಿಸಲಿಲ್ಲ. ಆದ್ದರಿಂದ ಆ ಕ್ಷಣವೇ, ಪ್ರಭುವಿನ ದೂತನೊಬ್ಬನು ಅವನಿಗೆ ಕಾಯಿಲೆಯನ್ನು ಬರಮಾಡಿದನು. ಅವನ ದೇಹದ ಒಳಭಾಗವನ್ನು ಹುಳಗಳು ತಿಂದುಹಾಕಿದ್ದರಿಂದ ಅವನು ಸತ್ತುಹೋದನು.

24ದೇವರ ಸಂದೇಶವು ಹಬ್ಬುತ್ತಿತ್ತು ಮತ್ತು ಹೆಚ್ಚುಹೆಚ್ಚು ಜನರ ಮೇಲೆ ಪ್ರಭಾವ ಬೀರುತ್ತಿತ್ತು. ಇದರಿಂದ ವಿಶ್ವಾಸಿಗಳ ಸಮುದಾಯವು ದೊಡ್ಡದಾಗತೊಡಗಿತು.

25ಬಾರ್ನಬ ಮತ್ತು ಸೌಲರು ಜೆರುಸಲೇಮಿನಲ್ಲಿ ತಮ್ಮ ಕಾರ್ಯವನ್ನು ಮುಗಿಸಿದ ಮೇಲೆ ಅಂತಿಯೋಕ್ಯಕ್ಕೆ ಹಿಂತಿರುಗಿದರು. ಮಾರ್ಕನೆಂಬ ಯೋಹಾನನು ಅವರೊಂದಿಗಿದ್ದನು.

### ಬಾರ್ನಬ ಮತ್ತು ಸೌಲರಿಗೆ ವಹಿಸಲಾದ ವಿಶೇಷಕಾರ್ಯ

13 ಅಂತಿಯೋಕ್ಯದ ಸಭೆಯಲ್ಲಿ ಕೆಲವು ಪ್ರವಾದಿಗಳು ಮತ್ತು ಉಪದೇಶಕರಿದ್ದರು. ಅವರು ಯಾರಂದರೆ: ಬಾರ್ನಬ, ಸಿಮೆಯೋನ್(ಇವನನ್ನು ನೀಗರ್ ಎಂತಲೂ ಕರೆಯುತ್ತಿದ್ದರು.) ಲೂಸಿಯಸ್(ಸಿರೇನ್ ಪಟ್ಟಣದವನು) ಮೆನಹೇನ (ಹೆರೋದ ರಾಜನೊಂದಿಗೆ ಬೆಳೆದವನು.) ಮತ್ತು ಸೌಲ. 2ಇವರೆಲ್ಲರು ಪ್ರಭುವಿನ ಸೇವೆ ಮಾಡುತ್ತಿದ್ದರು ಮತ್ತು ಉಪವಾಸ ಮಾಡುತ್ತಿದ್ದರು. ಪವಿತ್ರಾತ್ಮನು ಅವರಿಗೆ, ‘‘ನಾನು ವಿಶೇಷವಾದ ಕಾರ್ಯಕ್ಕಾಗಿ ಬಾರ್ನಬ ಮತ್ತು ಸೌಲರನ್ನು ಆರಿಸಿಕೊಂಡಿದ್ದೇನೆ. ಆ ಕಾರ್ಯಕ್ಕಾಗಿ ಅವರನ್ನು ಪ್ರತ್ಯೇಕಿಸಿರಿ’’ ಎಂದು ಹೇಳಿದನು.

3ಆದ್ದರಿಂದ ಸಭೆಯವರು ಉಪವಾಸವಿದ್ದು ಪ್ರಾರ್ಥನೆ ಮಾಡಿದರು. ಅವರು ಬಾರ್ನಬ ಮತ್ತು ಸೌಲರ ಮೇಲೆ ಹಸ್ತಾರ್ಪಣೆ ಮಾಡಿ ಅವರನ್ನು ಕಳುಹಿಸಿಕೊಟ್ಟರು.

### ಸೈಪ್ರಸ್‌ನಲ್ಲಿ ಬಾರ್ನಬ ಮತ್ತು ಸೌಲರು

4ಬಾರ್ನಬ ಮತ್ತು ಸೌಲರನ್ನು ಪವಿತ್ರಾತ್ಮನೇ ಕಳುಹಿಸಿಕೊಟ್ಟನು. ಅವರು ಸೆಲೂಸಿಯಾ ಪಟ್ಟಣಕ್ಕೆ ಹೋದರು. ಬಳಿಕ ಅವರು ಸೆಲೂಸಿಯಾದಿಂದ ಸೈಪ್ರಸ್ ದ್ವೀಪಕ್ಕೆ ಹಡಗಿನಲ್ಲಿ ಪ್ರಯಾಣ ಮಾಡಿದರು. 5ಬಾರ್ನಬ ಮತ್ತು ಸೌಲರು ಸಲಾಮಿಸ್ ಪಟ್ಟಣಕ್ಕೆ ಬಂದಾಗ ಯೆಹೂದ್ಯರ ಸಭಾಮಂದಿರದಲ್ಲಿ ದೇವರ ಸಂದೇಶವನ್ನು ಸಾರಿದರು. (ಮಾರ್ಕನೆನಿಸಿಕೊಳ್ಳುವ ಯೋಹಾನನು ಸಹಾಯ ಮಾಡುವುದಕ್ಕಾಗಿ ಅವರೊಂದಿಗಿದ್ದನು.)

6ಅವರು ಆ ದ್ವೀಪದಲ್ಲೆಲ್ಲಾ ಪ್ರಯಾಣ ಮಾಡುತ್ತಾ ಪಾಫೊಸ್‌ಎಂಬ ಊರಿಗೆ ಹೋದರು. ಮಂತ್ರ ತಂತ್ರಗಳನ್ನು ಮಾಡುತ್ತಿದ್ದ ಒಬ್ಬ ಯೆಹೂದ್ಯನನ್ನು ಅವರು ಪಾಫೊಸಿನಲ್ಲಿ ಕಂಡರು. ಅವನ ಹೆಸರು ‘ಬಾರ್‌ಯೇಸು.’ ಅವನೊಬ್ಬ ಸುಳ್ಳು ಪ್ರವಾದಿ. 7ಸೆರ್ಗ್ಯಪೌಲನೆಂಬ ರಾಜ್ಯಪಾಲನ ಹತ್ತಿರದಲ್ಲೇ ಅವನು ಯಾವಾಗಲೂ ಇರುತ್ತಿದ್ದನು. ಸೆರ್ಗ್ಯಪೌಲನು ಜ್ಞಾನವಂತನಾಗಿದ್ದನು. ಅವನು ದೇವರ ವಾಕ್ಯವನ್ನು ಕೇಳಲು ಬಾರ್ನಬ ಮತ್ತು ಸೌಲರನ್ನು ಆಮಂತ್ರಿಸಿದನು. 8ಆದರೆ ಮಂತ್ರವಾದಿಯಾದ ಎಲಿಮನು ಬಾರ್ನಬ ಮತ್ತು ಸೌಲರಿಗೆ ವಿರೋಧವಾಗಿದ್ದನು. (ಬಾರ್ ಯೇಸುವನ್ನು ಗ್ರೀಕ್ ಭಾಷೆಯಲ್ಲಿ ಎಲಿಮ ಎಂದು ಕರೆಯುತ್ತಿದ್ದರು.) ರಾಜ್ಯಪಾಲನು ಯೇಸುವಿನಲ್ಲಿ ನಂಬಿಕೆ ಇಡದ ಹಾಗೆ ಮಾಡಲು ಎಲಿಮನು ಪ್ರಯತ್ನಿಸಿದನು. 9ಆದರೆ ಪೌಲನು ಪವಿತ್ರಾತ್ಮಭರಿತನಾದನು. (ಸೌಲನ ಮತ್ತೊಂದು ಹೆಸರು ಪೌಲ.) ಪೌಲನು ಎಲಿಮನನ್ನು ದಿಟ್ಟಿಸಿ ನೋಡಿ, 10ಅವನಿಗೆ, ‘‘ನೀನು ಸೈತಾನನ ಮಗ! ಪ್ರತಿಯೊಂದು ಒಳ್ಳೆಯದಕ್ಕೂ ನೀನು ಶತ್ರು! ನೀನು ದುಷ್ಟತಂತ್ರಗಳಿಂದಲೂ ಸುಳ್ಳುಗಳಿಂದಲೂ ತುಂಬಿದವನಾಗಿರುವೆ. ಪ್ರಭುವಿನ ಸತ್ಯಗಳನ್ನು ಸುಳ್ಳುಗಳನ್ನಾಗಿ ಪರಿವರ್ತಿಸಲು ನೀನು ಯಾವಾಗಲೂ ಪ್ರಯತ್ನಿಸುತ್ತಿರುವೆ! 11ಇಗೋ, ಪ್ರಭುವು ಕೈ ಎತ್ತಿದ್ದಾನೆ. ನೀನು ಕುರುಡನಾಗಿ ಸ್ವಲ್ಪಕಾಲದವರೆಗೆ ಏನನ್ನೂ ನೋಡಲಾರೆ; ಸೂರ್ಯನ ಬೆಳಕನ್ನು ಸಹ ಕಾಣಲಾರೆ’’ ಎಂದನು.

ಆಗ ಎಲಿಮನಿಗೆ ಎಲ್ಲವೂ ಕತ್ತಲಾಯಿತು. ತನ್ನನ್ನು ಯಾರಾದರೂ ಕೈಹಿಡಿದು ನಡೆಸಲೆಂದು ಅವನು ತಡವರಿಸುತ್ತಾ ಸುತ್ತಮುತ್ತ ನಡೆದನು. 12ಇದನ್ನು ಕಂಡ ರಾಜ್ಯಪಾಲನು ಪ್ರಭುವನ್ನು ನಂಬಿಕೊಂಡನು. ಪ್ರಭುವಿನ ವಿಷಯವಾದ ಉಪದೇಶವನ್ನು ಕೇಳಿ ವಿಸ್ಮಿತನಾದನು.

### ಪೌಲ ಬಾರ್ನಬರು ಸೈಪ್ರಸ್‌ನಿಂದ ತೆರಳುವವರು

13ಪೌಲ ಮತ್ತು ಅವನ ಸಂಗಡಿಗರು ಪಾಫೊಸಿನಿಂದ ನೌಕಾಯಾನ ಮಾಡಿದರು. ಪಾಂಫೀಲಿಯ ಪ್ರಾಂತ್ಯದಲ್ಲಿದ್ದ ಪೆರ್ಗ ಎಂಬ ಪಟ್ಟಣಕ್ಕೆ ಅವರು ಬಂದರು. ಆದರೆ ಮಾರ್ಕನೆನಿಸಿಕೊಳ್ಳುವ ಯೋಹಾನನು ಅವರನ್ನು ಬಿಟ್ಟು ಜೆರುಸಲೇಮಿಗೆ ಹಿಂತಿರುಗಿದನು. 14ಅವರು ತಮ್ಮ ಪ್ರಯಾಣವನ್ನು ಪೆರ್ಗದಿಂದ

ಮುಂದುವರಿಸಿ, ಪಿಸಿದಿಯ ಸೀಮೆಗೆ ಸೇರಿದ ಅಂತಿಯೋಕ್ಯಕ್ಕೆ
ಹೋದರು. ಅವರು ಅಂತಿಯೋಕ್ಯದಲ್ಲಿ ಸಬ್ಬತ್‌ದಿನದಂದು
ಯೆಹೂದ್ಯರ ಸಭಾಮಂದಿರದೊಳಗೆ ಹೋಗಿ ಕುಳಿತು
ಕೊಂಡರು. [15]ಮೋಶೆಯ ಧರ್ಮಶಾಸ್ತ್ರವನ್ನು ಮತ್ತು ಪ್ರವಾದಿ
ಗಳ ಗ್ರಂಥಗಳನ್ನು ಓದಲಾಯಿತು. ಬಳಿಕ ಸಭಾಮಂದಿರದ
ನಾಯಕರು ಪೌಲ ಬಾರ್ನಬರಿಗೆ, ‘‘ಸಹೋದರರೇ, ಇಲ್ಲಿರುವ
ಜನರಿಗೆ ಸಹಾಯವಾಗುವಂತೆ ಏನನ್ನಾದರೂ ನೀವು ಹೇಳ
ಬೇಕೆಂದಿದ್ದರೆ, ದಯವಿಟ್ಟು ಹೇಳಿ!’’ ಎಂಬ ಸಂದೇಶವನ್ನು
ಕಳುಹಿಸಿದರು.

[16]ಪೌಲನು ಎದ್ದುನಿಂತುಕೊಂಡು ತನ್ನ ಮಾತುಗಳನ್ನು
ಕೇಳಬೇಕೆಂದು ಜನರಿಗೆ ಕೈಸನ್ನೆ ಮಾಡಿ ಇಂತೆಂದನು: ‘‘ನನ್ನ
ಯೆಹೂದ್ಯಸಹೋದರರೇ, ನಿಜ ದೇವರನ್ನು ಆರಾಧಿಸುವ ಇತರ
ಜನರೇ, ದಯವಿಟ್ಟು ನನಗೆ ಕಿವಿಗೊಡಿರಿ! [17]ಇಸ್ರೇಲರ
ದೇವರು ನಮ್ಮ ಪಿತೃಗಳನ್ನು ಆರಿಸಿಕೊಂಡನು. ಈಜಿಪ್ಟಿನಲ್ಲಿ
ಪ್ರವಾಸಿಗರಾಗಿ ವಾಸಿಸುತ್ತಿದ್ದ ತನ್ನ ಜನರಿಗೆ ದೇವರು ಸಹಾಯ
ಮಾಡಿ ಅಭಿವೃದ್ಧಿಪಡಿಸಿದನು. ದೇವರು ತನ್ನ ಮಹಾ ಶಕ್ತಿಯಿಂದ
ಅವರನ್ನು ಆ ದೇಶದೊಳಗಿಂದ ಬರಮಾಡಿದನು. [18]ಮರಳು
ಗಾಡಿನಲ್ಲಿ ನಲವತ್ತು ವರ್ಷಗಳ ಕಾಲ ಅವರನ್ನು ಸಹಿಸಿ
ಕೊಂಡನು. [19]ಕಾನಾನ್ ನಾಡಿನ ಏಳು ಜನಾಂಗಗಳನ್ನು ನಾಶ
ಮಾಡಿ ತನ್ನ ಜನರಿಗೆ ಆ ನಾಡನ್ನು ಸ್ವಾಸ್ತ್ಯವಾಗಿ ಕೊಟ್ಟನು.
[20]ಇವೆಲ್ಲಾ ಸುಮಾರು ನಾನೂರ ಐವತ್ತು ವರ್ಷಗಳ ಅವಧಿ
ಯಲ್ಲಿ ನಡೆದವು.

‘‘ಇದಾದ ಮೇಲೆ ಪ್ರವಾದಿಯಾದ ಸಮುವೇಲನ ಕಾಲದ
ವರೆಗೆ ದೇವರು ನಮ್ಮ ಜನರಿಗೆ ನ್ಯಾಯಸ್ಥಾಪಕರನ್ನು ಕೊಟ್ಟನು.
[21]ಬಳಿಕ ಜನರು ತಮಗೆ ರಾಜನು ಬೇಕೆಂದು ಕೇಳಿಕೊಂಡರು.
ದೇವರು ಅವರಿಗೆ ಕೀಷನ ಮಗನಾದ ಸೌಲನನ್ನು ಕೊಟ್ಟನು.
ಸೌಲನು ಬೆನ್ಯಾಮೀನ್ ಕುಲದವನು. ಅವನು ನಲವತ್ತು ವರ್ಷ
ಗಳ ಕಾಲ ರಾಜನಾಗಿದ್ದನು. [22]ದೇವರು ಸೌಲನನ್ನು ತೆಗೆದು
ಹಾಕಿದ ಮೇಲೆ ದಾವೀದನನ್ನು ಅವರ ರಾಜನನ್ನಾಗಿ
ಮಾಡಿದನು. ‘ಇಷಯನ ಮಗನಾದ ದಾವೀದನು ನನಗೆ ಮೆಚ್ಚಿಗೆ
ಯಾದವನು. ಅವನು ನನ್ನ ಅಪೇಕ್ಷೆಗೆ ತಕ್ಕಂತೆ ಕಾರ್ಯಗಳನ್ನು
ಮಾಡುತ್ತಾನೆ.’ ಎಂದು ದೇವರು ದಾವೀದನ ಬಗ್ಗೆ ಹೇಳಿದ್ದಾನೆ.
[23]ದೇವರು ತನ್ನ ವಾಗ್ದಾನಕ್ಕನುಸಾರವಾಗಿ ದಾವೀದನ ಸಂತಾನ
ದವರಲ್ಲಿ ಒಬ್ಬನನ್ನು ಇಸ್ರೇಲರ ರಕ್ಷಕನನ್ನಾಗಿ ಕಳುಹಿಸಿ
ಕೊಟ್ಟಿದ್ದಾನೆ. ಆತನೇ ಯೇಸು. [24]ಯೇಸು ಬರುವುದಕ್ಕಿಂತ
ಮೊದಲು (ಸ್ನಾನಿಕ) ಯೋಹಾನನು ಯೆಹೂದ್ಯ ಜನರಿಗೆಲ್ಲಾ
ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿ
ಕೊಂಡು ದೀಕ್ಷಾಸ್ನಾನ ಮಾಡಿಸಿಕೊಳ್ಳಿರಿ ಎಂದು ಬೋಧಿಸಿ
ದನು. [25]‘ನಾನು ಯಾರೆಂದು ನೀವು ಯೋಚಿಸುತ್ತೀರಿ? ನಾನು
ಕ್ರಿಸ್ತನಲ್ಲ. ಆತನು ನನ್ನ ತರುವಾಯ ಬರುತ್ತಾನೆ. ಆತನ
ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು ಯೋಗ್ಯನಲ್ಲ’ ಎಂದು
ಯೋಹಾನನು ತನ್ನ ಕಾರ್ಯವನ್ನು ಮಾಡಿ ಪೂರೈಸುತ್ತಿದ್ದಾಗ
ಹೇಳಿಕೊಂಡಿದ್ದಾನೆ.

[26]‘‘ನನ್ನ ಸಹೋದರರೇ, ಅಬ್ರಹಾಮನ ಕುಟುಂಬದ
ಪುತ್ರರೇ, ನಿಜದೇವರನ್ನು ಆರಾಧಿಸುತ್ತಿರುವ ಯೆಹೂದ್ಯರಲ್ಲ
ದವರೇ, ಕೇಳಿರಿ! ಈ ರಕ್ಷಣೆಯ ಸಂದೇಶವನ್ನು ಕಳುಹಿ
ಸಿರುವುದು ನಮಗಾಗಿಯೇ. [27]ಜೆರುಸಲೇಮಿನಲ್ಲಿ ವಾಸವಾಗಿದ್ದ
ಯೆಹೂದ್ಯರು ಮತ್ತು ಯೆಹೂದ್ಯ ನಾಯಕರು ಯೇಸುವೇ
ರಕ್ಷಕನೆಂಬುದನ್ನು ಅರ್ಥಮಾಡಿಕೊಳ್ಳಲಿಲ್ಲ. ಪ್ರವಾದಿಗಳು
ಯೇಸುವಿನ ಬಗ್ಗೆ ಬರೆದಿದ್ದ ಮಾತುಗಳನ್ನು ಪ್ರತಿ ಸಬ್ಬತ್
ದಿನದಂದು ಓದಲಾಗುತ್ತಿತ್ತು. ಆದರೆ ಅವರು ಅರ್ಥಮಾಡಿ
ಕೊಳ್ಳಲಿಲ್ಲ. ಆ ಯೆಹೂದ್ಯರು ಯೇಸುವನ್ನು ಅಪರಾಧಿಯೆಂದು
ತೀರ್ಪು ಮಾಡಿದರು. ಹೀಗೆ ಮಾಡುವುದರ ಮೂಲಕವಾಗಿ
ಅವರು ಪ್ರವಾದಿಗಳ ನುಡಿಗಳನ್ನು ನೆರವೇರಿಸಿದರು! [28]ಯೇಸು
ಸಾಯಲೇಬೇಕೆಂಬುದಕ್ಕೆ ಸರಿಯಾದ ಕಾರಣವನ್ನು ಅವರು
ಕಂಡುಹಿಡಿಯಲಾಗದಿದ್ದರೂ ಯೇಸುವನ್ನು ಕೊಲ್ಲಿಸ
ಬೇಕೆಂದು ಪಿಲಾತನನ್ನು ಕೇಳಿಕೊಂಡರು. [29]ಪವಿತ್ರ ಗ್ರಂಥದಲ್ಲಿ
ಬರೆದಿರುವಂತೆ ಯೇಸುವಿಗೆ ಸಂಭವಿಸಬೇಕಾಗಿದ್ದ ಕೆಟ್ಟವು
ಗಳನ್ನೆಲ್ಲ ಯೆಹೂದ್ಯರು ಆತನಿಗೆ ಮಾಡಿದರು. ಬಳಿಕ ಅವರು
ಯೇಸುವನ್ನು ಶಿಲುಬೆಯಿಂದ ಕೆಳಗಿಳಿಸಿ ಸಮಾಧಿಯಲ್ಲಿಟ್ಟರು.
[30]ಆದರೆ ದೇವರು ಆತನನ್ನು ಸತ್ತವರೊಳಗಿಂದ ಜೀವಂತವಾಗಿ
ಎಬ್ಬಿಸಿದನು! [31]ಇದಾದ ಮೇಲೆ ಗಲಿಲಾಯದಿಂದ ಯೇಸುವಿ
ನೊಂದಿಗೆ ಜೆರುಸಲೇಮಿಗೆ ಬಂದಿದ್ದವರು, ಅನೇಕ ದಿನಗಳ
ವರೆಗೆ ಆತನನ್ನು ನೋಡಿದರು. ಈಗ ಅವರೇ ಜನರಿಗೆ
ಸಾಕ್ಷಿಗಳಾಗಿದ್ದಾರೆ. [32]ದೇವರು ನಮ್ಮ ಪಿತೃಗಳಿಗೆ ಮಾಡಿದ
ವಾಗ್ದಾನದ ವಿಷಯವಾದ ಸುವಾರ್ತೆಯನ್ನು ನಾವು ನಿಮಗೆ
ಹೇಳುತ್ತೇವೆ. [33]ನಾವು ಅವರ ಸಂತತಿಯವರಾಗಿದ್ದೇವೆ. ದೇವರು
ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ ಎಬ್ಬಿಸುವುದರ
ಮೂಲಕ ಆ ವಾಗ್ದಾನವನ್ನು ನಮಗಾಗಿ ನೆರವೇರಿಸಿದ್ದಾನೆ. ಇದರ
ಬಗ್ಗೆ ಎರಡನೆ ಕೀರ್ತನೆಯಲ್ಲಿ ಹೀಗೆಂದು ಬರೆದಿದೆ:

> ‘ನೀನೇ ನನ್ನ ಮಗನು. ಇಂದೇ ನಾನು ನಿನ್ನನ್ನು
> ಪಡೆದೆನು.’ *ಕೀರ್ತನೆ 2:7*

[34]ದೇವರು ಯೇಸುವನ್ನು ಸತ್ತವರೊಳಗಿಂದ ಜೀವಂತವಾಗಿ
ಎಬ್ಬಿಸಿದ್ದರಿಂದ ಆತನು ಇನ್ನೆಂದಿಗೂ ಸಮಾಧಿಗೆ ಸೇರಿ ಕೊಳೆಯು
ವುದಿಲ್ಲ ಎಂಬ ವಿಷಯದಲ್ಲಿ ದೇವರು ಇಂತೆಂದಿದ್ದಾನೆ:

> ‘ನಾನು ದಾವೀದನಿಗೆ ಮಾಡಿದ ಸತ್ಯವೂ ಪವಿತ್ರವೂ
> ಆದ ವಾಗ್ದಾನಗಳನ್ನು ನಿನಗೆ ಕೊಡುತ್ತೇನೆ.’
> *ಯೆಶಾಯ 55 :3*

[35]ಆದರೆ ಮತ್ತೊಂದು ಸ್ಥಳದಲ್ಲಿ ದೇವರು ಇಂತೆನ್ನುತ್ತಾನೆ:

> ‘ನೀನು ನಿನ್ನ ಪರಿಶುದ್ಧನ ದೇಹವನ್ನು ಸಮಾಧಿ
> ಯಲ್ಲಿ ಕೊಳೆಯಲು ಬಿಡುವುದಿಲ್ಲ.’
> *ಕೀರ್ತನೆ 16:10*

[36]ದಾವೀದನು ತನ್ನ ಜೀವಮಾನಕಾಲದಲ್ಲಿ ದೇವರ ಚಿತ್ತಕ್ಕನು
ಸಾರವಾಗಿ ಬಾಳಿದನು. ಬಳಿಕ ಅವನು ಸತ್ತುಹೋದನು.
ದಾವೀದನನ್ನು ಅವನ ಪಿತೃಗಳೊಂದಿಗೆ ಸಮಾಧಿಮಾಡ
ಲಾಯಿತು. ಅವನ ದೇಹ ಸಮಾಧಿಯಲ್ಲಿ ಕೊಳೆತುಹೋಯಿತು!
[37]ಆದರೆ ದೇವರಿಂದ ಜೀವಂತವಾಗಿ ಎಬ್ಬಿಸಲ್ಪಟ್ಟ ಯೇಸುವಿನ
ದೇಹ ಸಮಾಧಿಯಲ್ಲಿ ಕೊಳೆಯಲ್ಪಡಲಿಲ್ಲ.

38-39ಸಹೋದರರೇ, ಇದು ನಿಮಗೆ ತಿಳಿದಿರಲಿ: ಆತನ ಮೂಲಕವಾಗಿ ನಿಮ್ಮ ಪಾಪಗಳಿಗೆ ಕ್ಷಮೆ ದೊರೆಯುತ್ತದೆ. ಮೋಶೆಯ ಧರ್ಮಶಾಸ್ತ್ರಕ್ಕೆ ನಿಮ್ಮನ್ನು ನಿಮ್ಮ ಪಾಪಗಳಿಂದ ಬಿಡಿಸಲಾಗಲಿಲ್ಲ. ಆದರೆ ಯೇಸುವಿನಲ್ಲಿ ನಂಬಿಕೆ ಇಡುವ ಪ್ರತಿಯೊಬ್ಬನು ಆತನ ಮೂಲಕವಾಗಿ ತನ್ನ ಎಲ್ಲಾ ಪಾಪಗಳಿಂದ ಬಿಡುಗಡೆಯಾಗುವನು. 40ಆದುದರಿಂದ ಪ್ರವಾದಿಗಳು ತಿಳಿಸಿರುವ ಈ ಕೆಲವು ಸಂಗತಿಗಳು ನಿಮ್ಮಲ್ಲಿ ನಿಜವಾಗದಂತೆ ಎಚ್ಚರಿಕೆಯಾಗಿರಿ:

41 ‘ಅಪಹಾಸ್ಯ ಮಾಡುವವರೇ, ಆಶ್ಚರ್ಯಪಡುತ್ತಾ
ನಾಶವಾಗಿ ಹೋಗಿರಿ. ನೀವು ನಂಬಲೊಲ್ಲದ
ಒಂದು ಕಾರ್ಯವನ್ನು ನಾನು ಮಾಡುವೆನು.
ಬೇರೊಬ್ಬನು ನಿಮಗೆ ಅದನ್ನು ವಿವರಿಸಿದರೂ
ನೀವು ನಂಬುವುದಿಲ್ಲ!’’

*ಹಬಕ್ಕೂಕ 1:5*

42ಪೌಲ ಮತ್ತು ಬಾರ್ನಬ ಸಭಾಮಂದಿರದಿಂದ ಹೋಗುವಾಗ, ಈ ಸಂಗತಿಗಳ ಬಗ್ಗೆ ಇನ್ನೂ ಹೆಚ್ಚಿಗೆ ತಿಳಿಸುವುದಕ್ಕಾಗಿ ಮುಂದಿನ ಸಬ್ಬತ್‌ದಿನದಂದು ಮತ್ತೆ ಬರಬೇಕೆಂದು ಜನರು ಅವರನ್ನು ಕೇಳಿಕೊಂಡರು. 43ಸಭೆಯು ಮುಗಿದ ಮೇಲೆ ಅನೇಕ ಯೆಹೂದ್ಯರು ಪೌಲ ಬಾರ್ನಬರನ್ನು ಆ ಸ್ಥಳದಿಂದ ಹಿಂಬಾಲಿಸಿದರು. ಯೆಹೂದ್ಯರ ಧರ್ಮಕ್ಕೆ ಸೇರಿಕೊಂಡಿದ್ದ ಅನೇಕ ಅನ್ಯಮತೀಯರೂ ಆ ಯೆಹೂದ್ಯರೊಂದಿಗಿದ್ದರು. ಮತಾಂತರಗೊಂಡಿದ್ದ ಇವರು ಸಹ ನಿಜದೇವರನ್ನು ಆರಾಧಿಸುತ್ತಿದ್ದರು. ಪೌಲ ಬಾರ್ನಬರು ಅವರೊಂದಿಗೆ ಮಾತಾಡಿ, ದೇವರ ಕೃಪೆಯಲ್ಲೇ ಭರವಸವಿಟ್ಟು ಮುಂದುವರಿಯಬೇಕೆಂದು ಪ್ರೋತ್ಸಾಹಪಡಿಸಿದರು. 44ಮುಂದಿನ ಸಬ್ಬತ್‌ದಿನದಂದು, ಪ್ರಭುವಿನ ವಾಕ್ಯವನ್ನು ಕೇಳುವುದಕ್ಕಾಗಿ ಬಹುಮಟ್ಟಿಗೆ ನಗರದ ಜನರೆಲ್ಲರೂ ನೆರೆದುಬಂದರು. 45ಇದನ್ನು ಕಂಡ ಯೆಹೂದ್ಯರಿಗೆ ಬಹಳ ಅಸೂಯೆಯಾಯಿತು. ಅವರು ಪೌಲನ ಮಾತುಗಳನ್ನು ಕಟುವಾಗಿ ದೂಷಿಸಿ ಅವುಗಳಿಗೆ ವಿರೋಧವಾಗಿ ವಾದಿಸಿದರು. 46ಆದರೆ ಪೌಲ ಬಾರ್ನಬರು ಬಹು ಧೈರ್ಯದಿಂದ ಮಾತಾಡಿ; ‘‘ನಾವು ದೇವರ ಸಂದೇಶವನ್ನು ಯೆಹೂದ್ಯರಾದ ನಿಮಗೆ ಮೊದಲು ಹೇಳಬೇಕು. ಆದರೆ ನೀವು ನಿಮ್ಮನ್ನು ನಿತ್ಯಜೀವಕ್ಕೆ ಅಪಾತ್ರರೆಂದು ಎಣಿಸಿಕೊಂಡು ತಿರಸ್ಕರಿಸುತ್ತಿದ್ದೀರಿ. ಆದ್ದರಿಂದ ನಾವು ಅನ್ಯಧರ್ಮದವರ ಬಳಿಗೆ ಹೋಗುತ್ತೇವೆ! 47ಏಕೆಂದರೆ ಪ್ರಭುವು ನಮಗೆ ಕೊಟ್ಟ ಆಜ್ಞೆ ಇಂತಿದೆ:

‘ಲೋಕದ ಕಟ್ಟಕಡೆಯಲ್ಲಿರುವ ಜನರೆಲ್ಲರಿಗೂ
ನೀನು ರಕ್ಷಕನಾಗಿರಬೇಕೆಂದು ನಾನು ನಿನ್ನನ್ನು
ಇತರ ಜನಾಂಗಗಳಿಗೆ ಬೆಳಕನ್ನಾಗಿ ಮಾಡಿದ್ದೇನೆ.’’

*ಯೆಶಾಯ 49:6*

48ಪೌಲನ ಈ ಮಾತುಗಳನ್ನು ಕೇಳಿದ ಯೆಹೂದ್ಯರಲ್ಲದ ಜನರು ಬಹು ಸಂತೋಷಪಟ್ಟು ಪ್ರಭುವಿನ ಸಂದೇಶಕ್ಕಾಗಿ ಸ್ತುತಿಸಿದರು. ನಿತ್ಯಜೀವವನ್ನು ಹೊಂದಿಕೊಳ್ಳಲು ಆಯ್ಕೆಯಾಗಿದ್ದವರೆಲ್ಲರೂ ನಂಬಿಕೊಂಡರು.

49ಪ್ರಭುವಿನ ಸಂದೇಶವನ್ನು ಆ ನಾಡಿನಲ್ಲೆಲ್ಲಾ ಸಾರಲಾಯಿತು. 50ಆದರೆ ಯೆಹೂದ್ಯರು ಕೆಲವು ಧಾರ್ಮಿಕ ಸ್ತ್ರೀಯರನ್ನೂ ನಗರದ ನಾಯಕರನ್ನೂ ಪ್ರಚೋದಿಸಿ, ಪೌಲ ಬಾರ್ನಬರ ಮೇಲೆ ಅವರು ಕೋಪಗೊಳ್ಳುವಂತೆಯೂ ಅವರಿಗೆ ವಿರೋಧಿಗಳಾಗುವಂತೆಯೂ ಮಾಡಿ ಪೌಲ ಬಾರ್ನಬರನ್ನು ಪಟ್ಟಣದಿಂದ ಹೊರಗಟ್ಟಿಸಿದರು. 51ಆದ್ದರಿಂದ ಪೌಲ ಬಾರ್ನಬರು ಅವರ ವಿರೋಧವಾಗಿ ತಮ್ಮ ಕಾಲಿನ ಧೂಳನ್ನು ಝಾಡಿಸಿ,* ಇಕೋನಿಯಾ ಪಟ್ಟಣಕ್ಕೆ ಹೋದರು. 52ಆದರೆ ಯೇಸುವಿನ ಶಿಷ್ಯರು ಸಂತೋಷವಾಗಿದ್ದರು ಮತ್ತು ಪವಿತ್ರಾತ್ಮಭರಿತರಾಗಿದ್ದರು.

### ಇಕೋನಿಯಾದಲ್ಲಿ ಪೌಲ ಮತ್ತು ಬಾರ್ನಬ

14 ಪೌಲ ಬಾರ್ನಬರು ಇಕೋನಿಯಾ ಪಟ್ಟಣಕ್ಕೆ ಹೋದರು. (ಪ್ರತಿಯೊಂದು ಪಟ್ಟಣದಲ್ಲಿಯೂ ಅವರು ಮಾಡುತ್ತಿದ್ದಂತೆ) ಇಲ್ಲಿಯೂ ಯೆಹೂದ್ಯರ ಸಭಾಮಂದಿರದೊಳಗೆ ಹೋಗಿ ಜನರಿಗೆ ಬೋಧಿಸಿದರು. ಪೌಲ ಬಾರ್ನಬರ ಅಮೋಘ ಬೋಧನೆಯನ್ನು ಕೇಳಿ ಅನೇಕ ಯೆಹೂದ್ಯರು ಮತ್ತು ಗ್ರೀಕರು ನಂಬಿಕೊಂಡರು. 2ಆದರೆ ಯೆಹೂದ್ಯರಲ್ಲಿ ನಂಬದೆ ಹೋದ ಕೆಲವರು ಯೆಹೂದ್ಯರಲ್ಲದವರನ್ನು ಪ್ರಚೋಧಿಸಿ ಸಹೋದರರ ವಿರುದ್ಧ ಜನರನ್ನು ಎಬ್ಬಿಸಿದರು. 3ಆದರೆ ಪೌಲ ಬಾರ್ನಬರು ಇಕೋನಿಯಾದಲ್ಲಿ ಬಹುಕಾಲವಿದ್ದು ಪ್ರಭುವಿನ ಕುರಿತು ಧೈರ್ಯದಿಂದ ಮಾತಾಡಿದರು. ಪ್ರಭುವು ಅವರ ಮೂಲಕ ಸೂಚಕಕಾರ್ಯಗಳನ್ನು ಮತ್ತು ಅದ್ಭುತಕಾರ್ಯಗಳನ್ನು ಮಾಡಿ ತನ್ನ ಕೃಪಾಸಂದೇಶವನ್ನು ನಿರೂಪಿಸಿದನು. 4ಆದರೆ ಪಟ್ಟಣದ ಜನರಲ್ಲಿ ಕೆಲವರು ಯೆಹೂದ್ಯರ ಮಾತನ್ನೂ ಇನ್ನು ಕೆಲವರು ಪೌಲ ಬಾರ್ನಬರ ಮಾತನ್ನೂ ನಂಬಿಕೊಂಡದ್ದರಿಂದ ಅವರಲ್ಲಿಯೇ ಎರಡು ಪಂಗಡವಾಯಿತು.

5ಯೆಹೂದ್ಯರಲ್ಲದವರಲ್ಲಿ ಮತ್ತು ಯೆಹೂದ್ಯರಲ್ಲಿ ಕೆಲವರು ತಮ್ಮ ನಾಯಕರೊಡನೆ ಸೇರಿಕೊಂಡು ಪೌಲ ಬಾರ್ನಬರನ್ನು ಕಲ್ಲೆಸೆದು ಕೊಲ್ಲಬೇಕೆಂದಿದ್ದರು. 6ಇದನ್ನು ಅರಿತುಕೊಂಡ ಪೌಲ ಬಾರ್ನಬರು ಆ ಪಟ್ಟಣವನ್ನು ಬಿಟ್ಟು ಲುಕವೋನಿಯಾದ ಪಟ್ಟಣಗಳಾದ ಲುಸ್ತ್ರ ಮತ್ತು ದರ್ಬೆಗಳಿಗೂ ಹಾಗೂ ಆ ಪಟ್ಟಣಗಳ ಸುತ್ತಮುತ್ತಲಿದ್ದ ಪ್ರದೇಶಗಳಿಗೂ ಹೋದರು. 7ಅವರು ಅಲ್ಲಿಯೂ ಸುವಾರ್ತೆ ತಿಳಿಸಿದರು.

### ಲುಸ್ತ್ರ ಮತ್ತು ದರ್ಬೆಗಳಲ್ಲಿ ಪೌಲನು

8ಲುಸ್ತ್ರದಲ್ಲಿ ಒಬ್ಬ ಮನುಷ್ಯನಿದ್ದನು. ಅವನ ಕಾಲುಗಳಲ್ಲಿ ಬಲವಿರಲಿಲ್ಲ. ಹುಟ್ಟುಕುಂಟನಾಗಿದ್ದ ಅವನು ಎಂದೂ ನಡೆದಿರಲಿಲ್ಲ. 9ಈ ಮನುಷ್ಯನು ತಾನು ಕುಳಿತಲ್ಲೇ ಪೌಲನ ಮಾತನ್ನು ಆಲಿಸುತ್ತಿದ್ದನು. ಪೌಲನು ಅವನನ್ನು ದೃಷ್ಟಿಸಿ ನೋಡಿದನು. ದೇವರು ಗುಣಪಡಿಸಬಲ್ಲನೆಂಬ ನಂಬಿಕೆ ಅವನಲ್ಲಿರುವುದನ್ನು ಪೌಲನು ಕಂಡು, 10ಅವನಿಗೆ, ‘‘ಎದ್ದೇಳು, ಕಾಲೂರಿ ನಿಂತುಕೋ!’’ ಎಂದು ಗಟ್ಟಿಯಾಗಿ ಹೇಳಿದನು.

---

**ಕಾಲಿನ ಧೂಳನ್ನು ಝಾಡಿಸಿ** ಇದೊಂದು ಎಚ್ಚರಿಕೆ. ಅವರು ಈ ಜನರೊಂದಿಗೆ ಇನ್ನು ಮಾತಾಡುವ ಅಗತ್ಯವಿಲ್ಲ ಎಂಬುದನ್ನು ಇದು ಸೂಚಿಸುತ್ತದೆ.

ಕೂಡಲೇ ಆ ಮನುಷ್ಯನು ನೆಗೆದುನಿಂತು ನಡೆಯಲಾರಂಭಿ
ಸಿದನು. 11ಪೌಲನು ಮಾಡಿದ ಈ ಕಾರ್ಯವನ್ನು ಕಂಡ ಜನರು
ತಮ್ಮ ಸ್ವಂತ ಲುಕವೋನಿಯ ಭಾಷೆಯಲ್ಲಿ ‘‘ದೇವರುಗಳು
ಮನುಷ್ಯರೂಪ ಧರಿಸಿ ನಮ್ಮ ಬಳಿಗೆ ಇಳಿದುಬಂದಿದ್ದಾರೆ!’’
ಎಂದು ಆರ್ಭಟಿಸಿದರು. 12ಜನರು ಬಾರ್ನಬನನ್ನು
‘ಜೆಯುಸ್’* ದೇವರೆಂದೂ ಮುಖ್ಯ ಬೋಧಕನಾಗಿದ್ದ ಪೌಲ
ನನ್ನು ‘ಹೆರ್ಮೆ’* ದೇವರೆಂದೂ ಕರೆದರು. 13ಜೆಯುಸ್‌ನ
ಗುಡಿಯು ಪಟ್ಟಣದ ಸಮೀಪದಲ್ಲಿತ್ತು. ಈ ಗುಡಿಯ ಅರ್ಚಕನು
ಕೆಲವು ಹೋರಿಗಳನ್ನು ಮತ್ತು ಹೂವುಗಳನ್ನು ಪಟ್ಟಣದ
ಬಾಗಿಲಿನ ಬಳಿಗೆ ತೆಗೆದುಕೊಂಡು ಬಂದನು. ಆ ಅರ್ಚಕನು
ಮತ್ತು ಜನರು ಪೌಲ ಬಾರ್ನಬರಿಗೆ ಬಲಿಕೊಟ್ಟು ಅವರನ್ನು
ಆರಾಧಿಸಬೇಕೆಂದಿದ್ದರು.

14ಇದನ್ನು ಕೇಳಿದ ಪೌಲ ಬಾರ್ನಬರು ತಮ್ಮ ಬಟ್ಟೆಗಳನ್ನು
ಹರಿದುಕೊಂಡು* ಜನ ಸಮೂಹದೊಳಕ್ಕೆ ಓಡಿಹೋಗಿ
ಹೀಗೆಂದು ಕೂಗಿ ಹೇಳಿದರು: 15‘‘ಜನರೇ, ನೀವು ಈ ಕಾರ್ಯ
ಗಳನ್ನು ಮಾಡುತ್ತಿರುವುದೇಕೆ? ನಾವು ದೇವರುಗಳಲ್ಲ. ನಾವು
ನಿಮ್ಮಂತೆ ಕೇವಲ ಮನುಷ್ಯರು. ನಿಮಗೆ ಸುವಾರ್ತೆಯನ್ನು
ಹೇಳುವುದಕ್ಕಾಗಿ ನಾವು ಬಂದೆವು. ವ್ಯರ್ಥವಾದ ಈ ಕಾರ್ಯ
ಗಳನ್ನು ನೀವು ಬಿಟ್ಟುಬಿಡಿರಿ; ಜೀವಸ್ವರೂಪನಾದ ದೇವರ ಕಡೆಗೆ
ತಿರುಗಿಕೊಳ್ಳಿರಿ. ಆಕಾಶವನ್ನೂ ಭೂಮಿಯನ್ನೂ ಸಮುದ್ರ
ವನ್ನೂ ಮತ್ತು ಅವುಗಳಲ್ಲಿರುವ ಪ್ರತಿಯೊಂದನ್ನು ಸೃಷ್ಟಿಮಾಡಿ
ದಾತನು ಆತನೇ. 16ಹಿಂದಿನ ಕಾಲದಲ್ಲಿ ದೇವರು ಎಲ್ಲಾ
ಜನಾಂಗಗಳನ್ನು ಅವುಗಳ ಇಷ್ಟಕ್ಕನುಸಾರವಾಗಿ ನಡೆಯಲು
ಬಿಟ್ಟುಕೊಟ್ಟನು. 17ಆದರೆ ತಾನೊಬ್ಬನೇ ನಿಜದೇವರೆಂಬು
ದನ್ನು ಆತನು ತನ್ನ ಒಳ್ಳೆಯ ಕಾರ್ಯಗಳಿಂದ ನಿರೂಪಿಸು
ತ್ತಿದ್ದಾನೆ. ಆತನು ನಿಮಗೆ ಆಕಾಶದಿಂದ ಮಳೆಯನ್ನೂ ನಿಮ್ಮ
ಆಹಾರಕೋಸ್ಕರ ಸಕಾಲದಲ್ಲಿ ಸುಗ್ಗಿಯನ್ನೂ ದಯಪಾಲಿಸಿ
ನಿಮ್ಮ ಹೃದಯಗಳನ್ನು ಆನಂದದಿಂದ ತುಂಬಿಸುತ್ತಿದ್ದಾನೆ.’’
18ಪೌಲ ಬಾರ್ನಬರು ಇಷ್ಟೆಲ್ಲಾ ಹೇಳಿದರೂ ಯಜ್ಞವರ್ಪಿಸಿ
ಆರಾಧಿಸದಂತೆ ಜನರನ್ನು ತಡೆಯಲು ಬಹಳ ಪ್ರಯಾಸ
ಪಡಬೇಕಾಯಿತು. 19ಬಳಿಕ ಕೆಲವು ಯೆಹೂದ್ಯರು
ಅಂತಿಯೋಕ್ಯದಿಂದ ಮತ್ತು ಇಕೋನಿಯದಿಂದ ಬಂದು
ಪೌಲನಿಗೆ ವಿರೋಧವಾಗಿ ಜನರನ್ನು ಹುರಿದುಂಬಿಸಿ ಪೌಲನಿಗೆ
ಕಲ್ಲೆಸೆದು, ಅವನು ಸತ್ತನೆಂದು ಭಾವಿಸಿ ಪಟ್ಟಣದಿಂದ ಹೊರಗೆ
ಎಳೆದುಹಾಕಿದರು. 20ಆದರೆ, ಯೇಸುವಿನ ಶಿಷ್ಯರು ಅವನ
ಸುತ್ತಲೂ ನೆರೆದು ಬಂದಾಗ ಅವನು ಎದ್ದು ಪಟ್ಟಣದೊಳಗೆ
ಹೋದನು. ಮರುದಿನ ಅವನು ಮತ್ತು ಬಾರ್ನಬನು ದರ್ಬೆ
ಪಟ್ಟಣಕ್ಕೆ ಹೋದರು.

## ಸಿರಿಯದ ಅಂತಿಯೋಕ್ಯಕ್ಕೆ ಮರುಪ್ರಯಾಣ

21 ಪೌಲ ಬಾರ್ನಬರು ದರ್ಬೆ ಪಟ್ಟಣದಲ್ಲೂ ಸುವಾರ್ತೆ
ಯನ್ನು ತಿಳಿಸಿದರು. ಅನೇಕ ಜನರು ಯೇಸುವಿನ ಶಿಷ್ಯರಾದರು.
ಪೌಲ ಬಾರ್ನಬರು ಲುಸ್ತ್ರ, ಇಕೋನಿಯ ಮತ್ತು ಅಂತಿಯೋಕ್ಯ
ಪಟ್ಟಣಗಳಿಗೆ ಹಿಂತಿರುಗಿ, 22ಯೇಸುವಿನ ಶಿಷ್ಯರನ್ನು ಬಲ
ಗೊಳಿಸಿ, ನಂಬಿಕೆಯಲ್ಲಿ ದೃಢವಾಗಿರಲು ಅವರಿಗೆ ಪ್ರೋತ್ಸಾಹಿ
ಸಿದರು; ‘‘ನಾವು ದೇವರ ರಾಜ್ಯಕ್ಕೆ ಅನೇಕ ಕಷ್ಟಗಳ ಮೂಲಕ
ಹೋಗಬೇಕಾಗಿದೆ’’ ಎಂದು ಬೋಧಿಸಿದರು. 23ಪೌಲ
ಬಾರ್ನಬರು ಪ್ರತಿಯೊಂದು ಸಭೆಗೂ ಹಿರಿಯರನ್ನು ಆಯ್ಕೆ
ಮಾಡಿದರು. ಅವರು ಈ ಹಿರಿಯರಿಗೋಸ್ಕರ ಉಪವಾಸವಿದ್ದು
ಪ್ರಾರ್ಥನೆ ಮಾಡಿ ಅವರನ್ನು ಪ್ರಭುವಿನ ಕೈಗೆ ಒಪ್ಪಿಸಿಕೊಟ್ಟರು.

24ಪೌಲ ಬಾರ್ನಬರು ಪಿಸಿದಿಯ ನಾಡಿನ ಮೂಲಕವಾಗಿ
ಪಾಂಫೀಲಿಯ ನಾಡಿಗೆ ಬಂದರು. 25ಅವರು ದೇವರ ಸಂದೇಶ
ವನ್ನು ಪೆರ್ಗ ಪಟ್ಟಣದಲ್ಲಿ ಬೋಧಿಸಿ, ಅಲ್ಲಿಂದ ಅತ್ತಾಲಿಯ
ಪಟ್ಟಣಕ್ಕೆ ಬಂದರು. 26ಅಲ್ಲಿಂದ ಅವರು ಸಿರಿಯಾದ ಅಂತಿ
ಯೋಕ್ಯಕ್ಕೆ ನೌಕಾಯಾನ ಮಾಡಿದರು. ಈವರೆಗೆ ಮಾಡಿ
ಮುಗಿಸಿದ್ದ ಸೇವಾಕಾರ್ಯಕ್ಕಾಗಿ ದೇವರ ಕೈಗೆ ಒಪ್ಪಿಸಿ ಕಳುಹಿಸಿ
ಕೊಟ್ಟಿದ್ದವರು ಈ ಪಟ್ಟಣದ ವಿಶ್ವಾಸಿಗಳೇ.

27ಪೌಲ ಬಾರ್ನಬರು ಇಲ್ಲಿಗೆ ತಲುಪಿದಾಗ, ಸಭಿಕರನ್ನೆಲ್ಲ
ಒಟ್ಟುಗೂಡಿಸಿ, ದೇವರು ತಮ್ಮೊಂದಿಗಿದ್ದು ಮಾಡಿದ ಎಲ್ಲಾ
ಕಾರ್ಯಗಳ ಬಗ್ಗೆ ಅವರಿಗೆ ತಿಳಿಸಿದರು. ಮತ್ತು ‘‘ಇತರ ಜನಾಂಗ
ಗಳವರು ಸಹ ನಂಬಿಕೊಳ್ಳುವಂತೆ ದೇವರು ಬಾಗಿಲನ್ನು ತೆರೆದಿ
ದ್ದಾನೆ!’’ ಎಂದು ವಿವರಿಸಿದರು. 28ಅಲ್ಲಿ ಪೌಲ ಬಾರ್ನಬರು
ಯೇಸುವಿನ ಶಿಷ್ಯರೊಂದಿಗೆ ಬಹುಕಾಲ ಇದ್ದರು.

## ಜೆರುಸಲೇಮಿನಲ್ಲಿ ಸಮ್ಮೇಳನ

15 ಬಳಿಕ ಕೆಲವು ಜನರು ಜುದೇಯದಿಂದ ಅಂತಿ
ಯೋಕ್ಯಕ್ಕೆ ಬಂದರು. ‘‘ನೀವು ಸುನ್ನತಿ ಮಾಡಿಸಿಕೊಳ್ಳ
ದಿದ್ದರೆ ನಿಮಗೆ ರಕ್ಷಣೆಯಾಗುವುದಿಲ್ಲ. ಸುನ್ನತಿ ಮಾಡಿಸಿಕೊಳ್ಳ
ಬೇಕೆಂದು ಮೋಶೆಯೇ ಹೇಳಿದ್ದಾನೆ’’ ಎಂದು ಅವರು
ಯೆಹೂದ್ಯರಲ್ಲದ ವಿಶ್ವಾಸಿಗಳಿಗೆ ಉಪದೇಶಿಸತೊಡಗಿದರು.
2ಪೌಲ ಬಾರ್ನಬರು ಈ ಉಪದೇಶಕ್ಕೆ ತಮ್ಮ ವಿರೋಧವನ್ನು
ವ್ಯಕ್ತಪಡಿಸಿ ಅವರೊಂದಿಗೆ ವಾದ ಮಾಡಿದರು. ಈ ಸಮಸ್ಯೆಯ
ಬಗ್ಗೆ ಅಪೊಸ್ತಲರೊಡನೆ ಮತ್ತು ಹಿರಿಯರೊಡನೆ ಚರ್ಚಿಸಲು
ಪೌಲ ಬಾರ್ನಬರನ್ನು ಮತ್ತು ಇತರ ಕೆಲವರನ್ನು ಜೆರುಸ
ಲೇಮಿಗೆ ಕಳುಹಿಸಲು ಸಭೆ ನಿರ್ಧರಿಸಿತು.

3ಅಂತೆಯೇ ಸಭೆಯು ಇವರನ್ನು ಸಾಗಕಳುಹಿಸಿತು. ಇವರು
ಫೆನಿಷ್ಯ ಮತ್ತು ಸಮಾರ್ಯದ ಮಾರ್ಗವಾಗಿ ಪ್ರಯಾಣಮಾಡಿ
ದರು. ಯೆಹೂದ್ಯರಲ್ಲದ ಜನರು ನಿಜದೇವರ ಕಡೆಗೆ ತಿರುಗಿ
ಕೊಂಡಿದ್ದರ ಬಗ್ಗೆ ಈ ನಾಡುಗಳಲ್ಲಿ ವಿವರಿಸಿದರು. ಇದನ್ನು ಕೇಳಿ
ಸಹೋದರರಿಗೂ ಬಹಳ ಸಂತೋಷವಾಯಿತು. 4ಪೌಲ
ಬಾರ್ನಬರು ಮತ್ತು ಇತರರು ಜೆರುಸಲೇಮನ್ನು ತಲುಪಿದರು.
ಅಪೊಸ್ತಲರು, ಹಿರಿಯರು ಮತ್ತು ಸಭೆಯವರು ಇವರನ್ನು
ಸ್ವಾಗತಿಸಿದರು. ದೇವರು ತಮ್ಮೊಂದಿಗಿದ್ದು ಮಾಡಿದ ಎಲ್ಲಾ
ಕಾರ್ಯಗಳ ಬಗ್ಗೆ ಪೌಲ ಬಾರ್ನಬರು ಮತ್ತು ಇತರರು
ವಿವರಿಸಿದರು. 5ಜೆರುಸಲೇಮಿನಲ್ಲಿದ್ದ ವಿಶ್ವಾಸಿಗಳಲ್ಲಿ ಕೆಲವರು
ಫರಿಸಾಯರ ಗುಂಪಿಗೆ ಸೇರಿದವರಾಗಿದ್ದರು. ಅವರು ಎದ್ದು
ನಿಂತುಕೊಂಡು, ‘‘ಯೆಹೂದ್ಯರಲ್ಲದ ವಿಶ್ವಾಸಿಗಳು ಸುನ್ನತಿ
ಮಾಡಿಸಿಕೊಳ್ಳಬೇಕು. ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯ
ರಾಗಬೇಕೆಂದು ನಾವು ಅವರಿಗೆ ಹೇಳಬೇಕು!’’ ಎಂದರು.

---

**ಜೆಯುಸ್** ಅನೇಕ ಗ್ರೀಕ್ ದೇವರುಗಳಲ್ಲಿ ಅತ್ಯಂತ ಪ್ರಮುಖನಾದ ದೇವರು.

**ಹೆರ್ಮೆ** ಮತ್ತೊಬ್ಬ ಗ್ರೀಕ್ ದೇವರು. ಇತರ ದೇವರುಗಳಿಗೆ ಇವನು ಸಂದೇಶಕನೆಂದು ಗ್ರೀಕರು ನಂಬಿದ್ದರು.

**ಬಟ್ಟೆಗಳನ್ನು ಹರಿದುಕೊಂಡು** ಇದು ಅವರ ಕೋಪವನ್ನು ಸೂಚಿಸುತ್ತದೆ.

6ಬಳಿಕ, ಅಪೊಸ್ತಲರು ಮತ್ತು ಹಿರಿಯರು ಈ
ಸಮಸ್ಯೆಯನ್ನು ಪರಿಶೀಲಿಸಲು ಸೇರಿಬಂದರು. 7ದೀರ್ಘಚರ್ಚೆ
ಯಾಯಿತು. ಬಳಿಕ ಪೇತ್ರ ಎದ್ದುನಿಂತು ಅವರಿಗೆ, “ನನ್ನ
ಸಹೋದರರೇ, ನಿಮಗೇ ತಿಳಿದಿರುವಂತೆ, ಯೆಹೂದ್ಯರಲ್ಲದ
ಜನರಿಗೆ ಸುವಾರ್ತೆಯನ್ನು ಬೋಧಿಸುವುದಕ್ಕಾಗಿ ನಿಮ್ಮ ಮಧ್ಯ
ದೊಳಗಿಂದ ದೇವರು ನನ್ನನ್ನು ಬಹುದಿನಗಳ ಹಿಂದೆ ಆರಿಸಿ
ಕೊಂಡನು. ಅವರು ನನ್ನಿಂದ ಸುವಾರ್ತೆಯನ್ನು ಕೇಳಿ ನಂಬಿ
ಕೊಂಡರು. 8ಎಲ್ಲಾ ಜನರ ಆಲೋಚನೆಗಳನ್ನು ಬಲ್ಲ ದೇವರು
ಯೆಹೂದ್ಯರಲ್ಲದ ಜನರನ್ನೂ ಸ್ವೀಕರಿಸಿಕೊಂಡನು. ದೇವರು
ನಮಗೆ ಪವಿತ್ರಾತ್ಮನನ್ನು ಕೊಟ್ಟಂತೆಯೇ ಅವರಿಗೂ ಪವಿತ್ರಾತ್ಮ
ನನ್ನು ಕೊಟ್ಟು ಇದನ್ನು ರುಜುವಾತುಪಡಿಸಿದ್ದಾನೆ. 9ದೇವರ
ದೃಷ್ಟಿಯಲ್ಲಿ ಅವರಿಗೂ ನಮಗೂ ಯಾವ ವ್ಯತ್ಯಾಸವಿಲ್ಲ. ಅವರು
ನಂಬಿಕೊಂಡಾಗ, ದೇವರು ಅವರ ಹೃದಯಗಳನ್ನು ಶುದ್ಧೀಕರಿ
ಸಿದನು. 10ಹೀಗಿರಲಾಗಿ, ಯೆಹೂದ್ಯರಲ್ಲದ ಸಹೋದರರ
ಹೆಗಲ ಮೇಲೆ ಭಾರವಾದ ಹೊರೆಯನ್ನು* ಯಾಕೆ ಹೊರಿಸು
ತ್ತೀರಿ? ನೀವು ದೇವರನ್ನು ಸಿಟ್ಟಿಗೆಬ್ಬಿಸಲು ಪ್ರಯತ್ನಿಸು
ತ್ತಿದ್ದೀರಾ? ನಮಗಾಗಲಿ ನಮ್ಮ ಪಿತೃಗಳಿಗಾಗಲಿ ಈ ಹೊರೆ
ಯನ್ನು ಹೊರುವಷ್ಟು ಶಕ್ತಿ ಇರಲಿಲ್ಲ! 11ಆದ್ದರಿಂದ ನಾವಾಗಲಿ
ಇವರಾಗಲಿ ರಕ್ಷಣೆ ಹೊಂದುವುದು ಪ್ರಭುವಾದ ಯೇಸುವಿನ
ಕೃಪೆಯಿಂದಲೇ ಎಂದು ನಾವು ನಂಬುತ್ತೇವೆ!” ಎಂದನು.

12ಆಗ ಇಡೀ ಸಭೆಯು ಮೌನವಾಯಿತು. ಅವರು ಪೌಲ
ಬಾರ್ನಬರಿಗೆ ಕಿವಿಗೊಟ್ಟರು. ಯೆಹೂದ್ಯರಲ್ಲದ ಜನರ
ಮಧ್ಯದಲ್ಲಿ ದೇವರು ತಮ್ಮ ಮೂಲಕವಾಗಿ ಮಾಡಿದ ಎಲ್ಲಾ
ಅದ್ಭುತಕಾರ್ಯಗಳ ಮತ್ತು ಸೂಚಕಕಾರ್ಯಗಳ ಬಗ್ಗೆ ಪೌಲ
ಬಾರ್ನಬರು ಹೇಳಿದರು. 13ಬಳಿಕ ಯಾಕೋಬನು, “ನನ್ನ
ಸಹೋದರರೇ, ನನಗೆ ಕಿವಿಗೊಡಿರಿ. 14ಯೆಹೂದ್ಯರಲ್ಲದ
ಜನರಿಗೆ ದೇವರು ತನ್ನ ಪ್ರೀತಿಯನ್ನು ಹೇಗೆ ತೋರಿಸಿದ್ದಾನೆಂದು
ಸೀಮೋನನು ನಮಗೆ ತಿಳಿಸಿದ್ದಾನೆ. ಮೊಟ್ಟಮೊದಲಬಾರಿಗೆ,
ದೇವರು ಯೆಹೂದ್ಯರಲ್ಲದ ಜನರನ್ನು ಸ್ವೀಕರಿಸಿಕೊಂಡನು,
ಅವರನ್ನು ತನ್ನ ಜನರನ್ನಾಗಿ ಮಾಡಿಕೊಂಡನು. 15ಪ್ರವಾದಿಗಳ
ಮಾತುಗಳು ಸಹ ಇದಕ್ಕೆ ಸಾಮರಸ್ಯವಾಗಿವೆ:

16“ಇದಾದನಂತರ ನಾನು ಹಿಂತಿರುಗುವೆನು. ನಾನು
ದಾವೀದನ ಮನೆಯನ್ನು ಮತ್ತೆ ಕಟ್ಟುವೆನು.
ಅದು ಬಿದ್ದುಹೋಗಿದೆ. ಆದರೆ ಕೆಡವಲ್ಪಟ್ಟ
ಅವನ ಮನೆಯ ಚೂರುಗಳನ್ನು ನಾನು ಮತ್ತೆ
ಒಂದುಗೂಡಿಸುವೆನು. ನಾನು ಅವನ ಮನೆ
ಯನ್ನು ಹೊಸದು ಮಾಡುವೆನು.
17 ಬಳಿಕ ಇತರ ಜನರೆಲ್ಲರೂ ಪ್ರಭುವಿಗಾಗಿ ಹುಡು
ಕುವರು. ಯೆಹೂದ್ಯರಲ್ಲದ ಜನರೆಲ್ಲರೂ ಸಹ
ನನ್ನ ಜನರೇ ಆಗಿದ್ದಾರೆ. ಪ್ರಭುವೇ ಇದನ್ನು
ಹೇಳಿದ್ದಾನೆ. ಈ ಕಾರ್ಯಗಳನ್ನೆಲ್ಲ ಮಾಡು
ವವನು ಆತನೇ.
18 ಆದಿಯಿಂದಲೂ ಈ ಕಾರ್ಯಗಳನ್ನು ತಿಳಿಯ
ಪಡಿಸಲಾಗಿದೆ.’

*ಆಮೋಸ 9:11-12*

19“ಆದ್ದರಿಂದ, ದೇವರ ಕಡೆಗೆ ತಿರುಗಿಕೊಂಡ ಯೆಹೂದ್ಯ
ರಲ್ಲದ ಸಹೋದರರಿಗೆ ನಾವು ತೊಂದರೆ ಕೊಡಬಾರದು.
20ಅದಕ್ಕೆ ಬದಲಾಗಿ ನಾವು ಅವರಿಗೆ ಒಂದು ಪತ್ರವನ್ನು
ಬರೆದು ಈ ವಿಷಯಗಳನ್ನು ತಿಳಿಸೋಣ:

ವಿಗ್ರಹಗಳಿಗೆ ಅರ್ಪಿಸಿದ ಆಹಾರವನ್ನು ತಿನ್ನ
ಬೇಡಿರಿ. (ಈ ಆಹಾರ ಅಶುದ್ಧವಾದದ್ದು.)
ಯಾವುದೇ ಬಗೆಯ ಲೈಂಗಿಕ ಪಾಪವನ್ನು
ಮಾಡಬೇಡಿ. ರಕ್ತವನ್ನು ತಿನ್ನಬೇಡಿ. ಕುತ್ತಿಗೆ ಹಿಸುಕಿ
ಕೊಂದ ಪ್ರಾಣಿಗಳ ಮಾಂಸವನ್ನು ತಿನ್ನಬೇಡಿ.

21ಅವರು ಇವುಗಳನ್ನು ಮಾಡಕೂಡದು. ಏಕೆಂದರೆ
ಮೋಶೆಯ ಧರ್ಮಶಾಸ್ತ್ರವನ್ನು ಬೋಧಿಸುವಂಥ ಜನರು ಪ್ರತಿ
ಯೊಂದು ಪಟ್ಟಣದಲ್ಲಿ ಇನ್ನೂ ಇದ್ದಾರೆ. ಅನೇಕ ವರ್ಷಗಳಿಂದ
ಪ್ರತಿ ಸಬ್ಬತ್‌ದಿನದಲ್ಲಿ ಮೋಶೆಯ ಮಾತುಗಳನ್ನು ಓದ
ಲಾಗುತ್ತಿದೆ” ಎಂದು ಹೇಳಿದನು.

### ಯೆಹೂದ್ಯರಲ್ಲದ ವಿಶ್ವಾಸಿಗಳಿಗೆ ಪತ್ರ

22ಅಪೊಸ್ತಲರು, ಹಿರಿಯರು ಮತ್ತು ಇಡೀ ಸಭೆಯವರು
ಪೌಲ ಬಾರ್ನಬರೊಂದಿಗೆ ಕೆಲವು ಜನರನ್ನು ಅಂತಿಯೋಕ್ಯಕ್ಕೆ
ಕಳುಹಿಸಬಯಸಿದರು. ತಮ್ಮವರೇ ಆದ ಕೆಲವರನ್ನು ಆರಿಸಿ
ಕೊಳ್ಳಲು ಸಭೆಯು ನಿರ್ಧರಿಸಿತು. ಅವರು ಯೂದನನ್ನು
(ಬಾರ್ಸಬನೆಂದೂ ಕರೆಯುತ್ತಿದ್ದರು.) ಮತ್ತು ಸೀಲನನ್ನು
ಆರಿಸಿಕೊಂಡರು. ಇವರು ಜೆರುಸಲೇಮಿನ ಸಭೆಯವರಲ್ಲಿ
ಪ್ರಮುಖರಾಗಿದ್ದರು. 23ಸಭೆಯು ಇವರ ಕೈಯಲ್ಲಿ ಪತ್ರವನ್ನು
ಕಳುಹಿಸಿಕೊಟ್ಟಿತು. ಆ ಪತ್ರದಲ್ಲಿ ಹೀಗೆ ಬರೆದಿತ್ತು:

ಅಂತಿಯೋಕ್ಯ ಪಟ್ಟಣದಲ್ಲಿಯೂ ಸಿರಿಯ ಮತ್ತು
ಸಿಲಿಸಿಯ ನಾಡುಗಳಲ್ಲಿಯೂ ಇರುವ ಯೆಹೂದ್ಯರಲ್ಲದ
ಸಹೋದರರಿಗೆಲ್ಲಾ, ನಿಮ್ಮ ಸಹೋದರರಾದ ಅಪೊಸ್ತ
ಲರೂ ಹಿರಿಯರೂ ಬರೆಯುವುದೇನಂದರೆ:

ಪ್ರಿಯ ಸಹೋದರರೇ,
24ನಮ್ಮ ಸಮುದಾಯದಿಂದ ನಿಮ್ಮ ಬಳಿಗೆ ಬಂದ
ಕೆಲವರು ನಿಮಗೆ ಕೆಲವು ಸಂಗತಿಗಳನ್ನು ಹೇಳುವುದರ
ಮೂಲಕ ನಿಮ್ಮನ್ನು ತೊಂದರೆಗೆ ಈಡುಮಾಡಿ ನಿಮ್ಮಲ್ಲಿ
ಗಲಿಬಿಲಿ ಉಂಟುಮಾಡಿದರೆಂಬ ಸಮಾಚಾರ ನಮಗೆ
ತಿಳಿಯಿತು. ಆದರೆ ಹೀಗೆ ಮಾಡಬೇಕೆಂದು ನಾವು
ಅವರಿಗೆ ಹೇಳಿರಲಿಲ್ಲ! 25ಆದುದರಿಂದ ನಾವೆಲ್ಲರೂ
ಕೆಲವರನ್ನು ಸರ್ವಾನುಮತದಿಂದ ಆರಿಸಿ ನಿಮ್ಮ ಬಳಿಗೆ
ಕಳುಹಿಸಲು ನಿರ್ಧರಿಸಿದೆವು. ನಮ್ಮ ಪ್ರಿಯ ಸಹೋದರ
ರಾದ ಬಾರ್ನಬ ಮತ್ತು ಪೌಲರೊಂದಿಗೆ ಅವರು
ಬರುತ್ತಿದ್ದಾರೆ. 26ಬಾರ್ನಬನು ಮತ್ತು ಪೌಲನು ನಮ್ಮ
ಪ್ರಭುವಾದ ಯೇಸು ಕ್ರಿಸ್ತನ ಸೇವೆಗಾಗಿ ತಮ್ಮ ಜೀವಿತ
ಗಳನ್ನೇ ಕೊಟ್ಟಿದ್ದಾರೆ. 27ಆದ್ದರಿಂದ ನಾವು ಯೂದನನ್ನು
ಮತ್ತು ಸೀಲನನ್ನು ಅವರೊಂದಿಗೆ ಕಳುಹಿಸಿದ್ದೇವೆ.
ಕೆಳಕಂಡ ಸಂಗತಿಗಳನ್ನೆಲ್ಲ ಅವರು ನಿಮಗೆ ತಿಳಿಸುವರು.

---

**ಹೊರೆ** ಯೆಹೂದ್ಯರ ಧರ್ಮಶಾಸ್ತ್ರ

28ನಿಮಗೆ ಇನ್ನೂ ಹೆಚ್ಚಿನ ಭಾರಗಳು ಇರಕೂಡ
ದೆಂಬುದು ಪವಿತ್ರಾತ್ಮನ ನಿರ್ಧಾರ. ಆದಕ್ಕೆ ನಾವು ಒಪ್ಪಿ
ಕೊಂಡಿದ್ದೇವೆ. ನೀವು ಈ ನಿಯಮಗಳನ್ನು ಮಾತ್ರ
ಅನುಸರಿಸಬೇಕಾಗಿದೆ:

29ವಿಗ್ರಹಗಳಿಗೆ ಅರ್ಪಿಸಿರುವ ಆಹಾರವನ್ನು ತಿನ್ನಬೇಡಿ.
ರಕ್ತವನ್ನು ತಿನ್ನಬೇಡಿ. ಕುತ್ತಿಗೆ ಹಿಸುಕಿ ಕೊಂದ ಪ್ರಾಣಿಗಳ
ಮಾಂಸವನ್ನು ತಿನ್ನಬೇಡಿ. ಯಾವುದೇ ಬಗೆಯ ಲೈಂಗಿಕ
ಪಾಪವನ್ನು ಮಾಡಬೇಡಿ. ನೀವು ಇವುಗಳಿಂದ ದೂರ
ವಿದ್ದರೆ ನಿಮಗೆ ಒಳ್ಳೆಯದಾಗುವುದು.

ನಿಮಗೆ ಶುಭವಾಗಲಿ!

30ಆದ್ದರಿಂದ ಪೌಲ ಬಾರ್ನಬರು ಮತ್ತು ಯೂದ ಸೀಲರು
ಜೆರುಸಲೇಮಿನಿಂದ ಹೊರಟರು. ಅವರು ಅಂತಿಯೋಕ್ಯಕ್ಕೆ
ಹೋಗಿ, ಅಲ್ಲಿ ವಿಶ್ವಾಸಿಗಳ ಸಭೆಸೇರಿಸಿ ಅವರಿಗೆ ಪತ್ರವನ್ನು
ಕೊಟ್ಟರು. 31ವಿಶ್ವಾಸಿಗಳು ಅದನ್ನು ಓದಿ ಬಹು ಸಂತೋಷ
ಪಟ್ಟರು. ಆ ಪತ್ರವು ಅವರನ್ನು ಸಂತೈಸಿತು. 32ಯೂದ ಸೀಲರು
ಸಹ ಪ್ರವಾದಿಗಳಾಗಿದ್ದರು. ಅವರು ಅನೇಕ ಸಂಗತಿಗಳನ್ನು
ಸಹೋದರರಿಗೆ ತಿಳಿಸಿ ಅವರನ್ನು ಬಲಪಡಿಸಿದರು. 33ಯೂದ
ಸೀಲರು ಸ್ವಲ್ಪಕಾಲ ಅಲ್ಲಿದ್ದು ಸಹೋದರರಿಂದ ಸಮಾಧಾನ
ವೆಂಬ ಆಶೀರ್ವಾದವನ್ನು ಪಡೆದುಕೊಂಡರು. ಬಳಿಕ ಅವರು
ತಮ್ಮನ್ನು ಕಳುಹಿಸಿಕೊಟ್ಟಿದ್ದ ಜೆರುಸಲೇಮಿನ ಸಹೋದರರ
ಬಳಿಗೆ ಹಿಂತಿರುಗಿದರು. 34*

35ಆದರೆ ಪೌಲ ಬಾರ್ನಬರು ಅಂತಿಯೋಕ್ಯದಲ್ಲಿ
ತಂಗಿದ್ದು, ಇತರ ಅನೇಕರೊಂದಿಗೆ ಸೇರಿಕೊಂಡು ಸುವಾರ್ತೆ
ಯನ್ನು ಸಾರಿದರು ಮತ್ತು ಪ್ರಭುವಿನ ಸಂದೇಶವನ್ನು ಜನರಿಗೆ
ಬೋಧಿಸಿದರು.

## ಪೌಲ ಬಾರ್ನಬರು ಬೇರ್ಪಡುವರು

36ಕೆಲವು ದಿನಗಳಾದ ಮೇಲೆ ಪೌಲನು ಬಾರ್ನಬನಿಗೆ,
‘‘ನಾವು ಅನೇಕ ಪಟ್ಟಣಗಳಲ್ಲಿ ಪ್ರಭುವಿನ ಸಂದೇಶವನ್ನು ತಿಳಿಸಿ
ದೆವು. ಆ ಪಟ್ಟಣಗಳಲ್ಲಿರುವ ನಮ್ಮ ಸಹೋದರ ಸಹೋದರಿ
ಯರನ್ನು ಸಂದರ್ಶಿಸಿ ಅವರು ಹೇಗಿದ್ದಾರೆಂದು ನೋಡಿ
ಕೊಂಡು ಬರೋಣ’’ ಎಂದು ಹೇಳಿದನು. 37ಮಾರ್ಕನೆನಿಸಿ
ಕೊಳ್ಳುವ ಯೋಹಾನನನ್ನು ಸಹ ತಮ್ಮೊಂದಿಗೆ ಕರೆದುಕೊಂಡು
ಹೋಗಬೇಕೆಂಬುದು ಬಾರ್ನಬನ ಇಷ್ಟವಾಗಿತ್ತು. 38ಆದರೆ
ಅವರ ಮೊದಲನೆ ಪ್ರಯಾಣದಲ್ಲಿ, ಮಾರ್ಕನೆನಿಸಿಕೊಳ್ಳುವ
ಯೋಹಾನನು ಅವರನ್ನು ಪಾಂಫಿಲಿಯದ ಬಳಿ ಬಿಟ್ಟು
ಹೋದನು. ಅವನು ಅವರೊಂದಿಗೆ ಸೇವೆಯಲ್ಲಿ ಮುಂದು
ವರಿಯಲಿಲ್ಲ. ಆದ್ದರಿಂದ ಅವನನ್ನು ಕರೆದುಕೊಂಡು ಹೋಗು
ವುದು ಒಳ್ಳೆಯ ಆಲೋಚನೆಯಲ್ಲವೆಂದು ಪೌಲನು ಯೋಚಿಸಿ
ದನು. 39ಇದರ ಬಗ್ಗೆ ಪೌಲ ಮತ್ತು ಬಾರ್ನಬರ ನಡುವೆ ದೊಡ್ಡ
ವಾಗ್ವಾದವೇ ನಡೆಯಿತು. ಅವರಿಬ್ಬರೂ ಬೇರ್ಪಟ್ಟು ಬೇರೆ
ಮಾರ್ಗಗಳಲ್ಲಿ ಹೋದರು. ಬಾರ್ನಬನು ಮಾರ್ಕನೊಂದಿಗೆ
ಸೈಪ್ರಸ್‌ಗೆ ನೌಕಾಯಾನ ಮಾಡಿದನು. 40ಪೌಲನು ತನ್ನೊಂದಿಗೆ
ಸೀಲನನ್ನು ಕರೆದುಕೊಂಡು ಹೋದನು. ಅಂತಿಯೋಕ್ಯದ
ಸಹೋದರರು ಪೌಲನನ್ನು ಪ್ರಭುವಿನ ಆಶ್ರಯಕ್ಕೆ ಒಪ್ಪಿಸಿ
ಕಳುಹಿಸಿಕೊಟ್ಟರು. 41ಪೌಲ ಸೀಲರು ಸಿರಿಯಾ ಮತ್ತು
ಸಿಲಿಸಿಯ ನಾಡುಗಳಲ್ಲಿ ಹಾದು ಹೋಗುತ್ತಾ ಅಲ್ಲಿದ್ದ ಸಭೆಗಳಿಗೆ
ಬಲವಾಗಿ ಬೆಳೆಯಲು ನೆರವು ನೀಡಿದರು.

## ತಿಮೊಥೆಯನು ಪೌಲ ಸೀಲರೊಂದಿಗೆ ಹೋಗುವನು

16 ಪೌಲನು ದರ್ಬೆ ಮತ್ತು ಲುಸ್ತ್ರ ಪಟ್ಟಣಗಳಿಗೆ
ಹೋದನು. ತಿಮೊಥೆಯ ಎಂಬ ಕ್ರಿಸ್ತನ ಶಿಷ್ಯ
ನೊಬ್ಬನು ಅಲ್ಲಿದ್ದನು. ತಿಮೊಥೆಯನ ತಾಯಿ ಯೆಹೂದ್ಯ
ವಿಶ್ವಾಸಿಯಾಗಿದ್ದಳು. ಅವನ ತಂದೆಯು ಗ್ರೀಕನಾಗಿದ್ದನು.
2ಲುಸ್ತ್ರ ಮತ್ತು ಇಕೋನಿಯಾ ಪಟ್ಟಣಗಳ ವಿಶ್ವಾಸಿಗಳು ತಿಮೊಥೆ
ಯನನ್ನು ಗೌರವಿಸುತ್ತಿದ್ದರು; ಮತ್ತು ಅವನ ಬಗ್ಗೆ ಒಳ್ಳೆಯದನ್ನೇ
ಹೇಳುತ್ತಿದ್ದರು. 3ಪೌಲನು ತಿಮೊಥೆಯನನ್ನು ತಮ್ಮೊಂದಿಗೆ
ಕರೆದುಕೊಂಡು ಹೋಗಲು ಅಪೇಕ್ಷಿಸಿದನು. ಆದರೆ ಆ ಪ್ರದೇಶ
ದಲ್ಲಿ ವಾಸವಾಗಿದ್ದ ಎಲ್ಲಾ ಜನರಿಗೂ ತಿಮೊಥೆಯನ ತಂದೆ
ಗ್ರೀಕನೆಂಬುದು ಗೊತ್ತಿತ್ತು. ಆದ್ದರಿಂದ ಪೌಲನು ಯೆಹೂದ್ಯ
ರನ್ನು ಮೆಚ್ಚಿಸುವುದಕ್ಕಾಗಿ ತಿಮೊಥೆಯನಿಗೆ ಸುನ್ನತಿ ಮಾಡಿಸಿ
ದನು.

4ಬಳಿಕ ಪೌಲನು ಮತ್ತು ಅವನ ಸಂಗಡಿಗರು ಬೇರೆ
ಪಟ್ಟಣಗಳ ಮೂಲಕ ಪ್ರಯಾಣ ಮಾಡಿದರು. ಜೆರುಸಲೇಮಿ
ನಲ್ಲಿರುವ ಅಪೊಸ್ತಲರ ಮತ್ತು ಹಿರಿಯರ ನಿಯಮಗಳನ್ನೂ
ತೀರ್ಮಾನಗಳನ್ನೂ ಅವರು ವಿಶ್ವಾಸಿಗಳಿಗೆ ಕೊಟ್ಟು ಅವುಗಳಿಗೆ
ವಿಧೇಯರಾಗಬೇಕೆಂದು ತಿಳಿಸಿದರು. 5ಇದರಿಂದಾಗಿ ಸಭೆಗಳು
ನಂಬಿಕೆಯಲ್ಲಿ ಬಲವಾಗತೊಡಗಿದವು ಮತ್ತು ಸಂಖ್ಯೆಯಲ್ಲಿ
ದಿನದಿನಕ್ಕೂ ಹೆಚ್ಚಾಗತೊಡಗಿದವು.

## ಏಷ್ಯಾದಿಂದಾಚೆಗೆ ಬರಲು ಪೌಲನಿಗೆ ಕರೆ

6ಪೌಲನು ಮತ್ತು ಅವನ ಸಂಗಡಿಗರು ಫ್ರಿಜಿಯ ಮತ್ತು
ಗಲಾತ್ಯ ಪ್ರಾಂತ್ಯಗಳ ಮೂಲಕ ಹಾದುಹೋದರು. ಏಷ್ಯಾ*
ಸೀಮೆಯಲ್ಲಿ ಸುವಾರ್ತೆಯನ್ನು ತಿಳಿಸದಂತೆ ಪವಿತ್ರಾತ್ಮನು
ಅವರನ್ನು ತಡೆದನು. 7ಪೌಲ ತಿಮೊಥೆಯರು ಮುಸಿಯ ನಾಡಿನ
ಸಮೀಪಕ್ಕೆ ಹೋದರು ಅವರು ಬಿಥೂನಿಯ ನಾಡಿನೊಳಗೆ
ಹೋಗಬೇಕೆಂದಿದ್ದರು, ಆದರೆ ಯೇಸುವಿನ ಆತ್ಮನು ಅಲ್ಲಿಗೆ
ಹೋಗದಂತೆ ಅವರನ್ನು ತಡೆದನು. 8ಆದ್ದರಿಂದ ಅವರು
ಮುಸಿಯ ನಾಡನ್ನು ಹಾದು ನೇರವಾಗಿ ತ್ರೋವ ಪಟ್ಟಣಕ್ಕೆ
ಬಂದರು. 9ಆ ರಾತ್ರಿ ಪೌಲನಿಗೆ ಒಂದು ದರ್ಶನವಾಯಿತು.
ಈ ದರ್ಶನದಲ್ಲಿ ಮಕೆದೋನಿಯದ ನಾಡಿನಿಂದ ಬಂದ ಒಬ್ಬ
ಮನುಷ್ಯನು ಅಲ್ಲಿ ನಿಂತುಕೊಂಡು, ‘‘ಮಕೆದೋನಿಯಕ್ಕೆ
ಬಂದು ನಮಗೆ ಸಹಾಯಮಾಡು’’ ಎಂದು ಬೇಡಿಕೊಂಡನು.
10ಪೌಲನು ಆ ದರ್ಶನವನ್ನು ಕಂಡಕೂಡಲೇ, ಅಲ್ಲಿಯ ಜನರಿಗೆ
ಸುವಾರ್ತೆಯನ್ನು ತಿಳಿಸುವುದಕ್ಕಾಗಿ ದೇವರು ನಮ್ಮನ್ನು
ಕರೆದಿದ್ದಾನೆಂದು ಅರ್ಥಮಾಡಿಕೊಂಡು ಮಕೆದೋನಿಯಕ್ಕೆ
ಹೋಗಲು ನಾವು ಸಿದ್ಧರಾದೆವು.

---

**ವಚನ 34** ಈ ಪುಸ್ತಕದ ಇತ್ತೀಚಿನ ಕೆಲವು ಗ್ರೀಕ್ ಪ್ರತಿಗಳಲ್ಲಿ 34ನೇ ವಚನವನ್ನು ಸೇರಿಸಲಾಗಿದೆ: **34** ‘‘ಆದರೆ ಸೀಲನು ಅಲ್ಲೇ ಇರಲು ನಿರ್ಧರಿಸಿದನು.’’

**ಏಷ್ಯಾ** ಏಷ್ಯಾ ಮೈನರ್‌ನ ಪಶ್ಚಿಮ ಭಾಗ.

### ಲಿಡಿಯಳ ಪರಿವರ್ತನೆ

11ನಾವು ತ್ರೋವದಿಂದ ಹಡಗಿನಲ್ಲಿ ಹೊರಟು ಸಮೊಥ್ರ
ದ್ವೀಪಕ್ಕೆ ಬಂದು ಮರುದಿನ ನೆಯಪೊಲಿಸ್ ಪಟ್ಟಣವನ್ನು
ತಲುಪಿ, 12ಅಲ್ಲಿಂದ ಫಿಲಿಪ್ಪಿಗೆ ಹೋದೆವು. ಅದು ಮಕೆದೋನಿ
ಯದ ಜಿಲ್ಲೆಯಲ್ಲಿ ಮತ್ತು ರೋಮನ್ನರ ವಸಾಹತುವಿನಲ್ಲಿ*
ಮುಖ್ಯವಾದ ಪಟ್ಟಣವಾಗಿತ್ತು. ನಾವು ಅಲ್ಲಿ ಕೆಲವು ದಿನಗಳ
ವರೆಗೆ ಇಳಿದುಕೊಂಡೆವು.

13ನದಿಯ ಸಮೀಪದಲ್ಲಿ ವಿಶೇಷವಾದ ಪ್ರಾರ್ಥನಾ
ಸ್ಥಳವನ್ನು ನಾವು ಕಾಣಬಹುದೆಂದು ಆಲೋಚಿಸಿಕೊಂಡು
ಸಬ್ಬತ್‌ದಿನದಂದು ನದಿಯ ಬಳಿಗೆ ಹೋಗಲು ನಗರದ್ವಾರ
ದಿಂದ ಹೊರಗೆ ಹೋದೆವು. ಕೆಲವು ಸ್ತ್ರೀಯರು ಅಲ್ಲಿ ಸೇರಿ
ಬಂದಿದ್ದರು. ಆದ್ದರಿಂದ ನಾವು ಕುಳಿತುಕೊಂಡು ಅವರೊಂದಿಗೆ
ಮಾತಾಡಿದೆವು. 14ಅಲ್ಲಿ ಲಿಡಿಯಾ ಎಂಬ ಒಬ್ಬ ಹೆಂಗಸಿದ್ದಳು.
ಆಕೆಯು ಥುವತ್ತೈರ ಪಟ್ಟಣದವಳು. ಕೆನ್ನೀರಳೆ ಬಣ್ಣದ ಬಟ್ಟೆ
ಗಳನ್ನು ಮಾರುವುದು ಆಕೆಯ ಕಸುಬಾಗಿತ್ತು. ಆಕೆಯು ನಿಜ
ದೇವರನ್ನು ಆರಾಧಿಸುತ್ತಿದ್ದಳು. ಪೌಲನ ಮಾತನ್ನು ಲಿಡಿಯಾ
ಆಲಿಸುತ್ತಿದ್ದಳು. ಪ್ರಭುವು ಆಕೆಯ ಹೃದಯವನ್ನು ತೆರೆದನು.
ಪೌಲನು ಹೇಳಿದ ಸಂಗತಿಗಳನ್ನು ಆಕೆ ನಂಬಿಕೊಂಡಳು. 15ಆಕೆ
ಮತ್ತು ಆಕೆಯ ಮನೆಯಲ್ಲಿ ವಾಸವಾಗಿದ್ದ ಎಲ್ಲಾ ಜನರು
ದೀಕ್ಷಾಸ್ನಾನ ಮಾಡಿಸಿಕೊಂಡರು. ಆಕೆಯು, ‘‘ನಾನು ಪ್ರಭು
ಯೇಸುವಿನಲ್ಲಿ ನಿಜವಾದ ವಿಶ್ವಾಸಿಯೆಂದು ನೀವು ಯೋಚಿಸು
ವುದಾಗಿದ್ದರೆ, ನನ್ನ ಮನೆಗೆ ಬಂದು ತಂಗಿರಿ’’ ಎಂದು ಕೇಳಿ
ಕೊಂಡು ನಮ್ಮನ್ನು ಒತ್ತಾಯಮಾಡಿದಳು.

### ಸೆರೆಮನೆಯಲ್ಲಿ ಪೌಲ ಸೀಲರು

16ಒಂದು ಸಲ, ನಾವು ಪ್ರಾರ್ಥನಾಸ್ಥಳಕ್ಕೆ ಹೋಗುತ್ತಿದ್ದಾಗ
ಒಂದು ಸಂಗತಿ ಸಂಭವಿಸಿತು. ದಾಸಿಯೊಬ್ಬಳು ನಮ್ಮನ್ನು
ಎದುರುಗೊಂಡಳು. ಆಕೆಯಲ್ಲಿ ವಿಶೇಷವಾದ ಆತ್ಮವಿತ್ತು. ಆ
ಆತ್ಮದ ಶಕ್ತಿಯಿಂದ ಅವಳು ಮುಂದೆ ಸಂಭವಿಸುವ ಸಂಗತಿಗಳ
ಬಗ್ಗೆ ಹೇಳುತ್ತಿದ್ದಳು. ಇದರ ಮೂಲಕವಾಗಿ ಆಕೆ ತನ್ನ ಯಜ
ಮಾನರಿಗೆ ಬಹಳ ಹಣವನ್ನು ಗಳಿಸಿ ಕೊಡುತ್ತಿದ್ದಳು. 17ಅವಳು
ಪೌಲನನ್ನು ಮತ್ತು ನಮ್ಮನ್ನು ಹಿಂಬಾಲಿಸುತ್ತಾ, ‘‘ ಈ ಜನರು
ಮಹೋನ್ನತನಾದ ದೇವರ ಸೇವಕರು! ನೀವು ಹೇಗೆ ರಕ್ಷಣೆ
ಹೊಂದಬಹುದೆಂಬುದನ್ನು ಅವರು ಹೇಳುತ್ತಿದ್ದಾರೆ!’’ ಎಂದು
ಕೂಗುತ್ತಿದ್ದಳು. 18ಹೀಗೆ ಆಕೆ ಅನೇಕ ದಿನಗಳವರೆಗೆ ಮಾಡಿ
ದಳು. ಇದರಿಂದ ಬೇಸರಗೊಂಡ ಪೌಲನು ಹಿಂತಿರುಗಿ, ಆ
ಆತ್ಮಕ್ಕೆ, ‘‘ಅವಳನ್ನು ಬಿಟ್ಟು ಹೋಗಬೇಕೆಂದು ಯೇಸು ಕ್ರಿಸ್ತನ
ಹೆಸರಿನಲ್ಲಿ ನಿನಗೆ ಆಜ್ಞಾಪಿಸುತ್ತೇನೆ!’’ಎಂದು ಹೇಳಿದನು. ಆ
ಕೂಡಲೇ ಆ ಆತ್ಮವು ಹೊರಬಂದಿತು.

19ಇದನ್ನು ಕಂಡ ಅವಳ ಯಜಮಾನರು ಈಗ ಆಕೆಯಿಂದ
ಹಣಗಳಿಸಲು ಸಾಧ್ಯವಿಲ್ಲವೆಂದು ಅರಿತುಕೊಂಡರು. ಆದ್ದರಿಂದ
ಅವರು ಪೌಲ ಸೀಲರನ್ನು ಹಿಡಿದು ಪಟ್ಟಣದ ನ್ಯಾಯಸ್ಥಾನಕ್ಕೆ
ಎಳೆದುಕೊಂಡು ಹೋದರು. ನಗರಾಧಿಕಾರಿಗಳು ಅಲ್ಲಿದ್ದರು.
20ಆ ಜನರು ಪೌಲ ಸೀಲರನ್ನು ನ್ಯಾಯಾಧೀಶರ ಬಳಿಗೆ ತಂದು,
‘‘ಈ ಜನರು ಯೆಹೂದ್ಯರು. ಇವರು ನಮ್ಮ ಪಟ್ಟಣದಲ್ಲಿ ಗಲಭೆ
ಎಬ್ಬಿಸುತ್ತಿದ್ದಾರೆ. 21ನಿಷಿದ್ಧ ಕಾರ್ಯಗಳನ್ನು ಮಾಡುವಂತೆ
ಇವರು ಜನರಿಗೆ ಹೇಳುತ್ತಿದ್ದಾರೆ. ರೋಮ್ ಪ್ರಜೆಗಳಾಗಿರುವ
ನಾವು ಅಂಥ ಕಾರ್ಯಗಳನ್ನು ಮಾಡಲು ಸಾಧ್ಯವಿಲ್ಲ’’ ಎಂದು
ಹೇಳಿದರು. 22ಜನರು ಪೌಲ ಸೀಲರಿಗೆ ವಿರೋಧವಾಗಿದ್ದರು.
ಆಗ ನಾಯಕರು ಪೌಲ ಸೀಲರ ಬಟ್ಟೆಗಳನ್ನು ಹರಿದುಹಾಕಿಸಿ
ಅವರಿಬ್ಬರಿಗೂ ಕೋಲುಗಳಿಂದ ಬಲವಾಗಿ ಹೊಡೆಸಿ, ಸೆರೆ
ಮನೆಗೆ ಹಾಕಿಸಿದರು. 23ಬಳಿಕ ಸೆರೆಮನೆಯ ಅಧಿಕಾರಿಗೆ,
‘‘ಅವರನ್ನು ಬಹು ಎಚ್ಚರಿಕೆಯಿಂದ ಕಾಯಿರಿ!’’ ಎಂದು ಆಜ್ಞಾಪಿ
ಸಿದರು. 24ಆದ್ದರಿಂದ ಸೆರೆಮನೆಯ ಅಧಿಕಾರಿಯು ಅವರನ್ನು
ಸೆರೆಮನೆಯ ಒಳಕೋಣೆಗೆ ಹಾಕಿಸಿ, ಅವರ ಕಾಲುಗಳನ್ನು
ಮರದ ದಿಮ್ಮಿಗಳಿಗೆ ಬಿಗಿಸಿದನು.

25ಸುಮಾರು ಮಧ್ಯರಾತ್ರಿಯಲ್ಲಿ ಪೌಲ ಸೀಲರು ಪ್ರಾರ್ಥನೆ
ಮಾಡುತ್ತಾ ದೇವರಿಗೆ ಸ್ತುತಿಗೀತೆಗಳನ್ನು ಹಾಡುತ್ತಾ ಇದ್ದರು.
ಇತರ ಕೈದಿಗಳೆಲ್ಲರೂ ಆಲಿಸುತ್ತಿದ್ದರು. 26ಇದ್ದಕ್ಕಿದಂತೆ ದೊಡ್ಡ
ಭೂಕಂಪವಾಯಿತು. ಭೀಕರವಾಗಿದ್ದ ಅದು ಸೆರೆಮನೆಯ ಅಡಿ
ಪಾಯವನ್ನೇ ನಡುಗಿಸಿತು. ಆಗ ಸೆರೆಮನೆಯ ಬಾಗಿಲುಗಳೆಲ್ಲಾ
ತೆರೆದುಕೊಂಡವು. ಎಲ್ಲಾ ಕೈದಿಗಳ ಸರಪಣಿಗಳು ಕಳಚಿಬಿದ್ದವು.
27ಆಗ ಸೆರೆಮನೆಯ ಅಧಿಕಾರಿಗೆ ಎಚ್ಚರವಾಯಿತು. ಸೆರೆಮನೆಯ
ಬಾಗಿಲುಗಳು ತೆರೆದುಕೊಂಡಿರುವುದನ್ನು ಕಂಡು ಈಗಾಗಲೇ
ಕೈದಿಗಳು ತಪ್ಪಿಸಿಕೊಂಡಿದ್ದಾರೆಂದು ಅವನು ಭಾವಿಸಿದನು.
ಆದ್ದರಿಂದ ಅವನು ತನ್ನ ಕತ್ತಿಯನ್ನು ತೆಗೆದುಕೊಂಡು ಆತ್ಮಹತ್ಯೆ
ಮಾಡಿಕೊಳ್ಳಬೇಕೆನ್ನುವಷ್ಟರಲ್ಲಿಯೇ 28ಪೌಲನು ಅವನಿಗೆ,
‘‘ಹಾನಿ ಮಾಡಿಕೊಳ್ಳಬೇಡ! ನಾವೆಲ್ಲಾ ಇಲ್ಲೇ ಇದ್ದೇವೆ!’’ ಎಂದು
ಕೂಗಿ ಹೇಳಿದನು.

29ಸೆರೆಮನೆಯ ಅಧಿಕಾರಿಯು ಒಬ್ಬನಿಗೆ ದೀಪವನ್ನು ತರ
ಬೇಕೆಂದು ಹೇಳಿದನು. ಬಳಿಕ ಅವನು ಒಳಗೆ ಓಡಿಹೋದನು.
ಅವನು ನಡುಗುತ್ತಾ ಪೌಲ ಸೀಲರ ಮುಂದೆ ಕುಸಿದುಬಿದ್ದನು.
30ಬಳಿಕ ಅವನು ಅವರನ್ನು ಹೊರಗೆ ಕರೆದುಕೊಂಡು ಬಂದು,
‘‘ಸ್ವಾಮಿಗಳೇ, ನಾನು ರಕ್ಷಣೆ ಹೊಂದಬೇಕಾದರೆ ಏನು ಮಾಡ
ಬೇಕು?’’ ಎಂದು ಕೇಳಿದನು. 31ಅವರು ಅವನಿಗೆ, ‘‘ಪ್ರಭು
ಯೇಸುವಿನಲ್ಲಿ ನಂಬಿಕೆಯಿಡು. ಆಗ ನೀನು ರಕ್ಷಣೆ ಹೊಂದುವೆ
ಮತ್ತು ನಿನ್ನ ಮನೆಯವರೆಲ್ಲರೂ ರಕ್ಷಣೆ ಹೊಂದುವರು’’
ಎಂದು ಹೇಳಿ, 32ಅವನಿಗೂ ಅವನ ಮನೆಯವರೆಲ್ಲರಿಗೂ
ಪ್ರಭುವಿನ ಸಂದೇಶವನ್ನು ತಿಳಿಸಿದರು.

33ಆಗ ಮಧ್ಯರಾತ್ರಿ ಕಳೆದಿತ್ತು. ಆದರೂ ಅವನು ಪೌಲ
ಸೀಲರನ್ನು ಕರೆದೊಯ್ದು ಅವರ ಗಾಯಗಳನ್ನು ತೊಳೆದನು.
ಬಳಿಕ ಅವನು ಮತ್ತು ಅವನ ಮನೆಯವರೆಲ್ಲರೂ ದೀಕ್ಷಾಸ್ನಾನ
ಮಾಡಿಸಿಕೊಂಡರು. 34ಇದಾದ ಮೇಲೆ ಅವನು ಪೌಲ
ಸೀಲರನ್ನು ಮನೆಗೆ ಕರೆದೊಯ್ದು ಅವರಿಗೆ ಊಟ ಮಾಡಿಸಿ
ದನು. ಆ ಜನರೆಲ್ಲರೂ ಪ್ರಭುವಿನಲ್ಲಿ ನಂಬಿಕೆ ಇಟ್ಟದ್ದರಿಂದ
ಬಹು ಸಂತೋಷಭರಿತರಾದರು.

35ಮರುದಿನ ಮುಂಜಾನೆ ನಾಯಕರು ಸೆರೆಮನೆಯ
ಅಧಿಕಾರಿಗೆ, ‘‘ ಈ ಜನರನ್ನು ಬಿಟ್ಟುಬಿಡು!’’ ಎಂದು ಕೆಲವು
ಸೈನಿಕರ ಮೂಲಕ ಹೇಳಿ ಕಳುಹಿಸಿದರು.

36ಸೆರೆಮನೆಯ ಅಧಿಕಾರಿಯು ಪೌಲನಿಗೆ, ‘‘ನಮ್ಮ
ನಾಯಕರು ನಿಮ್ಮನ್ನು ಬಿಡುಗಡೆ ಮಾಡಬೇಕೆಂದು ಸೈನಿಕರ
ಮೂಲಕ ಹೇಳಿ ಕಳುಹಿಸಿದ್ದಾರೆ, ಈಗ ನೀವು ಸಮಾಧಾನದಿಂದ
ಹೋಗಿರಿ’’ ಎಂದು ಹೇಳಿದನು.

---

**ವಸಾಹತು** ವಲಸೆ ಹೊರಟವರು ಸ್ಥಾಪಿಸಿದ ಸ್ವತಂತ್ರ ನಗರ.

37ಆದರೆ ಪೌಲನು, ‘‘ನಾವು ಏನು ತಪ್ಪು ಮಾಡಿ
ದ್ದೇವೆಂಬುದನ್ನು ನಿಮ್ಮ ನಾಯಕರು ನಿರೂಪಿಸದೆ ನಮ್ಮನ್ನು
ಜನರ ಎದುರಿನಲ್ಲಿ ಹೊಡೆಸಿ ಸೆರೆಮನೆಗೆ ಹಾಕಿಸಿದರು. ನಾವು
ರೋಮಿನ ಪ್ರಜೆಗಳು. ಆದ್ದರಿಂದ ನಮಗೂ ಹಕ್ಕುಗಳಿವೆ. ಈಗ
ಅವರು ನಮ್ಮನ್ನು ಗೋಪ್ಯವಾಗಿ ಬಿಡುಗಡೆ ಮಾಡಬೇಕೆಂದಿ
ರುವರೇ? ಇಲ್ಲ! ನಾಯಕರೇ ಬಂದು ನಮ್ಮನ್ನು ಹೊರಗೆ ಕರೆದು
ಕೊಂಡು ಹೋಗಬೇಕು!’’ ಎಂದು ಹೇಳಿದನು.

38ಆ ಸೈನಿಕರು ನಾಯಕರ ಬಳಿಗೆ ಹೋಗಿ ಪೌಲ ಹೇಳಿ
ದ್ದನ್ನೆಲ್ಲ ತಿಳಿಸಿದರು. ಪೌಲ ಸೀಲರು ರೋಮಿನ ಪ್ರಜೆಗಳೆಂಬು
ದನ್ನು ಕೇಳಿದ ಕೂಡಲೇ ನಾಯಕರಿಗೆ ಭಯವಾಯಿತು.

39ಆದ್ದರಿಂದ ಅವರು ಪೌಲ ಸೀಲರ ಬಳಿಗೆ ಬಂದು ಕ್ಷಮೆ
ಕೇಳಿದರು. ಅಲ್ಲದೆ ಅವರನ್ನು ಸೆರೆಮನೆಯಿಂದ ಹೊರಗೆ
ಕರೆದುಕೊಂಡು ಹೋದರು ಮತ್ತು ತಮ್ಮ ಪಟ್ಟಣವನ್ನು ಬಿಟ್ಟು
ಹೋಗಬೇಕೆಂದು ಕೇಳಿಕೊಂಡರು.

40ಆದರೆ ಪೌಲ ಸೀಲರು ಸೆರೆಮನೆಯಿಂದ ಹೊರಟು
ಲಿಡಿಯಾಳ ಮನೆಗೆ ಹೋದರು. ಅಲ್ಲಿ ಅವರು ಕೆಲವು ವಿಶ್ವಾಸಿ
ಗಳನ್ನು ಕಂಡು ಅವರನ್ನು ಸಂತೈಸಿದರು. ಬಳಿಕ ಪೌಲ ಸೀಲರು
ಅಲ್ಲಿಂದ ಹೊರಟು ಹೋದರು.

## ಥೆಸಲೋನಿಕದಲ್ಲಿ ಪೌಲ ಸೀಲರು

17 ಪೌಲ ಸೀಲರು ಆಂಫಿಪೊಲಿ ಮತ್ತು
ಅಪೊಲೋನಿಯ ಮಾರ್ಗವಾಗಿ ಪ್ರಯಾಣ ಮಾಡಿ
ಥೆಸಲೋನಿಕ ಪಟ್ಟಣಕ್ಕೆ ಬಂದರು. ಆ ಪಟ್ಟಣದಲ್ಲಿ ಯೆಹೂದ್ಯರ
ಒಂದು ಸಭಾಮಂದಿರವಿತ್ತು. 2ಪೌಲನು ಎಂದಿನಂತೆ ಯೆಹೂದ್ಯ
ರನ್ನು ಭೇಟಿಯಾಗಲು ಈ ಸಭಾಮಂದಿರದೊಳಗೆ ಹೋದನು.
ಅವನು ಮೂರು ವಾರಗಳವರೆಗೆ ಪ್ರತಿ ಸಬ್ಬತ್‌ದಿನದಂದು
ಯೆಹೂದ್ಯರೊಂದಿಗೆ ಪವಿತ್ರ ಗ್ರಂಥದ ಆಧಾರದೊಡನೆ
ಚರ್ಚಿಸಿ ವಿವರಿಸಿದನು. 3ಕ್ರಿಸ್ತನು ಸತ್ತು ಸಮಾಧಿಯೊಳಗಿಂದ
ಎದ್ದು ಬರಲೇಬೇಕಿತ್ತು ಎಂಬುದನ್ನು ತೋರಿಸಿಕೊಟ್ಟನು.
‘‘ನಾನು ನಿಮಗೆ ತಿಳಿಸುತ್ತಿರುವ ಈ ಯೇಸುವೇ ಕ್ರಿಸ್ತನು’’ ಎಂದು
ಪೌಲನು ಸ್ಪಷ್ಟಪಡಿಸಿದನು. 4ನಿಜದೇವರನ್ನು ಪ್ರೀತಿಸುತ್ತಿದ್ದ
ಕೆಲವು ಮಂದಿ ಗ್ರೀಕರು ಮತ್ತು ಕೆಲವು ಮಂದಿ ಪ್ರಮುಖ
ಸ್ತ್ರೀಯರು ಅಲ್ಲಿದ್ದರು. ಅವರಲ್ಲಿ ಅನೇಕರಿಗೆ ಮನವರಿಕೆಯಾಗಿ
ಪೌಲ ಸೀಲರನ್ನು ಸೇರಿಕೊಂಡರು.

5ಆದರೆ ನಂಬದೆಹೋದ ಯೆಹೂದ್ಯರು ಅಸೂಯೆ
ಗೊಂಡರು. ಅವರು ಪಟ್ಟಣದಲ್ಲಿದ್ದ ಕೆಲವು ಕೆಡುಕರಿಗೆ ಹಣ
ಕೊಟ್ಟು ಕರೆದುಕೊಂಡು ಬಂದರು. ಈ ಕೆಡುಕರು ಅನೇಕ
ಜನರನ್ನು ಒಟ್ಟುಗೂಡಿಸಿ, ಪಟ್ಟಣದಲ್ಲಿ ಗಲಭೆ ಮಾಡಿದರು.
ಜನರು ಪೌಲ ಸೀಲರನ್ನು ಹುಡುಕುತ್ತಾ ಯಾಸೋನನ ಮನೆಗೆ
ಹೋದರು. ಅವರು ಪೌಲ ಸೀಲರನ್ನು ಜನರ ಮುಂದೆ ಹೊರಗೆ
ಎಳೆದುಕೊಂಡು ಬರಬೇಕೆಂದಿದ್ದರು. 6ಆದರೆ ಅವರು ಪೌಲ
ಸೀಲರನ್ನು ಅಲ್ಲಿ ಕಾಣಲಿಲ್ಲ. ಆದ್ದರಿಂದ ಅವರು ಯಾಸೋನ
ನನ್ನೂ ಕೆಲವು ವಿಶ್ವಾಸಿಗಳನ್ನೂ ನಗರಾಧಿಕಾರಿಗಳ ಮುಂದೆ
ಎಳೆದುಕೊಂಡು ಬಂದು, ‘‘ ಈ ಜನರು (ಪೌಲ ಸೀಲರು)
ಪ್ರಪಂಚದ ಎಲ್ಲಾ ಕಡೆಗಳಲ್ಲೂ ಗಲಭೆಯನ್ನು ಉಂಟುಮಾಡಿ
ಈಗ ಇಲ್ಲಿಗೂ ಬಂದಿದ್ದಾರೆ! 7ಯಾಸೋನನು ಇವರನ್ನು ತನ್ನ
ಮನೆಯಲ್ಲಿ ಇರಿಸಿಕೊಂಡಿದ್ದಾನೆ. ಇವರೆಲ್ಲರೂ ಸೀಸರನ
ಕಾನೂನುಗಳನ್ನು ಉಲ್ಲಂಘಿಸುತ್ತಾರೆ ಮತ್ತು ‘ಯೇಸು’ ಎಂಬ
ಮತ್ತೊಬ್ಬ ರಾಜನಿರುವನೆಂದು ಹೇಳುತ್ತಾರೆ’’ ಎಂದು ಕೂಗಿ
ಹೇಳಿದರು.

8ಈ ಸಂಗತಿಗಳನ್ನು ಕೇಳಿದ ನಗರಾಧಿಕಾರಿಗಳು ಮತ್ತು
ಇತರರು ಬಹು ಗಲಿಬಿಲಿಗೊಂಡರು. 9ಅವರು ಯಾಸೋನ
ನಿಂದಲೂ ಇತರ ವಿಶ್ವಾಸಿಗಳಿಂದಲೂ ಜಾಮೀನು ತೆಗೆದು
ಕೊಂಡು ಅವರನ್ನು ಬಿಡುಗಡೆ ಮಾಡಿದರು.

## ಪೌಲ ಸೀಲರ ಪ್ರಯಾಣ

10 ಅದೇ ರಾತ್ರಿಯಲ್ಲಿ ವಿಶ್ವಾಸಿಗಳು ಪೌಲ ಸೀಲರನ್ನು
ಬೆರೋಯ ಎಂಬ ಮತ್ತೊಂದು ಪಟ್ಟಣಕ್ಕೆ ಕಳುಹಿಸಿದರು.
ಬೆರೋಯದಲ್ಲಿ ಪೌಲ ಸೀಲರು ಯೆಹೂದ್ಯರ ಸಭಾಮಂದಿ
ರಕ್ಕೆ ಹೋದರು. 11ಈ ಯೆಹೂದ್ಯರು ಥೆಸಲೋನಿಕದ
ಯೆಹೂದ್ಯರಿಗಿಂತಲೂ ಉತ್ತಮರಾಗಿದ್ದರು. ಪೌಲ ಸೀಲರು
ಹೇಳಿದ ಸಂಗತಿಗಳನ್ನು ಇವರು ಬಹಳ ಸಂತೋಷದಿಂದ
ಕೇಳಿದರು. ಮತ್ತು ಈ ಸಂಗತಿಗಳು ನಿಜವೇ ಎಂಬುದನ್ನು
ತಿಳಿದುಕೊಳ್ಳಲು ಪವಿತ್ರ ಗ್ರಂಥವನ್ನು ಪ್ರತಿದಿನವೂ ಅಧ್ಯಯನ
ಮಾಡಿದರು. 12ಈ ಯೆಹೂದ್ಯರಲ್ಲಿ ಅನೇಕರು ನಂಬಿದರು.
ಅತಿ ಪ್ರಮುಖರಾದ ಗ್ರೀಕ್ ಸ್ತ್ರೀಯರು ಮತ್ತು ಪುರುಷರು
ನಂಬಿಕೊಂಡರು. 13ಆದರೆ ಪೌಲನು ಬೆರೋಯದಲ್ಲಿ ದೇವರ
ವಾಕ್ಯವನ್ನು ಹೇಳುತ್ತಿದ್ದಾನೆ ಎಂಬ ವಾರ್ತೆಯನ್ನು ಕೇಳಿದ
ಥೆಸಲೋನಿಕದ ಯೆಹೂದ್ಯರು ಬೆರೋಯಕ್ಕೂ ಬಂದು
ಅಲ್ಲಿಯ ಜನರನ್ನು ಗಲಿಬಿಲಿಗೊಳಿಸಿ ಗಲಭೆ ಮಾಡಿದರು.
14ಆದ್ದರಿಂದ ವಿಶ್ವಾಸಿಗಳು ಪೌಲನನ್ನು ಸಮುದ್ರ ತೀರಕ್ಕೆ ಆ
ಕೂಡಲೇ ಕಳುಹಿಸಿದರು. ಆದರೆ ಸೀಲ ತಿಮೊಥೆಯರು
ಬೆರೋಯದಲ್ಲಿ ಉಳಿದುಕೊಂಡರು. 15ಪೌಲನೊಂದಿಗೆ
ಹೋದ ವಿಶ್ವಾಸಿಗಳು ಅವನನ್ನು ಅಥೆನ್ಸ್ ಪಟ್ಟಣಕ್ಕೆ ಕರೆದು
ಕೊಂಡು ಹೋದರು. ಈ ಸಹೋದರರು ಪೌಲನ ಒಂದು
ಸಂದೇಶವನ್ನು ಸೀಲ ತಿಮೊಥೆಯರಿಗೆ ತೆಗೆದುಕೊಂಡು
ಹಿಂತಿರುಗಿ ಬಂದರು. ‘‘ನಿಮಗೆ ಸಾಧ್ಯವಾದಷ್ಟು ಬೇಗನೆ ನನ್ನ
ಬಳಿಗೆ ಬನ್ನಿರಿ’’ ಎಂಬುದೇ ಆ ಸಂದೇಶ.

## ಅಥೆನ್ಸಿನಲ್ಲಿ ಪೌಲನು

16ಪೌಲನು ಅಥೆನ್ಸಿನಲ್ಲಿ ಸೀಲ ತಿಮೊಥೆಯರಿಗಾಗಿ ಎದುರು
ನೋಡುತ್ತಿದ್ದನು. ಆ ಪಟ್ಟಣದ ಎಲ್ಲೆಲ್ಲಿಯೂ ವಿಗ್ರಹಗಳಿರು
ವುದನ್ನು ಕಂಡು ಅವನ ಮನಸ್ಸು ನೊಂದುಹೋಯಿತು.
17ಸಭಾಮಂದಿರದಲ್ಲಿ ಪೌಲನು ಯೆಹೂದ್ಯರೊಂದಿಗೆ ಮತ್ತು
ಯೆಹೂದ್ಯರಾಗಿದ್ದ ಗ್ರೀಕರೊಂದಿಗೆ ಚರ್ಚಿಸಿದನು. ಪಟ್ಟಣದ
ವ್ಯಾಪಾರ ಸ್ಥಳದಲ್ಲಿಯೂ ಪೌಲನು ಕೆಲವು ಜನರೊಂದಿಗೆ
ಪ್ರತಿದಿನ ಚರ್ಚಿಸಿದನು. 18ಎಪಿಕೊರಿಯಾ ಮತ್ತು ಸ್ತೋಯಿಕ
ತತ್ವಶಾಸ್ತ್ರಜ್ಞರಲ್ಲಿ ಕೆಲವರು ಅವನೊಂದಿಗೆ ವಾದಿಸಿದರು.

ಅವರಲ್ಲಿ ಕೆಲವರು, ‘‘ಈ ಮನುಷ್ಯನಿಗೆ ತಾನು ಯಾವುದರ
ಬಗ್ಗೆ ಮಾತಾಡುತ್ತಿದ್ದೇನೆ ಎಂಬುದೇ ನಿಜವಾಗಿಯೂ ತಿಳಿದಿಲ್ಲ.
ಅವನು ಏನು ಹೇಳಲು ಪ್ರಯತ್ನಿಸುತ್ತಿದ್ದಾನೆ?’’ ಎಂದರು.
ಯೇಸುವು ಸತ್ತವರೊಳಗಿಂದ ಜೀವಂತನಾಗಿ ಎದ್ದುಬಂದಿದ್ದಾನೆ
ಎಂಬ ಸುವಾರ್ತೆಯನ್ನು ಪೌಲನು ಅವರಿಗೆ ಹೇಳುತ್ತಿದ್ದನು.
ಆದ್ದರಿಂದ ಅವರು, ‘‘ಕೆಲವು ಬೇರೆ ದೇವರುಗಳ ಬಗ್ಗೆ ಅವನು

ನಮಗೆ ಹೇಳುತ್ತಿರುವಂತೆ ತೋರುತ್ತಿದೆ’’ ಎಂದರು. 19ಅವರು
ಪೌಲನನ್ನು ಅರಿಯೊಪಾಗ ನ್ಯಾಯಸಭೆಗೆ ಕರೆದುಕೊಂಡು
ಹೋದರು. ಅವರು ಅವನಿಗೆ, ‘‘ನೀನು ಉಪದೇಶಿಸುತ್ತಿರುವ
ಹೊಸ ತತ್ವವನ್ನು ದಯವಿಟ್ಟು ನಮಗೆ ವಿವರಿಸು. 20ನೀನು
ಹೇಳುತ್ತಿರುವ ಸಂಗತಿಗಳು ನಮಗೆ ಹೊಸದಾಗಿವೆ. ನಾವು
ಹಿಂದೆಂದೂ ಈ ಸಂಗತಿಗಳನ್ನು ಕೇಳಿಲ್ಲ. ಈ ಉಪದೇಶದ ಅರ್ಥ
ವನ್ನು ನಾವು ತಿಳಿದುಕೊಳ್ಳಬಯಸುತ್ತೇವೆ’’ ಎಂದು ಹೇಳಿದರು.
21(ಅಥೆನ್ಸಿನ ಎಲ್ಲಾ ಜನರು ಮತ್ತು ಅಲ್ಲಿ ವಾಸವಾಗಿದ್ದ ಬೇರೆ
ದೇಶಗಳವರು ಹೊಸ ಆಲೋಚನೆಗಳ ಬಗ್ಗೆ ಮಾತಾಡು
ವುದಕ್ಕೂ ಕೇಳುವುದಕ್ಕೂ ಬಹಳ ಇಷ್ಟಪಡುತ್ತಿದ್ದರು.)

22ಆಗ ಪೌಲನು ಅರಿಯೊಪಾಗ ನ್ಯಾಯಸಭೆಯ ಮುಂದೆ
ನಿಂತುಕೊಂಡು ಇಂತೆಂದನು: ‘‘ಅಥೆನ್ಸಿನ ಜನರೇ, ನೀವು ಎಲ್ಲಾ
ಸಂಗತಿಗಳಲ್ಲೂ ಬಹು ಧಾರ್ಮಿಕರೆಂದು ನನಗೆ ತೋರುತ್ತದೆ.
23ನಾನು ನಿಮ್ಮ ಪಟ್ಟಣದಲ್ಲಿ ನಡೆದು ಹೋಗುವಾಗ ನೀವು
ಪೂಜಿಸುವ ದೇವತಾ ಪ್ರತಿಮೆಗಳನ್ನು ಕಂಡೆನು. ಒಂದು
ಯಜ್ಞವೇದಿಕೆಯ ಮೇಲೆ, ‘ತಿಳಿಯದ ದೇವರಿಗೆ’ ಎಂದು ಬರೆ
ದಿತ್ತು. ನಿಮಗೆ ಗೊತ್ತಿಲ್ಲದ ದೇವರನ್ನು ನೀವು ಆರಾಧಿಸು
ತ್ತಿದ್ದೀರಿ. 24ದೇವರ ಬಗ್ಗೆಯೇ ನಾನು ನಿಮಗೆ ಹೇಳುತ್ತಿದ್ದೇನೆ!
ಇಡೀ ಪ್ರಪಂಚವನ್ನು ಮತ್ತು ಅದರಲ್ಲಿರುವ ಪ್ರತಿಯೊಂದನ್ನು
ಸೃಷ್ಟಿಮಾಡಿದಾತನೇ ಆ ದೇವರು. ಆತನೇ ಭೂಮ್ಯಾಕಾಶಗಳ
ಒಡೆಯನು. ಮನುಷ್ಯರು ನಿರ್ಮಿಸುವ ಗುಡಿಗಳಲ್ಲಿ ಆತನು
ಜೀವಿಸುವವನಲ್ಲ. 25ಮನುಷ್ಯರಿಗೆ ಜೀವವನ್ನೂ ಉಸಿರನ್ನೂ
ಸಮಸ್ತವನ್ನೂ ಕೊಡುವಾತನು ಆ ದೇವರೇ. ಆತನಿಗೆ ಜನರ
ಸೇವೆಯ ಅಗತ್ಯವೇನೂ ಇಲ್ಲ. ಆತನಿಗೆ ಕೊರತೆಯೆಂಬುದೂ
ಇಲ್ಲ. 26ದೇವರು ಒಬ್ಬ ಮನುಷ್ಯನನ್ನು ಸೃಷ್ಟಿ ಮಾಡುವುದರ
ಮೂಲಕ ಮಾನವ ಜನಾಂಗವನ್ನು ಆರಂಭಿಸಿದನು. ಅವನಿಂದ
ಬೇರೆಲ್ಲ ಜನರನ್ನು ಉತ್ಪತ್ತಿಮಾಡಿ, ಪ್ರಪಂಚದ ಎಲ್ಲೆಲ್ಲಿಯೂ
ಅವರು ವಾಸಿಸುವಂತೆ ಮಾಡಿದನು; ಅವರು ಯಾವಾಗ ಮತ್ತು
ಎಲ್ಲೆಲ್ಲಿ ವಾಸಿಸಬೇಕೆಂಬುದನ್ನು ಸರಿಯಾಗಿ ನಿರ್ಧರಿಸಿದನು.
27ಜನರು ತನ್ನನ್ನು ಹುಡುಕಬೇಕೆಂಬುದು ದೇವರ ಉದ್ದೇಶ
ವಾಗಿತ್ತು. ತನಗಾಗಿ ಸುತ್ತಮುತ್ತಲೆಲ್ಲಾ ಹುಡುಕಿ ಕಂಡುಕೊಳ್ಳ
ಬಹುದೆಂದು ದೇವರು ಹಾಗೆ ಮಾಡಿದನು. ಆದರೆ ಆತನು
ನಮ್ಮಲ್ಲಿ ಯಾರಿಗೂ ಬಹು ದೂರವಾಗಿಲ್ಲ.

28 ನಾವು ಆತನೊಂದಿಗೆ ವಾಸಿಸುತ್ತೇವೆ, ನಡೆಯು
ತ್ತೇವೆ, ಇರುತ್ತೇವೆ. ನಿಮ್ಮವರೇ ಆದ ಕೆಲವು
ಲೇಖಕರು, ‘ನಾವು ಆತನ ಸಂತಾನದವರೇ’
ಎಂದು ಹೇಳಿದ್ದಾರೆ.

29ನಾವು ದೇವರ ಮಕ್ಕಳಾಗಿದ್ದೇವೆ. ಆದ್ದರಿಂದ ಜನರು ಊಹಿಸಿ
ಕೊಳ್ಳುವ ರೀತಿಯಲ್ಲಾಗಲಿ ನಿರ್ಮಿಸುವ ರೀತಿಯಲ್ಲಾಗಲಿ
ದೇವರಿದ್ದಾನೆಂದು ನೀವು ಯೋಚಿಸಕೂಡದು. ಆತನು ಬೆಳ್ಳಿ,
ಬಂಗಾರ ಮತ್ತು ಕಲ್ಲುಗಳ ರೂಪದಲ್ಲಿಲ್ಲ. 30ಹಿಂದಿನ ಕಾಲದಲ್ಲಿ
ಜನರು ದೇವರನ್ನು ಅರ್ಥಮಾಡಿಕೊಳ್ಳಲಿಲ್ಲ. ಆದರೆ ದೇವರು
ಅದಕ್ಕೆ ಲಕ್ಷ್ಯಕೊಡಲಿಲ್ಲ. ಈಗಲಾದರೋ ಪ್ರಪಂಚದ ಎಲ್ಲಾ
ಕಡೆಗಳಲ್ಲಿರುವವರು ಪಶ್ಚಾತ್ತಾಪಪಡಬೇಕೆಂದು ಆತನು ಆಜ್ಞಾ
ಪಿಸುತ್ತಾನೆ. 31ಪ್ರಪಂಚದ ಜನರೆಲ್ಲರಿಗೂ ನ್ಯಾಯ ತೀರಿಸು
ವುದಕ್ಕಾಗಿ ದೇವರು ಒಂದು ದಿನವನ್ನು ಗೊತ್ತುಪಡಿಸಿದ್ದಾನೆ.
ಅಂದು ನ್ಯಾಯತೀರಿಸುವುದಕ್ಕಾಗಿ ಆತನು ಒಬ್ಬ ವ್ಯಕ್ತಿಯನ್ನು
ಬಹುಕಾಲದ ಹಿಂದೆಯೇ ಆರಿಸಿಕೊಂಡಿದ್ದಾನೆ. ಇದನ್ನು ಎಲ್ಲ
ರಿಗೂ ಖಚಿತಪಡಿಸುವುದಕ್ಕಾಗಿ ಆ ವ್ಯಕ್ತಿಯನ್ನು ಸತ್ತವರೊಳ
ಗಿಂದ ಜೀವಂತವಾಗಿ ಎಬ್ಬಿಸಿದ್ದಾನೆ.’’

32ಯೇಸು ಸತ್ತವರೊಳಗಿಂದ ಜೀವಂತವಾಗಿ ಎದ್ದು
ಬಂದಿದ್ದಾನೆ ಎಂಬ ಸಂಗತಿಯನ್ನು ಕೇಳಿದ ಆ ಜನರಲ್ಲಿ ಕೆಲವರು
ಅಪಹಾಸ್ಯ ಮಾಡಿದರು. ಇತರರು, ‘‘ಈ ವಿಷಯದ ಬಗ್ಗೆ ನೀನು
ಇನ್ನೊಮ್ಮೆ ಹೇಳಬಹುದು, ಆಗ ಕೇಳುತ್ತೇವೆ’’ ಎಂದು ಹೇಳಿ
ದರು. ಆದ್ದರಿಂದ ಪೌಲನು ಅವರ ಬಳಿಯಿಂದ ಹೊರಟು
ಹೋದನು. 34ಆದರೆ ಆ ಜನರಲ್ಲಿ ಕೆಲವರು ಪೌಲನನ್ನು ನಂಬಿ
ಅವನನ್ನು ಸೇರಿಕೊಂಡರು. ನಂಬಿದ ಜನರಲ್ಲಿ ಅರಿಯೊಪಾಗ
ನ್ಯಾಯಸಭೆಯ ಸದಸ್ಯನಾದ ದಿಯೊನಿಸಿಯನೂ ‘ದಮಾರಿ’
ಎಂಬ ಸ್ತ್ರೀಯೂ ಮತ್ತಿತರರೂ ಇದ್ದರು.

## ಕೊರಿಂಥದಲ್ಲಿ ಪೌಲನು

18 ತರುವಾಯ ಪೌಲನು ಅಥೆನ್ಸನ್ನು ಬಿಟ್ಟು ಕೊರಿಂಥ
ಪಟ್ಟಣಕ್ಕೆ ಹೋದನು. 2ಕೊರಿಂಥದಲ್ಲಿ ಪೌಲನು
ಅಕ್ವಿಲ ಎಂಬ ಯೆಹೂದ್ಯನನ್ನು ಕಂಡನು. ಅಕ್ವಿಲನು ಪೊಂತ
ಎಂಬ ನಾಡಿನವನು. ಆದರೆ ಅಕ್ವಿಲ ಮತ್ತು ಅವನ ಹೆಂಡತಿ
ಪ್ರಿಸ್ಕಿಲ್ಲ ಇಟಲಿಯಿಂದ ಕೊರಿಂಥಕ್ಕೆ ಇತ್ತೀಚೆಗೆ ಬಂದಿದ್ದರು.
ಎಲ್ಲಾ ಯೆಹೂದ್ಯರು ರೋಮನ್ನು ಬಿಟ್ಟುಹೋಗಬೇಕೆಂದು
ಕ್ಲಾಡಿಯಸನು* ಆಜ್ಞಾಪಿಸಿದ್ದರಿಂದ ಅವರು ಇಟಲಿಯನ್ನು
ಬಿಟ್ಟುಬಂದಿದ್ದರು. ಪೌಲನು ಅಕ್ವಿಲ ಮತ್ತು ಪ್ರಿಸ್ಕಿಲ್ಲರನ್ನು
ಭೇಟಿಯಾಗಲು ಹೋದನು. 3ಅವರು ಪೌಲನಂತೆ ಗುಡಾರ
ತಯಾರಕರಾಗಿದ್ದರು. ಪೌಲನು ಅವರಲ್ಲೇ ತಂಗಿದ್ದು , ಅವ
ರೊಂದಿಗೆ ಕೆಲಸ ಮಾಡುತ್ತಿದ್ದನು. 4ಪ್ರತಿ ಸಬ್ಬತ್ ದಿನದಂದು
ಪೌಲನು ಸಭಾಮಂದಿರದಲ್ಲಿ ಯೆಹೂದ್ಯರೊಂದಿಗೂ ಗ್ರೀಕ
ರೊಂದಿಗೂ ಚರ್ಚಿಸುತ್ತಾ ಯೇಸುವಿನಲ್ಲಿ ನಂಬಿಕೆ ಇಡುವಂತೆ
ಅವರನ್ನು ಪ್ರೋತ್ಸಾಹಿಸಿದನು.

5ಕೊರಿಂಥದಲ್ಲಿದ್ದ ಪೌಲನ ಬಳಿಗೆ ಸೀಲ ತಿಮೊಥೆಯರು
ಮಕೆದೋನಿಯದಿಂದ ಬಂದರು. ಅನಂತರ, ಜನರಿಗೆ ಸುವಾರ್ತೆ
ಯನ್ನು ತಿಳಿಸುವುದರಲ್ಲೇ ಪೌಲನು ತನ್ನ ಸಮಯವನ್ನೆಲ್ಲ
ಕಳೆದನು. ಯೇಸುವೇ ಕ್ರಿಸ್ತನೆಂಬುದನ್ನು ಅವನು ಯೆಹೂದ್ಯ
ರಿಗೆ ತೋರಿಸಿಕೊಟ್ಟನು. 6ಆದರೆ ಯೆಹೂದ್ಯರು ಪೌಲನ
ಉಪದೇಶವನ್ನು ತಿರಸ್ಕರಿಸಿ ದೂಷಣೆ ಮಾಡಿದರು. ಆದ್ದರಿಂದ
ಪೌಲನು ತನ್ನ ಬಟ್ಟೆಗಳ ಧೂಳನ್ನು ಝಾಡಿಸಿ ಯೆಹೂದ್ಯರಿಗೆ,
‘‘ನೀವು ರಕ್ಷಣೆ ಹೊಂದದಿದ್ದರೆ, ಅದು ನಿಮ್ಮ ಸ್ವಂತ ತಪ್ಪು .
ನನ್ನಿಂದ ಸಾಧ್ಯವಾದದ್ದನ್ನೆಲ್ಲ ನಾನು ಮಾಡಿದ್ದೇನೆ. ಇನ್ನು ಮೇಲೆ
ನಾನು ಯೆಹೂದ್ಯರಲ್ಲದ ಜನರ ಬಳಿಗೆ ಹೋಗುತ್ತೇನೆ!’’
ಎಂದು ಹೇಳಿದನು. 7ಪೌಲನು ಸಭಾಮಂದಿರವನ್ನು ಬಿಟ್ಟು
ತೀತಯುಸ್ತ ಎಂಬವನ ಮನೆಗೆ ಹೋದನು. ಈ ಮನುಷ್ಯನು
ನಿಜದೇವರನ್ನು ಆರಾಧಿಸುತ್ತಿದ್ದನು. ಇವನ ಮನೆ ಸಭಾ
ಮಂದಿರದ ಪಕ್ಕದಲ್ಲಿತ್ತು. 8ಕ್ರಿಸ್ಪನು ಸಭಾಮಂದಿರದ ಅಧ್ಯಕ್ಷ
ನಾಗಿದ್ದನು. ಕ್ರಿಸ್ಪನು ಮತ್ತು ಅವನ ಮನೆಯಲ್ಲಿ ವಾಸವಾಗಿದ್ದ
ಎಲ್ಲಾ ಜನರು ಪ್ರಭುವಿನಲ್ಲಿ ನಂಬಿಕೆಯಿಟ್ಟರು. ಕೊರಿಂಥದಲ್ಲಿ

---

**ಕ್ಲಾಡಿಯಸ್** ರೋಮ್ ಚಕ್ರವರ್ತಿ.

ಇತರ ಅನೇಕ ಜನರು ಪೌಲನಿಗೆ ಕಿವಿಗೊಟ್ಟರು ಮತ್ತು ನಂಬಿ
ದೀಕ್ಷಾಸ್ನಾನ ಮಾಡಿಸಿಕೊಂಡರು.
9 ಒಂದು ರಾತ್ರಿ ಪೌಲನಿಗೆ ದರ್ಶನವಾಯಿತು. ಪ್ರಭುವು
ಅವನಿಗೆ, ‘‘ಭಯಪಡಬೇಡ! ಜನರಿಗೆ ಬೋಧಿಸುತ್ತಲೇ ಇರು,
ನಿಲ್ಲಿಸಬೇಡ! 10 ನಾನು ನಿನ್ನೊಂದಿಗಿದ್ದೇನೆ. ನಿನಗೆ ಕೇಡು
ಮಾಡಲು ಯಾರಿಗೂ ಸಾಧ್ಯವಿಲ್ಲ. ನನ್ನ ಅನೇಕ ಜನರು ಈ
ಪಟ್ಟಣದಲ್ಲಿ ಇದ್ದಾರೆ’’ ಎಂದು ಹೇಳಿದನು. 11 ಪೌಲನು ದೇವರ
ಸತ್ಯವನ್ನು ಜನರಿಗೆ ಉಪದೇಶಿಸುತ್ತಾ ಅಲ್ಲಿ ಒಂದೂವರೆ
ವರ್ಷದವರೆಗೆ ಇದ್ದನು.

### ಗಲ್ಲಿಯೋನನ ಮುಂದೆ ಪೌಲ

12 ಅಖಾಯ ನಾಡಿಗೆ ಗಲ್ಲಿಯೋನನು ರಾಜ್ಯಪಾಲನಾದಾಗ
ಕೆಲವು ಯೆಹೂದ್ಯರು ಪೌಲನಿಗೆ ವಿರೋಧವಾಗಿ ಸೇರಿ
ಬಂದರು. ಅವರು ಪೌಲನನ್ನು ನ್ಯಾಯಾಲಯಕ್ಕೆ ಕರೆದೊಯ್ದು,
13 ರಾಜ್ಯಪಾಲನಿಗೆ, ‘‘ನಮ್ಮ ಧರ್ಮಶಾಸ್ತ್ರಕ್ಕೆ ವಿರುದ್ಧವಾದ
ರೀತಿಯಲ್ಲಿ ದೇವರನ್ನು ಆರಾಧಿಸಬೇಕೆಂದು ಇವನು ಜನರಿಗೆ
ಉಪದೇಶಿಸುತ್ತಿದ್ದಾನೆ!’’ ಎಂದು ಹೇಳಿದರು.
14 ಪೌಲನು ಮಾತಾಡುವುದಕ್ಕೆ ಸಿದ್ಧನಾಗಿದ್ದನು. ಆದರೆ
ಗಲ್ಲಿಯೋನ ಯೆಹೂದ್ಯರಿಗೆ, ‘‘ಯೆಹೂದ್ಯರೇ, ಅಪರಾಧ
ವಾಗಲಿ ದುಷ್ಕಾರ್ಯವಾಗಲಿ ನಡೆದಿದ್ದರೆ ನಾನು ನಿಮ್ಮ ದೂರು
ಕೇಳುತ್ತಿದ್ದೆನು. 15 ನಿಮ್ಮ ಅಪವಾದಗಳು ಕೇವಲ ಪದಗಳಿಗೂ
ಹೆಸರುಗಳಿಗೂ ಮತ್ತು ನಿಮ್ಮ ಸ್ವಂತ ಧರ್ಮಶಾಸ್ತ್ರಕ್ಕೂ ಸಂಬಂಧ
ಪಟ್ಟಿವೆ. ಆದ್ದರಿಂದ ನೀವೇ ಈ ಸಮಸ್ಯೆಯನ್ನು ಬಗೆಹರಿಸಿ
ಕೊಳ್ಳಬೇಕು. ಈ ಸಂಗತಿಗಳಿಗೆ ನ್ಯಾಯಾಧೀಶನಾಗಿರಲು ನನಗೆ
ಇಷ್ಟವಿಲ್ಲ!’’ ಎಂದು ಹೇಳಿ, 16 ಅವರನ್ನು ನ್ಯಾಯಾಲಯದಿಂದ
ಹೊರಡಿಸಿದನು.
17 ಬಳಿಕ ಅವರೆಲ್ಲರೂ ಸೋಸ್ಥೆನನನ್ನು ಹಿಡಿದುಕೊಂಡು
ನ್ಯಾಯಾಲಯದ ಮುಂದೆಯೇ ಹೊಡೆದರು. (ಸೋಸ್ಥೆನನು
ಆಗ ಸಭಾಮಂದಿರದ ಅಧ್ಯಕ್ಷನಾಗಿದ್ದನು.) ಆದರೆ ಗಲ್ಲಿಯೋನ
ಅದನ್ನು ತನ್ನ ಗಮನಕ್ಕೆ ತೆಗೆದುಕೊಳ್ಳಲಿಲ್ಲ.

### ಅಂತಿಯೋಕ್ಯಕ್ಕೆ ಪೌಲನ ಮರುಪ್ರಯಾಣ

18 ಪೌಲನು ಅನೇಕ ದಿನಗಳವರೆಗೆ ಸಹೋದರರೊಂದಿಗೆ
ಇದ್ದನು. ಬಳಿಕ ಅವನು ಅಲ್ಲಿಂದ ಸಿರಿಯಕ್ಕೆ ನೌಕಾಯಾನ
ಮಾಡಿದನು. ಪ್ರಿಸ್ಕಿಲ್ಲ ಮತ್ತು ಅಕ್ವಿಲ್ಲ ಸಹ ಅವನೊಂದಿಗಿದ್ದರು.
ಕೆಂಖ್ರೆ ಎಂಬ ಸ್ಥಳದಲ್ಲಿ ಪೌಲನು ತನ್ನ ತಲೆಕೂದಲನ್ನು
ಕತ್ತರಿಸಿಕೊಂಡನು. ಅವನು ದೇವರಿಗೆ ಹರಕೆಯನ್ನು ಮಾಡಿ
ಕೊಂಡಿದ್ದನೆಂಬುದನ್ನು ಅದು ಸೂಚಿಸುತ್ತಿತ್ತು. 19 ಬಳಿಕ ಅವರು
ಎಫೆಸ ಪಟ್ಟಣಕ್ಕೆ ಹೋದರು. ಪ್ರಿಸ್ಕಿಲ್ಲ ಮತ್ತು ಅಕ್ವಿಲರನ್ನು
ಪೌಲನು ಬಿಟ್ಟುಹೋದದ್ದು ಇಲ್ಲಿಯೇ. ಪೌಲನು ಎಫೆಸ
ದಲ್ಲಿದ್ದಾಗ ಸಭಾಮಂದಿರಕ್ಕೆ ಹೋಗಿ ಯೆಹೂದ್ಯರೊಂದಿಗೆ
ಚರ್ಚಿಸಿದನು. 20 ಆ ಯೆಹೂದ್ಯರು ಇನ್ನೂ ಸ್ವಲ್ಪಕಾಲ ಇರ
ಬೇಕೆಂದು ಪೌಲನನ್ನು ಕೇಳಿಕೊಂಡರು. ಆದರೆ ಅವನು
ಒಪ್ಪಲಿಲ್ಲ. 21 ಪೌಲನು ಅವರಿಗೆ, ‘‘ದೇವರು ಬಯಸುವು
ದಾದರೆ, ನಾನು ನಿಮ್ಮ ಬಳಿಗೆ ಮತ್ತೆ ಬರುತ್ತೇನೆ‘‘ ಎಂದು ಹೇಳಿ
ಅಲ್ಲಿಂದ ಹೊರಟನು. ಹೀಗೆ ಪೌಲನು ಎಫೆಸದಿಂದ ನೌಕಾ
ಯಾನ ಮಾಡಿದನು.
22 ಪೌಲನು ಸೆಜರೇಯ ಪಟ್ಟಣಕ್ಕೆ ಹೋದನು. ಅಲ್ಲಿಂದ
ಜೆರುಸಲೇಮಿಗೆ ಹೋಗಿ ಸಭೆಯವರನ್ನು ವಂದಿಸಿದನು.
ಅನಂತರ ಪೌಲನು ಅಂತಿಯೋಕ್ಯ ಪಟ್ಟಣಕ್ಕೆ ಹೋದನು.
23 ಅಲ್ಲಿ ಅವನು ಸ್ವಲ್ಪಕಾಲವಿದ್ದನು. ಬಳಿಕ ಅಲ್ಲಿಂದ ಹೊರಟು
ಗಲಾತ್ಯ ಮತ್ತು ಫ್ರಿಜಿಯ ನಾಡುಗಳಲ್ಲಿ ಸಂಚರಿಸುತ್ತಾ ಯೇಸು
ವಿನ ಶಿಷ್ಯರೆಲ್ಲರನ್ನು ಬಲಪಡಿಸಿದನು.

### ಎಫೆಸದಲ್ಲಿ ಮತ್ತು ಅಖಾಯದಲ್ಲಿ ಅಪೊಲ್ಲೋಸನು

24 ಅಲೆಕ್ಸಾಂಡ್ರಿಯಾ ಪಟ್ಟಣದಿಂದ ಅಪೊಲ್ಲೋಸನೆಂಬ
ಯೆಹೂದ್ಯನು ಎಫೆಸಕ್ಕೆ ಬಂದನು .ಅವನು ವಿದ್ಯಾವಂತ
ನಾಗಿದ್ದನು ಮತ್ತು ಪವಿತ್ರ ಗ್ರಂಥದಲ್ಲಿ ಪಾಂಡಿತ್ಯ ಪಡೆದಿದ್ದನು.
25 ಅಪೊಲ್ಲೋಸನು ಯಾವಾಗಲೂ ಬಹು ಉತ್ಸುಕತೆಯಿಂದ
ಯೇಸುವಿನ ಬಗ್ಗೆ ಜನರಿಗೆ ಉಪದೇಶಿಸುತ್ತಿದ್ದನು. ಯೇಸುವಿನ
ಬಗ್ಗೆ ಅಪೊಲ್ಲೋಸನು ಹೇಳಿದ ಸಂಗತಿಗಳು ಸರಿಯಾಗಿದ್ದವು.
ಆದರೆ ಸ್ನಾನಿಕ ಯೋಹಾನನ ದೀಕ್ಷಾಸ್ನಾನವೊಂದೇ ಇವನಿಗೆ
ಗೊತ್ತಿತ್ತು. 26 ಅಪೊಲ್ಲೋಸನು ಸಭಾಮಂದಿರದಲ್ಲಿ ಬಹು
ಧೈರ್ಯವಾಗಿ ಮಾಡಿದ ಉಪದೇಶವನ್ನು ಕೇಳಿದ ಪ್ರಿಸ್ಕಿಲ್ಲ ಮತ್ತು
ಅಕ್ವಿಲ ಅವನನ್ನು ತಮ್ಮ ಮನೆಗೆ ಕರೆದುಕೊಂಡು ಹೋಗಿ,
ದೇವರ ಮಾರ್ಗವನ್ನು ಆಳವಾಗಿ ಗ್ರಹಿಸಿಕೊಳ್ಳಲು ನೆರವು ನೀಡಿ
ದರು. 27 ಅಪೊಲ್ಲೋಸನು ಅಖಾಯ ಪ್ರಾಂತ್ಯಕ್ಕೆ ಹೋಗಲು
ಅಪೇಕ್ಷಿಸಿದಾಗ ಎಫೆಸದ ಸಹೋದರರು ಅವನನ್ನು ಪ್ರೋತ್ಸಾಹಿ
ಸಿದರು. ಅಲ್ಲದೆ ಅಖಾಯದಲ್ಲಿದ್ದ ಯೇಸುವಿನ ಶಿಷ್ಯರಿಗೆ ಅವರು
ಪತ್ರವನ್ನು ಬರೆದು, ಅಪೊಲ್ಲೋಸನನ್ನು ಸ್ವೀಕರಿಸಿಕೊಳ್ಳ
ಬೇಕೆಂದು ಅವರನ್ನು ಕೇಳಿಕೊಂಡರು. ಅಖಾಯದಲ್ಲಿ ಈ
ಶಿಷ್ಯರು ದೇವರ ಕೃಪೆಯಿಂದಾಗಿ ಯೇಸುವಿನಲ್ಲಿ ನಂಬಿಕೆ
ಯಿಟ್ಟಿದ್ದರು. ಅಪೊಲ್ಲೋಸನು ಅಲ್ಲಿಗೆ ಹೋಗಿ ಅವರಿಗೆ ಬಹಳ
ನೆರವು ನೀಡಿದನು. 28 ಅವನು ಜನರೆಲ್ಲರ ಮುಂದೆ ಯೆಹೂದ್ಯರ
ವಿರುದ್ಧ ಬಹು ಬಲವಾಗಿ ವಾದಿಸಿ, ಪವಿತ್ರ ಗ್ರಂಥವನ್ನು
ಆಧಾರವಾಗಿ ತೆಗೆದುಕೊಂಡು ಯೇಸುವೇ ಕ್ರಿಸ್ತನೆಂಬುದನ್ನು
ಸ್ಪಷ್ಟವಾಗಿ ನಿರೂಪಿಸಿದನು.

### ಪೌಲ ಎಫೆಸದಲ್ಲಿ

19 ಅಪೊಲ್ಲೋಸನು ಕೊರಿಂಥ ಪಟ್ಟಣದಲ್ಲಿದ್ದಾಗ
ಪೌಲನು ಎಫೆಸ ಪಟ್ಟಣಕ್ಕೆ ಪ್ರಯಾಣ ಮಾಡುತ್ತಾ
ದಾರಿಯಲ್ಲಿ ಸಿಕ್ಕಿದ ಕೆಲವು ಊರುಗಳನ್ನು ಸಂದರ್ಶಿಸಿದನು.
ಅವನು ಎಫೆಸ ಪಟ್ಟಣವನ್ನು ತಲುಪಿದಾಗ, ಕೆಲವು ಮಂದಿ
ಶಿಷ್ಯರನ್ನು ಕಂಡು, 2 ‘‘ನೀವು ನಂಬಿಕೊಂಡಾಗ ಪವಿತ್ರಾತ್ಮನನ್ನು
ಹೊಂದಿಕೊಂಡಿರಾ?’’ ಎಂದು ಕೇಳಿದನು. ಆ ಶಿಷ್ಯರು ಅವನಿಗೆ,
‘‘ಪವಿತ್ರಾತ್ಮನು ಇದ್ದಾನೆ ಎಂಬುದನ್ನು ನಾವು ಇದುವರೆಗೆ
ಕೇಳಿಯೂ ಇಲ್ಲ!’’ ಎಂದರು.
3 ಪೌಲನು ಅವರಿಗೆ, ‘‘ನೀವು ಯಾವ ಬಗೆಯ ದೀಕ್ಷಾಸ್ನಾನ
ಪಡೆದಿರಿ?’’ ಎಂದು ಕೇಳಿದನು. ಅವರು, ‘‘ಯೋಹಾನನು
ಬೋಧಿಸಿದ ದೀಕ್ಷಾಸ್ನಾನವನ್ನು ನಾವು ಮಾಡಿಸಿಕೊಂಡೆವು’’
ಎಂದು ಹೇಳಿದರು.
4 ಅದಕ್ಕೆ ಪೌಲನು, ‘‘ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪ
ಪಟ್ಟು ದೇವರ ಕಡೆಗೆ ತಿರುಗಿಕೊಂಡವರಿಗೆ ಯೋಹಾನನು
ದೀಕ್ಷಾಸ್ನಾನ ಮಾಡಿಸಿದನು. ಅಲ್ಲದೆ ತನ್ನ ತರುವಾಯ

ಬರುವಾತನಲ್ಲಿ ನಂಬಿಕೆ ಇಡಬೇಕೆಂದು ಅವರಿಗೆ ಹೇಳಿದನು. ಆ ವ್ಯಕ್ತಿಯೇ ಯೇಸು'' ಎಂದನು.

5 ಇದನ್ನು ಕೇಳಿದಾಗ ಆ ಶಿಷ್ಯರು ಪ್ರಭುವಾದ ಯೇಸುವಿನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿಕೊಂಡರು. 6 ಬಳಿಕ ಪೌಲನು ಅವರ ಮೇಲೆ ತನ್ನ ಕೈಗಳನ್ನಿಟ್ಟಾಗ ಅವರು ಪವಿತ್ರಾತ್ಮಭರಿತರಾದರು. ಅವರು ವಿವಿಧ ಭಾಷೆಗಳಲ್ಲಿ ಮಾತಾಡಿದರು ಮತ್ತು ಪ್ರವಾದನೆ ಮಾಡಿದರು. 7 ಈ ಗುಂಪಿನಲ್ಲಿ ಸುಮಾರು ಹನ್ನೆರಡು ಮಂದಿ ಇದ್ದರು.

8 ಅನಂತರ ಮೂರು ತಿಂಗಳ ಕಾಲ ಪೌಲನು ಸಭಾಮಂದಿರಕ್ಕೆ ಹೋಗಿ ಬಹು ಧೈರ್ಯದಿಂದ ಮಾತಾಡಿದನು. ಅವನು ಯೆಹೂದ್ಯರಿಗೆ ದೇವರ ರಾಜ್ಯದ ಸಂಗತಿಗಳನ್ನು ತಿಳಿಸಿ ಅವರನ್ನು ಒಡಂಬಡಿಸಲು ಪ್ರಯತ್ನಿಸಿದನು.

9 ಆದರೆ ಆ ಯೆಹೂದ್ಯರಲ್ಲಿ ಕೆಲವರು ಮೊಂಡರಾದರು. ಅವರು ನಂಬದೆ ದೇವರ ಮಾರ್ಗವನ್ನು ಜನರೆಲ್ಲರ ಎದುರಿನಲ್ಲಿ ದೂಷಿಸಿದರು. ಆದ್ದರಿಂದ ಪೌಲನು ಏಷ್ಯಾ ಪ್ರಾಂತ್ಯದ ಆ ಯೆಹೂದ್ಯರನ್ನೆಲ್ಲ ಬಿಟ್ಟು, ಯೇಸುವಿನ ಶಿಷ್ಯರನ್ನು ತನ್ನೊಂದಿಗೆ ಕರೆದುಕೊಂಡು ಹೋಗಿ, ತುರನ್ನನ ಶಾಲೆಯಲ್ಲಿ ಪ್ರತಿದಿನವೂ ಚರ್ಚೆ ನಡೆಸಿದನು. 10 ಹೀಗೆ ಎರಡು ವರ್ಷಗಳು ಕಳೆದವು. ಇದರಿಂದಾಗಿ, ಏಷ್ಯಾದಲ್ಲಿ ವಾಸವಾಗಿದ್ದ ಎಲ್ಲಾ ಯೆಹೂದ್ಯರು ಮತ್ತು ಗ್ರೀಕರು ಪ್ರಭುವಿನ ವಾಕ್ಯವನ್ನು ಕೇಳಿದರು.

## ಸ್ಕೇವನ ಗಂಡುಮಕ್ಕಳು

11 ದೇವರು ಪೌಲನ ಕೈಯಿಂದ ಬಹು ವಿಶೇಷವಾದ ಮಹತ್ಕಾರ್ಯಗಳನ್ನು ಮಾಡಿಸುತ್ತಿದ್ದನು. 12 ಪೌಲನ ಕರವಸ್ತ್ರಗಳನ್ನು ಮತ್ತು ಬಟ್ಟೆಗಳನ್ನು ಕೆಲವರು ತೆಗೆದುಕೊಂಡು ಹೋಗಿ ರೋಗಿಗಳ ಮೇಲೆ ಹಾಕುತ್ತಿದ್ದರು. ಆ ಕೂಡಲೇ ರೋಗಿಗಳು ಗುಣಹೊಂದುತ್ತಿದ್ದರು; ದೆವ್ವಗಳಿಂದ ಪೀಡಿತರಾಗಿದ್ದವರನ್ನು ದೆವ್ವಗಳು ಬಿಟ್ಟುಹೋಗುತ್ತಿದ್ದವು.

13-14 ಕೆಲವು ಯೆಹೂದ್ಯರು ಸಹ ಊರೂರುಗಳಿಗೆ ಸಂಚರಿಸುತ್ತಾ ದೆವ್ವದಿಂದ ಪೀಡಿತರಾಗಿದ್ದ ಜನರೊಳಗಿಂದ ದೆವ್ವಗಳನ್ನು ಯೇಸುವಿನ ಹೆಸರಿನ ಮೂಲಕ ಹೊರಡಿಸುತ್ತಿದ್ದರು. ಸ್ಕೇವ ಎಂಬವನ ಏಳು ಮಂದಿ ಗಂಡು ಮಕ್ಕಳೂ ಹೀಗೇ ಮಾಡುತ್ತಿದ್ದರು.(ಸ್ಕೇವನು ಪ್ರಧಾನಯಾಜಕನಾಗಿದ್ದನು.) ಅವರೆಲ್ಲರೂ, ''ಪೌಲನು ಯಾವ ಯೇಸುವಿನ ಬಗ್ಗೆ ಹೇಳುತ್ತಿದ್ದಾನೋ ಆ ಯೇಸುವಿನ ಹೆಸರಿನಿಂದಲೇ, ನೀನು ಹೊರಗೆ ಬರಬೇಕೆಂದು ನಾವು ಆಜ್ಞಾಪಿಸುತ್ತೇವೆ'' ಎಂದು ಹೇಳುತ್ತಿದ್ದರು.

15 ಆದರೆ ಒಂದು ಸಲ ದೆವ್ವವೊಂದು ಅವರಿಗೆ, ''ನನಗೆ ಯೇಸುವೂ ಗೊತ್ತು ಪೌಲನೂ ಗೊತ್ತು, ಆದರೆ ನೀವು ಯಾರು?'' ಎಂದು ಪ್ರತ್ಯುತ್ತರ ಕೊಟ್ಟಿತು.

16 ಬಳಿಕ ದೆವ್ವಪೀಡಿತನಾಗಿದ್ದ ಆ ಮನುಷ್ಯನು ಈ ಯೆಹೂದ್ಯರ ಮೇಲೆ ಹಾರಿಬಿದ್ದನು. ಅವನು ಅವರಿಗಿಂತ ಹೆಚ್ಚು ಬಲವುಳ್ಳವನಾಗಿದ್ದನು. ಅವನು ಅವರಿಗೆ ಹೊಡೆದು ಅವರ ಬಟ್ಟೆಗಳನ್ನು ಹರಿದು ಹಾಕಿದನು. ಈ ಯೆಹೂದ್ಯರು ಆ ಮನೆಯಿಂದ ಓಡಿಹೋದರು. 17 ಎಫೆಸದಲ್ಲಿದ್ದ ಯೆಹೂದ್ಯರು ಮತ್ತು ಗ್ರೀಕರು ಇದನ್ನು ಕೇಳಿ ಭಯಗ್ರಸ್ತರಾದರು ಮತ್ತು ಪ್ರಭು ಯೇಸುವಿನ ಹೆಸರನ್ನು ಸನ್ಮಾನಿಸಿದರು. 18 ವಿಶ್ವಾಸಿಗಳಲ್ಲಿ ಅನೇಕರು ತಾವು ಮಾಡಿದ ಪಾಪಗಳನ್ನು ಒಪ್ಪಿಕೊಂಡು ಅರಿಕೆ ಮಾಡತೊಡಗಿದರು. 19 ವಿಶ್ವಾಸಿಗಳಲ್ಲಿ ಕೆಲವರು ಮಂತ್ರಗಳನ್ನು ಮಾಡುತ್ತಿದ್ದರು. ಈ ವಿಶ್ವಾಸಿಗಳು ತಮ್ಮ ಮಂತ್ರ ಪುಸ್ತಕಗಳನ್ನು ತೆಗೆದುಕೊಂಡು ಬಂದು ಜನರೆಲ್ಲರ ಮುಂದೆ ಅವುಗಳನ್ನು ಸುಟ್ಟುಹಾಕಿದರು. ಈ ಪುಸ್ತಕಗಳ ಬೆಲೆಯು ಸುಮಾರು ಐವತ್ತು ಸಾವಿರ ಬೆಳ್ಳಿ ನಾಣ್ಯಗಳು.* 20 ಹೀಗೆ ಪ್ರಭುವಿನ ವಾಕ್ಯವು ಶಕ್ತಿಯುತವಾದ ರೀತಿಯಲ್ಲಿ ಹೆಚ್ಚುಹೆಚ್ಚು ಜನರ ಮೇಲೆ ಪ್ರಭಾವ ಬೀರುತ್ತಿತ್ತು. ಇದರಿಂದಾಗಿ ಹೆಚ್ಚುಹೆಚ್ಚು ಜನರು ನಂಬಿಕೊಂಡರು.

## ಪ್ರಯಾಣಕ್ಕೆ ಪೌಲನ ಯೋಜನೆ

21 ಈ ಘಟನೆಗಳ ನಂತರ ಪೌಲನು ಮಕೆದೋನಿಯ ಮತ್ತು ಅಖಾಯ ದೇಶಗಳ ಮೂಲಕ ಜೆರುಸಲೇಮಿಗೆ ಹೋಗಲು ಯೋಜನೆ ಮಾಡಿದನು. ''ನಾನು ಜೆರುಸಲೇಮನ್ನು ಸಂದರ್ಶಿಸಿದ ಮೇಲೆ ರೋಮ್‌ನಗರವನ್ನು ಸಹ ಸಂದರ್ಶಿಸಬೇಕು'' ಎಂದು ಪೌಲನು ಯೋಚಿಸಿಕೊಂಡನು. 22 ತಿಮೊಥೆ ಮತ್ತು ಎರಸ್ತ ಎಂಬವರು ಪೌಲನ ಸಹಾಯಕರಾಗಿದ್ದರು. ಪೌಲನು ಅವರನ್ನು ಮಕೆದೋನಿಯ ದೇಶಕ್ಕೆ ಮುಂಚಿತವಾಗಿಯೇ ಕಳುಹಿಸಿದನು. ಪೌಲನು ಇನ್ನೂ ಸ್ವಲ್ಪಕಾಲ ಏಷ್ಯಾದಲ್ಲಿ ತಂಗಿದನು.

## ಎಫೆಸದಲ್ಲಿ ಗಲಭೆ

23 ಆದರೆ ಆ ಸಮಯದಲ್ಲಿ ದೇವರ ಮಾರ್ಗದ ಬಗ್ಗೆ ತೀವ್ರ ಗಲಭೆಯೊಂದು ಎಫೆಸದಲ್ಲಿ ಉಂಟಾಯಿತು. ಅದು ನಡೆದ ರೀತಿ ಇಂತಿದೆ: 24 ಅಲ್ಲಿ ದೇಮೇತ್ರಿಯನೆಂಬ ಒಬ್ಬ ವ್ಯಕ್ತಿಯಿದ್ದನು. ಅವನು ಅಕ್ಕಸಾಲಿಗನಾಗಿದ್ದನು. ಅರ್ತೆಮಿ* ದೇವತೆಯ ಗುಡಿಯಾಕಾರದಲ್ಲಿ ಬೆಳ್ಳಿಯಿಂದ ಚಿಕ್ಕಚಿಕ್ಕ ಗುಡಿಗಳನ್ನು ಅವನು ತಯಾರಿಸುತ್ತಿದ್ದನು. ಈ ಕಸುಬನ್ನು ಮಾಡುತ್ತಿದ್ದ ಜನರು ಬಹಳವಾಗಿ ಹಣ ಸಂಪಾದಿಸಿದರು. 25 ದೇಮೇತ್ರಿಯನು ಈ ಜನರನ್ನು ಮತ್ತು ಇದೇ ರೀತಿಯ ಕಸುಬನ್ನು ಮಾಡುತ್ತಿದ್ದ ಇತರ ಜನರನ್ನು ಸಭೆಸೇರಿಸಿ ಅವರಿಗೆ, ''ಜನರೇ, ನಮ್ಮ ಈ ಕಸುಬಿನಿಂದ ನಾವು ಬಹಳ ಹಣವನ್ನು ಗಳಿಸುತ್ತಿದ್ದೇವೆ ಎಂಬುದು ನಿಮಗೆ ಗೊತ್ತೇ ಇದೆ. 26 ಆದರೆ ಪೌಲ ಎಂಬವನು ಏನು ಮಾಡುತ್ತಿದ್ದಾನೆಂಬುದನ್ನು ನೋಡಿರಿ! ಅವನು ಏನು ಹೇಳುತ್ತಿದ್ದಾನೆಂಬುದನ್ನು ಕೇಳಿರಿ! ಪೌಲನು ಅನೇಕ ಜನರ ಮೇಲೆ ಪ್ರಭಾವ ಬೀರಿ ಅವರನ್ನು ಪರಿವರ್ತಿಸಿದ್ದಾನೆ. ಅವನು ಎಫೆಸದಲ್ಲಿಯೂ ಏಷ್ಯಾ ದೇಶದ ಎಲ್ಲಾ ಕಡೆಗಳಲ್ಲಿಯೂ ಹೀಗೆಯೇ ಮಾಡಿದ್ದಾನೆ. ಮನುಷ್ಯರು ತಯಾರಿಸುವ ದೇವರುಗಳು ನಿಜವಾದ ದೇವರುಗಳಲ್ಲ ಎಂದು ಹೇಳುತ್ತಿದ್ದಾನೆ. 27 ಇದರಿಂದಾಗಿ ಜನರು ನಮ್ಮ ಕೆಲಸದ ವಿರುದ್ಧ ರೊಚ್ಚಿಗೇಳಬಹುದು. ಅಷ್ಟೇ ಅಲ್ಲ, ಮಹಾ ದೇವತೆಯಾದ ಅರ್ತೆಮಿಯ ಗುಡಿಯನ್ನು ಜನರು ಕಡೆಗಣಿಸುವ ಸಾಧ್ಯತೆಯೂ ಇದೆ. ಆಗ, ಏಷ್ಯಾದಲ್ಲಿ ಮತ್ತು ಇಡೀ ಪ್ರಪಂಚದಲ್ಲಿ ಪೂಜಿಸಲ್ಪಡುತ್ತಿರುವ ಅರ್ತೆಮಿಯ ದೇವತೆಯ ವೈಭವ ಅಳಿದು ಹೋಗುವುದು'' ಎಂದನು.

---

**ಐವತ್ತು ಸಾವಿರ ಬೆಳ್ಳಿ ನಾಣ್ಯಗಳು** ಒಂದು ಬೆಳ್ಳಿ ನಾಣ್ಯವು ಒಬ್ಬ ಗಂಡಾಳಿನ ಒಂದು ದಿನದ ಕೂಲಿಯಾಗಿತ್ತು.

**ಅರ್ತೆಮಿ** ಗ್ರೀಕ್‌ರ ದೇವತೆ. ಏಷ್ಯಾ ಮೈನರ್‌ನ ಜನರು ಈಕೆಯನ್ನು ಆರಾಧಿಸುತ್ತಿದ್ದರು.

28ಈ ಮಾತುಗಳನ್ನು ಕೇಳಿದ ಜನರು ಬಹು ಕೋಪ
ಗೊಂಡು, ‘‘ಎಫೆಸದ ಅರ್ತೆಮಿದೇವಿಯೇ ಮಹಾದೇವಿ!’’
ಎಂದು ಕೂಗಿದರು. 29ಪಟ್ಟಣದಲ್ಲಿದ್ದ ಜನರೆಲ್ಲಾ ಗಲಿಬಿಲಿ
ಗೊಂಡರು. ಜನರು ಗಾಯ ಮತ್ತು ಅರಿಸ್ತಾರ್ಕ ಎಂಬುವರನ್ನು
ಹಿಡಿದುಕೊಂಡರು.(ಇವರಿಬ್ಬರು ಮಕೆದೋನಿಯದವರು
ಮತ್ತು ಪೌಲನೊಂದಿಗೆ ಪ್ರಯಾಣ ಮಾಡುತ್ತಿದ್ದವರು.) ಬಳಿಕ
ಜನರೆಲ್ಲರು ಕ್ರೀಡಾಂಗಣಕ್ಕೆ ಓಡಿಹೋದರು. 30ಇದನ್ನು ತಿಳಿದ
ಪೌಲನು ಒಳಗೆ ಹೋಗಿ ಜನರೊಂದಿಗೆ ಮಾತಾಡ
ಬೇಕೆಂದಿದ್ದನು. ಆದರೆ ಯೇಸುವಿನ ಶಿಷ್ಯರು ಅವನನ್ನು ಹೋಗ
ಗೊಡಿಸಲಿಲ್ಲ. 31ಅಲ್ಲದೆ, ಪೌಲನ ಸ್ನೇಹಿತರಾಗಿದ್ದ ಈ ದೇಶದ
ನಾಯಕರುಗಳಲ್ಲಿ ಕೆಲವರು ಅವನಿಗೆ ಒಂದು ಸಂದೇಶವನ್ನು
ಕಳುಹಿಸಿ ಕ್ರೀಡಾಂಗಣದೊಳಗೆ ಹೋಗಬಾರದೆಂದು ತಿಳಿಸಿ
ದರು. 32ಕೆಲವು ಜನರು ಒಂದು ವಿಷಯದ ಬಗ್ಗೆ ಬೊಬ್ಬೆ
ಹಾಕುತ್ತಿದ್ದರೆ, ಉಳಿದ ಜನರು ಬೇರೆ ವಿಷಯಗಳ ಬಗ್ಗೆ
ಕೂಗಾಡುತ್ತಿದ್ದರು. ಸಭೆಯು ಬಹಳ ಗಲಿಬಿಲಿಗೊಳಗಾಯಿತು.
ತಾವು ಅಲ್ಲಿಗೆ ಯಾಕೆ ಬಂದಿದ್ದೇವೆ ಎಂಬುದೇ ಅನೇಕ ಜನರಿಗೆ
ತಿಳಿದಿರಲಿಲ್ಲ. 33ಯೆಹೂದ್ಯರು ಅಲೆಕ್ಸಾಂಡರ್ ಎಂಬವನನ್ನು
ಜನರ ಮುಂದೆ ನೂಕಿ ಮಾತಾಡಲು ಪುಸಲಾಯಿಸಿದರು. ಅವನು
ಜನರಿಗೆ ಮೌನವಾಗಿರುವಂತೆ ಕೈಸನ್ನೆಮಾಡಿ ಜನರ ಪರವಾಗಿ
ವಾದಿಸಬೇಕೆಂದಿದ್ದನು. 34ಆದರೆ ಅಲೆಕ್ಸಾಂಡರನು ಒಬ್ಬ
ಯೆಹೂದ್ಯನೆಂದು ತಿಳಿದಾಗ ಜನರೆಲ್ಲರು, ‘‘ಎಫೆಸದ
ಅರ್ತೆಮಿಯು ಮಹಾದೇವಿ! ಎಫೆಸದ ಅರ್ತೆಮಿಯು ಮಹಾ
ದೇವಿ! ಅರ್ತೆಮಿಯು ಮಹಾದೇವಿ…!’’ ಎಂದು ಒಂದೇಸಮನೆ
ಎರಡು ತಾಸುಗಳವರೆಗೆ ಕೂಗಿದರು.

35ಬಳಿಕ ಪಟ್ಟಣದ ಅಧಿಕಾರಿಯು ಜನಸಮೂಹವನ್ನು
ಶಾಂತಗೊಳಿಸಿ ಅವರಿಗೆ, ‘‘ಎಫೆಸದ ಜನರೇ, ಮಹಾದೇವತೆ
ಯಾದ ಅರ್ತೆಮಿ ದೇವಿಯ ಗುಡಿಯನ್ನು ಎಫೆಸ ಪಟ್ಟಣವು
ಕಾಪಾಡಿಕೊಂಡು ಬಂದಿರುವುದು ಜನರೆಲ್ಲರಿಗೆ ತಿಳಿದಿದೆ.
ಆಕೆಯ ಪವಿತ್ರ ಕಲ್ಲನ್ನು* ಸಹ ನಾವು ಕಾಪಾಡಿಕೊಂಡು
ಬಂದಿರುವುದು ಜನರೆಲ್ಲರಿಗೆ ಗೊತ್ತಿದೆ. 36ಇದು ಸತ್ಯವಲ್ಲವೆಂದು
ಯಾರೂ ಹೇಳಲಾಗದು. ಆದ್ದರಿಂದ ಮೌನದಿಂದಿರಬೇಕು.
ನೀವು ಏನನ್ನೇ ಮಾಡುವುದಕ್ಕಿಂತ ಮೊದಲು ಸಮಾಧಾನದಿಂದ
ಯೋಚಿಸಬೇಕು. 37ನೀವು ಈ ಜನರನ್ನು ಹಿಡಿದುಕೊಂಡು
ಬಂದಿದ್ದೀರಿ. ಆದರೆ ಇವರು ನಮ್ಮ ದೇವತೆಯ ವಿರೋಧವಾಗಿ
ಯಾವ ಕೆಟ್ಟದ್ದನ್ನೂ ಹೇಳಿಲ್ಲ. ಅವರು ಆಕೆಯ ಗುಡಿಯಿಂದ
ಏನನ್ನೂ ಕದ್ದುಕೊಂಡಿಲ್ಲ.38 ನಮ್ಮಲ್ಲಿ ನ್ಯಾಯಾಲಯಗಳಿವೆ
ಮತ್ತು ನ್ಯಾಯಾಧೀಶರುಗಳು ಇದ್ದಾರೆ. ದೇಮೇತ್ರಿಯ
ನಿಗಾಗಲಿ ಮತ್ತು ಅವನೊಂದಿಗೆ ಕೆಲಸಮಾಡುವ ಜನರಿಗಾಗಲಿ
ಯಾರ ಮೇಲಾದರೂ ದೂರುಗಳಿವೆಯೇ? ದೂರುಗಳಿದ್ದರೆ,
ಅವರು ನ್ಯಾಯಾಲಯಗಳಿಗೆ ಹೋಗಬೇಕು! ಅವರು ಪರಸ್ಪರ
ವಾದ ಮಾಡಲು ಅದೇ ತಕ್ಕಸ್ಥಳ! 39ನೀವು ಬೇರೆ ಏನನ್ನಾದರೂ
ಕುರಿತು ಮಾತಾಡಬೇಕೆಂದಿದ್ದೀರಾ? ಮಾತಾಡಬೇಕೆಂದಿದ್ದರೆ,
ಕಾನೂನು ಬದ್ಧವಾದ ನಗರಸಭೆಗೆ ಬನ್ನಿರಿ. ಅಲ್ಲಿ ಅದನ್ನು
ನಿರ್ಧರಿಸಬಹುದು. 40ನಾನು ಇದನ್ನು ಯಾಕೆ ಹೇಳುತ್ತಿದ್ದೇ
ನಂದರೆ, ಇಂದಿನ ಗಲಭೆಯನ್ನು ಕಂಡ ಕೆಲವು ಜನರು ನಾವು
ದಂಗೆ ಏಳುತ್ತಿದ್ದೇವೆಂದು ಹೇಳುವ ಸಾಧ್ಯತೆಯಿದೆ. ನಾವು ಈ
ಗಲಭೆಯನ್ನು ಸಮರ್ಥಿಸಿಕೊಳ್ಳಲಾಗುವುದಿಲ್ಲ. ಯಾಕೆಂದರೆ
ಈ ಸಭೆಗೆ ಸರಿಯಾದ ಕಾರಣವೇ ಇಲ್ಲ’’ ಎಂದು ಹೇಳಿದನು.
41ಪಟ್ಟಣದ ಅಧಿಕಾರಿಯು ಈ ಸಂಗತಿಗಳನ್ನು ಹೇಳಿದ ಬಳಿಕ
ಮನೆಗೆ ಹೋಗಬೇಕೆಂದು ಜನರಿಗೆ ತಿಳಿಸಿದನು. ಆಗ
ಅವರೆಲ್ಲರು ಹೊರಟುಹೋದರು.

### ಮಕೆದೋನಿಯಕ್ಕೆ ಮತ್ತು ಗ್ರೀಸಿಗೆ ಪೌಲನ ಪ್ರಯಾಣ

20 ಗಲಭೆಯು ನಿಂತುಹೋದ ಮೇಲೆ, ಪೌಲನು
ಯೇಸುವಿನ ಶಿಷ್ಯರನ್ನು ಕರೆಯಿಸಿ ಅವರನ್ನು ಧೈರ್ಯ
ಪಡಿಸಿದನು. ಬಳಿಕ ಪೌಲನು ಅಲ್ಲಿಂದ ಹೊರಟು ಮಕೆದೋನಿ
ಯಾಕ್ಕೆ ಹೋದನು. 2ಅವನು ಆ ಪ್ರದೇಶದಲ್ಲಿ ಪ್ರಯಾಣ
ಮಾಡುತ್ತಾ ಅನೇಕ ಊರುಗಳಿಗೆ ಭೇಟಿನೀಡಿ, ಯೇಸುವಿನ
ಶಿಷ್ಯರಿಗೆ ಅನೇಕ ಸಂಗತಿಗಳನ್ನು ತಿಳಿಸಿ ಬಲಪಡಿಸಿದನು. ಬಳಿಕ
ಪೌಲನು ಗ್ರೀಸಿಗೆ (ಅಖಾಯ)ಹೋದನು. 3ಅಲ್ಲಿ ಅವನು
ಮೂರು ತಿಂಗಳವರೆಗೆ ಇದ್ದನು. ಅವನು ಸಿರಿಯಕ್ಕೆ ನೌಕಾ
ಯಾನ ಮಾಡಲು ಸಿದ್ಧನಾಗಿದ್ದನು. ಆದರೆ ಕೆಲವು ಯೆಹೂದ್ಯರು
ಅವನಿಗೆ ವಿರೋಧವಾಗಿ ಯೋಜನೆ ಮಾಡಿದರು. ಆದ್ದರಿಂದ
ಪೌಲನು ಸಿರಿಯಕ್ಕೆ ಮಕೆದೋನಿಯದ ಮೂಲಕ ಹಿಂತಿರುಗಿ
ಹೋಗಲು ನಿರ್ಧರಿಸಿದನು. 4ಕೆಲವು ಜನರು ಅವನೊಂದಿ
ಗಿದ್ದರು. ಅವರು ಯಾರೆಂದರೆ: ಬೆರೋಯ ಪಟ್ಟಣದ ಪುರ್ರನ
ಮಗನಾದ ಸೋಪತ್ರನು, ಥೆಸಲೋನಿಕ ಪಟ್ಟಣದ ಆರಿಸ್ತಾರ್ಕ
ಮತ್ತು ಸೆಕುಂದ, ದರ್ಬೆ ಪಟ್ಟಣದ ಗಾಯ ಮತ್ತು ತಿಮೊಥೆಯ,
ಅಲ್ಲದೆ ಏಷ್ಯಾದ ತುಖಿಕ ಹಾಗು ತ್ರೊಫಿಮ. 5ಇವರು ಪೌಲನಿ
ಗಿಂತ ಮುಂಚಿತವಾಗಿಯೇ ಹೋದರು. ಅವರು ನಮಗಾಗಿ
ತ್ರೋವ ಪಟ್ಟಣದಲ್ಲಿ ಕಾಯುತ್ತಿದ್ದರು. 6ಯೆಹೂದ್ಯರ ಹುಳಿ
ರಹಿತ ರೊಟ್ಟಿ ಹಬ್ಬದ ನಂತರ ನಾವು ಫಿಲಿಪ್ಪಿ ಪಟ್ಟಣದ ಹಡಗಿ
ನಲ್ಲಿ ಹೋದೆವು. ಐದು ದಿನಗಳಾದ ನಂತರ ನಾವು ಇವರನ್ನು
ತ್ರೋವದಲ್ಲಿ ಸಂಧಿಸಿದೆವು. ಅಲ್ಲಿ ನಾವು ಏಳು ದಿನ ತಂಗಿದೆವು.

### ತ್ರೋವಕ್ಕೆ ಪೌಲನ ಕೊನೆಯ ಭೇಟಿ

7ಭಾನುವಾರದಂದು, ನಾವೆಲ್ಲರು ಪ್ರಭುವಿನ ರಾತ್ರಿ
ಭೋಜನಕ್ಕೆ ಒಟ್ಟಾಗಿ ಸೇರಿದೆವು. ಸಭೆ ಸೇರಿಬಂದಿದ್ದ ಜನ
ರೊಂದಿಗೆ ಪೌಲನು ಮಾತಾಡಿದನು. ಅವನು ಮರುದಿನ
ಅಲ್ಲಿಂದ ಹೊರಡಬೇಕೆಂದು ಆಲೋಚಿಸಿಕೊಂಡಿದ್ದನು.
ಪೌಲನು ಮಧ್ಯರಾತ್ರಿಯವರೆಗೂ ಮಾತಾಡುತ್ತಲೇ ಇದ್ದನು.
8ನಾವೆಲ್ಲರೂ ಮೇಲಂತಸ್ತಿನ ಕೊಠಡಿಯೊಂದರಲ್ಲಿ ಸೇರಿ
ಬಂದಿದ್ದೆವು. ಆ ಕೊಠಡಿಯಲ್ಲಿ ಅನೇಕ ದೀಪಗಳಿದ್ದವು.
9ಯುತಿಕ ಎಂಬ ಯುವಕನು ಕಿಟಕಿಯಲ್ಲಿ ಕುಳಿತುಕೊಂಡಿ
ದ್ದನು. ಪೌಲನು ಮಾತಾಡುತ್ತಲೇ ಇದ್ದನು. ಇತ್ತ ಯುವಕನು
ಗಾಢವಾಗಿ ನಿದ್ರಿಸುತ್ತಾ ಮೂರನೆ ಅಂತಸ್ತಿನಿಂದ ಕೆಳಗಡೆ
ಬಿದ್ದುಬಿಟ್ಟನು. ಜನರು ಕೆಳಗಿಳಿದು ಹೋಗಿ ಅವನನ್ನು ಎತ್ತಿ
ನೋಡಿದಾಗ ಅವನು ಸತ್ತಿದ್ದನು. 10ಪೌಲನು ಕೆಳಗಿಳಿದು ಅವನ
ಬಳಿಗೆ ಹೋಗಿ, ಮೊಣಕಾಲೂರಿ ಅವನನ್ನು ಅಪ್ಪಿಕೊಂಡು,
ಅಲ್ಲಿದ್ದ ವಿಶ್ವಾಸಿಗಳಿಗೆ, ‘‘ಚಿಂತಿಸಬೇಡಿ. ಇವನು ಮತ್ತೆ ಜೀವಂತ
ನಾದನು’’ ಎಂದು ಹೇಳಿದನು. 11ಪೌಲನು ಮತ್ತೆ ಮೇಲಂತಸ್ತಿಗೆ
ಹೋಗಿ ರೊಟ್ಟಿಯನ್ನು ಮುರಿದು ಊಟಮಾಡಿದನು.

---

**ಪವಿತ್ರ ಕಲ್ಲು** ಅರ್ತೆಮಿ ದೇವಿಯೆಂದು ಜನರು ಆರಾಧಿಸುತ್ತಿದ್ದ ಕಲ್ಲಿನ
ಪ್ರತಿಮೆ.

ಪೌಲನು ಅವರೊಂದಿಗೆ ದೀರ್ಘಕಾಲ ಮಾತಾಡಿದನು. ಅಷ್ಟ
ರಲ್ಲಿಯೇ ಮುಂಜಾನೆಯಾಗಿತ್ತು. ಬಳಿಕ ಪೌಲನು ಹೊರಟು
ಹೋದನು. 12ಜನರು ಜೀವಂತನಾಗಿದ್ದ ಆ ಯುವಕನನ್ನು
ಮನೆಗೆ ಕರೆದುಕೊಂಡು ಹೋದರು. ಇದರಿಂದ ಜನರಿಗೆ ಬಹಳ
ಆದರಣೆಯಾಯಿತು.

## ತ್ರೋವದಿಂದ ಮಿಲೇತಕ್ಕೆ ಪ್ರಯಾಣ

13ನಾವು ಪೌಲನಿಗಿಂತ ಮುಂಚಿತವಾಗಿಯೇ ಅಸ್ಸೊಸಿ ಎಂಬ
ಪಟ್ಟಣಕ್ಕೆ ನೌಕಾಯಾನ ಮಾಡಿದೆವು. ತಾನು ಭೂಮಾರ್ಗವಾಗಿ
ಬರುವುದಾಗಿಯೂ ಅಸ್ಸೊಸಿನಲ್ಲಿ ನಮ್ಮನ್ನು ಸಂಧಿಸಿ ಅಲ್ಲಿಂದ
ನಮ್ಮೊಂದಿಗೆ ಹಡಗಿನಲ್ಲಿ ಪ್ರಯಾಣ ಮಾಡುವುದಾಗಿಯೂ
ಪೌಲನು ನಮಗೆ ತಿಳಿಸಿದ್ದನು. 14ಅಂತೆಯೇ ನಾವು ಪೌಲನನ್ನು
ಅಸ್ಸೊಸಿನಲ್ಲಿ ಸಂಧಿಸಿದೆವು. ಅಲ್ಲಿಂದ ಅವನು ನಮ್ಮೊಂದಿಗೆ
ಹಡಗಿನಲ್ಲಿ ಪ್ರಯಾಣ ಮಾಡಿದನು. ನಾವೆಲ್ಲರೂ ಮಿತಿಲೇನಿ
ಪಟ್ಟಣಕ್ಕೆ ಹೋದೆವು. 15ಮರುದಿನ ನಾವು ಅಲ್ಲಿಂದ ನೌಕಾ
ಯಾನ ಮಾಡಿ ಖಿಯೋಸ್ ದ್ವೀಪದ ಸಮೀಪದಲ್ಲಿದ್ದ ಸ್ಥಳ
ವೊಂದಕ್ಕೆ ಬಂದೆವು. ಮರುದಿನ ಸಾಮೋಸ್ ದ್ವೀಪಕ್ಕೆ ನೌಕಾ
ಯಾನ ಮಾಡಿದೆವು. ಆದರ ಮೂರನೆಯ ದಿನ ನಾವು ಮಿಲೇತ
ಪಟ್ಟಣಕ್ಕೆ ಬಂದೆವು. 16ಎಫೆಸದಲ್ಲಿ ತಂಗಬಾರದೆಂದು ಪೌಲನು
ಆಗಲೇ ನಿರ್ಧಾರ ಮಾಡಿದ್ದನು. ಏಷ್ಯಾದಲ್ಲಿ ದೀರ್ಘಕಾಲ
ತಂಗಲು ಅವನಿಗೆ ಇಷ್ಟವಿರಲಿಲ್ಲ. ಸಾಧ್ಯವಾದರೆ ಪಂಚಾಶತ್ತಮ
ಹಬ್ಬಕ್ಕೆ ಜೆರುಸಲೇಮಿನಲ್ಲಿರಬೇಕೆಂದು ಅವನು ತನ್ನ ಪ್ರಯಾಣ
ವನ್ನು ತ್ವರಿತಗೊಳಿಸಿದನು.

## ಎಫೆಸದ ಹಿರಿಯರಿಗೆ ಪೌಲನ ಬುದ್ಧಿಮಾತು

17ಪೌಲನು ಮಿಲೇತದಿಂದ ಒಂದು ಸಂದೇಶವನ್ನು ಎಫೆಸಕ್ಕೆ
ಕಳುಹಿಸಿ ಅಲ್ಲಿನ ಸಭೆಯ ಹಿರಿಯರನ್ನು ತನ್ನ ಬಳಿಗೆ ಬರಮಾಡಿ
ಕೊಂಡನು. 18ಆ ಹಿರಿಯರು ಬಂದಾಗ ಪೌಲನು ಅವರಿಗೆ,
‘‘ನಾನು ಏಷ್ಯಾ ಪ್ರಾಂತ್ಯಕ್ಕೆ ಬಂದ ಮೊದಲನೆಯ ದಿನದಿಂದಲೂ
ನೀವು ನನ್ನ ಜೀವಿತದ ಬಗ್ಗೆ ತಿಳಿದಿದ್ದೀರಿ. ನಾನು ನಿಮ್ಮೊಂದಿಗೆ
ಇದ್ದ ಕಾಲದಲ್ಲೆಲ್ಲಾ ನಾನು ಯಾವ ರೀತಿಯಲ್ಲಿ ಜೀವಿಸಿದೆ
ನೆಂಬುದು ನಿಮಗೆ ಗೊತ್ತಿದೆ. 19ಯೆಹೂದ್ಯರು ನನಗೆ
ವಿರೋಧವಾಗಿ ಮಾಡಿದ ಒಳಸಂಚುಗಳಿಂದ ನಾನು ಬಹಳ
ಕಷ್ಟಪಡಬೇಕಾಯಿತು. ಅನೇಕ ಸಲ ಕಣ್ಣೀರಿಡಬೇಕಾಯಿತು.
ಆದರೆ ನಾನು ಯಾವಾಗಲೂ ಪ್ರಭುವಿನ ಸೇವೆ ಮಾಡಿದೆ
ನೆಂಬುದು ನಿಮಗೆ ಗೊತ್ತಿದೆ. ನಾನು ನನ್ನ ಬಗ್ಗೆ ಚಿಂತಿಸದೆ,
20ನಿಮಗೆ ಒಳ್ಳೆಯದನ್ನೇ ಯಾವಾಗಲೂ ಮಾಡಿದೆನು. ನಾನು
ನಿಮಗೆ ಯೇಸುವಿನ ಕುರಿತಾದ ಸುವಾರ್ತೆಯನ್ನು ಬಹಿರಂಗ
ವಾಗಿ ಜನರೆದುರಿನಲ್ಲಿ ತಿಳಿಸಿದೆನು ಮತ್ತು ನಿಮ್ಮ ಮನೆ
ಗಳಲ್ಲಿಯೂ ಸಹ ಬೋಧಿಸಿದೆನು. 21ನಿಮ್ಮ ಹೃದಯಗಳನ್ನು
ಮಾರ್ಪಡಿಸಿಕೊಂಡು ದೇವರ ಕಡೆಗೆ ತಿರುಗಿಕೊಳ್ಳಬೇಕೆಂದು
ನಾನು ಎಲ್ಲಾ ಜನಾಂಗಗಳವರಿಗೆ ಅಂದರೆ ಯೆಹೂದ್ಯರಿಗೂ
ಮತ್ತು ಗ್ರೀಕರಿಗೂ ತಿಳಿಸಿದೆನು. ನಮ್ಮ ಪ್ರಭುವಾದ ಯೇಸುವಿ
ನಲ್ಲಿ ನಂಬಿಕೆ ಇಡಬೇಕೆಂದು ನಾನು ಅವರೆಲ್ಲರಿಗೂ ತಿಳಿಸಿದೆನು.
22ಆದರೆ ಈಗ ನಾನು ಪವಿತ್ರಾತ್ಮನಿಗೆ ವಿಧೇಯನಾಗಿ ಜೆರುಸ
ಲೇಮಿಗೆ ಹೋಗಬೇಕು. ಅಲ್ಲಿ ನನಗೆ ಏನು ಸಂಭವಿಸುವುದೋ
ತಿಳಿಯದು. 23ಜೆರುಸಲೇಮಿನಲ್ಲಿ ತೊಂದರೆಗಳು ಮತ್ತು ಸೆರೆ
ವಾಸವು ನನಗಾಗಿ ಕಾದಿವೆಯೆಂದು ಪವಿತ್ರಾತ್ಮನು ಪ್ರತಿಯೊಂದು
ಪಟ್ಟಣದಲ್ಲಿಯೂ ನನಗೆ ಹೇಳುತ್ತಿರುವುದು ಮಾತ್ರ ಸ್ಪಷ್ಟ
ವಾಗಿದೆ. 24ನಾನು ನನ್ನ ಸ್ವಂತ ಪ್ರಾಣದ ಬಗ್ಗೆ ಚಿಂತಿಸುವುದಿಲ್ಲ.
ಪ್ರಭುವಾದ ಯೇಸು ನನಗೆ ಕೊಟ್ಟಿರುವ ಕೆಲಸವನ್ನು ಪೂರೈಸು
ವುದೇ ನನಗೆ ಅತ್ಯಂತ ಮುಖ್ಯವಾಗಿದೆ. ದೇವರ ಕೃಪೆಯ ವಿಷಯ
ವಾದ ಸುವಾರ್ತೆಯ ಬಗ್ಗೆ ಸಾಕ್ಷಿ ನೀಡುವುದೇ ನನ್ನ ಕೆಲಸವಾಗಿದೆ.
ಆ ಕೆಲಸವನ್ನು ಮಾಡಿ ಪೂರೈಸುವುದೇ ನನ್ನ ಅಪೇಕ್ಷೆಯಾಗಿದೆ.

25‘‘ಈಗ ನನಗೆ ಕಿವಿಗೊಡಿ. ನಿಮ್ಮಲ್ಲಿ ಒಬ್ಬರಾಗಲಿ ನನ್ನನ್ನು
ಮತ್ತೆಂದಿಗೂ ನೋಡುವುದಿಲ್ಲವೆಂದು ನನಗೆ ಗೊತ್ತಿದೆ.
ನಿಮ್ಮೊಂದಿಗೆ ಇದ್ದ ಸಮಯದಲ್ಲೆಲ್ಲಾ ದೇವರ ರಾಜ್ಯದ ವಿಷಯ
ವಾದ ಸುವಾರ್ತೆಯನ್ನು ನಾನು ನಿಮಗೆ ತಿಳಿಸಿದೆನು. 26ಆದ್ದ
ರಿಂದ ಇಂದು ನಾನು ನಿಮಗೆ ದೃಢವಾಗಿ ಹೇಳಬಹುದಾದ
ಒಂದು ಸಂಗತಿಯೇನಂದರೆ, ನಿಮ್ಮಲ್ಲಿ ಯಾರಾದರೂ ರಕ್ಷಣೆ
ಹೊಂದಿಲ್ಲದಿದ್ದರೆ ಅದಕ್ಕೆ ನಾನು ಹೊಣೆಯಲ್ಲ. 27ಯಾಕಂದರೆ
ದೇವರ ಅಪೇಕ್ಷೆಗನುಸಾರವಾಗಿ ನೀವು ತಿಳಿದುಕೊಳ್ಳಬೇಕಾದ
ಪ್ರತಿಯೊಂದನ್ನೂ ನಾನು ನಿಮಗೆ ನಿಶ್ಚಯವಾಗಿ ತಿಳಿಸಿದ್ದೇನೆ.
28ಆದ್ದರಿಂದ ನಿಮ್ಮ ವಿಷಯದಲ್ಲಿಯೂ ಪವಿತ್ರಾತ್ಮನು ನಿಮ್ಮ
ಪಾಲನೆಗೆ ವಹಿಸಿರುವ ಮಂದೆಯ ವಿಷಯದಲ್ಲಿಯೂ ಎಚ್ಚರಿಕೆ
ಯಿಂದಿರಿ. ದೇವರು ತನ್ನ ಸ್ವಂತ ರಕ್ತದಿಂದ ಕೊಂಡುಕೊಂಡಿ
ರುವ ಸಭೆಗೆ ನೀವು ಕುರುಬರಾಗಿದ್ದೀರಿ. 29ನಾನು ಹೊರಟು
ಹೋದ ಮೇಲೆ ಬೇರೆಯವರು ನಿಮ್ಮ ಸಭೆಗೆ ಬರುತ್ತಾರೆಂದು
ನನಗೆ ಗೊತ್ತಿದೆ. ಕ್ರೂರವಾದ ತೋಳಗಳಂತಿರುವ ಅವರು
ಮಂದೆಯನ್ನು ನಾಶಮಾಡಲು ಪ್ರಯತ್ನಿಸುವರು. 30ಅಲ್ಲದೆ,
ನಿಮ್ಮ ಸಭೆಯ ಕೆಲವು ಜನರೇ ದುರ್ಬೋಧಕರಾಗಿ ಯೇಸುವಿನ
ಶಿಷ್ಯರಲ್ಲಿ ಕೆಲವರನ್ನು ಸತ್ಯದಿಂದ ದೂರಕ್ಕೆ ನಡೆಸುವರು. 31ಆದ್ದ
ರಿಂದ ಎಚ್ಚರಿಕೆಯಿಂದಿರಿ! ನಾನು ಮೂರು ವರ್ಷಗಳ ಕಾಲ
ನಿಮ್ಮೊಂದಿಗೆ ಇದ್ದೆನು. ಈ ಕಾಲಾವಧಿಯಲ್ಲಿ ನಾನು ನಿಮಗೆ
ಹಗಲಿರುಳು ಉಪದೇಶಿಸುತ್ತಾ ನಿಮಗಾಗಿ ಕಣ್ಣೀರಿಡುತ್ತಾ
ನಿಮಗೆ ಎಚ್ಚರಿಸಿದ್ದನ್ನು ಮರೆಯದಿರಿ.

32‘‘ಈಗ ನಾನು ನಿಮ್ಮನ್ನು ದೇವರಿಗೂ ಆತನ ಕೃಪಾ
ವಾಕ್ಯಕ್ಕೂ ಒಪ್ಪಿಸಿಕೊಡುತ್ತಿದ್ದೇನೆ. ಆತನ ಕೃಪಾವಾಕ್ಯವು ನಿಮ್ಮ
ಭಕ್ತಿಯನ್ನು ವೃದ್ಧಿಪಡಿಸಿ, ಪರಿಶುದ್ಧರ ಬಾಧ್ಯತೆಯಲ್ಲಿ ಪಾಲು
ಗಾರರನ್ನಾಗಿ ಮಾಡುವುದು. 33ನಾನು ನಿಮ್ಮೊಂದಿಗೆ ಇದ್ದಾಗ,
ಯಾರ ಹಣವನ್ನಾಗಲಿ ಒಳ್ಳೆಯ ಬಟ್ಟೆಗಳನ್ನಾಗಲಿ ಎಂದೂ
ಬಯಸಲಿಲ್ಲ. 34ನಾನು ಯಾವಾಗಲೂ ನನ್ನ ಅಗತ್ಯತೆಗಳನ್ನು
ಮತ್ತು ನನ್ನೊಂದಿಗಿರುವವರ ಅಗತ್ಯತೆಗಳನ್ನು ಪೂರೈಸು
ವುದಕ್ಕಾಗಿ ದುಡಿಯುತ್ತಿದ್ದೆನು ಎಂಬುದು ನಿಮಗೆ ಗೊತ್ತಿದೆ.
35ಕಷ್ಟಪಟ್ಟು ದುಡಿದು ದುರ್ಬಲರಿಗೆ ನೆರವಾಗಬೇಕೆಂದು
ನಾನೇ ನಿಮಗೆ ಮಾದರಿಯಾಗಿ ತೋರಿಸಿಕೊಟ್ಟಿದ್ದೇನೆ. ‘‘ತೆಗೆದು
ಕೊಳ್ಳುವುದಕ್ಕಿಂತ ಕೊಡುವುದರಲ್ಲೇ ಹೆಚ್ಚು ಸಂತೋಷ’ ಎಂಬ
ಯೇಸುವಿನ ಮಾತನ್ನು ನಾವು ಮರೆಯಕೂಡದೆಂದು ನಿಮಗೆ
ಉಪದೇಶಿಸಿದೆನು’’ ಎಂದು ಹೇಳಿದನು.

36ಪೌಲನು ಈ ಸಂಗತಿಗಳನ್ನು ಹೇಳಿ ಮುಗಿಸಿದ ಮೇಲೆ
ಮೊಣಕಾಲೂರಿ ಅವರೆಲ್ಲರೊಡನೆ ಪ್ರಾರ್ಥಿಸಿದನು. 37-38ಅವ
ರೆಲ್ಲರೂ ಬಹಳವಾಗಿ ಅತ್ತರು. ‘‘ನೀವು ನನ್ನನ್ನು ಮತ್ತೆಂದಿಗೂ
ನೋಡುವುದಿಲ್ಲ’’ವೆಂದು ಪೌಲನು ಹೇಳಿದ್ದರಿಂದ ಅವರು
ಬಹಳ ದುಃಖಗೊಂಡಿದ್ದರು. ಅವರು ಪೌಲನನ್ನು ಅಪ್ಪಿಕೊಂಡು

ಮುದ್ದಿಟ್ಟರು. ಅವರು ಹಡಗಿನವರೆಗೂ ಹೋಗಿ ಅವನನ್ನು
ಬೀಳ್ಕೊಟ್ಟರು.

### ಪೌಲನು ಜೆರುಸಲೇಮಿಗೆ ಹೋಗುವನು

21 ನಾವೆಲ್ಲರೂ ಹಿರಿಯರನ್ನು ಬೀಳ್ಕೊಟ್ಟ ಬಳಿಕ
ನೌಕಾಯಾನ ಮಾಡಿ ನೇರವಾಗಿ ಕೋಸ್ ದ್ವೀಪಕ್ಕೆ
ಹೋದೆವು. ಮರುದಿನ ರೋದ ದ್ವೀಪಕ್ಕೆ ಹೋದೆವು ಮತ್ತು
ಅಲ್ಲಿಂದ ಪತಾರಕ್ಕೆ ಹೋದೆವು. 2ಫೆನಿಷ್ಯಕ್ಕೆ ಹೋಗುವ ಹಡಗನ್ನು
ನಾವು ಅಲ್ಲಿ ಕಂಡೆವು. ನಾವು ಆ ಹಡಗನ್ನೇರಿ ಪ್ರಯಾಣ
ಮಾಡಿದೆವು. 3ನಾವು ಸೈಪ್ರಸ್ ದ್ವೀಪದ ಸಮೀಪದಲ್ಲಿ ನೌಕಾ
ಯಾನ ಮಾಡಿದೆವು. ಅದು ನಮ್ಮ ಉತ್ತರ ದಿಕ್ಕಿನಲ್ಲಿ ಕಾಣುತ್ತಿತ್ತು.
ಆದರೆ ನಾವು ಹಡಗನ್ನು ಅಲ್ಲಿ ನಿಲ್ಲಿಸದೆ ಸಿರಿಯ ದೇಶಕ್ಕೆ
ಪ್ರಯಾಣ ಮಾಡಿ ಟೈರ್ ಪಟ್ಟಣದಲ್ಲಿ ಹಡಗನ್ನು ನಿಲ್ಲಿಸಿದೆವು.
ಯಾಕೆಂದರೆ ಹಡಗಿನಿಂದ ಸರಕನ್ನು ಇಳಿಸಬೇಕಾಗಿತ್ತು. 4ನಾವು
ಟೈರ್‌ನಲ್ಲಿ ಯೇಸುವಿನ ಕೆಲವು ಶಿಷ್ಯರನ್ನು ಕಂಡೆವು. ಅವ
ರೊಂದಿಗೆ ಏಳು ದಿನ ತಂಗಿದ್ದೆವು. ಅವರು ಪವಿತ್ರಾತ್ಮನ ಪ್ರೇರಣೆ
ಯಿಂದ ಪೌಲನಿಗೆ, ‘‘ನೀನು ಜೆರುಸಲೇಮಿಗೆ ಹೋಗ
ಬಾರದು’’ ಎಂದು ಎಚ್ಚರಿಕೆ ಕೊಟ್ಟರು. 5ಆದರೆ ನಮ್ಮ ಸಂದ
ರ್ಶನವು ಮುಗಿದ ಮೇಲೆ ನಾವು ಅಲ್ಲಿಂದ ಹೊರಟು ಪ್ರಯಾಣ
ವನ್ನು ಮುಂದುವರಿಸಿದೆವು. ಯೇಸುವಿನ ಎಲ್ಲಾ ಶಿಷ್ಯರು
ಸ್ತ್ರೀಯರು ಮತ್ತು ಮಕ್ಕಳು ಸಹ ನಮ್ಮನ್ನು ಬೀಳ್ಕೊಡುವುದಕ್ಕಾಗಿ
ನಮ್ಮೊಂದಿಗೆ ಪಟ್ಟಣದಿಂದ ಹೊರಗೆ ಬಂದರು. ನಾವೆಲ್ಲರೂ
ಸಮುದ್ರ ತೀರದಲ್ಲಿ ಮೊಣಕಾಲೂರಿ ಪ್ರಾರ್ಥಿಸಿದೆವು. 6ಬಳಿಕ
ನಾವು ಒಬ್ಬರಿಗೊಬ್ಬರು ಅಂತಿಮ ವಂದನೆಗಳನ್ನು ಸಲ್ಲಿಸಿ
ಹಡಗನ್ನು ಹತ್ತಿದೆವು. ಶಿಷ್ಯರು ತಮ್ಮ ಮನೆಗಳಿಗೆ ಹಿಂತಿರು
ಗಿದರು.

7ನಾವು ಟೈರ್‌ನಿಂದ ನಮ್ಮ ಪ್ರಯಾಣವನ್ನು ಮುಂದುವರೆಸಿ
ಪ್ಟೊಲೊಮಾಯ ಎಂಬಲ್ಲಿಗೆ ಹೋದೆವು. ಅಲ್ಲಿಯ ಸಹೋದರ
ರನ್ನು (ವಿಶ್ವಾಸಿಗಳನ್ನು) ವಂದಿಸಿ ಅವರೊಂದಿಗೆ ಒಂದು ದಿನ
ಇದ್ದೆವು. 8ಮರುದಿನ ನಾವು ಪ್ಟೊಲೊಮಾಯದಿಂದ ಹೊರಟು
ಸೆಜರೇಯ ಪಟ್ಟಣಕ್ಕೆ ಹೋದೆವು. ಅಲ್ಲಿ ನಾವು ಫಿಲಿಪ್ಪನ ಮನೆಗೆ
ಹೋಗಿ ಅವನೊಂದಿಗೆ ತಂಗಿದೆವು. ಸುವಾರ್ತೆಯನ್ನು ತಿಳಿಸು
ವುದೇ ಫಿಲಿಪ್ಪನ ಕೆಲಸವಾಗಿತ್ತು. ಏಳುಮಂದಿ ಸಹಾಯಕರು
ಗಳಲ್ಲಿ* ಅವನೂ ಒಬ್ಬನಾಗಿದ್ದನು. 9ಮದುವೆಯಾಗಿಲ್ಲದ
ನಾಲ್ಕು ಮಂದಿ ಹೆಣ್ಣು ಮಕ್ಕಳು ಅವನಿಗಿದ್ದರು. ಅವರೆಲ್ಲರಿಗೂ
ಪ್ರವಾದಿಸುವ ವರವಿತ್ತು. 10ನಾವು ಅಲ್ಲಿಗೆ ಹೋಗಿ ಅನೇಕ
ದಿನಗಳಾದ ಮೇಲೆ, ಅಗಬ ಎಂಬ ಪ್ರವಾದಿಯು ಜುದೇಯ
ದಿಂದ ಬಂದನು. 11ಅವನು ನಮ್ಮ ಬಳಿಗೆ ಬಂದು ಪೌಲನ ನಡು
ಪಟ್ಟಿಯನ್ನು ತೆಗೆದುಕೊಂಡು ಅದರಿಂದ ತನ್ನ ಕೈಕಾಲುಗಳನ್ನು
ಕಟ್ಟಿಕೊಂಡು, ‘‘ಪವಿತ್ರಾತ್ಮನು ನನಗೆ ಹೇಳುವುದೇನಂದರೆ, ‘ಈ
ನಡುಪಟ್ಟಿಯನ್ನು ಕಟ್ಟಿಕೊಳ್ಳುವ ವ್ಯಕ್ತಿಯನ್ನು ಜೆರುಸಲೇಮಿನ
ಯೆಹೂದ್ಯರು ಇದೇ ರೀತಿ ಕಟ್ಟಿಹಾಕುವರು. ಬಳಿಕ ಅವರು
ಅವನನ್ನು ಯೆಹೂದ್ಯರಲ್ಲದ ಜನರಿಗೆ ಒಪ್ಪಿಸಿಕೊಡುವರು’’’
ಎಂದು ಹೇಳಿದನು. 12ನಾವೆಲ್ಲರೂ ಈ ಮಾತುಗಳನ್ನು ಕೇಳಿ
ದೆವು. ಆದ್ದರಿಂದ ನಾವು ಮತ್ತು ಯೇಸುವಿನ ಸ್ಥಳೀಯ ಶಿಷ್ಯರು
ಪೌಲನಿಗೆ, ‘‘ನೀನು ಜೆರುಸಲೇಮಿಗೆ ಹೋಗಬಾರದು’’ ಎಂದು
ಬೇಡಿಕೊಂಡೆವು. 13ಆದರೆ ಪೌಲನು, ‘‘ನೀವು ಯಾಕೆ ಅಳು
ತ್ತಿರುವಿರಿ? ನೀವು ನನಗೆ ಬಹು ದುಃಖವನ್ನು ಯಾಕೆ ಉಂಟು
ಮಾಡುತ್ತಿದ್ದೀರಿ? ನಾನು ಜೆರುಸಲೇಮಿನಲ್ಲಿ ಬಂಧಿಸಲ್ಪಡು
ವುದಕ್ಕಲ್ಲದೆ ಪ್ರಭು ಯೇಸುವಿನ ಹೆಸರಿಗಾಗಿ ಸಾಯುವುದಕ್ಕೂ
ಸಿದ್ಧನಾಗಿದ್ದೇನೆ!’’ ಎಂದು ಹೇಳಿದನು.

14ಜೆರುಸಲೇಮಿಗೆ ಹೋಗದಂತೆ ನಾವು ಅವನನ್ನು ಒಪ್ಪಿಸ
ಲಾಗಲಿಲ್ಲ. ಆದ್ದರಿಂದ ಬೇಡಿಕೊಳ್ಳುವುದನ್ನು ನಿಲ್ಲಿಸಿ, ‘‘ಪ್ರಭು
ವಿನ ಚಿತ್ತವು ನೆರವೇರಲೆಂದು ಪ್ರಾರ್ಥಿಸುತ್ತೇವೆ’’ ಎಂದೆವು.

15ಬಳಿಕ ನಾವು ಸಿದ್ಧರಾಗಿ ಜೆರುಸಲೇಮಿಗೆ ಹೊರಟೆವು.
16ಸೆಜರೇಯ ಪಟ್ಟಣದಿಂದ ಯೇಸುವಿನ ಶಿಷ್ಯರಲ್ಲಿ ಕೆಲವರು
ನಮ್ಮೊಂದಿಗೆ ಬಂದರು. ಈ ಶಿಷ್ಯರು ನಾವು ಇಳಿದುಕೊಳ್ಳ
ಬೇಕಾಗಿದ್ದ ಸೈಪ್ರಸಿನ ಮ್ನಾಸೋನ ಎಂಬವನ ಮನೆಗೆ ನಮ್ಮನ್ನು
ಕರೆದೊಯ್ದರು. ಯೇಸುವಿನ ಆದಿ ಶಿಷ್ಯರಲ್ಲಿ ಮ್ನಾಸೋನನು
ಒಬ್ಬನಾಗಿದ್ದನು.

### ಪೌಲನು ಯಾಕೋಬನನ್ನು ಸಂದರ್ಶಿಸುವನು

17ನಾವು ಜೆರುಸಲೇಮನ್ನು ತಲುಪಿದಾಗ ನಮ್ಮನ್ನು ಕಂಡು
ವಿಶ್ವಾಸಿಗಳಿಗೆ ಸಂತೋಷವಾಯಿತು. 18ಮರುದಿನ ಯಾಕೋಬ
ನನ್ನು ಸಂದರ್ಶಿಸಲು ಪೌಲನು ನಮ್ಮನ್ನು ಕರೆದುಕೊಂಡು
ಹೋದನು. ಹಿರಿಯರೆಲ್ಲರು ಅಲ್ಲಿದ್ದರು. 19ಪೌಲನು ಅವರೆಲ್ಲ
ರನ್ನು ವಂದಿಸಿದನು. ಯೆಹೂದ್ಯರಲ್ಲದ ಜನರ ಮಧ್ಯದಲ್ಲಿ
ಅನೇಕ ಕಾರ್ಯಗಳನ್ನು ಮಾಡುವುದಕ್ಕಾಗಿ ದೇವರು ತನ್ನನ್ನು
ಉಪಯೋಗಿಸಿಕೊಂಡ ಬಗೆಯನ್ನೂ ತನ್ನ ಮೂಲಕವಾಗಿ
ದೇವರು ಮಾಡಿದ ಎಲ್ಲಾ ಕಾರ್ಯಗಳ ಕುರಿತಾಗಿಯೂ ಅವನು
ಅವರಿಗೆ ತಿಳಿಸಿದನು. 20ಈ ಸಂಗತಿಗಳನ್ನು ಕೇಳಿದ ಹಿರಿಯರು
ದೇವರನ್ನು ಕೊಂಡಾಡಿದರು. ಬಳಿಕ ಅವರು ಪೌಲನಿಗೆ,
‘‘ಸಹೋದರನೇ, ವಿಶ್ವಾಸಿಗಳಿಗಾಗಿ ಪರಿವರ್ತನೆಗೊಂಡಿರುವ
ಸಾವಿರಾರು ಮಂದಿ ಯೆಹೂದ್ಯರನ್ನು ನೀನು ಇಲ್ಲಿ ಕಾಣ
ಬಹುದು. ಆದರೆ ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯ
ರಾಗುವುದು ಬಹಳ ಮುಖ್ಯವೆಂಬುದು ಇವರ ಆಲೋಚನೆ.
21ಈ ಯೆಹೂದ್ಯರು ನಿನ್ನ ಉಪದೇಶದ ಬಗ್ಗೆ ಕೇಳಿದ್ದಾರೆ. ಬೇರೆ
ದೇಶಗಳಲ್ಲಿ ಯೆಹೂದ್ಯರಲ್ಲದ ಜನರ ಮಧ್ಯದಲ್ಲಿ ವಾಸ
ವಾಗಿರುವ ಯೆಹೂದ್ಯರಿಗೆ, ‘‘ನೀವು ಮೋಶೆಯ ಧರ್ಮಶಾಸ್ತ್ರ
ವನ್ನು ತ್ಯಜಿಸಿರಿ; ನಿಮ್ಮ ಮಕ್ಕಳಿಗೆ ಸುನ್ನತಿ ಮಾಡಬೇಡಿರಿ;
ಯೆಹೂದ್ಯರ ಸಂಪ್ರದಾಯಗಳಿಗೆ ವಿಧೇಯರಾಗಬೇಡಿರಿ’’
ಎಂಬುದಾಗಿ ಹೇಳುತ್ತಿರುವಿಯೆಂದು ಅವರು ಕೇಳಿದ್ದಾರೆ.
22ಈಗ ನಾವು ಏನು ಮಾಡೋಣ? ನೀನು ಬಂದಿರುವ
ವಿಷಯವು ಇಲ್ಲಿರುವ ಯೆಹೂದ್ಯ ವಿಶ್ವಾಸಿಗಳಿಗೆ ತಿಳಿಯುವುದು.
23ಆದರೆ ಈಗ ನೀನು ಏನು ಮಾಡಬೇಕೆಂಬುದನ್ನು ನಾವು ನಿನಗೆ
ತಿಳಿಸುತ್ತೇವೆ: ನಮ್ಮ ಜನರಲ್ಲಿ ನಾಲ್ಕು ಮಂದಿ ದೇವರಿಗೆ ಹರಕೆ
ಮಾಡಿಕೊಂಡಿದ್ದಾರೆ. 24ನೀನು ಅವರನ್ನು ನಿನ್ನೊಂದಿಗೆ ಕರೆದು
ಕೊಂಡು ಹೋಗಿ ಅವರ ಶುದ್ಧಾಚಾರದ ಸಂಪ್ರದಾಯದಲ್ಲಿ
ಭಾಗವಹಿಸು. ಅವರ ಖರ್ಚುವೆಚ್ಚವನ್ನೆಲ್ಲ ಕೊಡು. ಬಳಿಕ
ಅವರು ತಮ್ಮ ತಲೆಬೋಳಿಸಿಕೊಳ್ಳಲಿ. ನೀನು ಹೀಗೆ ಮಾಡಿದರೆ,
ನಿನ್ನ ಬಗ್ಗೆ ಅವರು ಕೇಳಿದ ಸಂಗತಿಗಳು ಸತ್ಯವಲ್ಲವೆಂದು ಅವರೆಲ್ಲ
ರಿಗೂ ಮನದಟ್ಟಾಗುವುದು. ಸ್ವತಃ ನೀನೇ ಮೋಶೆಯ ಧರ್ಮ

---

**ಸಹಾಯಕರು** ವಿಶೇಷ ಕಾರ್ಯಕ್ಕಾಗಿ ಆರಿಸಲ್ಪಟ್ಟವರು. ಅಪೊಸ್ತಲರ ಕಾರ್ಯಗಳು 6:1-6.

ಶಾಸ್ತ್ರಕ್ಕೆ ವಿಧೇಯನಾಗುತ್ತಿರುವುದನ್ನು ಅವರೆಲ್ಲರೂ ಕಣ್ಣಾರೆ ಕಾಣುವರು. 25ಯೆಹೂದ್ಯರಲ್ಲದ ವಿಶ್ವಾಸಿಗಳಿಗೆ ನಾವು ಒಂದು ಪತ್ರವನ್ನು ಈಗಾಗಲೇ ಕಳುಹಿಸಿದ್ದೇವೆ.

'ವಿಗ್ರಹಗಳಿಗೆ ಅರ್ಪಿಸಿದ ಆಹಾರ ಪದಾರ್ಥಗಳನ್ನು ತಿನ್ನಬೇಡಿ. ರಕ್ತವನ್ನು ತಿನ್ನಬೇಡಿ. ಕುತ್ತಿಗೆಹಿಸುಕಿ ಕೊಂದ ಪ್ರಾಣಿಗಳ ಮಾಂಸವನ್ನು ತಿನ್ನಬೇಡಿ. ಯಾವ ಬಗೆಯ ಲೈಂಗಿಕ ಪಾಪವನ್ನು ಮಾಡಬೇಡಿ'

ಎಂದು ಆ ಪತ್ರದಲ್ಲಿ ಬರೆಯಲಾಗಿದೆ'' ಎಂದರು.

26ಆಗ ಪೌಲನು ಆ ನಾಲ್ಕುಮಂದಿಯನ್ನು ತನ್ನೊಂದಿಗೆ ಕರೆದುಕೊಂಡು ಹೋದನು. ಮರುದಿನ ಪೌಲನು, ಶುದ್ಧಾಚಾರದ ವ್ರತದಲ್ಲಿ ಭಾಗವಹಿಸಿದನು. ಬಳಿಕ ಅವನು ದೇವಾಲಯಕ್ಕೆ ಹೋಗಿ ಶುದ್ಧಾಚಾರದ ಸಂಪ್ರದಾಯ ಮುಗಿಯುವ ದಿನವನ್ನು ಪ್ರಕಟಿಸಿದನು. ಕೊನೆಯ ದಿನದಲ್ಲಿ ಪ್ರತಿಯೊಬ್ಬ ವ್ಯಕ್ತಿಗಾಗಿಯೂ ಯಜ್ಞವನ್ನರ್ಪಿಸಬೇಕಾಗಿತ್ತು.

27ಆ ಏಳು ದಿನಗಳ ಅವಧಿ ಮುಗಿಯುವುದರಲ್ಲಿತ್ತು. ಆದರೆ ಏಷ್ಯಾದಿಂದ ಬಂದಿದ್ದ ಕೆಲವು ಯೆಹೂದ್ಯರು ಪೌಲನನ್ನು ಕಂಡು ಜನಸಮೂಹವನ್ನು ಉದ್ದೇಶಿಸಿ, 28''ಯೆಹೂದ್ಯ ಜನರೇ, ನಮಗೆ ಸಹಾಯಮಾಡಿ! ಮೋಶೆಯ ಧರ್ಮಶಾಸ್ತ್ರಕ್ಕೂ ನಮ್ಮ ಜನರಿಗೂ ಮತ್ತು ಈ ಸ್ಥಳಕ್ಕೂ (ದೇವಾಲಯ) ವಿರೋಧವಾಗಿ ಎಲ್ಲಾ ಕಡೆಗಳಲ್ಲಿ ಜನರಿಗೆ ಉಪದೇಶಿಸುತ್ತಿದ್ದವನು ಇವನೇ. ಈಗ ಇವನು ಕೆಲವು ಗ್ರೀಕರನ್ನು ದೇವಾಲಯದೊಳಕ್ಕೆ ಕರೆದುಕೊಂಡು ಬಂದಿದ್ದಾನೆ! ಈ ಪವಿತ್ರ ಸ್ಥಳವನ್ನು ಇವನು ಅಶುದ್ಧಗೊಳಿಸಿದ್ದಾನೆ!''' ಎಂದು ಕೂಗಿ ಹೇಳಿ ಗಲಿಬಿಲಿ ಮಾಡಿದರು.
29(ಜೆರುಸಲೇಮಿನಲ್ಲಿ ಪೌಲನೊಂದಿಗಿದ್ದ ತ್ರೊಫಿಮ ಎಂಬವನನ್ನು ಆ ಯೆಹೂದ್ಯರು ನೋಡಿದ್ದರು. ಎಫೆಸದ ತ್ರೊಫಿಮನು ಗ್ರೀಕನಾಗಿದ್ದನು. ಪೌಲನು ಇವನನ್ನು ಪವಿತ್ರ ಸ್ಥಳದೊಳಗೆ ಕರೆದುಕೊಂಡು ಹೋಗಿದ್ದಾನೆಂದು ಅವರು ಭಾವಿಸಿಕೊಂಡರು.)

30ಜೆರುಸಲೇಮಿನ ಜನರೆಲ್ಲರು ಬಹು ಕೋಪಗೊಂಡರು. ಅವರೆಲ್ಲರು ಓಡಿಹೋಗಿ ಪೌಲನನ್ನು ಹಿಡಿದು ದೇವಾಲಯದೊಳಗಿಂದ ಎಳೆದುಕೊಂಡು ಬಂದರು. ಆ ಕೂಡಲೇ ದೇವಾಲಯದ ಬಾಗಿಲುಗಳನ್ನು ಮುಚ್ಚಲಾಯಿತು. 31ಅವರು ಪೌಲನನ್ನು ಕೊಲ್ಲಲು ಪ್ರಯತ್ನಿಸುತ್ತಿದ್ದಾಗ ಇಡೀ ಪಟ್ಟಣದಲ್ಲೇ ಗಲಭೆಯುಂಟಾಗಿದೆ ಎಂಬ ಸುದ್ದಿಯು ಜೆರುಸಲೇಮಿನಲ್ಲಿದ್ದ ರೋಮ್ ಸೇನಾಧಿಪತಿಗೆ ತಿಳಿಯಿತು. 32ತಕ್ಷಣವೇ ಅವನು ಕೆಲವು ಸೇನಾಧಿಕಾರಿಗಳನ್ನು ಮತ್ತು ಸೈನಿಕರನ್ನು ತನ್ನೊಂದಿಗೆ ಕರೆದುಕೊಂಡು ಜನಸಮೂಹದ ಕಡೆಗೆ ಹೋದನು. ಸೇನಾಧಿಪತಿಯನ್ನು ಮತ್ತು ಅವನ ಸೈನಿಕರನ್ನು ಕಂಡ ಜನರು ಪೌಲನಿಗೆ ಹೊಡೆಯುವುದನ್ನು ನಿಲ್ಲಿಸಿದರು. 33ಸೇನಾಧಿಪತಿಯು ಹೋಗಿ ಪೌಲನನ್ನು ಬಂಧಿಸಿ ಎರಡು ಸರಪಣಿಗಳಿಂದ ಅವನನ್ನು ಕಟ್ಟಲು ಸೈನಿಕರಿಗೆ ಹೇಳಿದನು. ಬಳಿಕ ಸೇನಾಧಿಪತಿಯು, ''ಈ ಮನುಷ್ಯನು ಯಾರು? ಅವನು ಏನು ತಪ್ಪು ಮಾಡಿದನು?'' ಎಂದು ವಿಚಾರಿಸಿದನು. 34ಅಲ್ಲಿದ್ದ ಜನರಲ್ಲಿ ಕೆಲವರು ಒಂದು ವಿಷಯದ ಬಗ್ಗೆ ಬೊಬ್ಬೆಹಾಕುತ್ತಿದ್ದರೆ, ಉಳಿದವರು ಇತರ ವಿಷಯಗಳ ಬಗ್ಗೆ ಬೊಬ್ಬೆಹಾಕುತ್ತಿದ್ದರು. ಈ ಗಲಿಬಿಲಿಯಿಂದಾಗಿಯೂ ಕೂಗಾಟದಿಂದಾಗಿಯೂ ಏನು ನಡೆಯಿತೆಂಬುದರ ಬಗ್ಗೆ ಸತ್ಯವನ್ನು ತಿಳಿದುಕೊಳ್ಳಲಾಗಲಿಲ್ಲ. ಆದ್ದರಿಂದ ಸೇನಾಧಿಪತಿಯು ಪೌಲನನ್ನು ಸೈನ್ಯದ ಕೋಟೆಯೊಳಕ್ಕೆ ತೆಗೆದುಕೊಂಡು ಹೋಗಲು ಸೈನಿಕರಿಗೆ ತಿಳಿಸಿದನು. 35-36ಎಲ್ಲಾ ಜನರು ಅವರನ್ನು ಹಿಂಬಾಲಿಸಿದರು. ಸೈನಿಕರು ಮೆಟ್ಟಿಲುಗಳ ಬಳಿಗೆ ಬಂದಾಗ ಪೌಲನನ್ನು ರಕ್ಷಿಸಲು ಹೊತ್ತುಕೊಂಡು ಹೋದರು. ಯಾಕೆಂದರೆ ಅವನಿಗೆ ಕೇಡು ಮಾಡಲು ಸಿದ್ಧರಾಗಿದ್ದ ಜನರು, ''ಅವನನ್ನು ಕೊಲ್ಲಿರಿ!'' ಎಂದು ಕೂಗುತ್ತಿದ್ದರು.

37ಸೈನಿಕರು ಪೌಲನನ್ನು ಸೈನ್ಯದ ಕೋಟೆಯೊಳಗೆ ಕೊಂಡೊಯ್ಯುತ್ತಿದ್ದಾಗ , ಪೌಲನು ಸೇನಾಧಿಪತಿಗೆ, ''ನಾನು ನಿನ್ನೊಂದಿಗೆ ಸ್ವಲ್ಪ ಮಾತಾಡಬಹುದೇ?'' ಎಂದು ಕೇಳಿದನು.

ಸೇನಾಧಿಪತಿಯು, ''ಓಹೋ, ನಿನಗೆ ಗ್ರೀಕ್ ಭಾಷೆ ಗೊತ್ತಿದೆಯಾ? 38ಹಾಗಾದರೆ, ನಾನು ಯೋಚಿಸಿದ ವ್ಯಕ್ತಿ ನೀನಲ್ಲ. ಸ್ವಲ್ಪಕಾಲದ ಹಿಂದೆ ಗಲಭೆ ಆರಂಭಿಸಿದ ಈಜಿಪ್ಟಿನವನೇ ನೀನೆಂದು ನಾನು ಭಾವಿಸಿದ್ದೆ. ಆ ಈಜಿಪ್ಟಿನವನು ನಾಲ್ಕು ಸಾವಿರ ಮಂದಿ ಕೊಲೆಗಾರರನ್ನು ಮರಳುಗಾಡಿಗೆ ಕರೆದುಕೊಂಡು ಹೋದನು'' ಎಂದು ಹೇಳಿದನು.

39ಪೌಲನು, ''ಇಲ್ಲ, ನಾನು ತಾರ್ಸದ ಯೆಹೂದ್ಯನು. ತಾರ್ಸವು ಸಿಲಿಸಿಯ ದೇಶದಲ್ಲಿದೆ. ನಾನು ಆ ಪ್ರಮುಖ ನಗರದ ಪ್ರಜೆ. ದಯವಿಟ್ಟು ಜನರೊಂದಿಗೆ ಮಾತಾಡಲು ನನಗೆ ಅಪ್ಪಣೆಯಾಗಲಿ'' ಎಂದು ಹೇಳಿದನು.

40ಜನರೊಂದಿಗೆ ಮಾತಾಡಲು ಸೇನಾಧಿಪತಿ ಪೌಲನಿಗೆ ಅಪ್ಪಣೆಕೊಟ್ಟನು. ಆದ್ದರಿಂದ ಪೌಲನು ಮೆಟ್ಟಿಲುಗಳ ಮೇಲೆ ನಿಂತುಕೊಂಡನು. ಬಳಿಕ, ಮೌನವಾಗಿರುವಂತೆ ಜನರಿಗೆ ಕೈಸನ್ನೆ ಮಾಡಿದನು. ಜನರು ಮೌನವಾದರು. ಆಗ ಪೌಲನು ಅವರೊಂದಿಗೆ ಯೆಹೂದ್ಯರ ಭಾಷೆಯಲ್ಲಿ ಮಾತಾಡಿದನು.

### ಪೌಲನ ಸಾಕ್ಷಿ

22 ಪೌಲನು, ''ನನ್ನ ಸಹೋದರರೇ, ನನ್ನ ತಂದೆಗಳೇ, ನನ್ನ ಪ್ರತಿವಾದವನ್ನು ಕೇಳಿರಿ!'' ಎಂದನು. 2ಪೌಲನು ಯೆಹೂದ್ಯರ ಭಾಷೆಯಲ್ಲಿ ಮಾತಾಡುತ್ತಿರುವುದನ್ನು ಕೇಳಿ ಯೆಹೂದ್ಯರು ಮತ್ತಷ್ಟು ನಿಶಬ್ಧರಾದರು. 3ಆಗ ಪೌಲನು ಇಂತೆಂದನು: '' ನಾನು ಯೆಹೂದ್ಯನು. ನಾನು ಹುಟ್ಟಿದ್ದು ಸಿಲಿಸಿಯ ದೇಶದ ತಾರ್ಸದಲ್ಲಿ. ಆದರೆ ನಾನು ಬೆಳೆದದ್ದು ಈ ಪಟ್ಟಣದಲ್ಲಿ. ನಾನು ಗಮಲಿಯೇಲನ ವಿದ್ಯಾರ್ಥಿಯಾಗಿದ್ದೆನು. ನಮ್ಮ ಪಿತೃಗಳ ಧರ್ಮಶಾಸ್ತ್ರದ ಬಗ್ಗೆ ಪ್ರತಿಯೊಂದನ್ನೂ ಅವನು ನನಗೆ ಬಹು ಸೂಕ್ಷ್ಮವಾಗಿ ಬೋಧಿಸಿದ್ದಾನೆ. ಇಂದು ಇಲ್ಲಿರುವ ನಿಮ್ಮೆಲ್ಲರಂತೆಯೇ ನಾನೂ ದೇವರ ಸೇವೆಯ ಬಗ್ಗೆ ಬಹಳ ಅಭಿಮಾನ ಉಳ್ಳವನಾಗಿದ್ದೆ. 4ಯೇಸುವಿನ ಮಾರ್ಗವನ್ನು ಯಾರು ಹಿಂಬಾಲಿಸುತ್ತಾರೋ ಅವರನ್ನು ನಾನು ಹಿಂಸಿಸಿದೆನು. ನನ್ನ ದೆಸೆಯಿಂದ ಅವರಲ್ಲಿ ಕೆಲವರು ಕೊಲ್ಲಲ್ಪಟ್ಟರು. ನಾನು ಪುರುಷರನ್ನು ಮತ್ತು ಸ್ತ್ರೀಯರನ್ನು ಬಂಧಿಸಿ ಸೆರೆಮನೆಗೆ ಹಾಕಿದೆನು. 5ಇದು ಸತ್ಯವೆಂಬುವುದಕ್ಕೆ ಪ್ರಧಾನಯಾಜಕರು ಮತ್ತು ಯೆಹೂದ್ಯರ ಹಿರೀನಾಯಕರ ಸಭೆಯವರೆಲ್ಲರು ಸಾಕ್ಷಿಗಳಾಗಿದ್ದಾರೆ. ಒಂದು ಸಲ, ಈ ನಾಯಕರು ನನಗೆ ಕೆಲವು ಪತ್ರಗಳನ್ನು ಕೊಟ್ಟರು. ದಮಸ್ಕ ಪಟ್ಟಣದಲ್ಲಿನ ಯೆಹೂದ್ಯ ಸಹೋದರರಿಗೆ ಆ ಪತ್ರಗಳನ್ನು ಬರೆಯಲಾಗಿತ್ತು. (ಯೇಸುವಿನ) ಶಿಷ್ಯರನ್ನು

ಬಂಧಿಸಿ ದಂಡಿಸುವುದಕ್ಕಾಗಿ ಅವರನ್ನು ಜೆರುಸಲೇಮಿಗೆ ಎಳೆದು
ಕೊಂಡು ಬರಲು ನಾನು ಅಲ್ಲಿಗೆ ಹೋಗುತ್ತಿದ್ದೆ.

6‘‘ನಾನು ಪ್ರಯಾಣ ಮಾಡುತ್ತಾ ದಮಸ್ಕದ ಸಮೀಪಕ್ಕೆ
ಬಂದಾಗ ಒಂದು ಘಟನೆ ಸಂಭವಿಸಿತು. ಆಗ ಸುಮಾರು
ಮಧ್ಯಾಹ್ನವಾಗಿತ್ತು. ಇದ್ದಕ್ಕಿದ್ದಂತೆ ಪ್ರಕಾಶಮಾನವಾದ ಬೆಳ
ಕೊಂದು ನನ್ನ ಸುತ್ತಲೂ ಪ್ರಕಾಶಿಸಿತು. 7ನಾನು ನೆಲಕ್ಕೆ ಬಿದ್ದೆನು.
ಆಗ ವಾಣಿಯೊಂದು ನನಗೆ, ‘‘ಸೌಲನೇ, ಸೌಲನೇ, ನೀನು
ನನ್ನನ್ನು ಯಾಕೆ ಹಿಂಸೆ ಪಡಿಸುತ್ತಿರುವೆ?’’ ಎಂದು ಹೇಳಿತು.
8ನಾನು, ‘ಪ್ರಭುವೇ, ನೀನು ಯಾರು?’ ಎಂದು ಕೇಳಿದೆನು. ಆ
ವಾಣಿಯು, ‘ನಾನು ನಜರೇತಿನ ಯೇಸು. ನೀನು ಹಿಂಸಿಸು
ತ್ತಿರುವುದು ನನ್ನನ್ನೇ’ ಎಂದು ಹೇಳಿತು. 9ನನ್ನೊಂದಿಗಿದ್ದ ಜನರು
ನನ್ನ ಸಂಗಡ ಮಾತಾಡುತ್ತಿದ್ದ ವ್ಯಕ್ತಿಯ ಸ್ವರವನ್ನು ಕೇಳಲಿಲ್ಲ.
ಆದರೆ ಅವರು ಬೆಳಕನ್ನು ನೋಡಿದರು. 10ನಾನು, ‘ಪ್ರಭುವೇ
ನಾನೇನು ಮಾಡಲಿ?’ ಎಂದೆನು. ಪ್ರಭುವು ‘ಎದ್ದು ದಮಸ್ಕ
ದೊಳಗೆ ಹೋಗು. ನಾನು ನಿನಗೆ ನೇಮಿಸಿರುವ ಕೆಲಸಗಳನ್ನೆಲ್ಲಾ
ಅಲ್ಲಿ ನಿನಗೆ ತಿಳಿಸಲಾಗುವುದು’ ಎಂದು ಉತ್ತರಕೊಟ್ಟನು.
11ಪ್ರಕಾಶಮಾನವಾದ ಆ ಬೆಳಕು ನನ್ನನ್ನು ಕುರುಡನನ್ನಾಗಿ
ಮಾಡಿದ್ದರಿಂದ ನನಗೆ ಏನೂ ಕಾಣಲಿಲ್ಲ. ಆದ್ದರಿಂದ ಆ ಜನರು
ನನ್ನನ್ನು ದಮಸ್ಕಕ್ಕೆ ಕೈಹಿಡಿದು ನಡೆಸಿಕೊಂಡು ಹೋದರು.

12‘‘ದಮಸ್ಕದಲ್ಲಿ ಅನನೀಯ ಎಂಬವನು ನನ್ನ ಬಳಿಗೆ
ಬಂದನು. ಅನನೀಯನು ಧಾರ್ಮಿಕ ವ್ಯಕ್ತಿಯಾಗಿದ್ದನು. ಅವನು
ಮೋಶೆಯ ಧರ್ಮಶಾಸ್ತ್ರಕ್ಕೆ ವಿಧೇಯನಾಗಿದ್ದನು. ಅಲ್ಲಿ
ವಾಸವಾಗಿದ್ದ ಯೆಹೂದ್ಯರೆಲ್ಲರು ಅವನನ್ನು ಗೌರವಿಸುತ್ತಿದ್ದರು.
13ಅನನೀಯನು ನನ್ನ ಬಳಿಗೆ ಬಂದು, ‘ಸಹೋದರನಾದ
ಸೌಲನೇ, ನಿನಗೆ ಮತ್ತೆ ದೃಷ್ಟಿ ಬರಲಿ!’ ಎಂದನು. ಆ ಕೂಡಲೇ
ನನಗೆ ದೃಷ್ಟಿ ಬಂದಿತು, ಮತ್ತು ನಾನು ಅವನನ್ನು ನೋಡಿದೆನು.
14ಅನನೀಯನು ನನಗೆ ‘ನಮ್ಮ ಪಿತೃಗಳ ದೇವರು ಬಹುಕಾಲದ
ಹಿಂದೆಯೇ ನಿನ್ನನ್ನು ಆರಿಸಿಕೊಂಡನು. ನೀನು ದೇವರ
ಯೋಜನೆಯನ್ನು ತಿಳಿದುಕೊಳ್ಳಬೇಕೆಂದೂ ನೀತಿಸ್ವರೂಪ
ನನ್ನು (ಯೇಸು) ನೋಡಬೇಕೆಂತಲೂ ಆತನ ವಾಕ್ಯಗಳನ್ನು
ಕೇಳಬೇಕೆಂತಲೂ ದೇವರು ನಿನ್ನನ್ನು ಆರಿಸಿಕೊಂಡನು.
15ನೀನು ಕಂಡ ಮತ್ತು ಕೇಳಿದ ಸಂಗತಿಗಳ ಬಗ್ಗೆ ಎಲ್ಲಾ ಜನರಿಗೆ
ಸಾಕ್ಷಿಯಾಗಿರುವೆ. 16ಈಗ ನೀನು ತಡಮಾಡುವುದೇಕೆ?
ಎದ್ದೇಳು! ಆತನಲ್ಲಿ ನಂಬಿಕೆಯಿಟ್ಟು ದೀಕ್ಷಾಸ್ನಾನ ಮಾಡಿಸಿ
ಕೊಂಡು ನಿನ್ನ ಪಾಪಗಳನ್ನು ತೊಳೆದುಕೊ,’ ಎಂದು ಹೇಳಿದನು.

17‘‘ತರುವಾಯ ನಾನು ಜೆರುಸಲೇಮಿಗೆ ಹಿಂತಿರುಗಿದೆನು.
ನಾನು ದೇವಾಲಯದ ಅಂಗಳದಲ್ಲಿ ಪ್ರಾರ್ಥಿಸುತ್ತಿದ್ದಾಗ ನನ
ಗೊಂದು ದರ್ಶನವಾಯಿತು. 18ನಾನು ಯೇಸುವನ್ನು ಕಂಡೆನು.
ಆತನು ನನಗೆ‘ ಬೇಗನೆ ಜೆರುಸಲೇಮಿನಿಂದ ಹೊರಡು! ನನ್ನ
ಕುರಿತಾದ ಸಾಕ್ಷಿಯನ್ನು ಈ ಜನರು ಸ್ವೀಕರಿಸುವುದಿಲ್ಲ.’ ಎಂದು
ಹೇಳಿದನು. 19ನಾನು ‘ಪ್ರಭುವೇ, ವಿಶ್ವಾಸಿಗಳನ್ನು ಸೆರೆಮನೆ
ಗಳಿಗೆ ಹಾಕಿಸಿ ಹೊಡೆಸುತ್ತಿದ್ದವನು ನಾನೇ ಎಂಬುದು ಜನರಿಗೆ
ಗೊತ್ತಿದೆ. ನಿನ್ನಲ್ಲಿ ನಂಬಿಕೆಯಿಟ್ಟಿರುವ ಜನರನ್ನು ಪತ್ತೆಹಚ್ಚಿ
ಬಂಧಿಸುವುದಕ್ಕಾಗಿ ನಾನು ಎಲ್ಲಾ ಸಭಾಮಂದಿರಗಳಿಗೆ ಹೋಗಿ
ದ್ದೇನೆ. 20ನಿನ್ನ ಸಾಕ್ಷಿಯಾದ ಸ್ತೆಫನನು ಕೊಲ್ಲಲ್ಪಟ್ಟಾಗ ನಾನು
ಅಲ್ಲಿದ್ದದ್ದು ಸಹ ಜನರಿಗೆ ಗೊತ್ತಿದೆ. ಸ್ತೆಫನನನ್ನು ಕೊಲ್ಲಲು
ಅವರು ನಿರ್ಧರಿಸಿದಾಗ ನಾನೂ ಅದಕ್ಕೆ ಒಪ್ಪಿಗೆ ಸೂಚಿಸಿ ಅಲ್ಲೇ
ನಿಂತುಕೊಂಡಿದ್ದೆನು. ಅಲ್ಲದೆ ಅವನನ್ನು ಕೊಲ್ಲುತ್ತಿದ್ದ ಜನರ
ಮೇಲಂಗಿಗಳನ್ನು ಸಹ ನಾನು ಹಿಡಿದುಕೊಂಡಿದ್ದೆ!’ ಎಂದೆನು.
21ಆದರೆ, ಯೇಸು ನನಗೆ, ‘ಈಗ ಹೊರಡು, ಬಹುದೂರ
ದಲ್ಲಿರುವ ಯೆಹೂದ್ಯರಲ್ಲದ ಜನರ ಬಳಿಗೆ ನಾನು ನಿನ್ನನ್ನು
ಕಳುಹಿಸುವೆನು’ ಎಂದು ಹೇಳಿದನು.’’

22ಪೌಲನು ಈ ಕೊನೆಯ ಸಂಗತಿಯನ್ನು ಅಂದರೆ
ಯೆಹೂದ್ಯರಲ್ಲದವರ ಬಳಿಗೆ ಹೋಗುವುದರ ಬಗ್ಗೆ ಹೇಳಿದಾಗ
ಅವರು ಅವನ ಮಾತಿಗೆ ಕಿವಿಗೊಡುವುದನ್ನು ನಿಲ್ಲಿಸಿ, ‘‘ಅವನನ್ನು
ಕೊಲ್ಲಿರಿ! ಅವನನ್ನು ಪ್ರಪಂಚದಿಂದ ತೊಲಗಿಸಿರಿ! ಇಂಥ
ಮನುಷ್ಯನಿಗೆ ಜೀವಿಸಲು ಅವಕಾಶವನ್ನೇ ಕೊಡಕೂಡದು!’’
ಎಂದು ಕೂಗಿದರು. 23ಅವರು ಬೊಬ್ಬೆಹಾಕಿದರು; ತಮ್ಮ
ಮೇಲಂಗಿಗಳನ್ನು ಬಿಚ್ಚಿ ಬೀಸಿದರು; ಧೂಳನ್ನು ಮೇಲಕ್ಕೆ
ತೂರಿದರು. 24ಆಗ ಸೇನಾಧಿಪತಿಯು ಪೌಲನನ್ನು ದಂಡಿನ
ಪಾಳೆಯದೊಳಗೆ ಕರೆದುಕೊಂಡು ಹೋಗಿ ಹೊಡೆಯಲು ಸೈನಿಕ
ರಿಗೆ ಹೇಳಿದನು. ಜನರು ಪೌಲನ ವಿರೋಧವಾಗಿ ಈ ರೀತಿ
ಕೂಗಲು ಕಾರಣವೇನೆಂದು ಪೌಲನಿಂದಲೇ ಹೇಳಿಸ
ಬೇಕೆಂಬುದು ಸೇನಾಧಿಪತಿಯ ಅಪೇಕ್ಷೆಯಾಗಿತ್ತು. 25ಸೈನಿಕರು
ಹೊಡೆಯುವುದಕ್ಕಾಗಿ ಪೌಲನನ್ನು ಕಟ್ಟುತ್ತಿರಲು ಅಲ್ಲಿದ್ದ
ರೋಮ್ ಅಧಿಕಾರಿಗೆ ಪೌಲನು, ‘‘ಅಪರಾಧಿಯೆಂದು
ತೀರ್ಪಾಗಿಲ್ಲದ ರೋಮ್ ಪ್ರಜೆಯೊಬ್ಬನನ್ನು ಹೊಡೆಯಲು
ನಿಮಗೆ ಹಕ್ಕಿದೆಯೋ?’’ ಎಂದು ಕೇಳಿದನು.

26ಆ ಅಧಿಕಾರಿಯು ಇದನ್ನು ಕೇಳಿದ ಕೂಡಲೇ ಸೇನಾಧಿ
ಪತಿಯ ಬಳಿಗೆ ಬಂದು, ‘‘ನೀನು ಏನು ಮಾಡುತ್ತಿರುವೆ
ಎಂಬುದು ನಿನಗೆ ಗೊತ್ತಿದೆಯೋ? ಈ ಮನುಷ್ಯನು ರೋಮಿನ
ಪ್ರಜೆ!’’ ಎಂದು ಹೇಳಿದನು.

27ಸೇನಾಧಿಪತಿಯು ಪೌಲನ ಬಳಿಗೆ ಬಂದು, ‘‘ಹೇಳು,
ನೀನು ನಿಜವಾಗಿಯೂ ರೋಮಿನ ಪ್ರಜೆಯೋ?’’ ಎಂದು
ಕೇಳಿದನು.

ಪೌಲನು,‘‘ಹೌದು’’ ಎಂದು ಉತ್ತರಕೊಟ್ಟನು.

28ಸೇನಾಧಿಪತಿಯು, ‘‘ನಾನು ರೋಮಿನ ಪ್ರಜೆಯಾಗಲು
ಬಹಳ ಹಣಕೊಟ್ಟಿರುವೆ’’ ಎಂದು ಹೇಳಿದನು.

ಅದಕ್ಕೆ ಪೌಲನು, ‘‘ನಾನು ಹುಟ್ಟಿದಂದಿನಿಂದಲೇ
ರೋಮಿನ ಪ್ರಜೆ’’ ಎಂದನು.

29ಪೌಲನನ್ನು ಪ್ರಶ್ನಿಸಲು ಸಿದ್ಧರಾಗುತ್ತಿದ್ದ ಜನರು ಆ
ಕೂಡಲೇ ಪೌಲನ ಬಳಿಯಿಂದ ಹೊರಟು ಹೋದರು. ಪೌಲ
ನನ್ನು ಆಗಲೇ ಕಟ್ಟಿಹಾಕಿದ್ದರಿಂದ ಮತ್ತು ಪೌಲನು ರೋಮಿನ
ಪ್ರಜೆಯಾಗಿದ್ದರಿಂದ ಸೇನಾಧಿಪತಿಗೆ ಭಯವಾಯಿತು.

## ಪೌಲನು ಯೆಹೂದ್ಯನಾಯಕರೊಂದಿಗೆ ಮಾತಾಡುವನು

30ಮರುದಿನ, ಪೌಲನಿಗೆ ವಿರೋಧವಾಗಿ ಯೆಹೂದ್ಯರು
ತಂದ ಆಪಾದನೆ ಏನೆಂದು ತಿಳಿದುಕೊಳ್ಳಲು ಸೇನಾಧಿಪತಿಯು
ನಿರ್ಧರಿಸಿದನು. ಆದ್ದರಿಂದ ಅವನು ಮಹಾಯಾಜಕರಿಗೂ
ಯೆಹೂದ್ಯರ ನ್ಯಾಯಸಭೆಯವರಿಗೂ ಒಟ್ಟಾಗಿ ಸೇರಿಬರಲು
ಆಜ್ಞಾಪಿಸಿದನು. ಸೇನಾಧಿಪತಿಯು ಪೌಲನ ಸರಪಣಿಗಳನ್ನು
ತೆಗೆದುಹಾಕಿ ಅವನನ್ನು ಹೊರಗೆ ಕರೆದುಕೊಂಡು ಬಂದು
ಸಭೆಯ ಮುಂದೆ ನಿಲ್ಲಿಸಿದನು.

23 ಪೌಲನು ಯೆಹೂದ್ಯರ ನ್ಯಾಯಸಭೆಯನ್ನು ದೃಷ್ಟಿಸಿ
ನೋಡಿ, ‘‘ಸಹೋದರರೇ, ನಾನು ಈ ದಿನದ
ವರೆಗೂ ಒಳ್ಳೆಯ ಮನಸ್ಸಾಕ್ಷಿಯಿಂದ ದೇವರ ಮುಂದೆ
ನಡೆದುಕೊಂಡಿದ್ದೇನೆ’’ ಎಂದು ಹೇಳಿದನು. 2ಪ್ರಧಾನಯಾಜಕ
ನಾದ ಅನನೀಯನು ಅಲ್ಲಿದ್ದನು. ಪೌಲನು ಹೇಳಿದ್ದನ್ನು ಕೇಳಿದ
ಅನನೀಯನು ಪೌಲನ ಪಕ್ಕದಲ್ಲಿ ನಿಂತಿದ್ದವರಿಗೆ ಪೌಲನ
ಬಾಯಿಯ ಮೇಲೆ ಹೊಡೆಯಲು ಹೇಳಿದನು. 3ಪೌಲನು
ಅನನೀಯನಿಗೆ,‘‘ದೇವರು ನಿನ್ನನ್ನು ಸಹ ಹೊಡೆಯುವನು!
ಸುಣ್ಣ ಬಳಿದ ಗೋಡೆ ನೀನು! ಮೋಶೆಯ ಧರ್ಮಶಾಸ್ತ್ರಕ್ಕನು
ಸಾರವಾಗಿ ನ್ಯಾಯತೀರ್ಪು ಮಾಡಲು ಅಲ್ಲಿ ಕುಳಿತುಕೊಂಡು
ನನಗೆ ಹೊಡೆಯಲು ಅವರಿಗೆ ಹೇಳುತ್ತಿರುವೆಯಾ! ಮೋಶೆಯ
ಧರ್ಮಶಾಸ್ತ್ರಕ್ಕೆ ಅದು ವಿರುದ್ಧವಾದದ್ದು’’ ಎಂದು ಹೇಳಿದನು.
4ಪೌಲನ ಸಮೀಪದಲ್ಲಿ ನಿಂತಿದ್ದ ಜನರು ಅವನಿಗೆ,
‘‘ದೇವರ ಪ್ರಧಾನಯಾಜಕನಿಗೆ ನೀನು ಈ ರೀತಿ ಮಾತಾಡ
ಕೂಡದು! ನೀನು ಅವನಿಗೆ ಅವಮಾನ ಮಾಡುತ್ತಿರುವೆ!’’ ಎಂದು
ಹೇಳಿದರು.
5ಪೌಲನು, ‘‘ಸಹೋದರರೇ, ಈ ಮನುಷ್ಯನು ಪ್ರಧಾನ
ಯಾಜಕನೆಂದು ನನಗೆ ಗೊತ್ತಿರಲಿಲ್ಲ. ‘ನಿಮ್ಮ ಜನನಾಯಕರ
ಬಗ್ಗೆ ಕೆಟ್ಟಮಾತುಗಳನ್ನು ಆಡಬಾರದು’* ಎಂದು ಧರ್ಮಶಾಸ್ತ್ರ
ದಲ್ಲಿ ಬರೆದಿದೆ’’ ಎಂದು ಹೇಳಿದನು.
6ಸಭೆಯಲ್ಲಿದ್ದ ಜನರಲ್ಲಿ ಕೆಲವರು ಸದ್ದುಕಾಯರಾಗಿದ್ದರು;
ಮತ್ತೆ ಕೆಲವರು ಫರಿಸಾಯರಾಗಿದ್ದರು. ಆದ್ದರಿಂದ ಪೌಲನು,
‘‘ನನ್ನ ಸಹೋದರರೇ, ನಾನು ಫರಿಸಾಯನು! ನನ್ನ ತಂದೆಯೂ
ಫರಿಸಾಯನಾಗಿದ್ದನು! ಸತ್ತವರು ಪುನರುತ್ಥಾನ ಹೊಂದು
ತ್ತಾರೆಂದು ನಾನು ನಂಬುವುದರಿಂದ ಇಲ್ಲಿ ನ್ಯಾಯವಿಚಾರಣೆಗೆ
ಗುರಿಯಾಗಿದ್ದೇನೆ!’’ ಎಂದು ಕೂಗಿಹೇಳಿದನು.
7ಪೌಲನು ಹೀಗೆ ಹೇಳಿದಾಗ, ಫರಿಸಾಯರಿಗೂ ಸದ್ದು
ಕಾಯರಿಗೂ ದೊಡ್ಡ ವಾಗ್ವಾದವಾಯಿತು. ಸಭೆಯಲ್ಲಿ ಭೇದ
ಉಂಟಾಯಿತು.
8(ಸತ್ತವರಿಗೆ ಪುನರುತ್ಥಾನವಿಲ್ಲ; ದೇವದೂತರುಗಳಾಗಲಿ
ಆತ್ಮಗಳಾಗಲಿ ಇಲ್ಲವೇ ಇಲ್ಲ ಎಂಬುದು ಸದ್ದುಕಾಯರ ನಂಬಿಕೆ.
ಫರಿಸಾಯರ ನಂಬಿಕೆ ಇದಕ್ಕೆ ತದ್ವಿರುದ್ಧವಾಗಿದೆ) 9ಈ
ಯೆಹೂದ್ಯರೆಲ್ಲರೂ ಹೆಚ್ಚುಹೆಚ್ಚು ಗಟ್ಟಿಯಾಗಿ ಆರ್ಭಟಿಸ
ತೊಡಗಿದರು. ಫರಿಸಾಯರ ಗುಂಪಿಗೆ ಸೇರಿದ್ದ ಕೆಲವು ಮಂದಿ
ಧರ್ಮೋಪದೇಶಕರು ಎದ್ದು ನಿಂತುಕೊಂಡು, ‘‘ಈ ಮನುಷ್ಯ
ನಲ್ಲಿ ನಮಗೇನೂ ತಪ್ಪು ಕಂಡುಬರುತ್ತಿಲ್ಲ! ದಮಸ್ಕಕ್ಕೆ ಹೋಗುವ
ದಾರಿಯಲ್ಲಿ ದೇವದೂತನಾಗಲಿ ಆತ್ಮವಾಗಲಿ ಅವನೊಂದಿಗೆ
ಮಾತಾಡಿದ್ದಿರಬೇಕು!’’ ಎಂದು ವಾದಿಸಿದರು.
10ಈ ವಾಗ್ವಾದವು ಜಗಳವಾಯಿತು. ಯೆಹೂದ್ಯರು ಪೌಲ
ನನ್ನು ಚೂರುಚೂರು ಮಾಡುವರೆಂಬ ಭಯದಿಂದ ಸೇನಾಧಿ
ಪತಿಯು ಸಿಪಾಯಿಗಳಿಗೆ, ‘‘ಕೆಳಗೆ ಇಳಿದು ಹೋಗಿ ಪೌಲನನ್ನು
ಯೆಹೂದ್ಯರ ಬಳಿಯಿಂದ ಕೊಂಡೊಯ್ದು ಸೈನ್ಯದ ಕೋಟೆ
ಯೊಳಗೆ ಇರಿಸಿರಿ’’ ಎಂದು ಆಜ್ಞಾಪಿಸಿದನು.
11ಮರುದಿನ ರಾತ್ರಿ ಪ್ರಭು ಯೇಸುವು ಬಂದು ಪೌಲನ
ಬಳಿ ನಿಂತುಕೊಂಡು, ‘‘ಧೈರ್ಯದಿಂದಿರು! ನೀನು ನನ್ನ ಬಗ್ಗೆ
ಜೆರುಸಲೇಮಿನ ಜನರಿಗೆ ತಿಳಿಸಿರುವೆ. ನೀನು ರೋಮಿಗೂ
ಹೋಗಿ ಅಲ್ಲಿರುವ ಜನರಿಗೆ ನನ್ನ ಬಗ್ಗೆ ತಿಳಿಸಬೇಕು!’’ ಎಂದು
ಹೇಳಿದನು.
12ಮರುದಿನ ಮುಂಜಾನೆ ಯೆಹೂದ್ಯರಲ್ಲಿ ಕೆಲವರು, ತಾವು
ಪೌಲನನ್ನು ಕೊಲ್ಲದ ಹೊರತು ಏನನ್ನೂ ತಿನ್ನುವುದಿಲ್ಲ ಮತ್ತು
ಏನನ್ನೂ ಕುಡಿಯುವುದಿಲ್ಲ ಎಂಬುದಾಗಿ ಹರಕೆ ಮಾಡಿ
ಕೊಂಡರು. 13ಹೀಗೆ ಸುಮಾರು ನಲವತ್ತಕ್ಕಿಂತಲೂ ಹೆಚ್ಚು
ಮಂದಿ ಹರಕೆ ಮಾಡಿಕೊಂಡಿದ್ದರು. 14ಈ ಯೆಹೂದ್ಯರು
ಮಹಾಯಾಜಕರ ಮತ್ತು ಯೆಹೂದ್ಯರ ಹಿರಿಯ ನಾಯಕರ
ಬಳಿಗೆ ಹೋಗಿ, ‘‘ನಾವು ಪೌಲನನ್ನು ಕೊಲ್ಲುವ ತನಕ
ತಿನ್ನುವುದೂ ಇಲ್ಲ ಕುಡಿಯುವುದೂ ಇಲ್ಲ ಎಂಬ ಕಠಿಣವಾದ
ಹರಕೆಮಾಡಿಕೊಂಡಿದ್ದೇವೆ! 15ಆದ್ದರಿಂದ ಈಗ ನೀವು ಮಾಡ
ಬೇಕಾದದ್ದೇನಂದರೆ, ಸೇನಾಧಿಪತಿಗೂ ಎಲ್ಲಾ ಯೆಹೂದ್ಯ
ನಾಯಕರಿಗೂ ಒಂದು ಸಂದೇಶವನ್ನು ಕಳುಹಿಸಿಕೊಡಿರಿ. ಪೌಲ
ನಿಗೆ ಇನ್ನೂ ಹೆಚ್ಚು ಪ್ರಶ್ನೆಗಳನ್ನು ಕೇಳಬೇಕಾಗಿರುವುದರಿಂದ
ಪೌಲನನ್ನು ನಮ್ಮ ಬಳಿಗೆ ಕರೆದುಕೊಂಡು ಬರಬೇಕೆಂದು
ಸೇನಾಧಿಪತಿಗೆ ತಿಳಿಸಿರಿ. ಪೌಲನು ಇಲ್ಲಿಗೆ ಬರುತ್ತಿರುವಾಗಲೇ
ನಾವು ಮಾರ್ಗದಲ್ಲಿ ಕಾದುಕೊಂಡಿದ್ದು ಅವನನ್ನು ಕೊಲ್ಲು
ತ್ತೇವೆ’’ ಎಂದು ಹೇಳಿದರು.
16ಆದರೆ ಈ ಯೋಜನೆಯ ಬಗ್ಗೆ ಪೌಲನ ಸೋದ
ರಳಿಯನಿಗೆ ತಿಳಿಯಿತು. ಅವನು ಸೈನ್ಯದ ಕೋಟೆಯೊಳಗೆ
ಹೋಗಿ ಈ ಯೋಜನೆಯ ಬಗ್ಗೆ ಪೌಲನಿಗೆ ತಿಳಿಸಿದನು. 17ಆಗ
ಪೌಲನು ಸೇನಾಧಿಕಾರಿಗಳಲ್ಲಿ ಒಬ್ಬನನ್ನು ಕರೆದು, ‘‘ಈ
ಯೌವನಸ್ಥನನ್ನು ಸೇನಾಧಿಪತಿಯ ಬಳಿಗೆ ಕರೆದುಕೊಂಡು
ಹೋಗು. ಇವನು ಒಂದು ಸಂದೇಶವನ್ನು ಅವನಿಗೆ ತಿಳಿಸ
ಬೇಕಾಗಿದೆ’’ ಎಂದು ಹೇಳಿದನು. 18ಆದ್ದರಿಂದ ಸೇನಾಧಿ
ಕಾರಿಯು ಪೌಲನ ಸೋದರಳಿಯನನ್ನು ಸೇನಾಧಿಪತಿಯ
ಬಳಿಗೆ ಕರೆದುಕೊಂಡು ಹೋದನು. ಆ ಅಧಿಕಾರಿಯು ಸೇನಾ
ಧಿಪತಿಗೆ, ‘‘ಈ ಯೌವನಸ್ಥನನ್ನು ನಿನ್ನ ಬಳಿಗೆ ಕರೆದುಕೊಂಡು
ಹೋಗಬೇಕೆಂದು ಸೆರೆವಾಸದಲ್ಲಿರುವ ಪೌಲನು ನನ್ನನ್ನು
ಕೇಳಿಕೊಂಡನು. ಇವನು ನಿನಗೊಂದು ಸಂದೇಶವನ್ನು ತಿಳಿಸ
ಬೇಕೆಂದಿದ್ದಾನೆ’’ ಎಂದು ಹೇಳಿದನು.
19ಸೇನಾಧಿಪತಿಯು ಆ ಯೌವನಸ್ಥನನ್ನು ಕೈಹಿಡಿದು
ಏಕಾಂತವಾದ ಸ್ಥಳಕ್ಕೆ ಕರೆದುಕೊಂಡು ಹೋಗಿ, ‘‘ನೀನು ಏನು
ತಿಳಿಸಬೇಕೆಂದಿರುವೆ?’’ ಎಂದು ಕೇಳಿದನು.
20ಆ ಯೌವನಸ್ಥನು,‘‘ಇನ್ನೂ ಹೆಚ್ಚಿನ ಪ್ರಶ್ನೆಗಳನ್ನು ಕೇಳ
ಬೇಕೆಂಬ ನೆವವನ್ನು ಅವನಿಗೆ ಹೇಳಿ ನಾಳಿನ ಆಲೋಚನಾಸಭೆಗೆ
ಪೌಲನನ್ನು ಕರೆದುಕೊಂಡು ಬರಬೇಕೆಂದು ಯೆಹೂದ್ಯರು
ನಿನ್ನನ್ನು ಕೇಳಿಕೊಳ್ಳಲು ನಿರ್ಧರಿಸಿದ್ದಾರೆ. 21ಆದರೆ ಅವರನ್ನು
ನಂಬಬೇಡ! ಪೌಲನನ್ನು ಕೊಲ್ಲುವುದಕ್ಕಾಗಿ ನಲವತ್ತಕ್ಕಿಂತಲೂ
ಹೆಚ್ಚು ಮಂದಿ ಯೆಹೂದ್ಯರು ಅಡಗಿಕೊಂಡು ಕಾಯುತ್ತಿದ್ದಾರೆ.
ಪೌಲನನ್ನು ಕೊಲ್ಲುವ ತನಕ ತಿನ್ನುವುದೂ ಇಲ್ಲ ಕುಡಿಯು
ವುದೂ ಇಲ್ಲ ಎಂದು ಅವರೆಲ್ಲರೂ ಹರಕೆ ಮಾಡಿಕೊಂಡಿದ್ದಾರೆ!
ಈಗ ಅವರು ನಿನ್ನ ಒಪ್ಪಿಗೆಗಾಗಿ ಕಾಯುತ್ತಿದ್ದಾರೆ’’ ಎಂದು
ಹೇಳಿದನು.
22ಸೇನಾಧಿಪತಿಯು ಯೌವನಸ್ಥನಿಗೆ, ‘‘ಅವರ
ಯೋಜನೆಯ ಬಗ್ಗೆ ನೀನು ನನಗೆ ಹೇಳಿರುವುದಾಗಿ ಯಾರಿಗೂ
ತಿಳಿಸಬೇಡ’’ ಎಂದು ಹೇಳಿ ಅವನನ್ನು ಕಳುಹಿಸಿಬಿಟ್ಟನು.

---

**ನಿಮ್ಮ... ಆಡಬಾರದು** ವಿಮೋಚನ. 22:28.

### ಪೌಲನನ್ನು ಸೆಜರೇಯಕ್ಕೆ ಕಳುಹಿಸಲಾಯಿತು

23ಬಳಿಕ ಸೇನಾಧಿಪತಿಯು ಇಬ್ಬರು ಸೇನಾಧಿಕಾರಿಗಳನ್ನು ಕರೆದು ಅವರಿಗೆ, ‘‘ಸೆಜರೇಯಕ್ಕೆ ಕಳುಹಿಸಿಕೊಡಲು ಇನ್ನೂರು ಮಂದಿ ಸೈನಿಕರನ್ನು ಸಿದ್ಧಪಡಿಸು. ಅಲ್ಲದೆ ಎಪ್ಪತ್ತು ಮಂದಿಯ ಅಶ್ವದಳವನ್ನೂ ಇನ್ನೂರು ಮಂದಿ ಭಲ್ಲೆಯವರನ್ನೂ ಸಿದ್ಧಪಡಿಸು. ಈ ರಾತ್ರಿ ಒಂಭತ್ತು ಗಂಟೆಗೆ ಇಲ್ಲಿಂದ ಹೊರಡಲು ನೀವು ಸಿದ್ಧರಾಗಿರಬೇಕು. 24ಪೌಲನ ಪ್ರಯಾಣಕ್ಕಾಗಿ ಕೆಲವು ಕುದುರೆಗಳನ್ನು ತೆಗೆದುಕೊ. ರಾಜ್ಯಪಾಲನಾದ ಫೇಲಿಕ್ಸನ ಬಳಿಗೆ ಅವನನ್ನು ಸುರಕ್ಷಿತವಾಗಿ ಕೊಂಡೊಯ್ಯಲೇಬೇಕು’’ ಎಂದು ಹೇಳಿದನು. 25ಸೇನಾಧಿಪತಿಯು ಒಂದು ಪತ್ರವನ್ನೂ ಬರೆದನು. ಅದರಲ್ಲಿ ಹೀಗೆ ತಿಳಿಸಲಾಗಿತ್ತು:

26ಕ್ಲಾಡಿಯ ಲೂಸಿಯನಿಂದ ಮಹಾರಾಜಶ್ರೀಗಳಾದ ರಾಜ್ಯಪಾಲ ಫೇಲಿಕ್ಸನಿಗೆ, ವಂದನೆಗಳು.

27ಯೆಹೂದ್ಯರು ಈ ಮನುಷ್ಯನನ್ನು ಹಿಡಿದು ಕೊಲ್ಲುವುದರಲ್ಲಿದ್ದರು. ಆದರೆ ಇವನು ರೋಮ್‌ನ ಪ್ರಜೆಯೆಂಬುದು ನನಗೆ ತಿಳಿಯಿತು. ಆದ್ದರಿಂದ ನಾನು ಸೈನಿಕರೊಂದಿಗೆ ಹೋಗಿ ಇವನನ್ನು ಕಾಪಾಡಿದೆನು. 28ಅವರು ಇವನ ಮೇಲೆ ಹೊರಿಸುತ್ತಿರುವ ಆಪಾದನೆಗಳಿಗೆ ಕಾರಣವನ್ನು ತಿಳಿದುಕೊಳ್ಳಲು ನಾನು ನ್ಯಾಯಾಸಭೆಯ ಮುಂದೆ ನಿಲ್ಲಿಸಿದೆ. 29ಅಲ್ಲಿ ನನಗೆ ತಿಳಿದು ಬಂದದ್ದೇನೆಂದರೆ, ಪೌಲನು ದುಷ್ಕಾರ್ಯಗಳನ್ನು ಮಾಡಿದ್ದಾನೆಂದು ಯೆಹೂದ್ಯರು ಹೇಳಿದರೂ ಅವರ ಆಪಾದನೆಗಳು ಅವರ ಸ್ವಂತ ಯೆಹೂದ್ಯಧರ್ಮಶಾಸ್ತ್ರಕ್ಕೆ ಸಂಬಂಧಪಟ್ಟದ್ದಾಗಿದ್ದವು. ಅಲ್ಲದೆ ಇವನನ್ನು ಸೆರೆಮನೆಗಾಗಲಿ ಮರಣದಂಡನೆಗಾಗಲಿ ಗುರಿಪಡಿಸಬಹುದಾದ ಯಾವ ಅಪರಾಧವೂ ಇರಲಿಲ್ಲ. 30 ಆದರೆ ಯೆಹೂದ್ಯರಲ್ಲಿ ಕೆಲವರು ಪೌಲನನ್ನು ಕೊಲ್ಲಲು ಯೋಜನೆ ಮಾಡುತ್ತಿರುವುದು ನನಗೆ ತಿಳಿಯಿತು. ಆದ್ದರಿಂದ ನಾನು ಅವನನ್ನು ನಿನ್ನ ಬಳಿಗೆ ಕಳುಹಿಸಿದ್ದೇನೆ. ಅಲ್ಲದೆ ಅವನ ಮೇಲಿರುವ ದೂರುಗಳನ್ನು ನಿನಗೆ ತಿಳಿಸಬೇಕೆಂದು ನಾನು ಆಪಾದಕರಿಗೂ ಸಹ ತಿಳಿಸಿದ್ದೇನೆ.

31ಸೇನಾಧಿಪತಿಯ ಆಜ್ಞೆಗನುಸಾರವಾಗಿ ಸೈನಿಕರು ಕಾರ್ಯವೆಸಗಿದರು. ಆ ರಾತ್ರಿ ಸೈನಿಕರು ಪೌಲನನ್ನು ಅಂತಿಪತ್ರಿಯ ಎಂಬ ಪಟ್ಟಣಕ್ಕೆ ಕರೆದುಕೊಂಡು ಹೋದರು. 32ಮರುದಿನ ಅಶ್ವದಳದವರು ಪೌಲನೊಂದಿಗೆ ಸೆಜರೇಯ ಪಟ್ಟಣಕ್ಕೆ ಹೋದರು. ಆದರೆ ಉಳಿದ ಸೈನಿಕರು ಮತ್ತು ಭರ್ಜಿದಾರರು ಜೆರುಸಲೇಮಿನ ಸೈನ್ಯದ ಕೋಟೆಗೆ ಹಿಂತಿರುಗಿದರು. 33ಅಶ್ವದಳದವರು ಸೆಜರೇಯ ಪಟ್ಟಣವನ್ನು ಪ್ರವೇಶಿಸಿ, ರಾಜ್ಯಪಾಲನಾದ ಫೇಲಿಕ್ಸನಿಗೆ ಪತ್ರವನ್ನು ಕೊಟ್ಟರು. ಬಳಿಕ ಅವರು ಪೌಲನನ್ನು ಅವನಿಗೆ ಒಪ್ಪಿಸಿದರು. 34ರಾಜ್ಯಪಾಲನು ಪತ್ರವನ್ನು ಓದಿದನು. ಬಳಿಕ ಅವನು ಪೌಲನಿಗೆ, ‘‘ನೀನು ಯಾವ ದೇಶದವನು?’’ ಎಂದು ಕೇಳಿದಾಗ, ಸಿಲಿಸಿಯದವನೆಂಬುದು ತಿಳಿಯಿತು. 35ರಾಜ್ಯಪಾಲನು, ‘‘ನಿನಗೆ ವಿರೋಧವಾಗಿರುವ ಯೆಹೂದ್ಯರು ಇಲ್ಲಿಗೆ ಬಂದಾಗ, ನಾನು ನಿನ್ನ ವಿಚಾರಣೆ ಮಾಡುತ್ತೇನೆ’’ ಎಂದು ಹೇಳಿದನು. ಬಳಿಕ ರಾಜ್ಯಪಾಲನು ಪೌಲನನ್ನು ಅರಮನೆಯೊಳಗೆ ಇರಿಸಬೇಕೆಂದು ಆಜ್ಞಾಪಿಸಿದನು. (ಈ ಕಟ್ಟಡವನ್ನು ಹೆರೋದನು ಕಟ್ಟಿಸಿದ್ದನು.)

### ಪೌಲನ ಮೇಲೆ ಯೆಹೂದ್ಯರ ದೋಷಾರೋಪಣೆ

24 ಐದು ದಿನಗಳನಂತರ, ಪ್ರಧಾನಯಾಜಕ ಅನನೀಯನು ಯೆಹೂದ್ಯರ ಹಿರೀ ನಾಯಕರಲ್ಲಿ ಕೆಲವರನ್ನು ಮತ್ತು ತೆರ್ತುಲ್ಲ ಎಂಬ ವಕೀಲನನ್ನು ಕರೆದುಕೊಂಡು ರಾಜ್ಯಪಾಲನ ಎದುರಿನಲ್ಲಿ ಪೌಲನ ಮೇಲೆ ದೋಷಾರೋಪಣೆ ಮಾಡಲು ಸೆಜರೇಯ ಪಟ್ಟಣಕ್ಕೆ ಹೋದನು. 2ಪೌಲನನ್ನು ಸಭೆಗೆ ಕರೆಸಲಾಯಿತು. ಆಗ ತೆರ್ತುಲ್ಲನು ತನ್ನ ಆಪಾದನೆಗಳನ್ನು ಹೊರಿಸಲಾರಂಭಿಸಿದನು:

‘‘ಮಹಾರಾಜಶ್ರೀಗಳಾದ ಫೇಲಿಕ್ಸನೇ, ನಿನ್ನ ದೆಸೆಯಿಂದಾಗಿ ನಮ್ಮ ಜನರು ಶಾಂತಿಯಿಂದ ಜೀವಿಸುತ್ತಿದ್ದಾರೆ. ನಿನ್ನ ವಿವೇಕದ ಸಹಾಯದಿಂದ ನಮ್ಮ ದೇಶದ ಅನೇಕ ದೋಷಗಳನ್ನು ಸರಿಪಡಿಸಿ ಸುಧಾರಣೆಗಳನ್ನು ಮಾಡಲಾಗಿದೆ. 3ನಾವು ಇವುಗಳನ್ನು ಬಹು ಕೃತಜ್ಞತೆಯಿಂದ ಎಲ್ಲಾ ಸ್ಥಳಗಳಲ್ಲಿ ಯಾವಾಗಲೂ ಒಪ್ಪಿಕೊಳ್ಳುತ್ತೇವೆ. 4ಆದರೆ ನಾನು ನಿನ್ನ ಸಮಯವನ್ನು ಇನ್ನೂ ಹೆಚ್ಚಿಗೆ ತೆಗೆದುಕೊಳ್ಳಬಯಸದೆ, ಕೆಲವೇ ಮಾತುಗಳಲ್ಲಿ ಹೇಳುವೆ. ದಯವಿಟ್ಟು ತಾಳ್ಮೆಯಿಂದಿರು. 5ಈ ಮನುಷ್ಯನು (ಪೌಲನು) ಗಲಭೆ ಮಾಡುತ್ತಿದ್ದಾನೆ. ಯೆಹೂದ್ಯರು ಜಗತ್ತಿನಲ್ಲಿ ಎಲ್ಲೇ ಇರಲಿ, ಅಲ್ಲೆಲ್ಲಾ ಇವನು ಗಲಭೆಯನ್ನು ಎಬ್ಬಿಸುತ್ತಾನೆ. ಇವನು ‘ನಜರೇನ’ ಪಂಗಡದ ನಾಯಕನಾಗಿದ್ದಾನೆ. 6ಅಲ್ಲದೆ, ಇವನು ದೇವಾಲಯವನ್ನು ಅಶುದ್ಧಗೊಳಿಸಲು ಪ್ರಯತ್ನಿಸಿದನು, ಆದರೆ ನಾವು ಇವನನ್ನು ತಡೆದೆವು.* 8ಸ್ವತಃ ನೀನೇ ಇವನಿಗೆ ಕೆಲವು ಪ್ರಶ್ನೆಗಳನ್ನು ಕೇಳು. ಆಗ ಈ ಸಂಗತಿಗಳೆಲ್ಲಾ ಸತ್ಯವಾಗಿವೆಯೋ ಇಲ್ಲವೋ ಎಂದು ನಿರ್ಣಯಿಸಲು ನಿನಗೆ ಸಾಧ್ಯವಾಗುವುದು.’’ 9ಉಳಿದ ಯೆಹೂದ್ಯರು, ‘‘ಈ ಸಂಗತಿಗಳು ನಿಜವಾಗಿಯೂ ಸತ್ಯವಾದುವುಗಳು!’’ ಎಂದರು.

10ರಾಜ್ಯಪಾಲನು ಪೌಲನಿಗೆ ಸನ್ನೆ ಮಾಡಿ, ಮಾತಾಡಲು ಸೂಚಿಸಿದನು. ಆಗ ಪೌಲನು ಇಂತೆಂದನು: ‘‘ರಾಜ್ಯಪಾಲನಾದ ಫೇಲಿಕ್ಸನೇ, ನೀನು ಅನೇಕ ವರ್ಷಗಳಿಂದ ಈ ದೇಶಕ್ಕೆ ನ್ಯಾಯಾಧೀಶನಾಗಿರುವುದು ನನಗೆ ಗೊತ್ತಿದೆ. ಆದ್ದರಿಂದ ಸಂತೋಷದಿಂದ ನಿನ್ನ ಮುಂದೆ ನನ್ನನ್ನು ಪ್ರತಿಪಾದಿಸಿಕೊಳ್ಳುವೆನು. 11ನಾನು ಆರಾಧನೆಗೋಸ್ಕರ ಜೆರುಸಲೇಮಿಗೆ ಹೋದದ್ದು ಕೇವಲ ಹನ್ನೆರಡು ದಿನಗಳ ಹಿಂದೆಯಷ್ಟೇ. ಅದು ಸತ್ಯವೆಂದು ಸ್ವತಃ ನೀನೇ ತಿಳಿದುಕೊಳ್ಳಬಲ್ಲೆ. 12ನಾನು ದೇವಾಲಯದಲ್ಲಾಗಲಿ ಸಭಾಮಂದಿರಗಳಲ್ಲಾಗಲಿ, ಪಟ್ಟಣದಲ್ಲಾಗಲಿ ಯಾರೊಂದಿಗಾದರೂ ವಾದ ಮಾಡುತ್ತಿರುವುದನ್ನು ಇಲ್ಲವೆ ಜನರ ಗುಂಪುಕೂಡಿಸುವುದನ್ನು ಇವರು ನೋಡಿಲ್ಲ. 13ಈಗ ನನಗೆ ವಿರೋಧವಾಗಿ ಹೇಳುತ್ತಿರುವ ಸಂಗತಿಗಳನ್ನು ಈ ಯೆಹೂದ್ಯರು ನಿರೂಪಿಸಲಾರರು. 14ಆದರೆ ನಾನು ನಿನಗೆ

---

**ವಚನ 6–8** ಕೆಲವು ಗ್ರೀಕ್ ಪ್ರತಿಗಳಲ್ಲಿ ಈ ವಾಕ್ಯಗಳನ್ನು ಸೇರಿಸಲಾಗಿದೆ: ವಚನ 7 ಆದರೆ ಅಧಿಕಾರಿಯಾದ ಲೂಸಿಯನು ಬಂದು ಹೆಚ್ಚು ಬಲ ಪ್ರಯೋಗ ಮಾಡಿ ಅವನನ್ನು ನಮ್ಮ ಬಳಿಯಿಂದ ಕೊಂಡೊಯ್ದನು, ಮತ್ತು ನಿನ್ನ ಬಳಿಗೆ ಬಂದು ನಮ್ಮ ಮೇಲೆ ದೂರು ಹೇಳುವಂತೆ ಲೂಸಿಯನು ತನ್ನ ಜನರಿಗೆ ಆಜ್ಞಾಪಿಸಿದ್ದಾನೆ.

ಹೇಳುವುದೇನೆಂದರೆ, ಯೇಸುವಿನ ಮಾರ್ಗದ ಹಿಂಬಾಲಕನಾದ
ನಾನು ನಮ್ಮ ಪಿತೃಗಳ ದೇವರನ್ನು ಆರಾಧಿಸುತ್ತೇನೆ. ಯೇಸುವಿನ
ಮಾರ್ಗವು ಸರಿಯಲ್ಲವೆಂದು ಯೆಹೂದ್ಯರು ಹೇಳುತ್ತಾರೆ.
ಆದರೆ ಮೋಶೆಯ ಧರ್ಮಶಾಸ್ತ್ರದಲ್ಲಿಯೂ ಪ್ರವಾದಿಗಳ ಪುಸ್ತಕ
ಗಳಲ್ಲಿಯೂ ಬರೆದಿರುವ ಪ್ರತಿಯೊಂದನ್ನು ನಾನು ನಂಬುತ್ತೇನೆ.
15ಈ ಯೆಹೂದ್ಯರಿಗೆ ದೇವರಲ್ಲಿ ಯಾವ ನಿರೀಕ್ಷೆಯಿದೆಯೋ
ಅದೇ ನಿರೀಕ್ಷೆ ನನಗೂ ಇದೆ. ನೀತಿವಂತರಿಗೂ ಅನೀತಿವಂತ
ರಿಗೂ ಪುನರುತ್ಥಾನವಾಗುತ್ತದೆ ಎಂಬುದೇ ಆ ನಿರೀಕ್ಷೆ. 16ಈ
ಕಾರಣದಿಂದ ನಾನು ಯಾವುದನ್ನು ಸರಿಯಾದದ್ದು ಎಂದು
ನಂಬಿದ್ದೇನೊ ಅದನ್ನು ದೇವರ ಮುಂದೆಯೂ ಮನುಷ್ಯರ
ಮುಂದೆಯೂ ಮಾಡಲು ಯಾವಾಗಲು ಪ್ರಯತ್ನಿಸುತ್ತಿದ್ದೇನೆ.

17“ನಾನು ಅನೇಕ ವರ್ಷಗಳಿಂದ ಜೆರುಸಲೇಮಿನಲ್ಲಿ
ಇರಲಿಲ್ಲ. ಬಳಿಕ ನಾನು ನನ್ನ ಜನರಿಗಾಗಿ ಹಣವನ್ನು ತರುವುದ
ಕ್ಕಾಗಿಯೂ ಉಡುಗೊರೆಗಳನ್ನು ಕೊಡುವುದಕ್ಕಾಗಿಯೂ
ಜೆರುಸಲೇಮಿಗೆ ಮರಳಿ ಹೋದೆನು. 18ನಾನು ಈ ಕಾರ್ಯದಲ್ಲಿ
ನಿರತನಾಗಿದ್ದಾಗ ಕೆಲವು ಮಂದಿ ಯೆಹೂದ್ಯರು ನನ್ನನ್ನು
ದೇವಾಲಯದಲ್ಲಿ ಕಂಡರು. ನಾನು ಶುದ್ಧಾಚಾರದ ವಿಧಿಯನ್ನು
ಮುಗಿಸಿದ್ದೆನು. ನಾನು ಯಾವ ಗಲಭೆಯನ್ನೂ ಮಾಡಿರಲಿಲ್ಲ.
ನನ್ನ ಸುತ್ತಲೂ ಯಾವ ಜನರೂ ಇರಲಿಲ್ಲ. 19ಆದರೆ ಏಷ್ಯಾದ
ಕೆಲವು ಮಂದಿ ಯೆಹೂದ್ಯರು ಅಲ್ಲಿದ್ದರು. ಅವರು ಈಗ ನಿನ್ನೆದು
ರಿನಲ್ಲಿ ಇರಬೇಕಿತ್ತು. ನಾನು ನಿಜವಾಗಿ ಏನಾದರೂ ತಪ್ಪು
ಮಾಡಿದ್ದರೆ ಏಷ್ಯಾದ ಆ ಯೆಹೂದ್ಯರೇ ನನ್ನ ಮೇಲೆ ದೋಷಾ
ರೋಪಣೆ ಮಾಡಬೇಕಿತ್ತು. 20ನಾನು ಜೆರುಸಲೇಮಿನಲ್ಲಿ
ಯೆಹೂದ್ಯ ನ್ಯಾಯಸಭೆಯ ಮುಂದೆ ನಿಂತಿದ್ದಾಗ, ನನ್ನಲ್ಲಿ
ಅವರಿಗೆ ಯಾವ ಅಪರಾಧಗಳು ಕಂಡುಬಂದವೆಂದು ಇಲ್ಲಿರುವ
ಈ ಯೆಹೂದ್ಯರನ್ನೇ ಕೇಳು. 21ನಾನು ಅವರ ಮುಂದೆ ನಿಂತಿ
ದ್ದಾಗ, ‘ಸತ್ತವರು ಪುನರುತ್ಥಾನ ಹೊಂದುತ್ತಾರೆಂದು ನಾನು
ನಂಬುವುದರಿಂದ ಇಲ್ಲಿ ನ್ಯಾಯವಿಚಾರಣೆಗೆ ಗುರಿಯಾಗಿದ್ದೇನೆ!
ಎಂಬ ಒಂದೇ ಒಂದು ಸಂಗತಿಯನ್ನು ನಾನು ಕೂಗಿಹೇಳಿದೆ.”

22ಫೇಲಿಕ್ಸನು ಯೇಸುವಿನ ಮಾರ್ಗದ ಬಗ್ಗೆ ಮೊದಲೇ
ಸಾಕಷ್ಟು ಅರ್ಥಮಾಡಿಕೊಂಡಿದ್ದನು. ಅವನು ವಿಚಾರಣೆಯನ್ನು
ನಿಲ್ಲಿಸಿ, “ಸೇನಾಧಿಪತಿಯಾದ ಲೂಸಿಯನು ಇಲ್ಲಿಗೆ ಬಂದಾಗ,
ಈ ಸಂಗತಿಗಳ ಬಗ್ಗೆ ನಾನು ತೀರ್ಪನ್ನು ಕೊಡುತ್ತೇನೆ” ಎಂದು
ಹೇಳಿದನು. 23ಪೌಲನನ್ನು ಕಾವಲಿನಲ್ಲಿರಿಸಬೇಕೆಂದು ಫೇಲಿ
ಕ್ಸನು ಸೇನಾಧಿಕಾರಿಗೆ ತಿಳಿಸಿದನು. ಆದರೆ ಪೌಲನಿಗೆ ಸ್ವಲ್ಪ
ಸ್ವತಂತ್ರವನ್ನು ಕೊಡುವಂತೆಯೂ ಪೌಲನ ಮಿತ್ರರು ಅವನಿಗೆ
ಅಗತ್ಯವಾದ ವಸ್ತುಗಳನ್ನು ತಂದುಕೊಡುವುದಕ್ಕೆ ಅವಕಾಶಕೊಡ
ಬೇಕೆಂತಲೂ ಅವನು ಅಧಿಕಾರಿಗೆ ಹೇಳಿದನು.

### ಫೇಲಿಕ್ಸ ಮತ್ತು ಅವನ ಪತ್ನಿಯ ಮುಂದೆ ಪೌಲನು

24ಕೆಲವು ದಿನಗಳಾದ ಮೇಲೆ ಫೇಲಿಕ್ಸನು ತನ್ನ ಹೆಂಡತಿ
ಯಾದ ದ್ರೂಸಿಲ್ಲಳೊಂದಿಗೆ ಬಂದನು. ಆಕೆ ಯೆಹೂದ್ಯಳು.
ಫೇಲಿಕ್ಸನು ಪೌಲನನ್ನು ಕರೆಯಿಸಿದನು. ಕ್ರಿಸ್ತನಾದ ಯೇಸುವಿ
ನಲ್ಲಿ ನಂಬಿಕೆ ಇಡುವುದರ ಬಗ್ಗೆ ಪೌಲನು ಹೇಳಿದ್ದನ್ನು ಅವನು
ಆಲಿಸಿದನು. 25ಆದರೆ ನೀತಿಯ ಬಾಳ್ವೆ, ಇಂದ್ರಿಯ ನಿಗ್ರಹ
ಮತ್ತು ಮುಂದೆ ಬರಲಿರುವ ನ್ಯಾಯತೀರ್ಪುಗಳ ಬಗ್ಗೆ ಪೌಲನು
ಮಾತಾಡಿದಾಗ ಅವನು ಭಯಗೊಂಡು, “ಈಗ ನೀನು
ಹೋಗು! ನನಗೆ ಹೆಚ್ಚು ಸಮಯವಿರುವಾಗ ನಿನ್ನನ್ನು ಕರೆಯಿಸು
ತ್ತೇನೆ” ಎಂದು ಹೇಳಿದನು. 26ಆದರೆ ಪೌಲನು ಲಂಚ ಕೊಡ
ಬಹುದೆಂದು ಅವನು ನಿರೀಕ್ಷಿಸಿಕೊಂಡಿದ್ದರಿಂದ ಅವನು ಅನೇಕ
ಸಲ ಪೌಲನನ್ನು ಕರೆಯಿಸಿ ಅವನೊಂದಿಗೆ ಮಾತಾಡಿದನು.

27ಆದರೆ ಎರಡು ವರ್ಷಗಳ ನಂತರ ಫೇಲಿಕ್ಸನ ಬದಲಾಗಿ
ಪೊರ್ಸಿಯ ಫೆಸ್ತನು ರಾಜ್ಯಪಾಲನಾದನು. ಆದರೆ ಫೇಲಿಕ್ಸನು
ಯೆಹೂದ್ಯರನ್ನು ಮೆಚ್ಚಿಸುವುದಕ್ಕಾಗಿ ಪೌಲನನ್ನು ಸೆರೆಮನೆ
ಯಲ್ಲಿಯೇ ಬಿಟ್ಟು ಹೋದನು.

### ಸೀಸರನನ್ನು ಕಾಣಲು ಪೌಲನು ಮಾಡಿದ ಮನವಿ

25 ಫೆಸ್ತನು ರಾಜ್ಯಪಾಲನಾಗಿ ಮೂರು ದಿನಗಳಾದ
ಮೇಲೆ ಸೆಜರೇಯದಿಂದ ಜೆರುಸಲೇಮಿಗೆ
ಹೋದನು. 2ಮಹಾಯಾಜಕರು ಮತ್ತು ಪ್ರಮುಖ ಯೆಹೂದ್ಯ
ನಾಯಕರು ಫೆಸ್ತನ ಎದುರಿನಲ್ಲಿ ಪೌಲನಿಗೆ ವಿರೋಧವಾಗಿ
ದೋಷಾರೋಪಣೆಗಳನ್ನು ಹೇಳಿದರು. 3ಅಲ್ಲದೆ ಪೌಲನನ್ನು
ಜೆರುಸಲೇಮಿಗೆ ಮರಳಿ ಕಳುಹಿಸಿಕೊಡಬೇಕೆಂದು ಅವರು
ಫೆಸ್ತನನ್ನು ಕೇಳಿಕೊಂಡರು. ಅವರು ಪೌಲನನ್ನು ಮಾರ್ಗದಲ್ಲೇ
ಕೊಲ್ಲಬೇಕೆಂಬ ಯೋಜನೆ ಮಾಡಿಕೊಂಡಿದ್ದರು. 4ಆದರೆ
ಫೆಸ್ತನು, “ಇಲ್ಲ! ಪೌಲನನ್ನು ಸೆಜರೇಯದಲ್ಲೇ ಇರಿಸಲಾಗು
ವುದು. ನಾನೇ ಅಲ್ಲಿಗೆ ಬೇಗ ಹೋಗಲಿದ್ದೇನೆ. 5ನಿಮ್ಮ ನಾಯಕ
ರಲ್ಲಿ ಕೆಲವರು ನನ್ನೊಂದಿಗೆ ಬರಲಿ. ಅವನು ನಿಜವಾಗಿಯೂ
ಅಪರಾಧ ಮಾಡಿದ್ದರೆ ಅವನ ಮೇಲೆ ಸೆಜರೇಯದಲ್ಲೇ ಅವರು
ದೋಷಾರೋಷಣೆ ಮಾಡಲಿ” ಎಂದು ಉತ್ತರ ಕೊಟ್ಟನು.

6ಫೆಸ್ತನು ಇನ್ನೂ ಎಂಟು-ಹತ್ತು ದಿನಗಳವರೆಗೆ ಜೆರುಸ
ಲೇಮಿನಲ್ಲಿ ಇದ್ದನು. ಬಳಿಕ ಅವನು ಸೆಜರೇಯಕ್ಕೆ ಹಿಂತಿ
ರುಗಿದನು. ಮರುದಿನ ಅವನು ಸೈನಿಕರಿಗೆ ಪೌಲನನ್ನು ತನ್ನ
ಮುಂದೆ ಕರೆದುಕೊಂಡು ಬರಬೇಕೆಂದು ತಿಳಿಸಿದನು. ಫೆಸ್ತನು
ನ್ಯಾಯಾಸ್ಥಾನದ ಮೇಲೆ ಕುಳಿತುಕೊಂಡಿದ್ದನು. 7ಪೌಲನು
ನ್ಯಾಯಾಲಯದೊಳಗೆ ಬಂದನು. ಜೆರುಸಲೇಮಿನಿಂದ
ಬಂದಿದ್ದ ಯೆಹೂದ್ಯರು ಅವನ ಸುತ್ತಲೂ ನಿಂತುಕೊಂಡು ಅವನ
ಮೇಲೆ ಅನೇಕ ದೋಷಾರೋಪಗಳನ್ನು ಮಾಡಿದರು. ಆದರೆ
ಅವುಗಳಲ್ಲಿ ಯಾವುದಕ್ಕೂ ಆಧಾರವಿರಲಿಲ್ಲ. 8ಪೌಲನು
ಪ್ರತಿವಾದ ಮಾಡುತ್ತಾ, “ನಾನು ಯೆಹೂದ್ಯರ ಧರ್ಮಶಾಸ್ತ್ರಕ್ಕೆ
ವಿರುದ್ಧವಾಗಲಿ ದೇವಾಲಯಕ್ಕೆ ವಿರುದ್ಧವಾಗಲಿ ಸೀಸರನಿಗೆ
ವಿರುದ್ಧವಾಗಲಿ ಯಾವ ತಪ್ಪನ್ನೂ ಮಾಡಿಲ್ಲ” ಎಂದು ಹೇಳಿ
ದನು. 9ಆದರೆ ಫೆಸ್ತನು ಯೆಹೂದ್ಯರ ಮೆಚ್ಚಿಕೆಗಳಿಸಿಕೊಳ್ಳ
ಬೇಕೆಂದಿದ್ದನು. ಆದ್ದರಿಂದ ಅವನು ಪೌಲನಿಗೆ, “ನೀನು ಜೆರುಸ
ಲೇಮಿಗೆ ಹೋಗ ಬಯಸುವೆಯಾ? ಈ ದೋಷಾರೋಪಣೆಗಳ
ಕುರಿತು ನಾನು ಅಲ್ಲಿಯೇ ನಿನಗೆ ತೀರ್ಪುಮಾಡಬೇಕೆಂದು
ಅಪೇಕ್ಷಿಸುವಿಯಾ?” ಎಂದು ಕೇಳಿದನು.

10-11ಪೌಲನು, “ಈಗ ನಾನು ಸೀಸರನ ನ್ಯಾಯಾಸ್ಥಾನದ
ಮುಂದೆ ನಿಂತಿದ್ದೇನೆ. ನನಗೆ ತೀರ್ಪಾಗಬೇಕಾದದ್ದು ಇಲ್ಲಿಯೇ!
ನಾನು ಯೆಹೂದ್ಯರಿಗೆ ಯಾವ ಅಪರಾಧವನ್ನೂ ಮಾಡಿಲ್ಲ.
ಇದು ಸತ್ಯವೆಂದು ನಿನಗೆ ಗೊತ್ತಿದೆ. ‘ನಾನು ಅಪರಾಧಿಯಾಗಿದ್ದು
ಧರ್ಮಶಾಸ್ತ್ರವು ನನಗೆ ಮರಣದಂಡನೆ ವಿಧಿಸಿದರೆ, ನಾನು ಆ
ತೀರ್ಪನ್ನು ಒಪ್ಪಿಕೊಳ್ಳುತ್ತೇನೆ. ಆದರೆ ಇವರ ದೋಷಾರೋಪಣೆ
ಗಳು ಸತ್ಯವಾಗಿಲ್ಲದಿದ್ದರೆ, ನನ್ನನ್ನು ಇವರ ಕೈಗೆ ಒಪ್ಪಿಸಲು

ಯಾರಿಗೂ ಸಾಧ್ಯವಿಲ್ಲ! ನನ್ನ ವಿಷಯವನ್ನು ಸೀಸರನೇ
ಪರಿಶೀಲಿಸಲಿ!'' ಎಂದನು.

12 ಫೆಸ್ತನು ತನ್ನ ಸಲಹೆಗಾರರೊಂದಿಗೆ ಇದರ ಬಗ್ಗೆ ಮಾತಾಡಿ
ದನು. ಬಳಿಕ ಅವನು,''ನನ್ನ ವಿಷಯವನ್ನು ಸೀಸರನೇ ಪರಿಶೀಲಿ
ಸಲಿ'' ಎಂದು ನೀನು ಕೇಳಿಕೊಂಡದ್ದರಿಂದ ನಿನ್ನನ್ನು ಸೀಸರನ
ಬಳಿಗೇ ಕಳುಹಿಸಿಕೊಡುತ್ತೇನೆ'' ಎಂದನು.

### ಹೆರೋದ ಅಗ್ರಿಪ್ಪನ ಮುಂದೆ ಪೌಲನು

13 ಕೆಲವು ದಿನಗಳಾದ ಮೇಲೆ ರಾಜ ಅಗ್ರಿಪ್ಪನು ಮತ್ತು
ಬೆರ್ನಿಕೆರಾಣಿ ಫೆಸ್ತನನ್ನು ವಂದಿಸಲು ಸೆಜರೇಯಕ್ಕೆ ಬಂದರು.
14 ಅವರು ಅಲ್ಲಿ ಅನೇಕ ದಿನಗಳವರೆಗೆ ಇದ್ದರು. ಫೆಸ್ತನು ಪೌಲನ
ವ್ಯಾಜ್ಯದ ಬಗ್ಗೆ ರಾಜನಿಗೆ ಈ ರೀತಿ ತಿಳಿಸಿದನು: ''ಫೇಲಿಕ್ಸನು
ಸೆರೆಮನೆಯಲ್ಲೇ ಬಿಟ್ಟುಹೋದ ಒಬ್ಬ ವ್ಯಕ್ತಿ ಇದ್ದಾನೆ. 15 ನಾನು
ಜೆರುಸಲೇಮಿಗೆ ಹೋಗಿದ್ದಾಗ ಮಹಾಯಾಜಕರು ಮತ್ತು
ಯೆಹೂದ್ಯ ಹಿರಿಯ ನಾಯಕರು ಅವನಿಗೆ ವಿರೋಧವಾಗಿ
ದೋಷಾರೋಪಣೆ ಮಾಡಿದರು. ನಾನು ಅವನಿಗೆ ಮರಣ
ದಂಡನೆ ವಿಧಿಸಬೇಕೆಂಬುದು ಈ ಯೆಹೂದ್ಯರ ಅಪೇಕ್ಷೆ
ಯಾಗಿತ್ತು. 16 ಆದರೆ ನಾನು, 'ದೋಷಾರೋಪಣೆ ಹೊರಿಸಲ್ಪ
ಟ್ಟಿರುವ ವ್ಯಕ್ತಿಯನ್ನು ತೀರ್ಪಿಗಾಗಿ ಬೇರೆಯವರಿಗೆ ಒಪ್ಪಿಸುವುದು
ರೋಮ್‌ನವರ ಪದ್ಧತಿಯಲ್ಲ. ಮೊದಲನೆಯದಾಗಿ, ಅವನು
ತನ್ನ ಮೇಲೆ ದೋಷಾರೋಪಣೆ ಮಾಡುತ್ತಿರುವವರನ್ನು
ಮುಖಾಮುಖಿಯಾಗಿ ಸಂಧಿಸಿ ಅವರ ದೋಷಾರೋಪಣೆಗಳಿಗೆ
ವಿರೋಧವಾಗಿ ತನ್ನನ್ನು ಪ್ರತಿಪಾದಿಸಿಕೊಳ್ಳಲು ಅವಕಾಶ
ಕೊಡಲೇಬೇಕು' ಎಂದು ಹೇಳಿದೆನು. 17 ಆದ್ದರಿಂದ ಅವರು
ಇಲ್ಲಿಗೆ ಬಂದಾಗ, ನಾನು ತಡಮಾಡದೆ ಮರುದಿನವೇ ನ್ಯಾಯಾ
ಸ್ಥಾನದಲ್ಲಿ ಕುಳಿತು ಆ ಮನುಷ್ಯನನ್ನು (ಪೌಲನನ್ನು) ಒಳಗೆ
ಕರೆದುಕೊಂಡು ಬರಬೇಕೆಂದು ಆಜ್ಞಾಪಿಸಿದೆನು. 18 ಯೆಹೂ
ದ್ಯರು ನಿಂತುಕೊಂಡು ಅವನ ಮೇಲೆ ದೋಷಾರೋಪಣೆ
ಗಳನ್ನು ಹೊರಿಸಿದರು. ಆದರೆ ನಾನು ಯೋಚಿಸಿದ ಪ್ರಕಾರ
ಯೆಹೂದ್ಯರು ಅವನ ಮೇಲೆ ಯಾವ ಕೆಟ್ಟ ಅಪರಾಧವನ್ನಾಗಲಿ
ಹೊರಿಸಲಿಲ್ಲ. 19 ಅವರು ಹೇಳಿದ ಸಂಗತಿಗಳು ಅವರ ಸ್ವಂತ
ಧರ್ಮಕ್ಕೆ ಸಂಬಂಧಪಟ್ಟಿದ್ದವು ಮತ್ತು ಯೇಸು ಎಂಬ
ವ್ಯಕ್ತಿಯನ್ನು ಕುರಿತದ್ದಾಗಿದ್ದವು. ಸತ್ತುಹೋದ ಯೇಸು ಈಗ
ಜೀವಂತವಾಗಿದ್ದಾನೆಂದು ಪೌಲನು ಹೇಳಿದನು. 20 ಈ ಸಂಗತಿ
ಗಳ ಬಗ್ಗೆ ನನಗೆ ಹೆಚ್ಚಿಗೆ ತಿಳಿದಿರಲಿಲ್ಲ. ಆದ್ದರಿಂದ ನಾನು ಪ್ರಶ್ನೆ
ಗಳನ್ನು ಕೇಳಲಿಲ್ಲ. ಆದರೆ ನಾನು ಪೌಲನಿಗೆ, 'ನೀನು
ಜೆರುಸಲೇಮಿಗೆ ಹೋಗಿ ಅಲ್ಲೇ ನ್ಯಾಯತೀರ್ಪು ಹೊಂದಲು
ಬಯಸುವೆಯಾ?' ಎಂದು ಕೇಳಿದೆನು. 21 ಅದಕ್ಕೆ ಅವನು,
'ಚಕ್ರವರ್ತಿಯೇ (ಸೀಸರನೇ) ನನ್ನ ವಾದವನ್ನು ತೀರ್ಮಾನಿಸಲಿ.
ಅಲ್ಲಿಯವರೆಗೆ ನನ್ನನ್ನು ಸಂರಕ್ಷಿಸಬೇಕು' ಎಂದು ಕೇಳಿ
ಕೊಂಡನು. ಆದ್ದರಿಂದ ರೋಮಿನಲ್ಲಿರುವ ಚಕ್ರವರ್ತಿಯ
ಬಳಿಗೆ ಕಳುಹಿಸುವ ತನಕ ಅವನನ್ನು ಕಾವಲಿನಲ್ಲಿರಿಸಬೇಕೆಂದು
ಆಜ್ಞಾಪಿಸಿದೆನು.''

22 ಅಗ್ರಿಪ್ಪನು ಫೆಸ್ತನಿಗೆ, ''ಈ ಮನುಷ್ಯನು ಹೇಳುವುದನ್ನು
ಕೇಳುವುದಕ್ಕೆ ನನಗೂ ಇಷ್ಟವಿದೆ'' ಎಂದು ಹೇಳಿದನು.

ಫೆಸ್ತನು, ''ಅವನು ಹೇಳುವುದನ್ನು ನೀನು ನಾಳೆ ಕೇಳ
ಬಹುದು!'' ಎಂದು ಹೇಳಿದನು.

23 ಮರುದಿನ ಅಗ್ರಿಪ್ಪ ರಾಜ ಮತ್ತು ಬೆರ್ನಿಕೆರಾಣಿ ವೈಭವದ
ಬಟ್ಟೆಗಳನ್ನು ಧರಿಸಿಕೊಂಡು ಸೇನಾಧಿಕಾರಿಗಳೊಡನೆ ಹಾಗೂ
ಸೆಜರೇಯದ ಪ್ರಮುಖರೊಡನೆ ನ್ಯಾಯಾಲಯದೊಳಗೆ
ಬಂದರು. ಪೌಲನನ್ನು ಒಳಗೆ ಕರೆದುಕೊಂಡು ಬರಬೇಕೆಂದು
ಫೆಸ್ತನು ಸೈನಿಕರಿಗೆ ಆಜ್ಞಾಪಿಸಿದನು. 24 ಫೆಸ್ತನು ಇಂತೆಂದನು:
''ರಾಜ ಅಗ್ರಿಪ್ಪನೇ, ನಮ್ಮೊಂದಿಗೆ ಇಲ್ಲಿ ನೆರೆದಿರುವ ಎಲ್ಲಾ
ಜನರೇ, ನೀವು ನೋಡುತ್ತಿರುವ ಈ ಮನುಷ್ಯನ(ಪೌಲನ)
ಮೇಲೆ ಇಲ್ಲಿರುವ ಮತ್ತು ಜೆರುಸಲೇಮಿನಲ್ಲಿರುವ ಎಲ್ಲಾ
ಯೆಹೂದ್ಯರು ನನಗೆ ದೂರುಗಳನ್ನು ಹೇಳಿ, ಇವನಿಗೆ ಮರಣ
ದಂಡನೆ ಆಗಬೇಕೆಂದು ಆರ್ಭಟಿಸಿದರು. 25 ನಾನು ಇವನನ್ನು
ವಿಚಾರಣೆ ಮಾಡಿದಾಗ ಇವನಲ್ಲಿ ನನಗೆ ಯಾವ ತಪ್ಪೂ ಕಾಣ
ಲಿಲ್ಲ. ಆದರೆ ಸೀಸರನಿಂದಲೇ ತನಗೆ ನ್ಯಾಯತೀರ್ಪಾಗ
ಬೇಕೆಂದು ಇವನು ಕೇಳಿಕೊಂಡಿದ್ದಾನೆ. ಆದ್ದರಿಂದ ಇವನನ್ನು
ರೋಮಿಗೆ ಕಳುಹಿಸಲು ನಾನು ತೀರ್ಮಾನಿಸಿದೆ. 26 ಆದರೆ ಇವನ
ವಿಷಯದಲ್ಲಿ ಸೀಸರನಿಗೆ ಬರೆಯಲು ನಿರ್ದಿಷ್ಟವಾದ ಅಪರಾಧ
ವೇನೂ ನನಗೆ ತೋರುತ್ತಿಲ್ಲ. ಆದ್ದರಿಂದ ನಾನು ಇವನನ್ನು
ನಿಮ್ಮೆಲ್ಲರ ಮುಂದೆಯೂ ವಿಶೇಷವಾಗಿ ರಾಜನಾದ ಅಗ್ರಿಪ್ಪನ
ಮುಂದೆಯೂ ತಂದಿದ್ದೇನೆ. ಆದ್ದರಿಂದ ನೀವು ಇವನನ್ನು ಪ್ರಶ್ನಿಸಿ
ಇವನ ಬಗ್ಗೆ ಸೀಸರನಿಗೆ ಬರೆಯಲು ಏನಾದರೂ ವಿಷಯವನ್ನು
ಕೊಡಬಲ್ಲಿರೆಂದು ನಿರೀಕ್ಷಿಸುತ್ತೇನೆ. 27 ನಾನು ಯೋಚಿಸುವಂತೆ,
ಒಬ್ಬ ಕೈದಿಯ ವಿರುದ್ಧವಿರುವ ದೋಷಾರೋಪಣೆಗಳನ್ನು
ಸ್ಪಷ್ಟಪಡಿಸದೆ ಅವನನ್ನು ಸೀಸರನ ಬಳಿಗೆ ಕಳುಹಿಸುವುದು
ಮೂರ್ಖತನವಾಗಿದೆ.''

### ರಾಜ ಅಗ್ರಿಪ್ಪನ ಮುಂದೆ ಪೌಲನು

26 ಅಗ್ರಿಪ್ಪನು ಪೌಲನಿಗೆ,''ಈಗ ನೀನು ನಿನ್ನ ಪರವಾಗಿ
ಮಾತಾಡಬಹುದು'' ಎಂದು ಹೇಳಿದನು. ಆಗ
ಪೌಲನು ತನ್ನ ಕೈಯೆತ್ತಿ ಮಾತಾಡಲಾರಂಭಿಸಿ ಇಂತೆಂದನು:
2 ''ರಾಜನಾದ ಅಗ್ರಿಪ್ಪನೇ, ಯೆಹೂದ್ಯರು ನನ್ನ ಮೇಲೆ ಹೊರಿಸು
ತ್ತಿರುವ ಆಪಾದನೆಗಳಿಗೆಲ್ಲಾ ನಾನು ಉತ್ತರಕೊಡುವೆನು. ಇಂದು
ನಿನ್ನ ಮುಂದೆ ನಿಂತುಕೊಂಡು ಪ್ರತಿವಾದ ಮಾಡುವ ಅವಕಾಶ
ದೊರೆತಿರುವುದು ನನ್ನ ಭಾಗ್ಯವೆಂದೇ ಎಣಿಸುತ್ತೇನೆ. 3 ನಾನು
ನಿನ್ನೊಂದಿಗೆ ಮಾತಾಡಲು ಬಹು ಸಂತೋಷಪಡುತ್ತೇನೆ.
ಯಾಕೆಂದರೆ, ಯೆಹೂದ್ಯರ ಎಲ್ಲಾ ಸಂಪ್ರದಾಯಗಳ ಬಗ್ಗೆ
ಮತ್ತು ಯೆಹೂದ್ಯರು ವಾದಿಸುತ್ತಿರುವ ಸಂಗತಿಗಳ ಬಗ್ಗೆ ನಿನಗೆ
ಚೆನ್ನಾಗಿ ಗೊತ್ತಿದೆ. ಆದ್ದರಿಂದ ದಯವಿಟ್ಟು ನನ್ನ ಮಾತುಗಳನ್ನು
ತಾಳ್ಮೆಯಿಂದ ಆಲಿಸು.

4 ''ನನ್ನ ಇಡೀ ಜೀವಮಾನದ ಬಗ್ಗೆ ಎಲ್ಲಾ ಯೆಹೂದ್ಯರಿಗೆ
ಗೊತ್ತಿದೆ. ನಾನು ಆರಂಭದಿಂದ ನನ್ನ ಸ್ವದೇಶದಲ್ಲಿಯೂ
ಅನಂತರ ಜೆರುಸಲೇಮಿನಲ್ಲಿಯೂ ಜೀವಿಸಿದ ರೀತಿಯನ್ನು
ಅವರು ಬಲ್ಲರು. 5 ಈ ಯೆಹೂದ್ಯರು ಬಹುಕಾಲದಿಂದಲೂ
ನನ್ನನ್ನು ತಿಳಿದಿದ್ದಾರೆ. ನೀನು ಅವರನ್ನು ಕೇಳುವುದಾದರೆ, ನಾನು
ಒಳ್ಳೆಯ ಫರಿಸಾಯನಾಗಿದ್ದೆನೆಂದು ಅವರು ನಿನಗೆ ಹೇಳ
ಬಲ್ಲರು. ಯೆಹೂದ್ಯರ ಇತರ ಯಾವುದೇ ಪಂಗಡಗಳಿಗಿಂತಲೂ
ಹೆಚ್ಚು ಎಚ್ಚರಿಕೆಯಿಂದ ಫರಿಸಾಯರು ಯೆಹೂದ್ಯ ಧರ್ಮದ
ಕಟ್ಟಳೆಗಳಿಗೆ ವಿಧೇಯರಾಗುತ್ತಾರೆ. 6 ದೇವರು ನಮ್ಮ ಪಿತೃಗಳಿಗೆ
ಮಾಡಿದ ವಾಗ್ದಾನವನ್ನು ನಾನು ನಿರೀಕ್ಷಿಸಿಕೊಂಡಿರುವುದ

ರಿಂದಲೇ ಈಗ ವಿಚಾರಣೆಗೆ ಗುರಿಯಾಗಿದ್ದೇನೆ. [7]ಈ ವಾಗ್ದಾನವು ಖಂಡಿತವಾಗಿ ನೆರವೇರುತ್ತದೆ ಎಂದು ಹನ್ನೆರಡು ಕುಲಗಳ ನಮ್ಮ ಜನರು ನಿರೀಕ್ಷಿಸಿಕೊಂಡಿದ್ದಾರೆ. ಯೆಹೂದ್ಯರು ಹಗಲಿರುಳು ದೇವರ ಸೇವೆ ಮಾಡುತ್ತಿರುವುದು ಈ ನಿರೀಕ್ಷೆಯಿಂದಲೇ. ನಾನು ಸಹ ಇದೇ ನಿರೀಕ್ಷೆಯನ್ನು ಹೊಂದಿರುವುದರಿಂದ ಇವರು ನನ್ನ ಮೇಲೆ ಆಪಾದನೆಗಳನ್ನು ಹೊರಿಸಿದ್ದಾರೆ! [8]ಸತ್ತವರನ್ನು ದೇವರು ಜೀವಂತವಾಗಿ ಎಬ್ಬಿಸುತ್ತಾನೆ ಎಂಬುದು ನಂಬತಕ್ಕದ್ದಲ್ಲವೆಂದು ನೀವು ಭಾವಿಸಿಕೊಂಡಿರುವುದೇಕೆ?

[9]“ನಾನು ಫರಿಸಾಯನಾಗಿದ್ದಾಗ ನಜರೇತಿನ ಯೇಸುವಿನ ಹೆಸರಿಗೆ ವಿರೋಧವಾಗಿ ಅನೇಕ ಕಾರ್ಯಗಳನ್ನು ಮಾಡಬೇಕೆಂದು ಆಲೋಚಿಸಿಕೊಂಡೆನು. [10]ಜೆರುಸಲೇಮಿನಲ್ಲಿ ವಿಶ್ವಾಸಿಗಳ ವಿರೋಧವಾಗಿ ಅನೇಕ ಕಾರ್ಯಗಳನ್ನು ಮಾಡಿದೆ. ಈ ವಿಶ್ವಾಸಿಗಳಲ್ಲಿ ಅನೇಕರನ್ನು ಸೆರೆಮನೆಗೆ ಹಾಕಲು ಮಹಾಯಾಜಕರು ನನಗೆ ಅಧಿಕಾರವನ್ನು ಕೊಟ್ಟರು. ಯೇಸುವಿನ ಶಿಷ್ಯರನ್ನು ಕೊಂದಾಗ ಅದಕ್ಕೆ ನಾನೂ ನನ್ನ ಸಮ್ಮತಿಯನ್ನು ಸೂಚಿಸಿದೆ. [11]ಪ್ರತಿಯೊಂದು ಸಭಾಮಂದಿರದಲ್ಲಿಯೂ ನಾನು ಅವರನ್ನು ದಂಡಿಸಿದೆನು. ಯೇಸುವಿನ ವಿರುದ್ಧ ದೂಷಣೆಯ ಮಾತುಗಳನ್ನು ಅವರ ಬಾಯಿಂದ ಹೊರಡಿಸಲು ನಾನು ಪ್ರಯತ್ನಿಸಿದೆನು. ಆ ವಿಶ್ವಾಸಿಗಳ ಮೇಲೆ ಬಹುಕೋಪವುಳ್ಳವನಾಗಿದ್ದು ಅವರನ್ನು ಹುಡುಕಿಹುಡುಕಿ ಹಿಂಸಿಸುವುದಕ್ಕಾಗಿ ವಿದೇಶದ ಪಟ್ಟಣಗಳಿಗೂ ಹೋದೆನು.

### ತನಗಾದ ದರ್ಶನದ ಬಗ್ಗೆ ಪೌಲನ ಸಾಕ್ಷಿ

[12]“ಒಂದು ಸಲ, ದಮಸ್ಕ ಪಟ್ಟಣಕ್ಕೆ ಹೋಗಲು ಮಹಾಯಾಜಕರು ನನಗೆ ಅಪ್ಪಣೆಯನ್ನೂ ಅಧಿಕಾರವನ್ನೂ ಕೊಟ್ಟರು. [13]ನಾನು ದಮಸ್ಕದ ದಾರಿಯಲ್ಲಿ ಹೋಗುತ್ತಿದ್ದೆನು. ಆಗ ಮಧ್ಯಾಹ್ನವಾಗಿತ್ತು. ಇದ್ದಕ್ಕಿದ್ದಂತೆ ಆಗ ಆಕಾಶದಿಂದ ಸೂರ್ಯನಿಗಿಂತಲೂ ಪ್ರಕಾಶಮಾನವಾದ ಬೆಳಕೊಂದು ಬಂದು ನನ್ನ ಸುತ್ತಲೂ ಮತ್ತು ನನ್ನೊಂದಿಗೆ ಪ್ರಯಾಣ ಮಾಡುತ್ತಿದ್ದವರ ಸುತ್ತಲೂ ಪ್ರಜ್ವಲಿಸಿತು. [14]ನಾವೆಲ್ಲರೂ ನೆಲಕ್ಕೆ ಬಿದ್ದೆವು. ಆಗ ವಾಣಿಯೊಂದು ಯೆಹೂದ್ಯರ ಭಾಷೆಯಲ್ಲಿ* ನನ್ನೊಂದಿಗೆ ಮಾತಾಡುವುದನ್ನು ಕೇಳಿದೆನು. ಆ ವಾಣಿಯು,‘ಸೌಲನೇ, ಸೌಲನೇ, ನೀನು ಯಾಕೆ ನನ್ನನ್ನು ಹಿಂಸಿಸುತ್ತಿರುವೆ? ಮುಳ್ಳುಗೋಲನ್ನು ಒದೆಯುವುದು ನಿನಗೆ ಕಷ್ಟ’ ಎಂದು ಹೇಳಿತು. [15]ನಾನು, ‘ಪ್ರಭುವೇ, ನೀನು ಯಾರು?’ ಎಂದೆನು. ಪ್ರಭುವು, ‘ನೀನು ಹಿಂಸೆಪಡಿಸುತ್ತಿರುವ ಯೇಸುವೇ ನಾನು. [16]ಎದ್ದೇಳು! ನಿನ್ನನ್ನು ನನ್ನ ಸೇವಕನನ್ನಾಗಿಯೂ ಸಾಕ್ಷಿಯನ್ನಾಗಿಯೂ ಆರಿಸಿಕೊಂಡಿದ್ದೇನೆ. ಈ ಹೊತ್ತು ನಾನು ನಿನಗೆ ಕಾಣಿಸಿಕೊಂಡದ್ದರ ವಿಷಯವಾಗಿಯೂ ನಾನು ನಿನಗೆ ಕೊಡಲಿರುವ ದರ್ಶನಗಳ ವಿಷಯವಾಗಿಯೂ ನೀನು ಜನರಿಗೆ ಸಾಕ್ಷಿಯಾಗಿರುವೆ. ಇದಕ್ಕಾಗಿಯೇ ಈ ಹೊತ್ತು ನಾನು ನಿನಗೆ ಕಾಣಿಸಿಕೊಂಡೆನು. [17]ನಿನ್ನ ಸ್ವಂತ ಜನರಿಂದಲೂ ಯೆಹೂದ್ಯರಲ್ಲದ ಜನರಿಂದಲೂ ನಿನಗೆ ಕೇಡಾಗದಂತೆ ಕಾಪಾಡುವೆನು. ನಾನು ನಿನ್ನನ್ನು ಅವರ ಬಳಿಗೆ ಕಳುಹಿಸುತ್ತಿದ್ದೇನೆ. [18]ನೀನು ಅವರಿಗೆ ಸತ್ಯವನ್ನು ತಿಳಿಸಿ ಅವರನ್ನು ಕತ್ತಲೆಯಿಂದ ಬೆಳಕಿಗೆ ಬರುವಂತೆಯೂ ಸೈತಾನನ ಅಧಿಕಾರಕ್ಕೆ ವಿಮುಖರಾಗಿ ದೇವರ ಕಡೆಗೆ ತಿರುಗಿಕೊಳ್ಳುವಂತೆಯೂ ಮಾಡಬೇಕು. ಆಗ ಅವರ ಪಾಪಗಳು ಕ್ಷಮಿಸಲ್ಪಡುತ್ತವೆ. ನನ್ನಲ್ಲಿ ನಂಬಿಕೆ ಇಡುವುದರ ಮೂಲಕ ಪವಿತ್ರರಾದ ಜನರೊಂದಿಗೆ ಅವರು ಪಾಲು ಹೊಂದುವರು ಎಂದನು.’ ”

### ತನ್ನ ಸೇವೆಯ ಬಗ್ಗೆ ಪೌಲನ ವಿವರಣೆ

[19]ಪೌಲನು ಮಾತನ್ನು ಮುಂದುವರಿಸಿ ಇಂತೆಂದನು: “ರಾಜನಾದ ಅಗ್ರಿಪ್ಪನೇ, ನಾನು ಪರಲೋಕದ ಈ ದರ್ಶನವನ್ನು ಕಂಡ ಮೇಲೆ ಅದಕ್ಕೆ ವಿಧೇಯನಾದೆನು. [20]ನಾನು ಜನರಿಗೆ, ‘ನಿಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರ ಕಡೆಗೆ ತಿರುಗಿಕೊಳ್ಳಿರಿ’ ಎಂತಲೂ ಅವರಿಗಾಗಿರುವ ಮಾನಸಾಂತರವನ್ನು ಯೋಗ್ಯವಾದ ಕಾರ್ಯಗಳ ಮೂಲಕ ತೋರ್ಪಡಿಸಬೇಕೆಂತಲೂ ಹೇಳಿದೆನು. ಮೊದಲನೆಯದಾಗಿ ದಮಸ್ಕಕ್ಕೂ ಬಳಿಕ ಜೆರುಸಲೇಮಿಗೂ ಜುದೇಯದ ಪ್ರತಿಯೊಂದು ಭಾಗಕ್ಕೂ ಹೋಗಿ ಅಲ್ಲಿರುವ ಜನರಿಗೆ ಈ ಸಂಗತಿಗಳನ್ನು ತಿಳಿಸಿದೆನು. ಅಲ್ಲದೆ ಯೆಹೂದ್ಯರಲ್ಲದ ಜನರ ಬಳಿಗೂ ಹೋದೆನು. [21]ಈ ಕಾರಣಗಳಿಂದ ಯೆಹೂದ್ಯರು ನನ್ನನ್ನು ದೇವಾಲಯದಲ್ಲಿ ಬಂಧಿಸಿ ಕೊಲ್ಲಲು ಪ್ರಯತ್ನಿಸಿದರು. [22]ಆದರೆ ದೇವರು ನನಗೆ ಸಹಾಯಮಾಡಿದನು. ಆತನು ಇಂದಿನವರೆಗೂ ನನಗೆ ಸಹಾಯಮಾಡುತ್ತಿದ್ದಾನೆ. ಆದ್ದರಿಂದಲೇ ಇಂದು ಇಲ್ಲಿ ನಿಂತುಕೊಂಡಿದ್ದೇನೆ ಮತ್ತು ನಾನು ಕಂಡ ಸಂಗತಿಗಳ ಬಗ್ಗೆ ಜನರಿಗೆಲ್ಲಾ ಸಾಕ್ಷಿ ಹೇಳುತ್ತಿದ್ದೇನೆ. ಆದರೆ ನಾನು ಯಾವ ಹೊಸದನ್ನೂ ಹೇಳದೆ, ಮೋಶೆ ಮತ್ತು ಪ್ರವಾದಿಗಳು ನೆರವೇರುತ್ತವೆ ಎಂದು ಹೇಳಿದ ಸಂಗತಿಗಳನ್ನೇ ಹೇಳುತ್ತಿದ್ದೇನೆ. [23]ಕ್ರಿಸ್ತನು ಬಾಧೆಪಟ್ಟು ಸತ್ತು, ಸತ್ತವರೊಳಗಿಂದ ಮೊದಲನೆಯವನಾಗಿ ಎದ್ದು ಬಂದು, ಯೆಹೂದ್ಯರಿಗೂ ಯೆಹೂದ್ಯರಲ್ಲದವರಿಗೂ ಬೆಳಕನ್ನು ತರುತ್ತಾನೆಂದು ಮೋಶೆ ಮತ್ತು ಪ್ರವಾದಿಗಳು ಹೇಳಿದ್ದಾರೆ.”

### ಅಗ್ರಿಪ್ಪನನ್ನು ಒಡಂಬಡಿಸಲು ಪೌಲನ ಪ್ರಯತ್ನ

[24]ಪೌಲನು ತನ್ನ ಪರವಾಗಿ ಈ ಸಂಗತಿಗಳನ್ನು ಹೇಳುತ್ತಿರಲು ಫೆಸ್ತನು, “ಪೌಲನೇ, ನೀನು ಹುಚ್ಚನಾಗಿರುವೆ! ಅಧಿಕ ಅಧ್ಯಯನ ನಿನ್ನನ್ನು ಹುಚ್ಚನನ್ನಾಗಿ ಮಾಡಿದೆ!” ಎಂದು ಕೂಗಿ ಹೇಳಿದನು.

[25]ಪೌಲನು, “ಮಹಾರಾಜಶ್ರೀಗಳಾದ ಫೆಸ್ತನೇ, ನಾನು ಹುಚ್ಚನಲ್ಲ. ನಾನು ಹೇಳುತ್ತಿರುವುದು ಸತ್ಯಸಂಗತಿಗಳಾಗಿವೆ. ನನ್ನ ಮಾತುಗಳು ಮೂರ್ಖನ ಮಾತುಗಳಲ್ಲ. ನಾನು ಸ್ವಸ್ಥಬುದ್ಧಿಯುಳ್ಳವನಾಗಿದ್ದೇನೆ. [26]ರಾಜನಾದ ಅಗ್ರಿಪ್ಪನಿಗೆ ಈ ಸಂಗತಿಗಳು ತಿಳಿದಿವೆ. ನಾನು ಅವನೊಂದಿಗೆ ಸ್ವತಂತ್ರವಾಗಿ ಮಾತಾಡಬಲ್ಲೆನು. ಈ ಎಲ್ಲಾ ಸಂಗತಿಗಳ ಬಗ್ಗೆ ಅವನು ಕೇಳಿದ್ದಾನೆಂದು ನನಗೆ ಗೊತ್ತಿದೆ. ಯಾಕೆಂದರೆ ಎಲ್ಲಾ ಜನರು ನೋಡಬಹುದಾದ ಸ್ಥಳದಲ್ಲಿ ಈ ಸಂಗತಿಗಳು ನೆರವೇರಿದವು. [27]ರಾಜ ಅಗ್ರಿಪ್ಪನೇ, ಪ್ರವಾದಿಗಳು ಬರೆದ ಸಂಗತಿಗಳನ್ನು ನೀನು ನಂಬುವಿಯಾ? ನೀನು ನಂಬುವೆ ಎಂದು ನನಗೆ ಗೊತ್ತಿದೆ!” ಎಂಬುದಾಗಿ ಹೇಳಿದನು. [28]ರಾಜ ಅಗ್ರಿಪ್ಪನು ಪೌಲನಿಗೆ, “ಬಹು ಸುಲಭವಾಗಿ ನನ್ನನ್ನು ಒಪ್ಪಿಸಿ ಕ್ರೈಸ್ತನನ್ನಾಗಿ ಮಾಡಬಹುದೆಂದು ನೀನು ಯೋಚಿಸಿಕೊಂಡಿರುವಿಯಾ?” ಎಂದು ಕೇಳಿದನು.

---

**ಯೆಹೂದ್ಯರ ಭಾಷೆ** ಅರಮೇಯಿಕ್ ಭಾಷೆ

29ಪೌಲನು, ‘‘ಸುಲಭವೋ ಕಷ್ಟವೋ ಅದು ನನಗೆ ಮುಖ್ಯ
ವಲ್ಲ. ನೀನು ಮಾತ್ರವಲ್ಲ ಇಂದು ನನ್ನನ್ನು ಆಲಿಸುತ್ತಿರುವ
ಪ್ರತಿಯೊಬ್ಬರೂ ರಕ್ಷಣೆ ಹೊಂದಿ ನನ್ನಂತೆಯೇ ಆಗಬೇಕೆಂದು
ನಾನು ದೇವರಲ್ಲಿ ಪ್ರಾರ್ಥಿಸುತ್ತೇನೆ. ಆದರೆ ಈ ಸಂಕೋಲೆಗಳು
ಮಾತ್ರ ನಿಮಗೆ ಬೇಡ!’’ ಎಂದು ಹೇಳಿದನು.
30ರಾಜ ಅಗ್ರಿಪ್ಪನು, ರಾಜ್ಯಪಾಲ ಫೆಸ್ತನು, ಬೆರ್ನಿಕೆರಾಣಿ
ಮತ್ತು ಅವರೊಂದಿಗೆ ಕುಳಿತುಕೊಂಡಿದ್ದ ಜನರೆಲ್ಲರೂ ಎದ್ದು
ನಿಂತು 31ಅಲ್ಲಿಂದ ಹೊರಗೆ ಹೋದರು. ಅವರು ಒಬ್ಬರಿ
ಗೊಬ್ಬರು, ‘‘ಈ ಮನುಷ್ಯನನ್ನು ಕೊಲ್ಲಬಾರದು ಅಥವಾ ಸೆರೆ
ಮನೆಗೆ ಹಾಕಬಾರದು. ಇವನು ನಿಜವಾಗಿಯೂ ಕೆಟ್ಟದ್ದೇನೂ
ಮಾಡಿಲ್ಲ!’’ ಎಂದು ಮಾತಾಡಿಕೊಂಡರು. 32ಬಳಿಕ ಅಗ್ರಿಪ್ಪನು
ಫೆಸ್ತನಿಗೆ, ‘‘ಇವನು ಸೀಸರನಿಗೆ ಬಿನ್ನಹ ಮಾಡಿಕೊಳ್ಳದಿದ್ದರೆ,
ಇವನನ್ನು ಬಿಡುಗಡೆ ಮಾಡಬಹುದಿತ್ತು’’ ಎಂದು ಹೇಳಿದನು.

## ರೋಮಿಗೆ ಪೌಲನ ನೌಕಾಯಾನ

27 ನಾವು ಇಟಲಿಗೆ ನೌಕಾಯಾನ ಮಾಡಬೇಕೆಂದು
ತೀರ್ಮಾನವಾಯಿತು. ಪೌಲನಿಗೂ ಇತರ ಕೆಲವು
ಕೈದಿಗಳಿಗೂ ಜೂಲಿಯಸ್ ಎಂಬ ಸೇನಾಧಿಕಾರಿಯು ಕಾವಲಾ
ಗಿದ್ದನು. ಜೂಲಿಯಸನು ಚಕ್ರವರ್ತಿಯ ಸೈನ್ಯದಲ್ಲಿ ಸೇವೆ ಸಲ್ಲಿಸು
ತ್ತಿದ್ದನು. 2ನಾವು ಹಡಗನ್ನು ಹತ್ತಿ ಅಲ್ಲಿಂದ ಹೊರಟೆವು. ಆ
ಹಡಗು ಅದ್ರಮಿತ್ತಿ ಪಟ್ಟಣದಿಂದ ಬಂದಿತ್ತು ಮತ್ತು ಏಷ್ಯಾದ
ಬೇರೆಬೇರೆ ಸ್ಥಳಗಳಿಗೆ ಹೋಗಲು ಸಿದ್ಧವಾಗಿತ್ತು. ಅರಿಸ್ತಾರ್ಕನು
ನಮ್ಮೊಂದಿಗೆ ಬಂದನು. ಅವನು ಮಕೆದೋನಿಯಕ್ಕೆ ಸೇರಿದ
ಥೆಸಲೋನಿಕ ಪಟ್ಟಣದವನು. 3ಮರುದಿನ ನಾವು ಸಿದೋನ್
ಪಟ್ಟಣಕ್ಕೆ ಬಂದೆವು. ಜೂಲಿಯಸನು ಪೌಲನ ಬಗ್ಗೆ ಕನಿಕರ
ವುಳ್ಳವನಾಗಿದ್ದನು. ಸ್ನೇಹಿತರ ಬಳಿಗೆ ಹೋಗಿ ಅವರನ್ನು ಭೇಟಿ
ಯಾಗಲು ಅವನು ಪೌಲನಿಗೆ ಸ್ವತಂತ್ರವನ್ನು ಕೊಟ್ಟನು.
ಸ್ನೇಹಿತರು ಪೌಲನ ಅಗತ್ಯತೆಗಳನ್ನು ಪೂರೈಸಿದರು. 4ನಾವು
ಸಿದೋನ್ ಪಟ್ಟಣದಿಂದ ಹೊರಟೆವು. ಎದುರುಗಾಳಿ ಬೀಸು
ತ್ತಿದ್ದ ಕಾರಣ ನಾವು ಸೈಪ್ರಸ್ ದ್ವೀಪದ ಸಮೀಪದಲ್ಲಿ
ನೌಕಾಯಾನ ಮಾಡಿದೆವು. 5ಸಿಲಿಸಿಯಾಕ್ಕೂ ಪಾಂಫಿಲಿ
ಯಕ್ಕೂ ಎದುರಾಗಿರುವ ಸಮುದ್ರವನ್ನು ನಾವು ದಾಟಿದೆವು.
ಬಳಿಕ ನಾವು ಲುಸಿಯ ಪ್ರಾಂತ್ಯದಲ್ಲಿರುವ ‘ಮುರ’ ಎಂಬ
ಊರಿಗೆ ಬಂದೆವು. 6ಅಲೆಕ್ಸಾಂಡ್ರಿಯಾದಿಂದ ಬಂದ ಹಡ
ಗೊಂದು ‘ಮುರ’ದಲ್ಲಿ ಇದ್ದುದ್ದನ್ನು ಸೇನಾಧಿಕಾರಿಯು
ಕಂಡನು. ಈ ಹಡಗು ಇಟಲಿಗೆ ಹೋಗಲಿತ್ತು. ಆದ್ದರಿಂದ
ಅವನು ನಮ್ಮನ್ನು ಆ ಹಡಗಿಗೆ ಹತ್ತಿಸಿದನು. 7ನಾವು ಅನೇಕ
ದಿನಗಳವರೆಗೆ ನಿಧಾನವಾಗಿ ನೌಕಾಯಾನ ಮಾಡಿದೆವು.
ಎದುರುಗಾಳಿ ಬೀಸುತ್ತಿದ್ದುದರಿಂದ ನಾವು ಸ್ನೀಡ ಪಟ್ಟಣವನ್ನು
ತಲುಪುವುದೇ ಕಷ್ಟವಾಯಿತು. ಆ ಮಾರ್ಗದಲ್ಲಿ ಇನ್ನೂ ಮುಂದೆ
ಪ್ರಯಾಣ ಮಾಡಲು ನಮಗೆ ಸಾಧ್ಯವಾಗಲಿಲ್ಲ. ಆದ್ದರಿಂದ
ನಾವು ಸಾಲ್ಮೊನೆಯ ಸಮೀಪದಲ್ಲಿದ್ದ ಕ್ರೇಟ್ ದ್ವೀಪದ ದಕ್ಷಿಣದ
ಭಾಗದಲ್ಲಿ ನೌಕಾಯಾನ ಮಾಡಿದೆವು. 8ನಾವು ಪ್ರಯಾಸದಿಂದ
ಕರಾವಳಿಯಲ್ಲೇ ನೌಕಾಯಾನ ಮಾಡಿದೆವು. ಬಳಿಕ ನಾವು
‘ಸುರಕ್ಷಿತ ರೇವು’ ಎಂಬ ಸ್ಥಳಕ್ಕೆ ಬಂದೆವು. ಲಸಾಯ ಪಟ್ಟಣವು
ಅದರ ಸಮೀಪದಲ್ಲಿತ್ತು. 9ಆದರೆ ನಾವು ಬಹಳ ಸಮಯವನ್ನು
ಕಳೆದುಕೊಂಡಿದ್ದೆವು. ಈಗ ನೌಕಾಯಾನ ಮಾಡುವುದು
ಅಪಾಯಕರವಾಗಿತ್ತು. ಯಾಕೆಂದರೆ ಯೆಹೂದ್ಯರ ಉಪವಾಸ
ದಿನ* ಆಗಲೇ ಕಳೆದಿತ್ತು. 10ಆದ್ದರಿಂದ ಪೌಲನು ಅವರಿಗೆ,
‘‘ಜನರೇ, ಈ ಪ್ರಯಾಣದಲ್ಲಿ ನಮಗೆ ಬಹಳ ತೊಂದರೆಯಿದೆ
ಎಂದು ನನಗೆ ತೋರುತ್ತಿದೆ. ಹಡಗು ಮತ್ತು ಹಡಗಿನಲ್ಲಿರುವ
ವಸ್ತುಗಳು ನಾಶವಾಗುತ್ತವೆ. ನಮ್ಮ ಪ್ರಾಣಗಳು ಸಹ
ನಷ್ಟವಾಗಬಹುದು!’’ ಎಂದು ಎಚ್ಚರಿಸಿದನು. 11ಆದರೆ
ನೌಕೆಯ ನಾಯಕನು ಮತ್ತು ನೌಕೆಯ ಯಜಮಾನನು
ಪೌಲನ ಮಾತನ್ನು ಒಪ್ಪಿಕೊಳ್ಳಲಿಲ್ಲ. ಆದುದರಿಂದ
ಸೇನಾಧಿಕಾರಿಯು ಪೌಲನ ಮಾತಿಗೆ ಗಮನ ಕೊಡದೆ, ನೌಕೆಯ
ನಾಯಕನು ಮತ್ತು ಯಜಮಾನನು ಹೇಳಿದ ಮಾತುಗಳನ್ನು
ನಂಬಿದನು. 12ಆ ರೇವು(ಸುರಕ್ಷಿತ ರೇವು) ಚಳಿಗಾಲದಲ್ಲಿ
ಹಡಗು ನಿಲ್ಲುವುದಕ್ಕೆ ಒಳ್ಳೆಯ ಸ್ಥಳವಾಗಿರಲಿಲ್ಲ. ಆದ್ದರಿಂದ
ಹಡಗು ಅಲ್ಲಿಂದ ಹೊರಡಲೇಬೇಕೆಂದು ಹೆಚ್ಚು ಮಂದಿ
ನಿರ್ಧರಿಸಿದರು. ನಾವು ಫೆನಿಕ್ಸ್‌ಗೆ ತಲುಪಬಹುದೆಂದು ಅವರ
ನಿರೀಕ್ಷೆಯಾಗಿತ್ತು. ಚಳಿಗಾಲದಲ್ಲಿ ಹಡಗು ಅಲ್ಲಿ ತಂಗ
ಬಹುದಾಗಿತ್ತು. ಫೆನಿಕ್ಸ್, ಕ್ರೇಟ್ ದ್ವೀಪದ ಒಂದು ಪಟ್ಟಣ.
ಈಶಾನ್ಯ ದಿಕ್ಕಿಗೂ ಆಗ್ನೇಯ ದಿಕ್ಕಿಗೂ ಅಭಿಮುಖವಾಗಿದ್ದ
ಬಂದರನ್ನು ಅದು ಹೊಂದಿತ್ತು.

## ಬಿರುಗಾಳಿ

13ಬಳಿಕ ಒಳ್ಳೆಯ ಗಾಳಿಯು ದಕ್ಷಿಣದ ಕಡೆಯಿಂದ
ಬೀಸತೊಡಗಿತು. ಹಡಗಿನಲ್ಲಿದ್ದ ಜನರು, ‘‘ನಮಗೆ ಬೇಕಾಗಿದ್ದು
ಈ ಗಾಳಿಯೇ. ಈಗ ಅದು ನಮಗೆ ದೊರಕಿತು!’’ ಎಂದು
ಭಾವಿಸಿಕೊಂಡರು. ಆದ್ದರಿಂದ ಅವರು ಹಡಗಿನ ಲಂಗರನ್ನು*
ಮೇಲಕ್ಕೆ ಎಳೆದರು. ನಾವು ಕ್ರೇಟ್ ದ್ವೀಪದ ಕರಾವಳಿಯಲ್ಲೇ
ನೌಕಾಯಾನ ಮಾಡಿದೆವು. 14ಆದರೆ ‘ಈಶಾನ್ಯ ಮಾರುತ’*
ಎಂಬ ಬಿರುಗಾಳಿಯು ದ್ವೀಪದಲ್ಲಿ ಬೀಸತೊಡಗಿ 15ಹಡಗನ್ನು
ಬಡಿದುಕೊಂಡು ಹೋಯಿತು. ಹಡಗು ಅದಕ್ಕೆ ಎದುರಾಗಿ
ಚಲಿಸಲು ಸಾಧ್ಯವಾಗಲಿಲ್ಲ. ಆದ್ದರಿಂದ ಗಾಳಿಯು ಬೀಸುವ
ಕಡೆಗೆ ಹೋಗತೊಡಗಿದೆವು. 16ನಾವು ‘ಕಾವ್ದ’ ಎಂಬ ಚಿಕ್ಕ
ದ್ವೀಪದ ಮರೆಯಲ್ಲಿ ಹಾದುಹೋದೆವು. ಆಗ* ನಾವು ಹಡಗಿ
ನಲ್ಲಿದ್ದ ಚಿಕ್ಕ ದೋಣಿಯನ್ನು ಒಳಗೆ ತೆಗೆದುಕೊಳ್ಳಲು
ಸಾಧ್ಯವಾಯಿತು. ಆದರೂ ಆ ಕೆಲಸ ಬಹಳ ಪ್ರಯಾಸಕರ
ವಾಗಿತ್ತು. 17ಬಳಿಕ ಹಡಗು ಒಡೆದು ಹೋಗದಂತೆ ಹಡಗಿನ
ಸುತ್ತಲೂ ಹಗ್ಗಗಳನ್ನು ಬಿಗಿದರು. ಅನಂತರ ‘ಸರ್ತಿಸ್’ ಎಂಬ
ಕಳ್ಳುಸುಬಿನಲ್ಲಿ ಹಡಗು ಎಲ್ಲಿ ಸಿಕ್ಕಿಕೊಳ್ಳುವುದೊ ಎಂದು ಅವರಿಗೆ
ಭಯವಾಯಿತು. ಆದುದರಿಂದ ಅವರು ಹಾಯಿಯನ್ನು*
ಇಳಿಸಿ ಹಡಗನ್ನು ಬಡಿದುಕೊಂಡು ಹೋಗಲು ಗಾಳಿಗೆ ಅವಕಾಶ

---

**ಉಪವಾಸ ದಿನ** ಯೆಹೂದ್ಯರ ಈ ಪವಿತ್ರ ದಿನ ಬಂದ ಮೇಲೆ ಚಳಿಗಾಲ ಆರಂಭವಾಗುತ್ತದೆ. ಸಮುದ್ರದ ಮೇಲೆ ಚಂಡಮಾರುತಗಳು ಬರುವ ಕಾಲವದು.

**ಲಂಗರು** ಹಡಗಿನ ಪಕ್ಕದಲ್ಲಿ ಇಳಿಬಿಡುವ ಭಾರವಾದ ಕಬ್ಬಿಣದ ಸಲಕರಣೆ.

**ಈಶಾನ್ಯ ಮಾರುತ** ಉತ್ತರ ಮತ್ತು ಪೂರ್ವ ದಿಕ್ಕುಗಳ ನಡುವಿನ ಭಾಗ.

**ಆಗ** ಆ ದ್ವೀಪವು ಗಾಳಿಯಿಂದ ನಮ್ಮನ್ನು ಸಂರಕ್ಷಿಸಿದಾಗ.

**ಹಾಯಿ** ಹಡಗಿಗೆ ಕಟ್ಟುವ ಬಟ್ಟೆ

ಮಾಡಿಕೊಟ್ಟರು. 18ಮರುದಿನ, ಬಿರುಗಾಳಿ ರಭಸವಾಗಿ ಬೀಸು
ತ್ತಿದ್ದುದರಿಂದ ಜನರು ಹಡಗಿನಲ್ಲಿದ್ದ ಕೆಲವು ಸಾಮಾನುಗಳನ್ನು
ಎಸೆದುಬಿಟ್ಟರು. 19ಒಂದು ದಿನವಾದ ನಂತರ ಅವರು ಹಡಗಿನ
ಉಪಕರಣಗಳನ್ನು ತಮ್ಮ ಕೈಯಾರೆ ಎಸೆದುಬಿಟ್ಟರು. 20ಅನೇಕ
ದಿನಗಳವರೆಗೆ ನಾವು ಸೂರ್ಯನನ್ನಾಗಲಿ ನಕ್ಷತ್ರಗಳನ್ನಾಗಲಿ
ನೋಡಲಾಗಲಿಲ್ಲ. ಬಿರುಗಾಳಿಯು ಭೀಕರವಾಗಿತ್ತು. ನಾವು
ಜೀವಸಹಿತ ಉಳಿಯುತ್ತೇವೆ ಎಂಬ ನಿರೀಕ್ಷೆ ಕಳೆದುಹೋಯಿತು.
ನಾವು ಸಾಯುತ್ತೇವೆ ಎಂದು ಭಾವಿಸಿಕೊಂಡೆವು.

21ಆ ಜನರು ಬಹಳ ದಿನಗಳವರೆಗೆ ಊಟಮಾಡಲಿಲ್ಲ. ಆಗ
ಒಂದು ದಿನ ಪೌಲನು ಎದ್ದುನಿಂತುಕೊಂಡು ಅವರಿಗೆ,
‘‘ಜನರೇ, ಕ್ರೇಟ್ ದ್ವೀಪದಿಂದ ಹೊರಡಬೇಡಿರಿ ಎಂದು ನಾನು
ನಿಮಗೆ ಹೇಳಿದೆ. ನೀವು ನನ್ನ ಮಾತನ್ನು ಕೇಳಬೇಕಿತ್ತು. ಆಗ
ನಿಮಗೆ ಇಷ್ಟು ಕಷ್ಟವಾಗಲಿ ನಷ್ಟವಾಗಲಿ ಆಗುತ್ತಿರಲಿಲ್ಲ. 22ಈಗ
ಲಾದರೊ ನೀವು ಸಂತೋಷದಿಂದ ಇರಬೇಕೆಂದು ನಾನು
ನಿಮಗೆ ಹೇಳುತ್ತಿದ್ದೇನೆ. ನಿಮ್ಮಲ್ಲಿ ಒಬ್ಬರೂ ಸಾಯುವುದಿಲ್ಲ!
ಆದರೆ ಹಡಗು ನಾಶವಾಗುವುದು. 23ಕಳೆದ ರಾತ್ರಿ ದೇವರ
ಬಳಿಯಿಂದ ದೂತನೊಬ್ಬನು ನನ್ನ ಬಳಿಗೆ ಬಂದಿದ್ದನು. ಆ
ದೇವರನ್ನೇ ನಾನು ಆರಾಧಿಸುವುದು. ನಾನು ಆತನವನು.
24ದೇವರ ದೂತನು, ‘ಪೌಲನೇ, ಭಯಪಡಬೇಡ! ನೀನು
ಸೀಸರನ ಮುಂದೆ ನಿಂತುಕೊಳ್ಳಬೇಕು. ನಿನ್ನೊಂದಿಗೆ ನೌಕಾ
ಯಾನ ಮಾಡುತ್ತಿರುವ ಎಲ್ಲಾ ಜನರ ಪ್ರಾಣಗಳನ್ನು ಉಳಿಸು
ವುದಾಗಿ ದೇವರು ನಿನಗೆ ವಾಗ್ದಾನವನ್ನು ಮಾಡಿದ್ದಾನೆ’ ಎಂದು
ಹೇಳಿದನು. 25ಆದ್ದರಿಂದ ಜನರೇ, ಸಂತೋಷದಿಂದಿರಿ! ನಾನು
ದೇವರಲ್ಲಿ ಭರವಸೆಯಿಟ್ಟಿದ್ದೇನೆ. ಆತನ ದೂತನು ಹೇಳಿದಂತೆ
ಪ್ರತಿಯೊಂದೂ ನೆರವೇರುವುದು. 26ಆದರೆ ನಾವು ಒಂದು
ದ್ವೀಪದ ದಡವನ್ನು ತಲುಪಬೇಕಾಗಿದೆ’’ ಎಂದು ಹೇಳಿದನು.

27ಹದಿನಾಲ್ಕನೆಯ ರಾತ್ರಿ, ನಾವು ಆದ್ರಿಯ ಸಮುದ್ರದಲ್ಲಿ
ಅತ್ತಿತ್ತ ಹೊಯ್ದಾಡುತ್ತಾ ಪ್ರಯಾಣವನ್ನು ಮುಂದುವರಿಸಿದೆವು.
ನಾವು ಭೂಮಿಗೆ ಸಮೀಪವಾಗಿದ್ದೇವೆಂದು ನಾವಿಕರು ಆಲೋ
ಚಿಸಿಕೊಂಡರು. 28ಅವರು ಅಳತೆ ಗುಂಡನ್ನು ಹಗ್ಗದ ತುದಿಗೆ ಕಟ್ಟಿ
ಹಗ್ಗವನ್ನು ನೀರಿನಲ್ಲಿ ಇಳಿಯಬಿಟ್ಟರು. ನೀರು ನೂರಿಪ್ಪತ್ತು ಅಡಿ
ಆಳವಾಗಿತ್ತು. ಅವರು ಇನ್ನೂ ಸ್ವಲ್ಪದೂರ ಹೋಗಿ ಹಗ್ಗವನ್ನು
ನೀರಿನಲ್ಲಿ ಇಳಿಯಬಿಟ್ಟರು. ಅಲ್ಲಿ ನೀರಿನ ಆಳ ತೊಂಭತ್ತು ಅಡಿ
ಯಿತ್ತು. 29ಹಡಗು ಬಂಡೆಗೆ ಅಪ್ಪಳಿಸಬಹುದೆಂದು ನಾವಿಕರು
ಭಯಪಟ್ಟರು. ಆದ್ದರಿಂದ ಅವರು ನಾಲ್ಕು ಲಂಗರುಗಳನ್ನು
ನೀರಿನೊಳಗೆ ಇಳಿಯಬಿಟ್ಟರು. ಬಳಿಕ ಅವರು ಬೆಳಗಾಗಲೆಂದು
ಪ್ರಾರ್ಥಿಸಿದರು. 30ನಾವಿಕರಲ್ಲಿ ಕೆಲವರು ಹಡಗನ್ನು ಬಿಟ್ಟು
ಹೋಗಬೇಕೆಂದಿದ್ದರು. ಅವರು ದೋಣಿಯನ್ನು ನೀರಿಗೆ ಇಳಿಸಿ,
ಹಡಗಿನ ಮುಂಭಾಗದಲ್ಲಿ ಇನ್ನೂ ಕೆಲವು ಲಂಗರುಗಳನ್ನು
ಇಳಿಸುವವರಂತೆ ನಟಿಸಿದರು. 31ಆದರೆ ಪೌಲನು ಸೇನಾಧಿ
ಕಾರಿಗೆ ಮತ್ತು ಇತರ ಸೈನಿಕರಿಗೆ, ‘‘ಈ ನಾವಿಕರು ಹಡಗಿನಲ್ಲಿ
ಇರದಿದ್ದರೆ ನಿಮ್ಮ ಪ್ರಾಣಗಳು ಉಳಿಯಲು ಸಾಧ್ಯವಿಲ್ಲ’’ ಎಂದು
ಹೇಳಿದನು.

32ಆದ್ದರಿಂದ ಸೈನಿಕರು ಹಗ್ಗಗಳನ್ನು ಕತ್ತರಿಸಿ ದೋಣಿಯನ್ನು
ನೀರುಪಾಲು ಮಾಡಿದರು. 33ಇನ್ನೂ ಬೆಳಕಾಗುತ್ತಿರುವಾಗಲೇ
ಏನಾದರೂ ತಿನ್ನುವಂತೆ ಪೌಲನು ಅವರನ್ನು ಒತ್ತಾಯಿಸುತ್ತಾ,
‘‘ಕಳೆದ ಹದಿನಾಲ್ಕು ದಿನಗಳಿಂದ ನೀವು ಊಟವನ್ನೇ ಮಾಡಿಲ್ಲ.
34ಈಗ ನೀವು ಸ್ವಲ್ಪವಾದರೂ ತಿನ್ನುವಂತೆ ನಾನು ನಿಮ್ಮನ್ನು
ಬೇಡಿಕೊಳ್ಳುತ್ತೇನೆ. ನೀವು ಜೀವಂತವಾಗಿ ಉಳಿಯಬೇಕಾದರೆ
ನಿಮಗೆ ಊಟ ಅವಶ್ಯಕವಾಗಿದೆ. ನಿಮ್ಮಲ್ಲಿರುವ ಯಾರೂ ನಿಮ್ಮ
ತಲೆಕೂದಲುಗಳಲ್ಲಿ ಒಂದನ್ನಾದರೂ ಕಳೆದುಕೊಳ್ಳುವುದಿಲ್ಲ’’
ಎಂದು ಹೇಳಿದನು. 35ಹೀಗೆ ಹೇಳಿದ ಬಳಿಕ, ಪೌಲನು ಸ್ವಲ್ಪ
ರೊಟ್ಟಿಯನ್ನು ತೆಗೆದುಕೊಂಡು ಅದಕ್ಕಾಗಿ ಅವರೆಲ್ಲರ ಮುಂದೆ
ದೇವರಿಗೆ ಸ್ತೋತ್ರ ಮಾಡಿದನು. ಬಳಿಕ ಅವನು ಒಂದು
ತುಂಡನ್ನು ಮುರಿದು ತಿನ್ನತೊಡಗಿದನು. 36-37ಆಗ ಜನ
ರೆಲ್ಲರೂ ಪ್ರೋತ್ಸಾಹಗೊಂಡು ತಿನ್ನತೊಡಗಿದರು. ಆ ಹಡಗಿ
ನಲ್ಲಿ ಇನ್ನೂರ ಎಪ್ಪತ್ತಾರು ಮಂದಿ ಇದ್ದರು. 38ನಾವು
ತೃಪ್ತಿಯಾಗುವಷ್ಟು ತಿಂದೆವು. ಬಳಿಕ ದವಸವನ್ನು ಸಮುದ್ರಕ್ಕೆ
ಎಸೆದು ಹಡಗನ್ನು ಹಗುರಗೊಳಿಸಿದೆವು.

### ನೌಕೆಯ ನಾಶ

39ಬೆಳಗಾದಾಗ ನಾವಿಕರು ಭೂಮಿಯನ್ನು ಕಂಡರು. ಆದರೆ
ಅದು ಯಾವ ಭೂಮಿಯೆಂದು ಗೊತ್ತಿರಲಿಲ್ಲ. ಅವರು ಕಂಡದ್ದು
ಉಸುಬಿನ ದಡವುಳ್ಳ ಒಂದು ಕೊಲ್ಲಿ. ಸಾಧ್ಯವಾದರೆ ಹಡಗನ್ನು
ಆ ಕೊಲ್ಲಿಗೆ ನಡೆಸಬೇಕೆಂದು ನಾವಿಕರು ಬಯಸಿದರು.
40ಆದ್ದರಿಂದ ಅವರು ಚುಕ್ಕಾಣಿಗಳನ್ನು* ಬಿಗಿಯಾಗಿ ಹಿಡಿದು
ಕೊಂಡಿದ್ದ ಹಗ್ಗಗಳನ್ನು ಕತ್ತರಿಸಿಹಾಕಿದರು. ಬಳಿಕ ಮುಂಭಾಗದ
ಹಾಯಿಯನ್ನು ಗಾಳಿಗೆ ಎತ್ತಿಕಟ್ಟಿ ಹಡಗನ್ನು ದಡದತ್ತ ನಡೆಸ
ತೊಡಗಿದರು. 41ಆದರೆ ಹಡಗು ಉಸುಬಿನ ದಿಬ್ಬಕ್ಕೆ ಅಪ್ಪಳಿಸಿತು.
ಹಡಗಿನ ಮುಂಭಾಗವು ಅದರಲ್ಲಿ ಸಿಕ್ಕಿಕೊಂಡಿತು. ಹಡಗು
ಚಲಿಸಲಾಗಲಿಲ್ಲ. ಬಳಿಕ ದೊಡ್ಡ ಅಲೆಗಳು ಹಡಗಿನ ಹಿಂಭಾಗಕ್ಕೆ
ಬಡಿದು ಚೂರುಚೂರು ಮಾಡಲಾರಂಭಿಸಿದವು.

42ಕೈದಿಗಳಲ್ಲಿ ಯಾರೂ ಈಜಿಕೊಂಡು ಹೋಗಿ ತಪ್ಪಿಸಿಕೊಳ್ಳ
ಬಾರದೆಂದು ಸೈನಿಕರು ಕೈದಿಗಳನ್ನು ಕೊಲ್ಲಲು ನಿರ್ಧರಿಸಿದರು.
43ಆದರೆ ಸೇನಾಧಿಕಾರಿಯಾದ ಜೂಲಿಯಸನು ಪೌಲನನ್ನು
ಉಳಿಸಲಪೇಕ್ಷಿಸಿ ಕೈದಿಗಳನ್ನು ಕೊಲ್ಲಲು ಸೈನಿಕರಿಗೆ ಅಪ್ಪಣೆ ಕೊಡ
ಲಿಲ್ಲ. ಈಜು ಬಲ್ಲವರೆಲ್ಲರು ನೀರಿಗೆ ಧುಮುಕಿ ಈಜಿಕೊಂಡು
ದಡಕ್ಕೆ ಹೋಗಬೇಕೆಂದು ಜೂಲಿಯಸನು ಹೇಳಿದನು.
44ಉಳಿದ ಜನರು ಹಲಗೆಗಳ ಅಥವಾ ಹಡಗಿನ ತುಂಡುಗಳ
ಸಹಾಯದಿಂದ ಹೋಗಬೇಕೆಂದು ತಿಳಿಸಿದನು. ಹೀಗೆ ಜನರೆ
ಲ್ಲರೂ ದಡವನ್ನು ಸೇರಿದರು. ಅವರಲ್ಲಿ ಒಬ್ಬರೂ ಸಾಯಲಿಲ್ಲ.

### ಮಾಲ್ಟ ದ್ವೀಪದಲ್ಲಿ ಪೌಲನು

28 ನಾವು ಸುರಕ್ಷಿತವಾಗಿ ದಡವನ್ನು ಸೇರಿದ ಮೇಲೆ ಅದು
ಮಾಲ್ಟ ದ್ವೀಪವೆಂದು ನಮಗೆ ತಿಳಿಯಿತು. 2ಆಗ
ಮಳೆಯು ಸುರಿಯುತ್ತಿತ್ತು ಮತ್ತು ತುಂಬ ಚಳಿಯಿತ್ತು. ಆದರೆ
ಅಲ್ಲಿನ ಜನರು ನಮಗೆ ವಿಶೇಷವಾದ ಕರುಣೆತೋರಿ ನಮಗಾಗಿ
ಬೆಂಕಿಹೊತ್ತಿಸಿ ನಮ್ಮೆಲ್ಲರನ್ನು ಆಹ್ವಾನಿಸಿದರು. 3ಪೌಲನು
ಒಂದು ಹೊರೆ ಕಟ್ಟಿಗೆಯನ್ನು ಕೂಡಿಸಿ ಅದನ್ನು ಬೆಂಕಿಯ ಮೇಲೆ
ಹಾಕುತ್ತಿರಲು ಅದರ ಕಾವಿನ ದೆಸೆಯಿಂದ ವಿಷದ ಹಾವೊಂದು
ಹೊರಗೆ ಬಂದು ಪೌಲನ ಕೈಗೆ ಸುತ್ತಿಕೊಂಡಿತು. 4ಪೌಲನ ಕೈಗೆ
ಸುತ್ತಿಕೊಂಡಿದ್ದ ಆ ಹಾವನ್ನು ಅಲ್ಲಿನ ಜನರು ನೋಡಿ, ‘‘ಇವನು

---

**ಚುಕ್ಕಾಣಿ** ಹಡಗು ದಿಕ್ಕು ಬದಲಾಯಿಸಲು ಸಹಾಯ ಮಾಡುವ ಒಂದು
ಸಾಧನ.

ಕೊಲೆಗಾರನೇ ಸರಿ! ಇವನು ಸಮುದ್ರದಲ್ಲಿ ಸಾಯದಿದ್ದರೂ ಇವನು ಬದುಕುವುದು ನ್ಯಾಯಕ್ಕೆ* ಇಷ್ಟವಿಲ್ಲ'' ಎಂದು ಹೇಳಿದರು.
[5]ಆದರೆ ಪೌಲನು ಆ ಹಾವನ್ನು ಬೆಂಕಿಯೊಳಕ್ಕೆ ಝಾಡಿಸಿ ಬಿಟ್ಟನು. ಪೌಲನಿಗೆ ಯಾವ ಹಾನಿಯೂ ಆಗಲಿಲ್ಲ.
[6]ಪೌಲನ ಮೈ ಊದಿಕೊಂಡು ಇದ್ದಕ್ಕಿದ್ದಂತೆ ಸತ್ತು ಬೀಳುತ್ತಾನೆ ಎಂದು ಅವರು ತಿಳಿದುಕೊಂಡಿದ್ದರು. ಅವರು ಪೌಲನನ್ನೇ ಬಹು ಹೊತ್ತಿನವರೆಗೆ ದಿಟ್ಟಿಸಿ ನೋಡುತ್ತಿದ್ದರೂ ಪೌಲನಿಗೆ ಯಾವ ಹಾನಿಯೂ ಆಗಲಿಲ್ಲ. ಆದ್ದರಿಂದ ಅವರು ತಮ್ಮ ಅಭಿಪ್ರಾಯವನ್ನು ಬದಲಿಸಿ, ''ಇವನೊಬ್ಬ ದೇವರು!'' ಎಂದು ಹೇಳಿದರು.

[7]ಆ ಸ್ಥಳದ ಸುತ್ತಮುತ್ತ ಕೆಲವು ಹೊಲಗಳು ಇದ್ದವು. ಆ ದ್ವೀಪದ ಪ್ರಮುಖ ವ್ಯಕ್ತಿಯೊಬ್ಬನಿಗೆ ಆ ಹೊಲಗಳು ಸೇರಿದ್ದವು. ಅವನ ಹೆಸರು ಪೊಪ್ಲಿಯ. ಅವನು ನಮ್ಮನ್ನು ತನ್ನ ಮನೆಗೆ ಸ್ವಾಗತಿಸಿದನು. ಪೊಪ್ಲಿಯನು ಕನಿಕರ ತೋರಿದನು. ನಾವು ಅವನ ಮನೆಯಲ್ಲಿ ಮೂರು ದಿನವಿದ್ದೆವು.
[8]ಪೊಪ್ಲಿಯನ ತಂದೆಯು ಬಹಳ ಅಸ್ವಸ್ಥನಾಗಿದ್ದನು. ಅವನಿಗೆ ಜ್ವರವಿತ್ತು ಮತ್ತು ರಕ್ತಭೇದಿಯಾಗುತ್ತಿತ್ತು. ಪೌಲನು ಅವನ ಬಳಿಗೆ ಹೋಗಿ ಅವನಿಗಾಗಿ ಪ್ರಾರ್ಥಿಸಿ ಅವನ ಮೇಲೆ ತನ್ನ ಕೈಗಳನ್ನಿಟ್ಟು ಗುಣಪಡಿಸಿದನು.
[9]ಇದಾದ ನಂತರ ದ್ವೀಪದಲ್ಲಿದ್ದ ಇತರ ರೋಗಿಗಳೆಲ್ಲ ಪೌಲನ ಬಳಿಗೆ ಬಂದರು. ಪೌಲನು ಅವರನ್ನು ಸಹ ಗುಣಪಡಿಸಿದನು.
[10-11]ಆ ದ್ವೀಪ ನಿವಾಸಿಗಳು ನಮ್ಮನ್ನು ಬಹಳವಾಗಿ ಸನ್ಮಾನಿಸಿದರು. ನಾವು ಅಲ್ಲಿ ಮೂರು ತಿಂಗಳಿದ್ದೆವು. ನಾವು ಅಲ್ಲಿಂದ ಹೊರಡಲು ಸಿದ್ಧರಾದಾಗ ಅವರು ನಮಗೆ ಬೇಕಾದ ವಸ್ತುಗಳನ್ನು ಕೊಟ್ಟರು.

## ರೋಮಿಗೆ ಪೌಲನ ಪ್ರಯಾಣ

ಅಲೆಕ್ಸಾಂಡ್ರಿಯ ಪಟ್ಟಣದಿಂದ ಬಂದ ಹಡಗೊಂದನ್ನು ನಾವು ಹತ್ತಿದೆವು. ಆ ಹಡಗು ಚಳಿಗಾಲದ ನಿಮಿತ್ತ ಮಾಲ್ಟ ದ್ವೀಪದಲ್ಲೇ ತಂಗಿತ್ತು. ಆ ಹಡಗಿನ ಮುಂಭಾಗದಲ್ಲಿ ಎರಡು ಗ್ರೀಕ್ ದೇವತೆಗಳ ಚಿಹ್ನೆಯಿತ್ತು.
[12]ನಾವು ಸಿರಾಕೊಸ್ ಪಟ್ಟಣಕ್ಕೆ ಬಂದು ಅಲ್ಲಿ ಮೂರು ದಿನವಿದ್ದೆವು. ಬಳಿಕ ಅಲ್ಲಿಂದ ಹೊರಟು
[13]ರೇಗಿಯ ಎಂಬ ಪಟ್ಟಣಕ್ಕೆ ಬಂದೆವು. ಮರುದಿನ ನೈರುತ್ಯ* ಗಾಳಿಯು ಬೀಸತೊಡಗಿತು. ಆದ್ದರಿಂದ ಅಲ್ಲಿಂದ ಹೊರಡಲು ಸಾಧ್ಯವಾಯಿತು. ಒಂದು ದಿನವಾದ ಮೇಲೆ ಪುತೊಲಿ ಎಂಬ ಪಟ್ಟಣಕ್ಕೆ ಬಂದೆವು.
[14]ಅಲ್ಲಿ ಕೆಲವು ಮಂದಿ ವಿಶ್ವಾಸಿಗಳನ್ನು ಕಂಡೆವು. ತಮ್ಮೊಂದಿಗೆ ಒಂದು ವಾರವಾದರೂ ಇರಬೇಕೆಂದು ಅವರು ನಮ್ಮನ್ನು ಕೇಳಿಕೊಂಡರು. ಕೊನೆಗೆ ನಾವು ರೋಮಿಗೆ ಹೊರಟೆವು.
[15]ನಾವು ಇಲ್ಲಿರುವುದು ರೋಮಿನಲ್ಲಿದ್ದ ವಿಶ್ವಾಸಿಗಳಿಗೆ ತಿಳಿಯಿತು. ಅವರು ನಮ್ಮನ್ನು ಭೇಟಿಯಾಗುವುದಕ್ಕಾಗಿ 'ಅಪಿಯಾ' ಮಾರುಕಟ್ಟೆಗೂ* ಮತ್ತು 'ತ್ರಿಛತ್ರ'* ಎಂಬ ಸ್ಥಳಕ್ಕೂ ಬಂದರು. ಈ ವಿಶ್ವಾಸಿಗಳನ್ನು ಕಂಡಾಗ ಪೌಲನು ಧೈರ್ಯಗೊಂಡು ದೇವರಿಗೆ ಸ್ತೋತ್ರ ಸಲ್ಲಿಸಿದನು.

## ರೋಮಿನಲ್ಲಿ ಪೌಲನು

[16]ಬಳಿಕ ನಾವು ರೋಮಿಗೆ ಹೋದೆವು. ಅಲ್ಲಿ ಪ್ರತ್ಯೇಕವಾಗಿರಲು ಪೌಲನಿಗೆ ಅವಕಾಶವನ್ನು ಕೊಡಲಾಯಿತು. ಆದರೆ ಪೌಲನನ್ನು ಕಾಯುವುದಕ್ಕಾಗಿ ಸೈನಿಕನೊಬ್ಬನು ಅವನೊಂದಿಗಿದ್ದನು.

[17]ಮೂರು ದಿನಗಳಾದ ಮೇಲೆ ಪೌಲನು ಯೆಹೂದ್ಯರಲ್ಲಿ ಪ್ರಧಾನರಾಗಿದ್ದವರನ್ನು ಕರೆಯಿಸಿದನು. ಅವರು ಬಂದು ಒಟ್ಟಾಗಿ ಸೇರಿದಾಗ ಪೌಲನು ಅವರಿಗೆ, ''ನನ್ನ ಯೆಹೂದ್ಯ ಸಹೋದರರೇ, ನಮ್ಮ ಜನರಿಗೂ ನಮ್ಮ ಪಿತೃಗಳ ಸಂಪ್ರದಾಯಗಳಿಗೂ ವಿರುದ್ಧವಾಗಿ ನಾನೇನೂ ಮಾಡಿಲ್ಲ. ಆದರೆ ನನ್ನನ್ನು ಜೆರುಸಲೇಮಿನಲ್ಲಿ ಬಂಧಿಸಿ ರೋಮಿನವರಿಗೆ ಒಪ್ಪಿಸಲಾಗಿದೆ.
[18]ರೋಮಿನವರು ನನಗೆ ಅನೇಕ ಪ್ರಶ್ನೆಗಳನ್ನು ಕೇಳಿದರು. ಆದರೆ ನನ್ನನ್ನು ಮರಣದಂಡನೆಗೆ ಗುರಿಮಾಡುವಂಥ ಯಾವ ಅಪರಾಧವನ್ನೂ ಅವರು ನನ್ನಲ್ಲಿ ಕಾಣಲಿಲ್ಲ. ಆದ್ದರಿಂದ ಅವರು ನನ್ನನ್ನು ಬಿಡುಗಡೆ ಮಾಡಬೇಕೆಂದಿದ್ದರು.
[19]ಆದರೆ ಅಲ್ಲಿದ್ದ ಯೆಹೂದ್ಯರು ಅದಕ್ಕೆ ಆಕ್ಷೇಪಿಸಿದರು. ಆದ್ದರಿಂದ ನನಗೆ ರೋಮಿನಲ್ಲಿ ಸೀಸರನ ಮುಂದೆ ವಿಚಾರಣೆಯಾಗಲಿ ಎಂದು ಕೇಳಿಕೊಳ್ಳಬೇಕಾಯಿತು. ಆದರೆ ನನ್ನ ಜನರು ಮಾಡಿದ್ದು ತಪ್ಪೆಂದು ನಾನು ನಿಮಗೆ ಹೇಳುತ್ತಿಲ್ಲ.
[20]ಆದಕಾರಣವೇ ನಾನು ನಿಮ್ಮನ್ನು ನೋಡಲು ಮತ್ತು ನಿಮ್ಮ ಸಂಗಡ ಮಾತಾಡಲು ಬಯಸಿದೆ. ಇಸ್ರೇಲಿನ ನಿರೀಕ್ಷೆಯಲ್ಲಿ ನಾನು ನಂಬಿಕೆ ಇಟ್ಟಿರುವುದರಿಂದಲೇ ಈ ಸರಪಣಿಗಳಿಂದ ಬಂಧಿತನಾಗಿದ್ದೇನೆ'' ಎಂದು ಹೇಳಿದನು.

[21-22]ಯೆಹೂದ್ಯರು ಪೌಲನಿಗೆ, ''ನಿನ್ನ ಬಗ್ಗೆ ಜುದೇಯದಿಂದ ನಮಗೆ ಯಾವ ಪತ್ರಗಳೂ ಬಂದಿಲ್ಲ. ಅಲ್ಲಿಂದ ಪ್ರಯಾಣ ಮಾಡಿ ಬಂದ ನಮ್ಮ ಯೆಹೂದ್ಯ ಸಹೋದರರಲ್ಲಿ ಯಾರೂ ನಿನ್ನ ಬಗ್ಗೆ ಸುದ್ದಿಯನ್ನು ತರಲಿಲ್ಲ ಮತ್ತು ಕೆಟ್ಟದ್ದನ್ನು ಹೇಳಲಿಲ್ಲ. ನಿನ್ನ ಆಲೋಚನೆಗಳನ್ನು ನಾವು ಕೇಳಬಯಸುತ್ತೇವೆ. ಎಲ್ಲಾ ಕಡೆಗಳಲ್ಲಿರುವ ಜನರು ಈ ಗುಂಪಿನ (ಕ್ರೈಸ್ತರ) ವಿರೋಧವಾಗಿ ಮಾತಾಡುತ್ತಿದ್ದಾರೆ ಎಂಬುದು ನಮಗೆ ಗೊತ್ತಿದೆ'' ಎಂದು ಹೇಳಿದರು.

[23]ಪೌಲನು ಮತ್ತು ಯೆಹೂದ್ಯರು ಸಭೆಸೇರಲು ಒಂದು ದಿನವನ್ನು ಗೊತ್ತುಮಾಡಿದರು. ಅಂದು ಇನ್ನೂ ಅನೇಕ ಮಂದಿ ಯೆಹೂದ್ಯರು ಪೌಲನ ಮನೆಯಲ್ಲಿ ಸಭೆಸೇರಿದರು. ಪೌಲನು ಬೆಳಗ್ಗೆಯಿಂದ ಸಂಜೆಯವರೆಗೂ ಅವರೊಂದಿಗೆ ಮಾತಾಡಿದನು; ದೇವರ ರಾಜ್ಯದ ಬಗ್ಗೆ ಅವರಿಗೆ ವಿವರಿಸಿದನು. ಯೇಸುವಿನ ವಿಷಯವಾದ ಸಂಗತಿಗಳಲ್ಲಿ ನಂಬಿಕೆ ಇಡುವಂತೆ ಅವರನ್ನು ಒಪ್ಪಿಸಲು ಪ್ರಯತ್ನಿಸಿದನು.

ಇದಕ್ಕಾಗಿ ಅವನು ಮೋಶೆಯ ಧರ್ಮಶಾಸ್ತ್ರವನ್ನೂ ಪ್ರವಾದಿಗಳ ಗ್ರಂಥಗಳನ್ನೂ ಬಳಸಿಕೊಂಡನು.
[24]ಪೌಲನು ಹೇಳಿದ ಕೆಲವು ಸಂಗತಿಗಳನ್ನು ಕೆಲವು ಮಂದಿ ಯೆಹೂದ್ಯರು ನಂಬಿದರು. ಆದರೆ ಉಳಿದವರು ನಂಬಲಿಲ್ಲ.
[25]ಅವರು ವಾದಮಾಡಿ ಅಲ್ಲಿಂದ ಹೊರಡಲು ಸಿದ್ಧರಾದಾಗ ಪೌಲನು ಅವರಿಗೆ

---

**ನ್ಯಾಯ** 'ನ್ಯಾಯ ಎಂಬ ದೇವರು ಕೆಟ್ಟವರನ್ನು ದಂಡಿಸುತ್ತಾನೆ' ಎಂಬುದು ಆ ಜನರ ನಂಬಿಕೆಯಾಗಿತ್ತು.

**ನೈರುತ್ಯ** ದಕ್ಷಿಣ ಮತ್ತು ಪಶ್ಚಿಮ ದಿಕ್ಕುಗಳ ನಡುವಿನ ದಿಕ್ಕು.

**ಅಫಿಯಾ ಮಾರುಕಟ್ಟೆ** ರೋಮಿನಿಂದ 27 ಮೈಲಿ ದೂರದಲ್ಲಿದೆ.

**ತ್ರಿಛತ್ರ** ರೋಮಿನಿಂದ30 ಮೈಲಿ ದೂರದಲ್ಲಿದೆ.

ಇಂತೆಂದನು: ‘‘ಪವಿತ್ರಾತ್ಮನು ಪ್ರವಾದಿಯಾದ ಯೆಶಾಯನ ಮೂಲಕ ನಿಮ್ಮ ಪಿತೃಗಳಿಗೆ ಸತ್ಯವನ್ನು ತಿಳಿಸಿದನು. ಆತನು ಹೀಗೆ ಹೇಳಿದ್ದಾನೆ:

> 26 ‘‘ಈ ಜನರ ಬಳಿಗೆ ಹೋಗಿ ಇಂತೆನ್ನಿರಿ: ನೀವು
> ಕಿವಿಗೊಟ್ಟು ಕೇಳಿದರೂ ಅರ್ಥಮಾಡಿಕೊಳ್ಳು
> ವುದಿಲ್ಲ; ಕಣ್ಣಾರೆ ಕಂಡರೂ ಗ್ರಹಿಸಿಕೊಳ್ಳು
> ವುದಿಲ್ಲ.
>
> 27 ಹೌದು, ಈ ಜನರ ಹೃದಯಗಳು ಕಠಿಣವಾಗಿವೆ.
> ಈ ಜನರಿಗೆ ಕಿವಿಗಳಿದ್ದರೂ ಕೇಳುವುದಿಲ್ಲ. ಸತ್ಯ
> ವಿದ್ದರೂ ನೋಡಬಯಸರು. ಅಲ್ಲದಿದ್ದರೆ
> ಇವರು ಕಣ್ಣಾರೆ ಕಂಡು, ಕಿವಿಯಾರೆ ಕೇಳಿ, ಮನ
> ಸಾರೆ ಗ್ರಹಿಸಿಕೊಂಡು ನನ್ನತ್ತ ತಿರುಗಿಕೊಳ್ಳು
> ತ್ತಿದ್ದರು; ನನ್ನಿಂದ ಗುಣ ಹೊಂದುತ್ತಿದ್ದರು.’
>
> *ಯೆಶಾಯ 6: 9-10*

28 ‘‘ದೇವರು ತನ್ನ ರಕ್ಷಣೆಯನ್ನು ಯೆಹೂದ್ಯರಲ್ಲದವರಿಗೆ
ಕಳುಹಿಸಿದ್ದಾನೆ. ಅವರು ಅದಕ್ಕೆ ಕಿವಿಗೊಡುವರು. ಯೆಹೂದ್ಯ
ರಾದ ನಿಮಗೆ ಇದು ತಿಳಿದಿರಲಿ!’’ 29* 30 ಪೌಲನು ತನ್ನ
ಬಾಡಿಗೆ ಮನೆಯಲ್ಲಿ ಎರಡು ವರ್ಷಗಳವರೆಗೆ ವಾಸವಾಗಿದ್ದನು.
ತನ್ನನ್ನು ಸಂದರ್ಶಿಸಲು ಬಂದ ಜನರೆಲ್ಲರನ್ನು ಆದರದಿಂದ
ಬರಮಾಡಿಕೊಂಡು, 31 ದೇವರ ರಾಜ್ಯದ ಬಗ್ಗೆ ಬೋಧಿಸು
ತ್ತಿದ್ದನು; ಪ್ರಭು ಯೇಸು ಕ್ರಿಸ್ತನ ಬಗ್ಗೆ ಉಪದೇಶಿಸುತ್ತಿದ್ದನು;
ಬಹು ಧೈರ್ಯದಿಂದ ಮಾತಾಡುತ್ತಿದ್ದನು. ಅವನಿಗೆ ಅಡ್ಡಿ
ಮಾಡಲು ಯಾರೂ ಪ್ರಯತ್ನಿಸಲಿಲ್ಲ.

---

**ವಚನ 29** ಇತ್ತೀಚಿನ ಕೆಲವು ಪ್ರತಿಗಳಲ್ಲಿ 29ನೇ ವಚನವನ್ನು ಸೇರಿಸಲಾಗಿದೆ: ‘‘ಪೌಲನು ಹೀಗೆ ಹೇಳಿದ ಮೇಲೆ, ಯೆಹೂದ್ಯರು ಹೊರಟುಹೋದರು. ಅವರು ಒಬ್ಬರಿಗೊಬ್ಬರು ಬಹಳವಾಗಿ ವಾದ ಮಾಡುತ್ತಿದ್ದರು.’’

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**
- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html